

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಆಗಸ್ಟ್ 27 ಶನಿವಾರ 2022

ಸಂಪುಟ: 43 | ಸಂಚಿಕೆ: 132 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4



ನನಗೇ ಚುನಾವಣಾ ಸಾರಥ್ಯ ನೀಡಿ;

ಮತ್ತೆ ಪಕ್ಷ ಅಧಿಕಾರಕ್ಕೆ ತರುವ ಹೊಣೆ ನನ್ನದು

- ವರಿಷ್ಠರಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಮನವಿ
- ಸಂಸದೀಯ ಮಂಡಳಿ ಸದಸ್ಯರಾದ ನಂತರ ದೆಹಲಿಗೆ ಮೊದಲ ಭೇಟಿ: ಪ್ರಧಾನಿ ಮೋದಿ ಸೇರಿದಂತೆ ನಾಯಕರಿಗೆ ಕೃತಜ್ಞತೆ ಸಲ್ಲಿಕೆ
- ಕಾಂಗ್ರೆಸ್ ಆರೋಪಗಳಿಗೆ ಸಾರ್ವಜನಿಕವಾಗಿಯೇ ತಕ್ಕ ಉತ್ತರ ನೀಡುವ ವಿಶ್ವಾಸ




ಶುಕ್ರವಾರ ನವದೆಹಲಿಯಲ್ಲಿ ಬಿ.ಎಸ್.ಯಡಿಯೂರಪ್ಪ ಅವರು ಪ್ರಧಾನಿ ಮೋದಿ, ಪಕ್ಷದ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಭೇಟಿಯಾದರು.

ಬೆಂಗಳೂರು, ಆ. 26 (ಕೆಎಂಶಿ)–ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಯು ನನ್ನ ನೇತೃತ್ವ ದಲ್ಲೇ ನಡೆಯಲು ಅವಕಾಶ ಮಾಡಿಕೊಡಿ. ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವ ಹೊಣೆ ನನ್ನದು ಎಂದು ಮಾಜಿ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪ ವರಿಷ್ಠರಲ್ಲಿ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಸ್ಥಾನದಿಂದ ಇಳಿದ ನಂತರ ವರಿಷ್ಠರನ್ನು ದೆಹಲಿಯಲ್ಲಿ ಶುಕ್ರವಾರ ಭೇಟಿ ಮಾಡಿದ ಯಡಿಯೂರಪ್ಪ, ವಿಧಾನಸಭೆ ಚುನಾವಣೆ ತಂತ್ರಗಾರಿಕೆಗೆ ಸಂಬಂಧಿಸಿದಂತೆ ಸಮಾಲೋಚನೆ ನಡೆಸಿದ್ದಾರೆ. ಪಕ್ಷದ ರಾಷ್ಟ್ರೀಯ ಸಂಸದೀಯ ಮಂಡಳಿ ಸದಸ್ಯರ ನ್ನಾಗಿ ನೇಮಕ ಮಾಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಆರ್‌ಎಸ್‌ಎಸ್‌ನ ದತ್ತಾತ್ರೇಯ ಹೊಸಬಾಳೆ, ಕೇಂದ್ರ ಗೃಹಸಚಿವ ಅಮಿತ್‌ಷಾ ಅವರಿಗೆ ಧನ್ಯವಾದ ▶ 8ನೇ ಪುಟಕ್ಕೆ

ಗುಲಾಂ ನಬಿ ಆಜಾದ್ ಕಾಂಗ್ರೆಸ್‌ಗೆ ಗುಡ್‌ಬೈ

ಪಕ್ಷದ ಎಲ್ಲಾ ಹುದ್ದೆಗಳಿಗೆ ರಾಜೀನಾಮೆ



ನವದೆಹಲಿ, ಆ.26–ಹಿರಿಯ ಕಾಂಗ್ರೆಸ್ ನಾಯಕ ಗುಲಾಂ ನಬಿ ಆಜಾದ್ ಅವರು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವ ಮೂಲಕ ಕಾಂಗ್ರೆಸ್‌ಗೆ ಆಘಾತ ನೀಡಿದ್ದಾರೆ. ಅವರು ತಮ್ಮ ರಾಜೀನಾಮೆ ಯೊಂದಿಗೆ ಎಐಸಿಸಿ ಹಂಗಾಮಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರಿಗೆ 5 ಪುಟಗಳ ಪತ್ರವನ್ನು ಸಲ್ಲಿಸಿದ್ದಾರೆ.

ಪಕ್ಷದಲ್ಲಿ ರಾಹುಲ್ ಗಾಂಧಿಯವರ ನಡವಳಿಕೆ ಬಗ್ಗೆ ಕಿಡಿಕಾರಿರುವ ಅವರು, ಹಿರಿಯ ಕಾಂಗ್ರೆಸ್ ನಾಯಕರನ್ನು ಮೂಲೆಗುಂಪು ಮಾಡಿರುವುದು ಮತ್ತು ಅನನುಭವಿ ಭಟ್ಟಂಗಿಗಳ ಗುಂಪಿನ ಒಡನಾಟ ವನ್ನು ಹೆಚ್ಚಿಸಿಕೊಂಡಿರುವುದೇ ತಾವು ಪಕ್ಷದಿಂದ ನಿರ್ಗಮಿಸಲು ಪ್ರಮುಖ ಕಾರಣ ಎಂದು ಹೇಳಿದ್ದಾರೆ. ಕಳೆದ 8 ವರ್ಷದಲ್ಲಿ ಪಕ್ಷವನ್ನು ಸಂಪೂರ್ಣವಾಗಿ ನಾಶ ಮಾಡಲಾಗಿದೆ. ರಾಷ್ಟ್ರೀಯ ಮಟ್ಟದಲ್ಲಿ ತನಗೆ ಲಭ್ಯವಿದ್ದ ಸ್ಥಾನವನ್ನು ಬಿಜೆಪಿಗೆ ಮತ್ತು ರಾಜ್ಯ ಮಟ್ಟದ ಸ್ಥಾನಗಳನ್ನು ಪ್ರಾದೇಶಿಕ ಪಕ್ಷಗಳಿಗೆ ಕಾಂಗ್ರೆಸ್ ಬಿಟ್ಟುಕೊಟ್ಟಿದೆ. ಪಕ್ಷವನ್ನು ಸುಧಾರಿಸಲು ಸಾಧ್ಯವಾಗದ ಸ್ಥಿತಿಗೆ ತಲುಪಿ ಸಲಾಗಿದೆ ಎಂದು ಅವರು ತಮ್ಮ ಪತ್ರದಲ್ಲಿ ದೂರಿದ್ದಾರೆ.

ಗಂಭೀರವಲ್ಲದ ವ್ಯಕ್ತಿಯ ಕೈಗೆ ಪಕ್ಷದ ಚುಕ್ಕಾಣಿ ನೀಡುವ ಯತ್ನಗಳು ನಡೆದಿವೆ. ಪಕ್ಷಕ್ಕಾಗಿ ಜೀವನವನ್ನು ಮುಡುಪಾಗಿಟ್ಟ ಪ್ರಮುಖ ನಾಯಕರನ್ನು ಕಡೆಗಣಿಸ ಲಾಯಿತು. ಭಾರತಕ್ಕೆ ಯಾವುದು ಸರಿ ಎಂಬುದನ್ನು ನಿರ್ಧರಿಸಲು ಎಐಸಿಸಿಯನ್ನು ನಡೆಸುತ್ತಿರುವ ಕೂಟವು ಇಚ್ಛಾಶಕ್ತಿ ಮತ್ತು ಸಾಮರ್ಥ್ಯ ಎರಡನ್ನೂ ಕಳೆದುಕೊಂಡಿದೆ. ಚುನಾವಣೆಗಳಲ್ಲಿ ಕಾಂಗ್ರೆಸ್ ಹೀನಾಯವಾಗಿ ಸೋಲಲು ರಾಹುಲ್ ಗಾಂಧಿಯವರ ▶ 8ನೇ ಪುಟಕ್ಕೆ



ಶೇ.40 ಕಮಿಷನ್ ವಿಚಾರ: ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ಮಾಡಿಸಲಿ

ಶೇ.40 ಮಂತ್ರಿಗಳಿಗೆ, ಶೇ.20 ಗುತ್ತಿಗೆದಾರನ ಲಾಭ, ಶೇ.15 ಜಿಎಸ್‌ಟಿ, ಉಳಿದದ್ದು ಬರಿ ಶೇ.25; ಈಗ ಹೇಳಿ ಕಾಮಗಾರಿ ಗುಣಮಟ್ಟ ಎಲ್ಲಿರುತ್ತೆ?



ಪತ್ರಿಕಾ ಸಂವಾದದಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಪ್ರಶ್ನೆ

ಮೈಸೂರು, ಆಗಸ್ಟ್, 26 (ಆರ್‌ಕೆಬಿ)–ಶೇ.40 ಕಮಿಷನ್ ಆರೋಪಕ್ಕೆ ಸಂಬಂಧಿಸಿ ದಂತೆ ಸರ್ಕಾರ ಹೈಕೋರ್ಟ್ ನ್ಯಾಯಾ ಧೀಶರ ನೇತೃತ್ವದ ಸಮಿತಿ ರಚಿಸಿ, ತನಿಖೆ ನಡೆಸಲಿ. ಅದು ಬಿಟ್ಟು ತಮ್ಮದು ಪ್ರಾಮಾ ಣಿಕ, ಸತ್ಯನಿಷ್ಠ ಸರ್ಕಾರ ಎಂದು ಕೊಚ್ಚಿ ಕೊಳ್ಳುವುದನ್ನು ಬಿಡಲಿ ಎಂದು ಮಾಜಿ ಮುಖ್ಯಮಂತ್ರಿ, ಪ್ರತಿಪಕ್ಷ ನಾಯಕ ಸಿದ್ದ ರಾಮಯ್ಯ ಇಂದಿಲ್ಲಿ ಸರ್ಕಾರವನ್ನು ಆಗ್ರಹಿ ಸಿದರು. ಮೈಸೂರು ಪತ್ರಕರ್ತರ ಭವನದಲ್ಲಿ ಪತ್ರಿಕಾ ಸಂವಾದ ಕಾರ್ಯಕ್ರಮದಲ್ಲಿ ಭಾಗ ವಹಿಸಿ ಮಾತನಾಡಿದ ಅವರು, ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಮಾಡಿರುವ ಆರೋಪದ ಬಗ್ಗೆ ಹೈಕೋರ್ಟ್ ನ್ಯಾಯಾಧೀಶರಿಂದ ಸ್ವತಂತ್ರ ತನಿಖೆ ನಡೆಸಲಿ ಇಲ್ಲವೇ ಸಿಬಿಐ ತನಿಖೆ ನಡೆಸಲಿ ಎಂದು ಒತ್ತಾಯಿಸಿದರು. ತಮ್ಮ ಸಂವಾ ದದ ಉದ್ದಕ್ಕೂ ಸಿದ್ದರಾಮಯ್ಯ ಬಿಜೆಪಿ ಸರ್ಕಾರವನ್ನು ಅತೀ ಭ್ರಷ್ಟ ಸರ್ಕಾರ ಎಂದು ದೂಷಿಸಿದರು. ▶ 8ನೇ ಪುಟಕ್ಕೆ



ಕಿರುಕುಳ ನೀಡಿ ಕಮಿಷನ್ ಹಣ ವಸೂಲಿ

ಸರ್ಕಾರದ ವಿರುದ್ಧ ಮೈಸೂರಲ್ಲಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಗಂಭೀರ ಆರೋಪ

ಮೈಸೂರು, ಆ. 26(ಆರ್‌ಕೆ)–ಬಿಜೆಪಿ ಸರ್ಕಾರವು ಕಿರುಕುಳ ನೀಡಿ ಕಮಿಷನ್ ಹಣ ವಸೂಲಿ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಇಂದಿಲ್ಲಿ ಗಂಭೀರ ಆರೋಪ ಮಾಡಿದ್ದಾರೆ.

ಮೈಸೂರಿನ ಹೊರ ವಲಯದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿರುವ ಅವರು, ಬಿಜೆಪಿ ಸರ್ಕಾರದಿಂದಲೇ ಈ ಕಮಿಷನ್ ದಂಧೆ ಶುರುವಾಗಿದ್ದು, 2008ರಿಂದಲೇ ಆಪರೇಷನ್ ಕಮಲದಿಂದ ಈ ಕೆಟ್ಟ ವಾತಾವರಣ ಸೃಷ್ಟಿಯಾಗಿದೆ. ಕೆಲ ಶಾಸಕರು ಗಣಿಗಾರಿಕೆಗೆ ಲೈಸೆನ್ಸ್ ಪಡೆದಿದ್ದಾರೆ. ಹಾಗೆಯೇ ಮರಳು ದಂಧೆ ಆರಂಭವಾಗಿದ್ದೂ ಸಹ ಬಿಜೆಪಿ ಸರ್ಕಾರದಿಂದಲೇ ಎಂದರು.

ಹಣದ ಮೂಲಕ ಏನು ಬೇಕಾದರೂ ಮಾಡಬಹುದು ಎಂದು ಕೊಂಡಿದ್ದಾರೆ. ನಿಜವಾಗಲೂ ದೇಶ ಕಾಯುವವರಾಗಿದ್ದರೆ ಆತ್ಮಸಾಕ್ಷಿಗೆ ಉತ್ತರ ಕೊಡಿ. ಪರ್ಸಂಟೇಜ್ ಎಂಬುದು ಸ್ವಾತಂತ್ರ್ಯ ಪೂರ್ವದಲ್ಲೂ ಇತ್ತು ನಂತರ ಕಮಿಷನ್ ಆರಂಭವಾಯಿತು. ಆದರೆ ಇವತ್ತಿನ ರೀತಿ ಲಂಚಗುಳಿತನ, ಭ್ರಷ್ಟಾಚಾರ ಶಾಸಕರ ಮಟ್ಟದಲ್ಲಿರಲಿಲ್ಲ ಎಂದು ಅವರು ತಿಳಿಸಿದರು.

ಸರ್ಕಾರದ ಮಟ್ಟದಲ್ಲಿ ಫಂಡ್ ರೈಸಿಂಗ್ ಎಂದು ಅಬಕಾರಿ ಶುಲ್ಕ ವಸೂಲಿ ಇತ್ತು. ಈಗ ಶಿಕ್ಷಣ ಲಾಬಿ ಶುರುವಾಗಿದೆ. ಶೇ.40ರಷ್ಟು ಕಮಿಷನ್ ಕೊಡಬೇಕೆಂದು ಗುತ್ತಿಗೆದಾರರು ಆರೋಪಿಸುತ್ತಿದ್ದಾರೆ. ಈ ರೀತಿ ಸ್ವೇಚ್ಛಾಚಾರ ನಡೆಯುತ್ತಿರುವುದು ಬಿಜೆಪಿ ಸರ್ಕಾರ ಬಂದ ಮೇಲೆ. ಕೆಲಸವನ್ನೇ ಮಾಡದೆ ಹಣ ಪಡೆಯುತ್ತಿದ್ದಾರೆಂದ ಇದಕ್ಕಿಂತ ಸಾಕ್ಷಿ ಬೇಕೆ ಎಂದು ಕುಮಾರಸ್ವಾಮಿ ಸರ್ಕಾರದ ವಿರುದ್ಧ ಕಿಡಿಕಾರಿದರು.

ನಾನು ಸಿಎಂ ಆಗಿದ್ದಾಗ ಲಾಟರಿ ನಿಷೇಧಕ್ಕೆ ತೀವ್ರ ವಿರೋಧವಿತ್ತು. ಅದಕ್ಕಾಗಿ ಏನೆಲ್ಲಾ ಆಫರ್ ಮಾಡಿದ್ದರು. ಆದರೂ ಲಾಟರಿ ನಿಷೇಧಿಸಿದೆ. ಕಾಮಗಾರಿ ಮಾಡಿದ ಗುತ್ತಿಗೆದಾರರಿಗೆ ನೇರವಾಗಿ ಹಣ ಹೋಗುತ್ತಿತ್ತು.



46 ಮಂದಿ ಇಂಜಿನಿಯರ್‌ಗಳಿಗೆ ಪ್ರೊಮೋಷನ್ ನೀಡಿದ್ದೆವು. ಒಂದು ರೂಪಾಯಿ ಪಡೆಯಲಿಲ್ಲ. ಯಾವ ಅಧಿಕಾರಿಗಳನ್ನೂ ದುರುಪಯೋಗ ಮಾಡಿಕೊಳ್ಳಲಿಲ್ಲ ಎಂದು ಅವರು ತಿಳಿಸಿದರು.

ನಾವು ಅಧಿಕಾರದಲ್ಲಿದ್ದಾಗ ನಮ್ಮ ಶಾಸಕರು ಭ್ರಷ್ಟಾಚಾರ ಮಾಡಲಿಲ್ಲ. ಸಮ್ಮಿಶ್ರ ಸರ್ಕಾರದಲ್ಲಿ ಕೆಲವರು ಭ್ರಷ್ಟಾಚಾರದಲ್ಲಿ ತೊಡಗಿದ್ದರು. ಅವರಲ್ಲಿ ನಮ್ಮವರಿರಲಿಲ್ಲ, ಮುನಿರತ್ನ ಮೂಲಕ ಗುತ್ತಿಗೆದಾರ ಸಂತೋಷ್ ಹೆಗ್ಡೆ ಅವರು ನ್ಯಾಯಮೂರ್ತಿ ಆಗಿದ್ದಾಗ ಮನೆ ಗೋಡೆ ಕುಸಿದು ಮಗು ಸತ್ತಿತ್ತು. ಆ ಪ್ರಕರಣದಲ್ಲಿ ಯಾರಿಗೆ ಶಿಕ್ಷೆ ನೀಡಿದ್ದೀರಿ? ಎಂದು ಪ್ರಶ್ನಿಸಿದ ಹೆಚ್‌ಡಿಕೆ, ಸಿದ್ದರಾಮಯ್ಯ ಕಾಲದಲ್ಲಿ ಪರ್ಸಂಟೇಜ್ ಎಷ್ಟಿತ್ತು ಗೊತ್ತಿಲ್ಲ. ಮೂರು ಪಕ್ಷ ಬಿಟ್ಟು ಹೋದವರಿಗೆ ಹಣ ಹೋಗುತ್ತಿತ್ತು. ನನ್ನ ಸರ್ಕಾರ ಉರುಳಿಸಲೂ ಅದೇ ಕಾರಣ ಎಂದು ಆರೋಪಿಸಿದರು.

ನ್ಯಾಯಾಂಗ ತನಿಖೆ ಬಗ್ಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಯಾರಿಗಾದರೂ ತನಿಖೆಯಿಂದ ಶಿಕ್ಷೆಯಾಗಿದೆಯಾ? ನೀನು ಹೊಡೆದಂಗೆ ಮಾಡು ನಾನು ಅತ್ತಂಗೆ ಮಾಡುತ್ತೇನೆ ಎನ್ನುವಂತೆ ಈವತ್ತಿನ ಪರಿಸ್ಥಿತಿ. ಬಿಬಿಎಂಪಿಯಲ್ಲಿ ಸುಲಭವಾಗಿ ಹಣ ಸಂಪಾದನೆ ಮಾಡುವುದನ್ನು ನಿಲ್ಲಿಸಿದ್ದಕ್ಕೆ ನನ್ನ ಸರ್ಕಾರ ಉರುಳಿಸಿದರು. ಮೈತ್ರಿ ಸರ್ಕಾರ ಬಿಟ್ಟು ಹೋದವರು ಬಿಡಿಎ ಸಭೆಗೆ ಹಾಜರಾದರೆ ಇಷ್ಟೆಂದು ಹಣ ನೀಡಬೇಕಿತ್ತು. ನಾನು ಸಿಎಂ ಆದ ಮೇಲೆ ಅದು ನಿಂತಿತು ಎಂದು ಅಧಿಕಾರಿಯೊಬ್ಬರು ಹೇಳಿದ್ದರು ಎಂದು ಅವರು ನುಡಿದರು. ಲೋಕಾಯುಕ್ತ ವಿದ್ಯಾಗಲೂ ಭ್ರಷ್ಟಾಚಾರದಲ್ಲಿ ಸಿಕ್ಕಿಬಿದ್ದವರೆಲ್ಲರಿಗೂ ಶಿಕ್ಷೆಯಾಗಿಲ್ಲ. ಕೋಟಿಗಟ್ಟಲೇ ಹಣ, ಕೆಜಿಗಟ್ಟಲೇ ಚಿನ್ನ ವಶಪಡಿಸಿಕೊಂಡಿದ್ದಾಗಲೂ, ಅಧಿಕಾರಿಗಳು ಆರೋಪಮುಕ್ತರಾಗಿದ್ದು ಹೇಗೆ ಎಂದು ಪ್ರಶ್ನಿಸಿದ ಅವರು, ನಾನು ಇಬ್ಬರು ಖಡಕ್ ಅಧಿಕಾರಿಗಳನ್ನು ಬಳ್ಳಾರಿಗೆ ವರ್ಗಾವಣೆ ಮಾಡಿದ್ದಕ್ಕೆ ಅಂದೇ ಬಿಜೆಪಿಯ ವಿಧಾನಪರಿಷತ್ ಸದಸ್ಯ ನನ್ನ ವಿರುದ್ಧವೇ 150 ಕೋಟಿ ಲಂಚ ಆರೋಪ ಮಾಡಿದ್ದರು. ವ್ಯವಸ್ಥೆಯೇ ಹಾಳಾಗಿರೋದ್ರಿಂದ ಭ್ರಷ್ಟಾಚಾರ ಈ ಹಂತ ತಲುಪಿದೆ ಎಂದು ವಿಷಾದಿಸಿದರು.

ಮೈಸೂರು ಮೇಯರ್ ಚುನಾವಣೆ: ಸ್ಥಳೀಯ ರಾಜಕೀಯ ಬೆಳವಣಿಗೆ ಆಧರಿಸಿ ನಿರ್ಧಾರ



ಮೈಸೂರು, ಆ.26(ಆರ್‌ಕೆ)–ಮೈಸೂರು ಮೇಯರ್ ಚುನಾವಣೆ ಸಂಬಂಧ ಸ್ಥಳೀಯ ರಾಜಕೀಯ ಬೆಳವಣಿಗೆ ನೋಡಿಕೊಂಡು ನಿರ್ಧಾರ ಕೈಗೊಳ್ಳಿ ಎಂದು ಸ್ಥಳೀಯ ನಾಯಕರಿಗೆ ಹೇಳಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಈ ಸಂಬಂಧ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಮೈಸೂರು ಮಹಾನಗರ ಪಾಲಿಕೆಯಲ್ಲಿ ಮೂರೂ ಪಕ್ಷಗಳಿಗೂ ಸಂಖ್ಯಾ ಬಲದ ಕೊರತೆ ಇದೆ. ಬೇರೊಬ್ಬರ ಬೆಂಬಲ ಪಡೆದೇ ಅಧಿಕಾರ ಹಿಡಿಯಬೇಕಾಗಿರುವುದರಿಂದ ಸ್ಥಳೀಯ ಮುಖಂಡರು, ಕಾರ್ಪೊರೇಟರುಗಳು ಪರಸ್ಪರ ಮಾತನಾಡಿಕೊಂಡು ರಾಜಕೀಯ ಬೆಳವಣಿಗೆ ಆಧರಿಸಿ ಮೇಯರ್ ಚುನಾವಣೆ ಸಂಬಂಧ ನಿರ್ಧಾರ ಕೈಗೊಳ್ಳುವಂತೆ ಪಕ್ಷದ ಹಿರಿಯರಿಗೆ ತಿಳಿಸಿದ್ದೇನೆ ಎಂದರು.

ಕಳೆದ ಬಾರಿ ಕೆಲವು ಘಟನೆಗಳು ನಡೆದವು. ಜಿ.ಟಿ.ದೇವೇಗೌಡರು ಈಗ ನಮ್ಮೊಂದಿಗೆ ಸಂಪರ್ಕದಲ್ಲಿದ್ದಾರೆ. ಪ್ರಸ್ತುತ ಪರಿಸ್ಥಿತಿ ನೋಡಿಕೊಂಡು ಮೇಯರ್ ಅಭ್ಯರ್ಥಿ ನಿರ್ಧರಿಸುವಂತೆ ಪಕ್ಷದ ಮುಖಂಡರಿಗೆ ತಿಳಿಸಿದ್ದೇನೆ. ಈಗಾಗಲೇ ಈ ಬಗ್ಗೆ ಚರ್ಚೆಗಳಾಗುತ್ತಿವೆ. ಯಾರೊಂದಿಗೆ ಮೈತ್ರಿ ಮಾಡಿಕೊಳ್ಳಬೇಕೆಂಬುದನ್ನು ಅವರು ತೀರ್ಮಾನಿಸುತ್ತಾರೆ ಎಂದು ಕುಮಾರಸ್ವಾಮಿ ತಿಳಿಸಿದರು.

ಡಿ.ಕೆ.ಶಿವಕುಮಾರ್ ಅವರ ಮೇಲೆ ನಿಮಗೆ ಸಿಂಪಥಿ ಇದೆ ಎನ್ನಲಾಗುತ್ತಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನಾಡ ಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮಕ್ಕೆ ಸಮಾಜದ ಎಲ್ಲಾ ಮುಖಂಡರನ್ನೂ ಆಹ್ವಾನಿಸುತ್ತಾರೆ. ಹಾಗೆಯೇ ನನ್ನನ್ನೂ ಕರೆದಿದ್ದಾರೆ. ಹಾಗಾಗಿ ನಾವು ಒಟ್ಟಿಗೆ ಭಾಗವಹಿಸಬೇಕಾಗಿದೆಯಷ್ಟೇ. ಅದಕ್ಕೆ ಬೇರೆ ಅರ್ಥ ಕಲ್ಪಿಸಬೇಕಿಲ್ಲ ಎಂದರು. ಡಿಕೆಶಿ ಒಂದು ಪಕ್ಷದ ಅಧ್ಯಕ್ಷರಾಗಿದ್ದಾರೆ. ನಾನು ಒಂದು ಪಕ್ಷದ ಮುಖಂಡ ಅಷ್ಟೇ. ನಾನು ಸಿಎಂ ಸ್ಥಾನದ ಆಕಾಂಕ್ಷಿ ಎಂದು ಅವರು ಬಹಿರಂಗವಾಗಿ ಹೇಳಿದ್ದಾರೆ. ಸಿಎಂ ಆಗೋಕೆ ಚಾಮುಂಡೇಶ್ವರಿ ದೇವಿ, ಭಗವಂತನ ಆಶೀರ್ವಾದ ಬೇಕು. ಕಳೆದ ಬಾರಿ ನಾವು ಗೆದ್ದಿದ್ದು ಕೇವಲ 37 ಶಾಸಕರು. ನಾನು ಸಿಎಂ ಆಗಲಿಲ್ಲವೇ? ಎಂದು ಅವರು ನುಡಿದರು.

ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ದಸಂಸ ಪ್ರತಿಭಟನೆ



ಮೈಸೂರು, ಆ.26(ಎಂಟಿವೈ)– ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ ಖಂಡಿಸಿ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಪ್ರತಿಭಟಿಸಿದರು.

ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದ ದಸಂಸ ಕಾರ್ಯಕರ್ತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ದಲಿತರ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ. ವಿನಾಕಾರಣ ದಲಿತ ಸಮುದಾಯಕ್ಕೆ ಸೇರಿದವರ ಹತ್ಯೆ ಮಾಡಲಾಗುತ್ತಿದೆ. ಜಾತಿ, ಧರ್ಮ ಘರ್ಷಣೆಗಳು ನಡೆಯುತ್ತಲೇ ಇದ್ದು, ಸಮಾಜದಲ್ಲಿ ಅಶಾಂತಿ, ಅಸಮಾಧಾನ ಹೆಚ್ಚಾಗಿದೆ. ಎಲ್ಲರನ್ನೂ ಸಮಾನವಾಗಿ ಕಾಣಬೇಕಾದ ಸರ್ಕಾರಗಳು ತಾರತಮ್ಯ ನೀತಿ ಅನುಸರಿಸುತ್ತಿವೆ. ಇದರ ವಿರುದ್ಧ ಹೋರಾಟ ಮಾಡುವ ಚಿಂತಕರು, ಪ್ರಗತಿಪರರನ್ನು ಜೈಲಿಗೆ ಕಳುಹಿಸುತ್ತಿದ್ದಾರೆ ಎಂದು ಕಿಡಿ ಕಾರಿದರು. ರಾಜಸ್ಥಾನದ ಶಾಲೆಯೊಂದರಲ್ಲಿ 9 ವರ್ಷದ ಬಾಲಕ ಕುಡಿಯುವ ನೀರಿನ ಮಡಿಕೆ ಮುಟ್ಟಿದ ಎಂಬ ಕಾರಣಕ್ಕೆ ಶಿಕ್ಷಕನೇ ಹಲ್ಲೆ ನಡೆಸಿ, ಕೊಲೆ ಮಾಡಿದ್ದಾನೆ. ಉತ್ತರ ಪ್ರದೇಶದಲ್ಲಿ 3ನೇ ತರಗತಿ ವಿದ್ಯಾರ್ಥಿಗೆ ಶುಲ್ಕ ಪಾವತಿಸಿಲ್ಲ ಎಂದು ಜಾತಿ ನಿಂದನೆ ಮಾಡಿ, ಹಲ್ಲೆ ನಡೆಸಲಾಗಿದೆ. ಚಿತ್ರದುರ್ಗದಲ್ಲಿ ಅನ್ಯಾಯ ಪ್ರಶ್ನಿಸಿದ ದಲಿತನ ಮೇಲೆ ಮೇಲ್ವರ್ಗದವರು ಹಲ್ಲೆ ಮಾಡಿ, ಆತನ ಮನೆಯನ್ನು ಧ್ವಂಸ ಮಾಡಿದ್ದಾರೆ. ಇಂತಹ ಘಟನೆಗಳು ತಲೆತಗ್ಗಿಸುವಂತದ್ದಾಗಿದ್ದು, ತಪ್ಪಿತಸ್ಥರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ವಿದ್ಯಾರ್ಥಿಗಳ ಕೊಲೆ, ಅಸ್ಪೃಶ್ಯತೆ ಆಚರಣೆ ಪ್ರಕರಣಗಳಲ್ಲಿ ಸರ್ಕಾರ ಸೂಕ್ತ ತನಿಖೆ ನಡೆಸಿ ಅಪರಾಧಿಗಳಿಗೆ ಮರಣದಂಡನೆ ವಿಧಿಸಬೇಕು. ಮೃತ ವಿದ್ಯಾರ್ಥಿಗಳ ಕುಟುಂಬದಲ್ಲಿರುವ ವಿದ್ಯಾವಂತರಿಗೆ ಸರ್ಕಾರಿ ನೌಕರಿ ನೀಡಬೇಕು. ಮೃತ ವಿದ್ಯಾರ್ಥಿಗಳ ಪೋಷಕರಿಗೆ ಕುಟುಂಬ ಜೀವನಕ್ಕಾಗಿ ವ್ಯವಸಾಯ ಮಾಡಲು 10 ಎಕರೆ ಭೂಮಿ ಮಂಜೂರು ಮಾಡಬೇಕು. ದೌರ್ಜನ್ಯಕ್ಕೊಳಗಾದವರಿಗೆ 50 ಲಕ್ಷ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ದಸಂಸ ಮುಖಂಡ ಚೋರನಹಳ್ಳಿ ಶಿವಣ್ಣ, ಜಿಲ್ಲಾ ಸಂಯೋಜಕರಾದ ಕಾರ್ಯ ಬಸವಣ್ಣ, ಸುನೀತಾ ಪ್ರಕಾಶ್‌ಗೌಡ, ಮಹೇಶ್.ಕೆ.ಬೇಗತ್ತೂರು, ಸಿದ್ದರಾಜು ಯರಗನಹಳ್ಳಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರಿನಲ್ಲಿ ಧಾರಾಕಾರ ಮಳೆ

● ಜನಜೀವನ ಅಸ್ತವ್ಯಸ್ತ, ವಾಹನ ಸವಾರರ ಪರದಾಟ ● ಹಲವೆಡೆ ಸಣ್ಣಪುಟ್ಟ ಅಪಘಾತ



ಮೈಸೂರು, ಆ.26(ಜಿಎ)– ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಸತತ ಮೂರನೇ ದಿನವಾದ ಶುಕ್ರವಾರ ಸಂಜೆ ಧಾರಾಕಾರ ಮಳೆ ಸುರಿದ ಪರಿಣಾಮ ಜನಜೀವನ ಮತ್ತು ವಾಹನ ಸಂಚಾರ ಅಸ್ತವ್ಯಸ್ತಗೊಂಡು ಪರದಾಡುವಂತಾಯಿತು.

ಶುಕ್ರವಾರ ಸಂಜೆ ಆರಂಭವಾದ ಮಳೆ ಮೈಸೂರಿನ ವಿಜಯನಗರ, ಬನ್ನಿಮಂಟಪ, ಕುವೆಂಪುನಗರ, ಯಾದವಗಿರಿ, ಸಿದ್ದಾರ್ಥನಗರ, ಒಂಟಿಕೊಪ್ಪಲ್, ಗೋಕುಲಂ, ಸರಸ್ವತಿಪುರಂ, ಶಾರದಾದೇವಿ ನಗರ, ರಾಮಕೃಷ್ಣನಗರ, ಕೂರ್ಗಳ್ಳಿ, ದಟ್ಟಗಳ್ಳಿ, ಜೆಪಿ ನಗರ, ಅಗ್ರಹಾರ, ಸುಣ್ಣಕೇರಿ, ಲಕ್ಷ್ಮಿ ಪುರಂ, ಜಯಲಕ್ಷ್ಮಿ ಪುರಂ, ಸೇರಿದಂತೆ ನಗರದ ಎಲ್ಲಾ ಭಾಗಗಳಲ್ಲಿಯೂ ಮಧ್ಯರಾತ್ರಿವರೆಗೂ ಧಾರಾಕಾರವಾಗಿ ಸುರಿಯಿತು.

ಮಳೆಯಿಂದ ರಸ್ತೆಗಳೆಲ್ಲವೂ ಕೆರೆಗಳಂತಾಗಿ ವಾಹನ ಸವಾರರು ಪರದಾಡುವಂತಾಯಿತು. ಕೆಲವು ಕಡೆ ತಗ್ಗು ಪ್ರದೇಶಗಳಲ್ಲಿ ಮನೆಗಳಿಗೆ ನೀರು ನುಗ್ಗಿತು. ಕುರುಬಾರಳ್ಳಿ ವೃತ್ತದ ಬಳಿ ಮರವೊಂದು ಉರುಳಿ ಬಿದ್ದಿದ್ದು, ಈ ಸಂದರ್ಭದಲ್ಲಿ ಯಾರು ಮರದ ಕೆಳಗೆ ಇಲ್ಲದ ಕಾರಣ ಅನಾಹುತ ತಪ್ಪಿದೆ. ಆದಿಚುಂಚನಗಿರಿ ರಸ್ತೆ ದುರಸ್ತಿ ಕಾರ್ಯ ನಡೆಯುತ್ತಿದ್ದು, ರಸ್ತೆಯಲ್ಲಿ ಭಾರೀ ಗಾತ್ರದ ಗುಂಡಿಗಳಿವೆ. ಮಳೆ ನೀರು ತುಂಬಿರುವುದರಿಂದ ರಸ್ತೆ ಗುಂಡಿ ಕಾಣದೆ ಹಾಗೂ ಈ ರಸ್ತೆ ಕೆಸರು ಗದ್ದೆಯಂತಾಗಿರುವುದರಿಂದ ಕೆಲ ವಾಹನ ಸವಾರರು ಗುಂಡಿಗಳು ಕಾಣದೆ ಜಾರಿ ಬಿದ್ದಿದ್ದಾರೆ. ಅಲ್ಲದೆ ಮೈಸೂರಿನ ಹಲವೆಡೆ ನಗರ ಪಾಲಿಕೆಯಿಂದ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಅಂತಹ ರಸ್ತೆಗಳಲ್ಲಿ ಸಣ್ಣ ಪುಟ್ಟ ಅಪಘಾತಗಳಾದ ಬಗ್ಗೆ ವರದಿಯಾಗಿದೆ. ರಾಜ್ಯದಲ್ಲಿ ಇನ್ನೂ ಮೂರ್ನಾಲ್ಕು ದಿನಗಳು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಇಂದಿನಿಂದ ಐದು ದಿನ ಸಾಧಾರಣ ಮಳೆ



ಮೈಸೂರು, ಆ.26(ಆರ್‌ಕೆಬಿ)–ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಆ.31ರವರೆಗೆ ಸಾಧಾರಣ ಮಳೆಯಾಗಲಿದೆ. ಕೊಡಗು ಜಿಲ್ಲೆಯಲ್ಲಿ ಆ.27ರಂದು 22 ಮಿ.ಮೀ., 28ರಂದು 23 ಮಿ.ಮೀ., 29ರಂದು 22 ಮಿ.ಮೀ., 30ರಂದು 24 ಮಿ.ಮೀ ಹಾಗೂ 31ರಂದು 21 ಮಿ.ಮೀ. ಮಳೆಯಾಗಲಿದೆ. ಈ ಅವಧಿಯಲ್ಲಿ ಗರಿಷ್ಠ 23, ಕನಿಷ್ಠ 18 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಇರಲಿದೆ. ಮೈಸೂರು ಜಿಲ್ಲೆಯಲ್ಲಿಯೂ ಈ ಐದು ದಿನಗಳ ಅವಧಿಯಲ್ಲಿ ಕ್ರಮವಾಗಿ 14, 12, 12, 19, 12 ಮಿ.ಮೀ., ಮಂಡ್ಯ ಜಿಲ್ಲೆಯಲ್ಲಿ ಕ್ರಮವಾಗಿ 12, 14, 24, 25, 27 ಮಿ.ಮೀ., ಚಾಮರಾಜನಗರ ಜಿಲ್ಲೆಯಲ್ಲಿ ಕ್ರಮವಾಗಿ 16, 12, 17, 18, 20 ಮಿ.ಮೀ. ಮಳೆಯಾಗಲಿದೆ. ಈ ಮೂರು ಜಿಲ್ಲೆಗಳಲ್ಲಿ ಉಷ್ಣಾಂಶ ಗರಿಷ್ಠ 30–31 ಡಿಗ್ರಿ ಸೆಲ್ಸಿಯಸ್, ಕನಿಷ್ಠ 20 ಡಿಗ್ರಿ ಸೆಲ್ಸಿಯಸ್ ಇರಲಿದೆ ಎಂದು ನಾಗನಹಳ್ಳಿ ಗ್ರಾಮೀಣ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ. ಭಾರತೀಯ ಹವಾಮಾನ ಮುನ್ಸೂಚನೆ ಪ್ರಕಾರ ಸೆ.2ರಿಂದ ಸೆ.8ರವರೆಗೆ ಸರಾಸರಿಗಿಂತ ಹೆಚ್ಚು ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಸಿದ್ದರಾಮಯ್ಯ ತಮ್ಮ ರಾಮೇಗೌಡ ನಿಧನ



ಮೈಸೂರು, ಆ.26–ವಿಪಕ್ಷನಾಯಕ ಸಿದ್ದರಾಮಯ್ಯನವರ ಕೊನೆಯ ತಮ್ಮ ರಾಮೇಗೌಡ (70) ಶುಕ್ರವಾರ ರಾತ್ರಿ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೈಸೂರಿನ ಸಿದ್ದರಾಮನಹುಂಡಿ ನಿವಾಸಿಯಾದ ಇವರು ಅನಾರೋಗ್ಯದಿಂದಾಗಿ ಕೆಲ ದಿನಗಳಿಂದ ಖಾಸಗಿ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದರು. ಮೃತರು ಪತ್ನಿ, ರುಕ್ಮಿಣಿ, ಪುತ್ರರಾದ ರವಿ, ರಘು, ಪುತ್ರಿ ನಾಗರತ್ನ ಅಲಿಯಾಸ್ ಬೋರಮ್ಮ, ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ಸ್ವಗ್ರಾಮ ಸಿದ್ದರಾಮಹುಂಡಿ ಬಳಿಯ ಹೊಸಹಳ್ಳಿ ಜಮೀನಿನಲ್ಲಿ ಶನಿವಾರ ಮಧ್ಯಾಹ್ನ ನೆರವೇರಲಿದೆ ಎಂದು ಕುಟುಂಬ ಮೂಲ ಗಳು ತಿಳಿಸಿವೆ. ರಾಮೇಗೌಡರ ನಿಧನಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟ್ವೀಟ್ ಮೂಲಕ ಸಂತಾಪ ವ್ಯಕ್ತಪಡಿಸಿದ್ದಾರೆ.

ಮೈಸೂರಲ್ಲಿ ಇಂದು ಮತದಾರರ ಗುರುತಿನ ಕಾರ್ಡ್‌ಗೆ ಆಧಾರ್ ಸಂಖ್ಯೆ ಜೋಡಣೆ ವಿಶೇಷ ಅಭಿಯಾನ

ಮೈಸೂರು, ಆ. 26(ಆರ್‌ಕೆ)– ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ನಾಳೆ (ಆ.27) ಎಲ್ಲಾ ಮತಗಟ್ಟೆಗಳಲ್ಲಿ ಮತದಾರರ ಗುರುತಿನ ಕಾರ್ಡ್‌ಗೆ ಆಧಾರ್ ಸಂಖ್ಯೆ ಜೋಡಣೆ ವಿಶೇಷ ಅಭಿಯಾನ ನಡೆಯಲಿದೆ.

ಬೆಂಗಳೂರಿನ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಆಗಸ್ಟ್ 22ರಂದು ನಡೆದ ವಿಡಿಯೋ ಸಂವಾದದಲ್ಲಿ ಚುನಾವಣಾ ಸುಧಾರಣೆ ಸಂಬಂಧ ಮತದಾರರ ಗುರುತಿನ ಕಾರ್ಡ್‌ನ ಸಂಖ್ಯೆಯನ್ನು ಲಿಂಕ್ ಮಾಡಲು ಮತ್ತು ದೃಢೀಕರಿಸಲು ಸ್ವಯಂ ಪ್ರೇರಿತವಾಗಿ ಮತದಾರರಿಂದ ಆಧಾರ್ ದತ್ತಾಂಶ ಪಡೆಯಬೇಕೆಂದು ಸೂಚನೆ ನೀಡಿರುವುದರಿಂದ ಮೈಸೂರು ನಗರದ ಎಲ್ಲಾ ವಾರ್ಡ್‌ಗಳಲ್ಲಿ ಪಾಲಿಕೆ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಜಿಲ್ಲಾಡಳಿತದಿಂದ ಶನಿವಾರ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಎಲ್ಲಾ ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಲ್ಲಿ ಮತದಾರರನ್ನು ಕರೆಸಿ ಮತದಾರರ ಗುರುತಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು, ರಾಜಕೀಯ ಪಕ್ಷಗಳ ಬೂತ್ ಲೆವೆಲ್ ಏಜೆಂಟರು, ಶಾಸಕರು, ಕಾರ್ಪೊರೇಟರ್‌ಗಳು, ಗ್ರಾಮ, ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರು ಜನರಿಗೆ ಅರಿವು ಮೂಡಿಸಿ, ಕರೆತಂದು ಆಧಾರ್ ಲಿಂಕ್ ಮಾಡಿಸುವರು.

ಆಧಾರ್ ಜೋಡಣೆ ಅಭಿಯಾನದಲ್ಲಿ ಪ್ರಮುಖವಾಗಿ Voter Helpline Application (VHA)ಗೆ ಆದ್ಯತೆ ನೀಡಿ ಅದರಲ್ಲಿ ಪ್ರಕ್ರಿಯೆ ನಡೆಸಬೇಕು. ಒಂದು ವೇಳೆ ಮತಗಟ್ಟೆಗೆ ಬಾರದಿದ್ದಲ್ಲಿ ಮತದಾರರ ಮನೆ–ಮನೆಗೆ ಭೇಟಿ ನೀಡಿ ಅಲ್ಲೇ ಆಧಾರ್ ಜೋಡಣೆ ಮಾಡುವಂತೆ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅದರಂತೆ ಆಗಸ್ಟ್ 27ರಂದು ಬೆಳಗ್ಗೆ 10ರಿಂದ ಸಂಜೆ 5 ಗಂಟೆವರೆಗೆ ಮತಗಟ್ಟೆಗಳಲ್ಲಿ ಹಾಜರಿದ್ದು, ಮತದಾರರ ಗುರುತಿನ ಕಾರ್ಡ್‌ಗೆ ಆಧಾರ್ ಸಂಖ್ಯೆ ಜೋಡಣೆ ಮಾಡಲು ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ಮತಗಟ್ಟೆಗಳಲ್ಲಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಬಿಎಲ್‌ಓಗಳು ಹಾಗೂ ವಿವಿಧ ಪಕ್ಷಗಳ ಏಜೆಂಟರಿಗೆ ಈ ಬಗ್ಗೆ ತರಬೇತಿ ನೀಡಲಾಗಿದೆ ಎಂದು ಪಾಲಿಕೆ ಉಪ ಆಯುಕ್ತರಾದ ಎಂ.ಕೆ. ಸವಿತಾ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಕಾರ್ಪೊರೇಟರ್‌ಗಳು ತಮ್ಮ ವಾರ್ಡ್‌ಗಳಲ್ಲಿ ನಿಗದಿಪಡಿಸಿದ ಸ್ಥಳಗಳಿಗೆ ಜನರ ಮನವೊಲಿಸಿ, ಸಾಮೂಹಿಕವಾಗಿ ಈ ಪ್ರಕ್ರಿಯೆ ನಡೆಸಲು ಏರ್ಪಾಡು ಮಾಡಲಾಗಿದೆ. ಅದೇ ರೀತಿ ಮನೆ–ಮನೆಗೂ ತೆರಳಿ ಆಧಾರ್ ಲಿಂಕ್ ಮಾಡುವ ಪ್ರಕ್ರಿಯೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಇಂದು ಶಾಲೆಗಳಲ್ಲಿ ತರಗತಿ ನಡೆಯುತ್ತಿದ್ದರಿಂದ ಮತಗಟ್ಟೆಗಳಲ್ಲಿ ಆಧಾರ್ ಜೋಡಣೆಗೆ ಯಾವುದೇ ಸಿದ್ಧತೆ ನಡೆಸಿಲ್ಲ. ನಾಳೆ ಬೆಳಗ್ಗೆ (ಶನಿವಾರ) ಬಿಎಲ್‌ಓಗಳು ತಯಾರಿ ಮಾಡಿಕೊಂಡು ಪ್ರಕ್ರಿಯೆ ಆರಂಭಿಸಿ ಒಂದು ವಾರ್ಡ್‌ನಿಂದ ಕನಿಷ್ಠ 10,000 ಮತದಾರರ ಗುರುತಿನ ಕಾರ್ಡ್‌ಗೆ ಆಧಾರ್ ಲಿಂಕ್ ಮಾಡುವ ಉದ್ದೇಶವಿದೆ ಎಂದು ಸವಿತಾ ತಿಳಿಸಿದರು.

ಸ್ನಾತಕೋತ್ತರ ಪದವಿಯ ನಾಲ್ಕನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶ ಪ್ರಕಟ

ಮೈಸೂರು, ಆ.26–ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು (ಸ್ವಾಯತ್ತ), ಜುಲೈ ಮತ್ತು ಆಗಸ್ಟ್‌ನಲ್ಲಿ ನಡೆಸಿದ ಸ್ನಾತಕೋತ್ತರ ಪದವಿಗಳ ನಾಲ್ಕನೆಯ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶಗಳನ್ನು ಪ್ರಕಟಿಸಿದೆ.

ಫಲಿತಾಂಶವನ್ನು ಕಾಲೇಜಿನ ವೆಬ್‌ಸೈಟ್ http://www.jsscacs.edu.in or www.result.jsscacs.edu.inನಲ್ಲಿ ಪಡೆಯಬಹುದು. ಫೋಟೋ ಪ್ರತಿ ಪಡೆಯಲು ಕೊನೆಯ ದಿನಾಂಕ ಫೆ.2 ಮತ್ತು ಮರು ಮೌಲ್ಯಮಾಪನಕ್ಕೆ ಕೊನೆಯ ದಿನಾಂಕ ಸೆ.5 ಆಗಿರುತ್ತದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.08.2022 ಶನಿವಾರ, ಮಳೆ ನಕ್ಷತ್ರ : ಮಖೆ, 17.08.2022 ರಿಂದ 30.08.2022
ಶ್ರೀ ಶುಭಕೃತುನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ
ತಿಥಿ: ಅಮಾವಾಸ್ಯೆ, ನಕ್ಷತ್ರ : ಮಖೆ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20 ಗೀತಾರಾಧನ, 6.35 ಭುವದ ಬಯಲಿಗರು, ರಚನೆ ಮತ್ತು ಪ್ರಸ್ತುತಿ– ಮೈಸೂರು ಉಮೇಶ್, 6.40 ಹಾಡು ಹೇಳಿದ ಕಥೆ, ಲೇಖನ– ಡಾ.ಡಿ. ಸತೀಶ್ಚಂದ್ರ, ಪ್ರಸ್ತುತಿ– ಡಾ. ಮೈಸೂರು ಉಮೇಶ್, 9.00 ರಾಗಲಹರಿ–ಕರ್ನಾಟಕ ಶಾಸ್ತ್ರೀಯ ಸಂಗೀತದ ರಾಗಗಳ ಚಿತ್ತಾರ, 10.00 ಎನ್. ಭಾರತಿ–ವೀಣಾವಾದನ, 11.00 ಅಮೃತ ಸ್ವಾತಂತ್ರ್ಯ ಮಹೋತ್ಸವದ ವಿಶೇಷ ಸರಣಿ "ಸ್ವರಾಜ್"

ಮಧ್ಯಾಹ್ನ: 12.45ಜನಪದಗೀತೆ–ಮಾದಿಗಹಳ್ಳಿಯ ಜಯಮ್ಮ ಮತ್ತು ತಂಡ, 1.20 ಭಾವಗೀತೆ, 3.35 ಮಕ್ಕಳ ಮಂಟಪ– ನಂದಗೋಕುಲ, ಪ್ರಸ್ತುತಿ– ಕೆ.ಬಿ. ಮೀನಾ, 4.00 ನಾಟಕ "ಮಳೆ ಬಂದ ಆ ರಾತ್ರಿ", ರಚನೆ– ಆರ್. ಶ್ರೀನಾಥ್, ನಿರ್ಮಾಣ–ಉಮೇಶ್ ಎಸ್.ಎಸ್., 4.30 ನೆನಪಿನಂಗಳ– ಹಿರಿಯ ಸ್ವಾತಂತ್ರ್ಯ ಹೋರಾಟಗಾರ ತಗಡೂರು ರಾಮಚಂದ್ರ ರಾಯರೊಂದಿಗೆ ಎಂ.ಎನ್. ಜೋಯಿಸ್ ಅವರು ನಡೆಸಿದ್ದ ಸಂವಾದ, 6.50 ಕೃಷಿರಂಗ–ಕಿಸಾನ್‌ವಾಣಿ, ತೋರಣ ಹೂರಣ– ಸಾಪ್ತಾಹಿಕ ಸರಣಿ ಕಾರ್ಯಕ್ರಮ, 9.00 ಲಾಕ್‌ಡೌನ್ ಕಥಾ ನಾಟಕ "ನಿರ್ಧಾರ", ಮೂಲಕಥೆ– ನಳಿನಿ ಟಿ. ಭೀಮಪ್ಪ, ಬಾನುಲಿ ರೂಪ– ತ್ರಿಪುರಾಂತಕ, 9.15 "ಸಮುದಾಯ ರೇಡಿಯೋ" ಕುರಿತು ಶ್ರೀಕಾಂತ್ ಎಸ್.ಬಿ. ಅವರೊಂದಿಗೆ ಸಂದರ್ಶನ, ಸಂದರ್ಶಕರು– ದಿವಾಕರ ಹೆಗಡೆ, 9.30 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಕಾರ್ತೀಕ್ ನಟರಾಜನ್ – ಹಾಡುಗಾರಿಕೆ, 11.00 ಸವಿನೆನಪು

■ **ವಿಜಯ ವಿಠ್ಠಲ ಸಂಯುಕ್ತ ಪದವಿಪೂರ್ವ ಕಾಲೇಜು :** ಸಂಗೀತ–ಜ್ಞಾನ ಸುಧಾ–2022, ನಗರ ಮಟ್ಟದ ಅಂತರ ಕಾಲೇಜು ಭಾವಗೀತೆ ಮತ್ತು ರಸಪ್ರಶ್ನೆ ಸ್ಪರ್ಧೆ, ಮುಖ್ಯ ಅತಿಥಿಗಳು : ಆಕಾಶವಾಣಿ ಕಲಾವಿದೆ ಸ್ಮಿತಾ ಶ್ರೀ ಕಿರಣ್, ಅಧ್ಯಕ್ಷತೆ: ವಿಜಯ ವಿಠ್ಠಲ ವಿದ್ಯಾಸಂಸ್ಥೆ ಕಾರ್ಯದರ್ಶಿ ಆರ್. ವಾಸುದೇವ ಭಟ್, ಉಪಸ್ಥಿತರು : ವೈಷ್ಣವಿ ದತ್ತಾ, ಅಮೂಲ್ಯ, ಹಂಸಿನಿ ಎಸ್. ಕುಮಾರ್, ಮುಖ್ಯ ಅತಿಥಿಗಳು : ವಿಜಯ ವಿಠ್ಠಲ ವಿದ್ಯಾಸಂಸ್ಥೆ ಟ್ರಸ್ಟಿ ಕೆ.ಎನ್. ಪ್ರಸಾದ್, ಸ್ಥಳ: ವಿಜಯ ವಿಠ್ಠಲ ಕಾಲೇಜು ಸಭಾಂಗಣ, ಸರಸ್ವತಿಪುರಂ, ಬೆಳಗ್ಗೆ 9.30ಕ್ಕೆ.

■ **ಡಾ. ಅಗರವಾಲ್ಸ್ ಕಣ್ಣಿನ ಆಸ್ಪತ್ರೆ :** ಶಾಲಾ ಮಕ್ಕಳ ವಾಕಥಾನ್ ಮೂಲಕ ನೇತ್ರದಾನ ಅರಿವು ಕಾರ್ಯಕ್ರಮ, ಉದ್ಘಾಟನೆ : ಶಾಸಕ ಎಸ್.ಎ.ರಾಮದಾಸ್, ಉಪಸ್ಥಿತರು : ಪಾಲಿಕೆ ಸದಸ್ಯ ರಮೇಶ್, ಸ್ಥಳ: ಅಗರವಾಲ್ಸ್ ಕಣ್ಣಿನ ಆಸ್ಪತ್ರೆ, ಕುವೆಂಪುನಗರ, ಬೆಳಗ್ಗೆ 10ಕ್ಕೆ.

■ **ಮೈಸೂರು ನಗರ ಮತ್ತು ಜಿಲ್ಲಾ ಯಾದವ (ಗೊಲ್ಲ) ಯುವ ಸಂಘ, ಶ್ರೀ ಪ್ರಸನ್ನ ನಂಜುಂಡೇಶ್ವರ ಮತ್ತು ಶ್ರೀ ಕೃಷ್ಣದೇವಾಲಯ ಆಡಳಿತ ಸಮಿತಿ :** ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ, ಮಧ್ಯಾಹ್ನ 3ಕ್ಕೆ ಯಾದವ ಮಕ್ಕಳಿಗಾಗಿ ಸ್ಥಳದಲ್ಲೇ ಚಿತ್ರ ಬಿಡಿಸುವ ಸ್ಪರ್ಧೆ, ಮಹಿಳೆಯರಿಗೆ ರಂಗೋಲಿ ಬಿಡಿಸುವ ಸ್ಪರ್ಧೆ, ಸ್ಥಳ: ಯಾದವ ಸಂಘದ ಆವರಣ, ದಿವಾನ್ಸ್ ರಸ್ತೆ.

■ **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ಶ್ರೀ ಧನ್ವಂತರಿ ಪ್ರಯುಕ್ತ ಪಂಚರಾತ್ರೋತ್ಸವ ಕಾರ್ಯಕ್ರಮ, ಸಂಜೆ 6 ರಿಂದ ಪಂಡಿತ್ ಶ್ರೀನಿವಾಸಚಾರ್ಯ ಕೊರ್ಲಹಳ್ಳಿ ದಂಪತಿಗಳಿಂದ ವಿಶೇಷ ವೀಣಾವಾದನ, ಪ್ರತಿದಿನ ಸಂಜೆ 7 ಗಂಟೆಯಿಂದ ಶೇಷವಾಹನ ಉತ್ಸವ, ಗಜವಾಹನ ಉತ್ಸವ, ವಾಯು ವಾಹನ ಉತ್ಸವ, ಗರುಡೋತ್ಸವ ಹಾಗೂ ಮಹಾರಥೋತ್ಸವ, ಸ್ಥಳ: ಶ್ರೀ ಉತ್ತರಾದಿ ಮಠ, ಅಗ್ರಹಾರ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ಶ್ರೀ ಶ್ರೀದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 19ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಶ್ರಾವಣ ಶನಿವಾರದ ಪೂಜೆಗಳು, ಅಮಾವಾಸ್ಯೆ ಪ್ರಯುಕ್ತ ಮಹಾಮೃತ್ಯುಂಜಯ ಹೋಮ, ಶತರುದ್ರೀಯ ಪಾರಾಯಣ, ಸ್ಥಳ: ಶ್ರೀಗಣಪತಿ ಸಚ್ಚಿದಾನಂದ ಆಶ್ರಮ, ನಂಜನಗೂಡು ರಸ್ತೆ.

■ **ಅಧಿವಕ್ತಾ ಪರಿಷತ್ ಕರ್ನಾಟಕ, ದಕ್ಷಿಣ ಪ್ರಾಂತ, ಮೈಸೂರು ವಿಭಾಗ :** ಪ್ರ–ಶಿಕ್ಷಣ ವರ್ಗ–2022–23 ಕಾರ್ಯಕ್ರಮ, ಬೆಳಗ್ಗೆ 10ಕ್ಕೆ ಉದ್ಘಾಟನೆ : ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿ ಕೆ. ಸೋಮಶೇಖರ್, ಅಧ್ಯಕ್ಷತೆ : ಅಧಿವಕ್ತಾ ಪರಿಷತ್ ಜಿಲ್ಲಾಧ್ಯಕ್ಷೆ ವಿ. ಶಾರದ, ಮುಖ್ಯ ಅತಿಥಿಗಳು : ಕರ್ನಾಟಕ ರಾಜ್ಯ ವಕೀಲರ ಪರಿಷತ್ ಉಪಾಧ್ಯಕ್ಷ ಬಿ.ಆರ್. ಚಂದ್ರಮೌಳಿ, ಅತಿಥಿಗಳು : ಪೂರ್ವ ಅಸಿಸ್ಟೆಂಟ್ ಸಾಲಿಸಿಟರಲ್ ಸಿ. ಶಶಿಕಾಂತ, ಅಧಿವಕ್ತಾ ಪರಿಷತ್, ಚಾಮರಾಜನಗರ ಅಧ್ಯಕ್ಷ ಕೆ. ಯೋಗೇಶ್, ಪರಿಷತ್ ಪ್ರಧಾನ ಕಾರ್ಯದರ್ಶಿ ಪಣಿಚೇತನ್ ಎಂ.ಎಸ್., ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಉಪಸ್ಥಿತರು : ಅಧಿವಕ್ತಾ ಪರಿಷತ್, ಕರ್ನಾಟಕ ದಕ್ಷಿಣ ಪ್ರಾಂತ ಕಾರ್ಯದರ್ಶಿ ಆರ್. ಜಯಪ್ರಕಾಶ್, ಅಧ್ಯಕ್ಷತೆ : ಅಧಿವಕ್ತಾ ಪರಿಷತ್ ಜಿಲ್ಲಾಧ್ಯಕ್ಷೆ ವಿ. ಶಾರದ, ಉಪಸ್ಥಿತರು : ವಕೀಲ ಎನ್.ಎಸ್. ಚೇತನ್ ಕುಮಾರ್, ಕೆ.ಕೆ. ಕೃಷ್ಣಕುಮಾರ್, ಸಿ.ಕೆ. ಪೊನ್ನಣ್ಣ, ಸ್ಥಳ: ವಿಜ್ಞಾನ ಭವನ, ಮೈಸೂರು ವಿವಿ, ಮಾನಸಗಂಗೋತ್ರಿ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಡಾ. ಬಿ. ಮಾದೇಶ್ ಗೆಳೆಯರ ಬಳಗ :** ಜಾನಪದ ವಿದ್ವಾಂಸರಾದ ಪ್ರೊ. ಸುಧಾಕರ ಅವರ ಸಮಗ್ರ ಸಾಹಿತ್ಯದ ಅಧ್ಯಯನ ಕೃತಿ ಬಿಡುಗಡೆ ಸಮಾರಂಭ, ಉದ್ಘಾಟನೆ : ವಿಧಾನ ಪರಿಷತ್ ಸದಸ್ಯ ಎಚ್. ವಿಶ್ವನಾಥ್, ಕೃತಿ ಬಿಡುಗಡೆ : ಶಾಸಕ ಯತೀಂದ್ರ ಸಿದ್ದರಾಮಯ್ಯ, ಅಧ್ಯಕ್ಷತೆ : ವಿಶ್ರಾಂತ ಪ್ರಾಧ್ಯಾಪಕ ಪ್ರೊ. ರಾಗೌ, ಮುಖ್ಯ ಅತಿಥಿಗಳು : ವಿಶ್ರಾಂ ಕುಲಪತಿ ಪ್ರೊ. ಅಂಬಳಿಕೆ ಹಿರಿಯಣ್ಣ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಪ್ರಾಧ್ಯಾಪಕ ಪ್ರೊ. ಡಿ ನಾಗಣ್ಣ, ಉಪಸ್ಥಿತರು : ಕೃತಿ ಲೇಖಕ ಡಾ. ಬಿ. ಮಾದೇಶ್, ಸ್ಥಳ: ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ:** ಸಹಕಾರ ಬ್ಯಾಂಕುಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳಿಗೆ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮ, ಉದ್ಘಾಟನೆ: ಶಾಸಕ ಜಿ.ಟಿ.ದೇವೇಗೌಡ, ಅಧ್ಯಕ್ಷತೆ: ಮುಡಾ ಮಾಜಿ ಅಧ್ಯಕ್ಷ ಡಾ.ಹೆಚ್.ವಿ. ರಾಜೀವ್, ಮುಖ್ಯ ಅತಿಥಿಗಳು: ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕರಾದ ಬಿ.ಸಿ. ಲೋಕಪ್ಪಗೌಡ, ಬಿ. ಜಯಕರ ಶೆಟ್ಟಿ ಇಂದ್ರಾಳಿ, ಸ್ಥಳ: ರ್‍ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್, ರೇಸ್‌ಕೋರ್ಸ್ ರಸ್ತೆ ಬೆಳಗ್ಗೆ 10.30ಕ್ಕೆ

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು :** ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭ, ಅಧ್ಯಕ್ಷತೆ : ಪ್ರಾಂಶುಪಾಲ ಪ್ರೊ. ಸೋಮಣ್ಣ, ಸಮಾರೋಪ ಭಾಷಣ : ಚಲನಚಿತ್ರ ನಟ ಡಾ. ಟಿ.ಎಸ್. ನಾಗಾಭರಣ, ಮುಖ್ಯ ಅತಿಥಿಗಳು : ಶಾಸಕ ಎಲ್. ನಾಗೇಂದ್ರ, ಚಲನಚಿತ್ರ ನಟ ಶಂಕರ್ ಅಶ್ವಥ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಮರಿಮಲ್ಲಪ್ಪನವರ ವಿದ್ಯಾಸಂಸ್ಥೆ :** ಪದವಿಪೂರ್ವ ಪ್ರಶಸ್ತಿ ಮತ್ತು ಸ್ವರ್ಣ ಪದಕ ಪ್ರದಾನ ಸಮಾರಂಭ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಪ್ರಶಸ್ತಿ ಪ್ರದಾನ: ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯ ಉಪಕುಲಪತಿ ಪ್ರೊ. ಬಿ.ಪಿ. ವೀರಭದ್ರಪ್ಪ, ಮುಖ್ಯ ಅತಿಥಿಗಳು: ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀನಿವಾಸಮೂರ್ತಿ, ಉಪಸ್ಥಿತರು : ಮರಿಮಲ್ಲಪ್ಪ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಬಿ.ಆರ್. ನೀಲಕಂಠ, ಉಪಪ್ರಾಂಶುಪಾಲ ಎಂ.ಎಸ್. ವಿಜಯ, ಸ್ಥಳ: ಕಲಾಮಂದಿರ, ವಿನೋಬಾ ರಸ್ತೆ, ಸಂಜೆ 4ಕ್ಕೆ.

■ **ಮರಿಮಲ್ಲಪ್ಪ ಪದವಿಪೂರ್ವ ಕಾಲೇಜು:** ಸಾಂಸ್ಕೃತಿಕ ಹಾಗೂ ಕ್ರೀಡಾ ವೇದಿಕೆ ಉದ್ಘಾಟನಾ ಸಮಾರಂಭ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಉದ್ಘಾಟನೆ : ಜೀ ಕನ್ನಡ ಬಿಜಿನೆಸ್ ಹೆಡ್ ರಾಘವೇಂದ್ರ ಹುಣಸೂರು, ಮುಖ್ಯ ಅತಿಥಿಗಳು : ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀನಿವಾಸಮೂರ್ತಿ, ಉಪಸ್ಥಿತರು : ಮರಿಮಲ್ಲಪ್ಪ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಬಿ.ಆರ್. ನೀಲಕಂಠ, ಶೈಕ್ಷಣಿಕ ಅಧಿಕಾರಿ ಶ್ರೀಮತಿ ಮಂಗಳ ಮುದ್ದುಮಾದಪ್ಪ, ಸ್ಥಳ: ಕಲಾಮಂದಿರ, ವಿನೋಬಾ ರಸ್ತೆ, ಬೆಳಗ್ಗೆ 10ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಗಾನಭಾರತೀ :** ವಿದುಷಿ ಇಂದಿರ ಮತ್ತು ವಿದ್ವಾನ್ ಟಿ.ಪಿ. ವೈದ್ಯನಾಥನ್ ಸಂಸ್ಮರಣ ಕಾರ್ಯಕ್ರಮ, ವಿದುಷಿ ಐಶ್ವರ್ಯ ವಿದ್ಯಾ ರಘುನಾಥ್ ಅವರಿಂದ ಗಾಯನ, ವಿದುಷಿ ಅದಿತಿ ಕೃಷ್ಣಪ್ರಕಾಶ್–ಪಿಟೀಲು, ವಿದ್ವಾನ್ ತುಮಕೂರು ಬಿ. ರವಿಶಂಕರ್–ಮೃದಂಗ, ವಿದ್ವಾನ್ ಶ್ರೀನಿಧಿ ಆರ್. ಕೌಂಡಿನ್ಯ–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಕುವೆಂಪುನಗರ, ಸಂಜೆ 6ಕ್ಕೆ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ವಿದುಷಿ ರೇವತಿ ಕಾಮತ್ ಅವರಿಂದ ವೀಣಾವಾದನ, ವಿದ್ವಾನ್ ತುಮಕೂರು ಯಶಸ್ವಿ–ಪಿಟೀಲು, ವಿದ್ವಾನ್ ಬಿ.ಆರ್. ಶ್ರೀಧರ–ಮೃದಂಗ, ವಿದ್ವಾನ್ ಅಜಯ್ ಟಿ.ಎನ್.–ಘಟಂ, ಸ್ಥಳ: ಶ್ರೀ ರಾಮಮಂದಿರ, ಜಯನಗರ, ಸಂಜೆ 6 ರಿಂದ.

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ ಅವರಿಂದ ಶರಣ ಸಂಸ್ಕೃತಿ ಕುರಿತು ಪ್ರವಚನ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ರಿಂದ.

ಸುತ್ತೂರಿನಲ್ಲಿಂದು

■ **ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ:** ಸಂಜೆ 6ಕ್ಕೆ ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಬೇಬಿಬೆಟ್ಟ ಶ್ರೀ ರಾಮಯೋಗೀಶ್ವರ ಮಠದ ಶ್ರೀ ಶಿವಬಸವ ಸ್ವಾಮೀಜಿ, ಸಮಾರೋಪ ಭಾಷಣ : ತಹಸೀಲ್ದಾರ್ ಎಂ. ಶಿವಮೂರ್ತಿ, ಮುಖ್ಯ ಅತಿಥಿಗಳು : ಆರಕ್ಷಕ ವೃತ್ತ ನಿರೀಕ್ಷಕ ಲಕ್ಷ್ಮಿಕಾಂತ್ ಕೆ. ತಳವಾರ್, ಆರಕ್ಷಕ ಉಪನಿರೀಕ್ಷಕಿ ಟಿ.ಆರತಿ, ಪ್ರವಚನ: ಜೆಎಸ್‌ಎಸ್ ಕಾಲೇಜು ಪ್ರಾಧ್ಯಾಪಕ ಪ್ರೊ. ಹೆಚ್.ಟಿ. ದೇವಣ್ಣ, ವಾಚನ: ಜೆಎಸ್‌ಎಸ್ ಪ್ರೌಢಶಾಲೆ ದೈಹಿಕ ಶಿಕ್ಷಕ ಡಿ.ಎಂ. ಸಿದ್ದಲಿಂಗಸ್ವಾಮಿ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಸುತ್ತೂರು ಮಠ, ಸಂಜೆ 6.30ರಿಂದ.

ಅರ್ಜಿ ಆಹ್ವಾನ

ಮೈಸೂರು, ಆ.26– 2022–23ನೇ ಸಾಲಿನ ದ್ವಿತೀಯ ವರ್ಷದ ಡಿಪ್ಲೊಮಾಗೆ ಲ್ಯಾಟರಲ್ ಎಂಟ್ರಿಗಾಗಿ ಟಿಟಿಐ, ದ್ವಿತೀಯ ಪಿಯುಸಿ(ವಿಜ್ಞಾನ ಮತ್ತು ತಾಂತ್ರಿಕ ವಿಷಯಗಳಲ್ಲಿ) ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಅರ್ಜಿಯನ್ನು ಆ.3ರ ಸಂಜೆ 5.30ರೊಳಗೆ ಮೈಸೂರಿನ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ https:/dtek.karnataka.gov ಮತ್ತು dtetech.karnataka.gov.in ನಲ್ಲಿ ಪಡೆದುಕೊಳ್ಳಲು ಪ್ರಕಟಣೆಯಲ್ಲಿ ಕೋರಲಾಗಿದೆ.



ಆಟೋಮೋಟಿವ್ ಆಕ್ಸೆಲ್ಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ

ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು

ವಾರ್ಷಿಕ ಮಹಾಸಭೆ

ಸಂಘದ 2021–22ನೇ ಸಾಲಿನ ಸರ್ವ ಸದಸ್ಯರ ಮಹಾಸಭೆಯು ದಿನಾಂಕ 28–08–2022, ಭಾನುವಾರದಂದು ಬೆಳಿಗ್ಗೆ 9.30 ಗಂಟೆಗೆ ಆಟೋಮೋಟಿವ್ ಆಕ್ಸೆಲ್ಸ್ ಲಿಮಿಟೆಡ್ ಆವರಣ, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು, ಇಲ್ಲಿ ನಡೆಯಲಿದೆ. ನಿರ್ದೇಶಕ ಮಂಡಳಿಯು ಸದಸ್ಯರೆಲ್ಲರಿಗೂ ಹಾರ್ದಿಕ ಸ್ವಾಗತವನ್ನು ಬಯಸುತ್ತದೆ. ಆಹ್ವಾನ ಪತ್ರಿಕೆಯಲ್ಲಿ ಸದಸ್ಯರೆಲ್ಲರಿಗೂ ಪ್ರತ್ಯೇಕವಾಗಿ ಕಳಿಸಲಾಗಿದೆ. ಒಂದು ವೇಳೆ ಆಹ್ವಾನ ಪತ್ರಿಕೆಯು ತಲುಪದಿದ್ದಲ್ಲಿ, ಇದನ್ನೇ ಆಹ್ವಾನ ಪತ್ರಿಕೆ ಎಂದು ಪರಿಗಣಿಸಿ, ಸಭೆಗೆ ಹಾಜರಾಗಬೇಕೆಂದು ಪ್ರಾರ್ಥಿಸುತ್ತೇವೆ.

ಆಟೋಮೋಟಿವ್ ಆಕ್ಸೆಲ್ಸ್ ನೌಕರರ
ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ ಪರವಾಗಿ,
ಸಹಿ/– ಶಿವಕುಮಾರ್ ಆರ್., ಅಧ್ಯಕ್ಷರು

ಸ್ಥಾಪನೆ:1983 ದೂರವಾಣಿ ಸಂಖ್ಯೆ: 0821–2422127

ದಿ ಸಿಟಿಜನ್ಸ್ ಹೌಸ್ ಮಾರ್ಟ್‌ಗೇಜ್ ಮತ್ತು ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಲಿ.,

ನಂ.361/1, ಸಿ.ಹೆಚ್–15, ಡಿ.ಸುಬ್ಬಯ್ಯ ರಸ್ತೆ, ಚಾಮರಾಜ ಮೊಹಲ್ಲಾ, ಮೈಸೂರು–24

ಈ ಸೊಸೈಟಿಯ 2021–2022ನೇ ಸಾಲಿನ 40ನೇ ವಾರ್ಷಿಕ ಮಹಾಸಭೆಯನ್ನು ಆಗಸ್ಟ್ ಮಾಹೆ ದಿನಾಂಕ: 28.08.2022ರ ಭಾನುವಾರ ಮಧ್ಯಾಹ್ನ 12.30 ಘಂಟೆಗೆ **ಮೈಸೂರು ನಗರ, ವಿಜಯನಗರ, 4ನೇ ಹಂತ, 2ನೇ ಫೇಸ್, #5851/A** ನೂತನ ಕಟ್ಟಡದ ಆವರಣದಲ್ಲಿ ನ್ಯಾಷನಲ್ ಪಬ್ಲಿಕ್ ಸ್ಕೂಲ್ ಹತ್ತಿರ (ಎನ್.ಪಿ.ಎಸ್)

ಸಂಘದ ಅಧ್ಯಕ್ಷರಾದ
ಶ್ರೀ ಎನ್. ಶಿವಕುಮಾರ್ ರವರ
ಅಧ್ಯಕ್ಷತೆಯಲ್ಲಿ ನಡೆಯಲಿದೆ.

ವಾರ್ಷಿಕ ಮಹಾಸಭೆಯ ಆಹ್ವಾನ ಪತ್ರಿಕೆಯನ್ನು ಅಂಚೆ ಮೂಲಕ ಮಾನ್ಯ ಸದಸ್ಯರುಗಳಿಗೆ ಕಳುಹಿಸಲಾಗಿದೆ. ಮಾನ್ಯ ಸದಸ್ಯರುಗಳೆಲ್ಲರೂ ಸಕಾಲಕ್ಕೆ ಸಭೆಗೆ ಹಾಜರಾಗಬೇಕಾಗಿ ಕೋರಲಾಗಿದೆ.

ವಿಶೇಷ ಸೂಚನೆ:
1) ವಾರ್ಷಿಕ ಮಹಾಸಭೆಗೆ ಹಾಜರಾಗುವ ಮಾನ್ಯ ಸದಸ್ಯರು ಕಡ್ಡಾಯವಾಗಿ ಮಾಸ್ಕ್ ಧರಿಸಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳತಕ್ಕದ್ದು.
2) ತಿದ್ದುಪಡಿಯಾದ ಸಹಕಾರ ಕಾಯಿದೆ ರೀತ್ಯಾ ವಾರ್ಷಿಕ ಮಹಾಸಭೆಗೆ ಹಾಜರಾತಿ ಕಡ್ಡಾಯವಾಗಿರುತ್ತದೆ. ಮಾನ್ಯ ಸದಸ್ಯರುಗಳು ತಪ್ಪದೇ ಸಭೆಗೆ ಹಾಜರಾಗಿ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಬೇಕಾಗಿ ಕೋರಲಾಗಿದೆ.

ಆಡಳಿತ ಮಂಡಳಿ ಅಪ್ಪಣೆ ಮೇರೆಗೆ
ಸಹಿ/– ಎಂ.ವಿ.ರವಿ, ಕಾರ್ಯದರ್ಶಿ, ಮೊಬೈಲ್: 9741202595



PUBLIC NOTICE

This is to inform all those whoever it may concern, that my client Smt. Chikkathayamma, residing at No. 1283, Hospital Road, Kyathanahalli Village, Pandavapura Taluk, Mandya 571427, had executed a Development General Power of Attorney in favour of Mr. K A Anil Kumar, Mr. Sadat Ali Khan and Mr. N. Srinivas, the said Development General Power of Attorney was executed on 06-07-2013 before the Sub Registrar at Mysore North, bearing document No. MYN-4-00087/2013-14. Now my client has revoked all the powers given under Development General Power of Attorney and hereby we wish to bring to the attention of all the public that no one should deal with these people with regards to below mentioned schedule of property and if any persons or individuals proceeds with it in spite of this notice then my client owes no answer to such persons or individuals. If anyone has issues or concerns with this matter, they may contact us within 7 days from the date of this issue of public notice.

Property Schedule

Property situated at Lingabudhi Village, Kasaba Hobli, Mysuru Taluk, bearing Sy No's. 13, 15, 16, 17, 18, 20/1A, 38/1, 43, 44, 45 and 46 measuring total extent of 35 Acres & 19 Guntas.

Contact

Smt. Chikkathayamma, Residing at No. 1283, Hospital Road, Kyathanahalli, Pandavapura Taluk, Mandya District. Ph No. 9986558749

Sd/- Naveen Kumar. N.,
Advocate

Date: 26-08-2022
Place: Mysore

ನಕ್ಕರೆ ಅದೇ ಸ್ವರ್ಗ

ಗುಂಡ: ಆಗ್ರಾದ ತಾಜ್‌ಮಹಲ್ ಯಾವುದಕ್ಕೆ ಸಾಕ್ಷಿ, ಅಂತಿಂಯ.
ಕಿಟ್ಟಿ: ಹೆಂಡತಿ ಬದುಕಿರುವಾಗ ಮಾತ್ರವಲ್ಲ, ಸತ್ತ ಮೇಲೂ ಗಂಡನ ದುಡ್ಡು ಹೇಗೆ ಖಾಲಿ ಮಾಡಿಸುತ್ತಾಳೆ ಎಂಬುದಕ್ಕೆ.

ಮೈಸೂರು ಮಿತ್ರ
ಶನಿವಾರ, 27 ಆಗಸ್ಟ್ 2022
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ. ಗೋವಿಂದೇಗೌಡ M.A.

ಅಮೃತವಾಹಿನಿ

ಸುಖದ ಮಧ್ಯೆ ದುಃಖವಿದೆ, ದುಃಖದ ಮಧ್ಯೆ ಸುಖವಿದೆ. ಎರಡೂ ನೀರು–ಕೆಸರು ಕೂಡಿಕೊಂಡಂತಿರುತ್ತದೆ – ಸುಭಾಷಿತ ರತ್ನ ಭಾಂಡಾಗಾರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ತುಂಬಿದ ಕೆರೇನೂ ನಂಬಿದ ಮನೇನೂ ಬಿಡಬಾರದು.

ನಿಮ್ಮ ಪತ್ರಗಳು

ಬೇಕಾಬಿಟ್ಟಿ ವಿವಿಗಳ ಸ್ಥಾಪನೆ ಸರಿಯಲ್ಲ

ಮಾನ್ಯರೆ,

ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಸೇರಿದಂತೆ ರಾಜ್ಯದಲ್ಲಿ ಇನ್ನೂ 8 ಹೊಸ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸುವುದಾಗಿ ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ಹೇಳಿರುವುದು ಮಾಧ್ಯಮಗಳಲ್ಲಿ ವರದಿಯಾಗಿದೆ. ಪ್ರತಿ ಜಿಲ್ಲೆಗೂ ಒಂದೊಂದು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಇಂಗಿತವನ್ನು ಸಹ ಸಚಿವರು ಕೆಲವು ದಿನಗಳ ಹಿಂದೆ ವ್ಯಕ್ತಪಡಿಸಿದ್ದರು. ನೂತನ ವಿಶ್ವವಿದ್ಯಾನಿಲಯಗಳ ಸ್ಥಾಪನೆಗೆ ಈಗಾಗಲೇ ತಲಾ 2 ಕೋಟಿ ರೂ ಅನುದಾನವನ್ನು ಸಹ ಬಿಡುಗಡೆ ಮಾಡಿರುವುದಾಗಿ ಸಚಿವರು ತಿಳಿಸಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಹಲವಾರು ವಿಶ್ವವಿದ್ಯಾನಿಲಯಗಳು ಕಾರ್ಯ ನಿರ್ವಹಿಸುತ್ತಿವೆ. ಅನೇಕ ವಿವಿಗಳಿಗೆ ಮೂಲಭೂತ ಸೌಕರ್ಯಗಳನ್ನೇ ಒದಗಿಸಲಾಗಿಲ್ಲ. ಉದಾಹರಣೆಗೆ, ಮೈಸೂರಿನ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿವಿ ಒಂದು ಶತಮಾನದಷ್ಟು ಹಳೆಯದಾದ ಪಾರಂಪರಿಕ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಈ ಕಟ್ಟಡದಲ್ಲಿ ಕೆಲವು ವರ್ಷಗಳ ಹಿಂದೆ ಸರ್ಕಾರಿ ಪ್ರಾಥಮಿಕ ಶಾಲೆ ನಡೆಯುತ್ತಿತ್ತು. ಇದನ್ನು ಯಾರೂ ವಿಶ್ವ ವಿದ್ಯಾನಿಲಯದ ಕೇಂದ್ರ ಕಛೇರಿ ಎಂದು ಹೇಳಲು ಸಾಧ್ಯವಿಲ್ಲ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರ ಅಧಿಕಾರಾವಧಿಯಲ್ಲಿ ಅಸ್ತಿತ್ವಕ್ಕೆ ಬಂದ ಈ ವಿವಿಗೆ ಒಂದಿಬ್ಬರನ್ನು ಹೊರತು ಪಡಿಸಿ ಖಾಯಂ ಸಿಬ್ಬಂದಿ ಹಾಗೂ ಬೋಧಕ ವರ್ಗದವರೇ ಇಲ್ಲ. ಇಲ್ಲಿ ಹಂಗಾಮಿಯಾಗಿ ಕೆಲಸ ನಿರ್ವಹಿಸುತ್ತಿದ್ದ 20 ಕ್ಕೂ ಹೆಚ್ಚು ಕಾರ್ಮಿಕರನ್ನು ಕೆಲಸದಿಂದ ತೆಗೆದು ಹಾಕಲಾಗಿದ್ದು ಇವರೆಲ್ಲಾ ಕಳೆದ ಹಲವಾರು ದಿನಗಳಿಂದ ಮುಷ್ಕರ ನಡೆಸುತ್ತಿದ್ದಾರೆ.

ಇನ್ನು ರಾಜ್ಯದ ಅನೇಕ ವಿಶ್ವವಿದ್ಯಾನಿಲಯಗಳಲ್ಲಿ ಅಕ್ರಮ ನೇಮಕಾತಿ, ಭ್ರಷ್ಟಾಚಾರ, ಸ್ವಜನಪಕ್ಷಪಾತ, ರಾಜಕೀಯ ಹಸ್ತ ಕ್ಷೇಪ ಮುಂತಾದವುಗಳು ನಡೆಯುತ್ತಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿ ಪ್ರಕಟವಾಗುತ್ತಲೇ ಇದ್ದರೂ ಇವುಗಳನ್ನು ಸರಿಪಡಿಸಲು ರಾಜ್ಯ ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ. ಅನೇಕ ವಿವಿಗಳಲ್ಲಿ ಕುಲಪತಿ ಹಾಗೂ ಹಿರಿಯ ಅಧಿಕಾರಿಗಳ ನಡುವೆ ಸಾಮರಸ್ಯ ಇಲ್ಲದೇ ಅಧಿಕಾರಕ್ಕಾಗಿ ಕಚ್ಚಾಟ, ಮುಸುಕಿನ ಗುದ್ದಾಟ ನಡೆಯುತ್ತಿದೆ. ವಿಶ್ವವಿದ್ಯಾನಿಲಯಗಳು, ಜ್ಞಾನ ಕೇಂದ್ರಗಳಾಗಬೇಕೆ ಹೊರತು ಭ್ರಷ್ಟಾಚಾರದ ಕೂಪಗಳಾಗಬಾರದು. ರಾಜ್ಯಸರ್ಕಾರ ಹೊಸ ವಿವಿಗಳನ್ನು ಸ್ಥಾಪಿಸುವ ಬದಲು ಈಗ ಅಸ್ತಿತ್ವದಲ್ಲಿರುವ ವಿವಿಗಳನ್ನು ಪುನಶ್ಚೇತನಗೊಳಿಸಿ ಅವುಗಳಿಗೆ ಸೂಕ್ತ ಮೂಲಭೂತ ಸೌಕರ್ಯ ಒದಗಿಸಿ ಅವುಗಳನ್ನು ಸರಿಯಾದ ದಾರಿಯಲ್ಲಿ ನಡೆಸಲು ಪ್ರಾಮಾಣಿಕ ಹಾಗೂ ಕಳಂಕ ರಹಿತ ಅಧಿಕಾರಿಗಳನ್ನು ನೇಮಿಸಲಿ.

–ಡಾ.ಕೆ.ವಿ.ವಾಸು, ವಕೀಲರು, ಮೈಸೂರು

ಫೆಲೋಶಿಪ್ ಕಡಿತಗೊಳಿಸಿರುವುದು ಸರಿಯಲ್ಲ

ಮಾನ್ಯರೆ,

ಇತ್ತೀಚಿಗೆ ಪತ್ರಿಕೆಗಳಲ್ಲಿ ವರದಿ ಆಗಿರುವಂತೆ ಸರ್ಕಾರವು ಅಲ್ಪಸಂಖ್ಯಾತ ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ಫೆಲೋಶಿಪ್ ಕಡಿತಗೊಳಿಸಿರುವುದಲ್ಲದೇ ಮೊದಲನೇ ವರ್ಷ ಬಿಟ್ಟು ಉಳಿದ ಎರಡು ವರ್ಷಗಳು ನೀಡುತ್ತೇವೆ ಎಂದು ಆದೇಶ ಹೊರಡಿಸಿದೆ. ಸರ್ಕಾರದ ಈ ನಡೆಯನ್ನು ಡಿಆರ್ ಎಸ್‌ಓ ಸಂಘಟನೆಯು ಅತ್ಯಂತ ತೀವ್ರವಾಗಿ ವಿರೋಧಿಸುತ್ತದೆ.

ಸರ್ಕಾರ ಮತ್ತು ವಿಶ್ವ ವಿದ್ಯಾನಿಲಂಯಗಳು ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಖಾತ್ರಿಪಡಿಸಲು ಫೆಲೋಶಿಪ್ ಅನ್ನು ಹೆಚ್ಚಿಸುವ ಹಾಗೂ ವಿದ್ಯಾರ್ಥಿಗಳಿಗೆ ನಿಯಮಿತವಾಗಿ ಫೆಲೋಶಿಪ್ ನೀಡುವ ಜವಬ್ದಾರಿಯನ್ನು ನಿರ್ವಹಿಸಬೇಕೇ ಹೊರತು ಉನ್ನತ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಬಾರದು.

ಈಗಾಗಲೇ ಕೊರೊನಾ ಬಿಕ್ಕಟ್ಟಿನಿಂದ ಅದೆಷ್ಟೋ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗಿದ್ದಾರೆ. ಪ್ರಸ್ತುತ ಸರ್ಕಾರ ತನ್ನ ಜವಾಬ್ದಾರಿಯಿಂದ ಹಿಂದೆ ಸರಿದರೆ ಬಡ ಮಧ್ಯಮ ವರ್ಗದ ವಿದ್ಯಾರ್ಥಿಗಳು ಅದರಲ್ಲೂ ಅಲ್ಪ ಸಂಖ್ಯಾತ ಹೆಣ್ಣು ಮಕ್ಕಳ ಉನ್ನತ ಶಿಕ್ಷಣದ ಕನಸು ಕಮರಿಹೋಗುತ್ತದೆ. ಉನ್ನತ ಶಿಕ್ಷಣಕ್ಕೆ ಹಣ ಕಡಿತಗೊಳಿಸುತ್ತಿರುವುದು ಎನ್.ಇ.ಪಿ–2020 ಯ ಒಂದು ಭಾಗವಾಗಿದ್ದು, ಈಗ ಸರ್ಕಾರವು ಪಿ.ಹೆಚ್.ಡಿ ವಿದ್ಯಾರ್ಥಿಗಳ ಸಂಶೋಧನೆಗೆ ಪ್ರೋತ್ಸಾಹ ಕೊಡದೆ ಫೆಲೋಶಿಪ್ ಕಡಿತಗೊಳಿಸಿ ಬಡ ವಿದ್ಯಾರ್ಥಿಗಳನ್ನು ಉನ್ನತ ಶಿಕ್ಷಣದಿಂದ ದೂರವಿರಿಸಲಾಗುತ್ತಿದೆ. ಫೆಲೋಶಿಪ್ ಇಲ್ಲದೇ ವಿದ್ಯಾರ್ಥಿಗಳೇ ಸ್ವತಃ ಹಣ ಭರಿಸಿ ಸಂಶೋಧನೆ ನಡೆಸಬೇಕೆಂದರೆ ವಿದ್ಯಾರ್ಥಿಗಳಿಗೆ ಅದು ಹೊರೆಯಾಗುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಈ ಕೂಡಲೇ ಈ ಆದೇಶವನ್ನು ಹಿಂಪಡೆಯಬೇಕು.

–ಚಂದ್ರಿಕಾ, ಡಿಆರ್‌ಎಸ್‌ಓ, ಮೈಸೂರು.

ಮುಕ್ತ ವಿವಿ ಶಿಕ್ಷಣಕ್ಕೆ ಬೆಲೆ ಇಲ್ಲವೇ?

ಮಾನ್ಯರೆ,

ನೇರವಾಗಿ ಕಾಲೇಜಿಗೆ ಹೋಗಿ ಓದಲಾಗದ ನನ್ನಂಥ ಬಡ ವಿದ್ಯಾರ್ಥಿಗಳಿಗೆ ಮತ್ತು ಎಲ್ಲರಿಗೂ ಸಮಾನ ಶಿಕ್ಷಣ ಸಿಗಬೇಕು ಎಂಬ ಉದ್ದೇಶದಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸ್ಥಾಪನೆಯಾಗಿದೆ. ಇದು ಉನ್ನತ ಶಿಕ್ಷಣದಿಂದ ವಂಚಿತರಾಗಿ ಉಳಿದಿದ್ದ ಎಷ್ಟೋ ವಿದ್ಯಾರ್ಥಿಗಳ ಪಾಲಿಗೆ ಶೈಕ್ಷಣಿಕ ಸಂಜೀವಿನಿ ಎಂದರೆ ತಪ್ಪಲ್ಲ.

ಈ ರೀತಿ ಶಿಕ್ಷಣ ಪಡೆದು ಉದ್ಯೋಗ ಹುಡುಕುವವರಿಗೆ ತಾತ್ಸಾರದಿಂದ ಕಂಡು ಇರುಸು–ಮುರುಸು ಉಂಟು ಮಾಡಲಾಗುತ್ತಿದೆ. ಇದು ಒಂದು ರೀತಿಯ ಅವಮಾನವೇ ಸರಿ. ನನಗೆ ಈ ವಿಷಯದಲ್ಲಿ ಸ್ವಂತ ಅನುಭವವಾಯಿತು. ಇಲವಾಲ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 2017ರಲ್ಲಿ ಕನ್ನಡ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದೆ. 2018ರ ಶೈಕ್ಷಣಿಕ ವರ್ಷದ ಆರಂಭದಲ್ಲಿ ಅಲ್ಲಿಗೆ ಸರ್ಕಾರಿ ಉಪನ್ಯಾಸಕರಾಗಿ ಪೂರ್ಣಾವಧಿಗೆ ಕನ್ನಡ ಉಪನ್ಯಾಸಕರು ವರ್ಗಾವಣೆಯಾಗಿ ಬಂದರು. ನನ್ನ ಸ್ಥಾನ ತೆರವಾಯಿತು. ಆನಂತರ ಅಲ್ಲಿದ್ದ ಒಬ್ಬ ಉಪನ್ಯಾಸಕರು ಅವರಿಗೆ ಪರಿಚಯವಿದ್ದ ಮೈಸೂರಿನ ಒಂದು ಪ್ರತಿಷ್ಠಿತ ಖಾಸಗಿ ಕಾಲೇಜಿಗೆ ಹೋಗಿ ಎಂದು ಶಿಫಾರಸು ಮಾಡಿ ಆ ಕಾಲೇಜಿನ ಪ್ರಾಂಶುಪಾಲರ ಜತೆಗೆ ಮಾತನಾಡಿ ನನ್ನನ್ನು ಕಳುಹಿಸಿದರು. ಅಲ್ಲಿ ಹೋಗಿ ನನ್ನ ರೆಸ್ಯೂಮ್ ಕೊಟ್ಟು ಮಾತನಾಡಿದೆ. ಕೊನೆಯಲ್ಲಿ ಆ ಪ್ರಾಂಶುಪಾಲರು "ಓಹ್, ನಿಮ್ಮ ಸ್ನಾತಕೋತ್ತರ ಕನ್ನಡ ಪದವಿ ಮುಕ್ತ ವಿವಿಯಲ್ಲಿಯೇ..., ಓಕೆ, ನೋಡೋಣ" ಅಂತ ಅಲ್ಲಿಂದ ಸಾಗ ಹಾಕಿದರು. ಮತ್ತೆ ಕರೆ ಮಾಡಲಿಲ್ಲ ನಾನೇ ಒಮ್ಮೆ ಕೇಳಿದೆ, ಯಾವ ಹುದ್ದೆಯೂ ಖಾಲಿಯಿಲ್ಲ, ಆಮೇಲೆ ನೋಡುವ ಎಂದರು. ತುಂಬಾ ಬೇಜಾರಾದರೂ ಸಹ ಅಸಹಾಯಕನಾಗಿ ಸುಮ್ಮನಾಗಬೇಕಾಯಿತು.

ನನ್ನ ಮನಸಿಗೆ ಬಂದ ವಿಷಯ ಏನೆಂದರೆ ನಮ್ಮ ಮುಕ್ತ ವಿವಿಯ ಎಂಎ ಕನ್ನಡ ಶಿಕ್ಷಣಕ್ಕೆ ಬೆಲೆಯೇ ಇಲ್ಲವೆ, ಹಾಗಾದರೆ ಆ ವಿವಿ ಏಕೆ ಬೇಕು, ಅಲ್ಲಿಯ ಶಿಕ್ಷಣಕ್ಕೆ ಮೌಲ್ಯ ಇಲ್ಲವಾದರೆ ಅಲ್ಲಿಯ ಓದಾದರೂ ಏಕೆ ಬೇಕು ಎಂಬುದು.

ಇನ್ನಾದರೂ ಇಂತಹ ಮನಸ್ಥಿತಿಯಿಂದ ಪ್ರಾಂಶುಪಾಲರು ಹೊರಬರಲಿ. ಪ್ರತಿಭಾವಂತರನ್ನು ಓದಿದ ವಿವಿ ಮತ್ತು ಅಂಕದಿಂದ ಅಳೆಯುವ ತಪ್ಪು ಕಲ್ಪನೆಯಿಂದ ದೂರವಿರಿ. ಇಂತಹ ಜನರಿಂದ ಸಮಾಜಕ್ಕೆ ದೊಡ್ಡ ಅಪಾಯವಿದೆ ಎಂಬುದನ್ನು ಮನಗಾಣೋಣ.

ಮುಖ್ಯಮಂತ್ರಿಗಳು, ಶಿಕ್ಷಣ ಸಚಿವರು, ಮುಕ್ತ ವಿವಿ ಕುಲಪತಿಗಳು ಈ ಬಗ್ಗೆ ಒಂದು ಶಾಸನ ರೂಪಿಸಿ ಇಂತಹ ಪ್ರಾಂಶುಪಾಲರಿಗೆ ಲಿಖಿತ ರೂಪದಲ್ಲಿ ತಿಳಿಸಲೆಂಬುದು ನನ್ನಂಥ ಎಷ್ಟೋ ಜನರ ಕಳಕಳಿಯ ಮನವಿ.

–ಎ.ಎಸ್. ಗೋವಿಂದೇಗೌಡ, ಅರೇನಹಳ್ಳಿ ಗ್ರಾಮ, ಪಿರಿಯಾಪಟ್ಟಣ ತಾಲೂಕು



ಕಾರ್ಕಳ ಆನಂದಭಟ್
ಮೊ.7676554198

ದಿಕ್ಕುದೆಸೆ

ಭಾರೀ ಆರ್ಥಿಕ ಸಂಕಷ್ಟದಲ್ಲಿ ಪಾಕಿಸ್ತಾನ

ಜಗತ್ತಿಗೆ ಭಯೋತ್ಪಾದನೆಯನ್ನು ರಫ್ತು ಮಾಡುವ ಪಾಕಿಸ್ತಾನ ತೀವ್ರವಾದ ಆರ್ಥಿಕ ಸಂಕಷ್ಟದಲ್ಲಿದೆ. ಕುಸಿಯುತ್ತಿರುವ ರೂಪಾಯಿ ಮೌಲ್ಯ, ಭಾರೀ ಪ್ರಮಾಣದ ಬೆಲೆ ಏರಿಕೆ. ಬರಿದಾಗುತ್ತಿರುವ ವಿದೇಶ ವಿನಿಮಯ ಸಂಗ್ರಹ, ಹೆಚ್ಚುತ್ತಿರುವ ವಿದೇಶಿ ಸಾಲ, ತೆರಿಗೆ ಸಂಗ್ರಹ–ಜಿಡಿಪಿ ಪ್ರಮಾಣದಲ್ಲಿ ಭಾರೀ ಅಂತರ, ಹಣದುಬ್ಬರ, ಚೀನಾದಿಂದ ಪಡೆದ ದುಬಾರಿ ಬಡ್ಡಿ ದರದ ಭಾರೀ ಪ್ರಮಾಣದ ಸಾಲ, ರಾಜಕೀಯ ಅಸ್ಥಿರತೆ, ದೇಶದ ಅವಶ್ಯಕತೆಗಿಂತ ವಿಶಾಲ ಸೇನಾ ಬಲ, ಜನಾಂಗೀಯ ದ್ವೇಷ, ಪ್ರತ್ಯೇಕತಾ ಚಳುವಳಿಗಳು, ಭಯೋತ್ಪಾದನಾ ಗುಂಪುಗಳು–ಈ ಎಲ್ಲಾ ಸಮಸ್ಯೆಗಳಿಂದ ಪಾಕಿಸ್ತಾನದ ಸ್ಥಿತಿ ದಯನೀಯವಾಗಿದೆ. ಪಾಕಿಸ್ತಾನದ ಆರ್ಥಿಕ ಪರಿಸ್ಥಿತಿಯು ಶ್ರೀಲಂಕಾದಂತೆ ಆಗುವ ಸಾಧ್ಯತೆ ಹೆಚ್ಚುತ್ತಿದೆ.

ಕಳೆದ ವರ್ಷ 20 ಬಿಲಿಯನ್ ಡಾಲರ್ ಇದ್ದ ವಿದೇಶಿ ವಿನಿಮಯ ಸಂಗ್ರಹ ಈ ವರ್ಷ 9 ಬಿಲಿಯನ್ ಡಾಲರ್‌ಗೂ ಕೆಳಕ್ಕೆ ಕುಸಿದಿದೆ. ಇದು ಮುಂದಿನ ಒಂದು ತಿಂಗಳಿಗೆ ಆಮದು ಮಾಡುವಷ್ಟಕ್ಕೆ ಮುಗಿಯಲಿದೆ. ಸದ್ಯಕ್ಕೆ ಶ್ರೀಲಂಕಾದಷ್ಟು ಪಾಕಿಸ್ತಾನದ ಪರಿಸ್ಥಿತಿ ಹದಗೆಟ್ಟಿಲ್ಲ. ಆದರೆ ಸುರಕ್ಷಿತವಾಗಿಯೂ ಇಲ್ಲ. ಪಾಕ್ ಮಾಧ್ಯಮಗಳು ನೀಡಿದ ಮಾಹಿತಿಯಂತೆ ಪ್ರಸ್ತುತ ಆರ್ಥಿಕ ವರ್ಷದಲ್ಲಿ ಪಾಕಿಸ್ತಾನ 21 ಬಿಲಿಯನ್ ಡಾಲರ್ ಸಾಲವನ್ನು ಮರುಪಾವತಿಸಬೇಕಾಗಿದೆ.

ಶ್ರೀಲಂಕಾದಂತೆ ಪಾಕಿಸ್ತಾನವು ತೆರಿಗೆ ಕಡಿತ ಮಾಡದೇ, ಬೇಕಾಬಿಟ್ಟಿ ಸಬ್ಸಿಡಿ ನೀಡದೇ ಆರ್ಥಿಕತೆ ನಿರ್ವಹಿಸಿದರೂ, ತೆರಿಗೆ ಜಿಡಿಪಿ ಅನುಪಾತ ಶೇ.10ರಷ್ಟು ಕನಿಷ್ಟ ಮಟ್ಟಕ್ಕೆ ಇಳಿದಿದೆ. ಭಾರತದಿಂದ ತನಗೆ ಅಪಾಯವಿದೆಯೆಂದು ಬಿಂಬಿಸಿ ಪ್ರತಿ ವರ್ಷ ತನ್ನ ರಕ್ಷಣಾ ವೆಚ್ಚ ಹೆಚ್ಚಿಸುತ್ತಿದೆ. ಈ ಬಾರಿ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಿಗೆ ಅನುದಾನ ಕಡಿತಗೊಳಿಸಿ ರಕ್ಷಣಾ ಕ್ಷೇತ್ರಕ್ಕೆ ಶೇ.11ರಷ್ಟು ಅನುದಾನ ಹೆಚ್ಚಿಸಿದೆ. ಹಣದುಬ್ಬರ ಶೇ.21ಕ್ಕೆ ಏರಿಕೆಯಾಗಿ ಅವಶ್ಯಕ ವಸ್ತುಗಳ ಬೆಲೆ ಗಗನಕ್ಕೇರಿದೆ. ಪಾಕಿಗಳು ಚಹಾಪ್ರಿಯರಾಗಿದ್ದು, ವರ್ಷಕ್ಕೆ 5000 ಕೋಟಿ ರೂ.ನ ಚಹಾ ಆಮದಾಗುತ್ತಿದೆ. ವಿದೇಶಿ ವಿನಿಮಯ ಉಳಿಸಲು ಯೋಜನಾ ಸಚಿವರು ಪ್ರತಿ ದಿನ ಒಂದರಿಂದ ಎರಡು ಕಪ್‌ನಷ್ಟು ಚಹಾ ತ್ಯಜಿಸಿ ದೇಶೀಯ ಲಸ್ಸಿ ಕುಡಿಯುವಂತೆ ಕರೆ ನೀಡಿದ್ದಾರೆ. ಪೆಟ್ರೋಲ್ ಬೆಲೆ ಲೀಟರ್‌ಗೆ 209 ರೂ. ನಿಂದ 233 ರೂ.ವರೆಗಿದ್ದು, ಡೀಸೆಲ್ ಬೆಲೆ ಲೀಟರ್‌ಗೆ 204 ರೂ.ನಿಂದ 263 ರೂ.ಗೆ ಏರಿದೆ. ಜನಸಾಮಾನ್ಯರಿಗೆ ಅನಿವಾರ್ಯವಾದ ಸೀಮೆಎಣ್ಣೆ ಬೆಲೆ 211 ರೂ.ಗೆ ಏರಿದೆ. ಲೀಟರ್ ಹಾಲಿನ ಬೆಲೆ 260 ರೂ.ಗೆ ಏರಿಕೆಯಾಗಿದೆ. ವಿದೇಶಿ ವಿನಿಮಯ ಕೊರತೆಯಿಂದ ಮುದ್ರಣ ಕಾಗದ ಆಮದು ನಿಲ್ಲಿಸಿರುವುದರಿಂದ ಪಠ್ಯ ಪುಸ್ತಕಗಳ ಮುದ್ರಣವಾಗದೇ ಶಾಲಾ–ಕಾಲೇಜುಗಳ ಆರಂಭವನ್ನು ಅನಿರ್ಧಿಷ್ಟಾವಧಿಗೆ ಮುಂದೂಡಲಾಗಿದೆ. ವಿದ್ಯುತ್, ಇಂಧನ ಆಮದು ಮಾಡಿಕೊಳ್ಳದಿರುವುದರಿಂದ ವಿದ್ಯುತ್ ಉತ್ಪಾದನೆ ಸ್ಥಗಿತಗೊಂಡಿದೆ. ಇದರಿಂದ ಟೆಲಿಕಾಂ ಸಂಸ್ಥೆಗಳು ಇಂಟರ್ನೆಟ್ ಸೇವೆ ಸ್ಥಗಿತಗೊಳಿಸುವ ಬೆದರಿಕೆ ಹಾಕಿದ್ದಾರೆ. ವಿದ್ಯುತ್ ಉಳಿಸಲು ಸರಕಾರಿ ಕಚೇರಿಗಳ ಕೆಲಸದ ಅವಧಿಯನ್ನು ಕಡಿಮೆಗೊಳಿಸಲಾಗಿದೆ. ಇವು ಪಾಕ್‌ನ ಆರ್ಥಿಕತೆಯ ಭೀಕರತೆಯನ್ನು ತಿಳಿಸುತ್ತವೆ.

ಪಾಕ್‌ನ ವಿದೇಶಿ ಸಾಲ–ಜಿಡಿಪಿ ಅನುಪಾತ ಶೇ.84ಕ್ಕೇರಿದೆ. ಚೀನಾ ಮೇಲೆ ಅತೀ ಹೆಚ್ಚು ಅವಲಂಭಿತವಾಗಿರುವ ಪಾಕ್, ಮಾಡಿರುವ ವಿದೇಶಿ ಸಾಲಗಳಲ್ಲಿ ಶೇ.27ರಷ್ಟು ಚೀನಾದಿಂದ ಪಡೆದಿದೆ. ಆದರೆ ಗಮನಾರ್ಹವೆಂದರೆ ಸಾಲ ಮರುಪಾವತಿಗೆ ಸಂಬಂಧಿಸಿದಂತೆ ಶ್ರೀಲಂಕಾದೊಂದಿಗೆ ಕಠಿಣವಾಗಿ ವರ್ತಿಸಿದಂತೆ ಚೀನಾವು ಪಾಕ್‌ನೊಂದಿಗೆ



> ಪ್ರಸ್ತುತ ಏಷ್ಯಾ ಖಂಡದಲ್ಲಿ ಚೀನಾದಲ್ಲಿ ಆರ್ಥಿಕ ಹಿಂಜರಿತ ಪ್ರಾರಂಭವಾಗಿದೆ. ಶ್ರೀಲಂಕಾ, ಪಾಕಿಸ್ತಾನ, ಅಫ್ಘಾನಿಸ್ಥಾನ, ನೇಪಾಳ ಹಾಗೂ ಬಾಂಗ್ಲಾ ದೇಶಗಳಲ್ಲಿ ಆರ್ಥಿಕ ಬಿಕ್ಕಟ್ಟು ತೀವ್ರ ಸ್ವರೂಪದಲ್ಲಿದೆ. ಆದರೆ ಭಾರತವು ಆರ್ಥಿಕವಾಗಿ ಸದೃಢವಾಗಿರುವುದರಿಂದ ಭಾರತೀಯರು ಸುರಕ್ಷಿತವಾಗಿದ್ದಾರೆ.

ವರ್ತಿಸಿಲ್ಲ. ಇದಕ್ಕೆ ಕಾರಣ ಎರಡೂ ದೇಶಗಳಿಗೂ ಭಾರತದೊಡನಿರುವ ಶತ್ರುತ್ವವಾಗಿದೆ. ಪಾಕಿಸ್ತಾನವು 2022 ಮಾರ್ಚ್ ಒಳಗೆ ಮರು ಪಾವತಿಸಬೇಕಿದ್ದ 4.2 ಬಿಲಿಯನ್ ಡಾಲರ್ ಮರುಪಾವತಿ ಅವಧಿಯನ್ನು ಚೀನಾ ಅನಿರ್ಧಿಷ್ಟಾವಧಿಗೆ ಮುಂದೂಡಿದೆ. ಮಾತ್ರವಲ್ಲ, ಹೆಚ್ಚುವರಿ 2.5 ಬಿಲಿಯನ್ ಡಾಲರ್ ಸಾಲವನ್ನು ಜೂನ್‌ನಲ್ಲಿ ಚೀನಾ ನೀಡಿದೆ. ಆದರೆ ಹೊಸ ಸಾಲಕ್ಕೆ ಚೀನಾವು ಕೆಲವು ಕಠಿಣ ನಿಯಮಗಳನ್ನು ಹಾಕಿದ್ದು, ಮರುಪಾವತಿ ಅವಧಿಯನ್ನು ಕಡಿಮೆಗೊಳಿಸಿದೆ. ಆದರೆ ವಾಸ್ತವವಾಗಿ ಚೀನಾ ಈ ಸಾಲಕ್ಕೆ ಕೆಲವು ಗುಪ್ತ ಷರತ್ತುಗಳನ್ನು ವಿಧಿಸಿದೆ ಎಂಬ ಸುದ್ದಿ ಪಾಕ್‌ನಲ್ಲಿ ಹರಿದಾಡುತ್ತಿದೆ. ಈ ಪ್ರಕಾರ ಹೆಚ್ಚುವರಿ ನೀಡಿರುವ ಸಾಲ ಪಾವತಿಸುವ ಬದಲು ಕಾರಾಕೋರಂ ಹೆದ್ದಾರಿ ಹಾದು ಹೋಗುವ ಪಾಕ್ ಆಕ್ರಮಿತ ಪ್ರದೇಶದ ಗಿಲ್ಗಿಟ್–ಬಾಲ್ಟಿಸ್ಥಾನ್‌ವನ್ನು (G.B.) ಚೀನಾಕ್ಕೆ ಗುತ್ತಿಗೆ ಆಧಾರದಲ್ಲಿ ನೀಡುವ ಸಾಧ್ಯತೆ ಇದೆಯೆಂದು ಕಾರಾಕೋರಂ ರಾಷ್ಟ್ರೀಯ ಚಳವಳಿ ಅಧ್ಯಕ್ಷ ಮುಮ್ತಾಜ್ ಆತಂಕ ವ್ಯಕ್ತಪಡಿಸಿದ್ದಾರೆ. ಇದು ನಿಜವಾದಲ್ಲಿ ಭಾರತದ ಸುರಕ್ಷತೆಗೆ ಅಪಾಯಕಾರಿಯಾಗಲಿದೆ. G.B. ಪ್ರದೇಶವನ್ನು ಚೀನಾಕ್ಕೆ ಗುತ್ತಿಗೆ ಆಧಾರದಲ್ಲಿ ರಾಜಕೀಯ ಒತ್ತಡಗಳಿಂದ ನೀಡಲು ಸಾಧ್ಯವಾಗದಿದ್ದಲ್ಲಿ ಪಾಕಿಸ್ತಾನವು ಚೀನಾಕ್ಕೆ ಶೇ.6ರಷ್ಟು ದುಬಾರಿ ಬಡ್ಡಿ ದರದಲ್ಲಿ ಸಾಲ ಮರುಪಾವತಿಸಬೇಕಾಗುವುದು. ಅಮೇರಿಕದ ಡಾಲರ್ ಎದುರು ಪಾಕ್ ರೂ. ಭಾರೀ ಕುಸಿತಗೊಂಡಿದ್ದು ಸದ್ಯಕ್ಕೆ ಪ್ರತಿ ಡಾಲರ್‌ಗೆ 178 ರೂ.ಗೆ ಸ್ಥಿರಗೊಂಡಿದೆ.

ಪಾಕಿಸ್ತಾನಕ್ಕೆ ಪಡೆದ ಸಾಲ ಮರು ಪಾವತಿಸಲು 21 ಬಿಲಿಯನ್ ಡಾಲರ್, ಚಾಲ್ತಿ ಖಾತೆ ಕೊರತೆ ಸರಿದೂಗಿಸಲು 12 ಬಿಲಿಯನ್ ಡಾಲರ್ ಹಾಗೂ ಬರಿದಾಗಿರುವ ವಿದೇಶಿ ವಿನಿಮಯ ಸಂಗ್ರಹ ತುಂಬಿಸಲು 8 ಮಿಲಿಯನ್ ಡಾಲರ್, ಈ ರೀತಿ ತುರ್ತಾಗಿ 41 ಬಿಲಿಯನ್ ಡಾಲರ್‌ನ ಅವಶ್ಯಕತೆ ಇದೆ. ಜಾಗತಿಕವಾಗಿ ವಿದೇಶಿ ಸಾಲ ಪಾವತಿಸಿ ಬಿಕ್ಕಟ್ಟಿನಿಂದ ದೇಶಗಳನ್ನು ರಕ್ಷಿಸಲು ಸಾಲ ನೀಡುತ್ತಿರುವ ಅಂತರರಾಷ್ಟ್ರೀಯ ಹಣಕಾಸು ನಿಧಿಯಿಂದ (IMF)ಸಾಲದ ನಿರೀಕ್ಷೆಯಲ್ಲಿ ಮಾತುಕತೆ ಪ್ರಾರಂಭಿಸಿದೆ. ಕಳೆದ ಮೂವತ್ತು ವರ್ಷಗಳಲ್ಲಿ ಪಾಕಿಸ್ತಾನಕ್ಕೆ ಪಾವತಿ ಬಿಕ್ಕಟ್ಟು ಎದುರಾದಾಗಲೆಲ್ಲ ದಾಖಲೆ 22 ಬಾರಿ ಸಾಲ ನೀಡಿ ರಕ್ಷಿಸಿದೆ. ಪ್ರಸ್ತುತ ಪಾಕ್ ಸರಕಾರವು ತುರ್ತು ಅವಶ್ಯಕತೆಗಾಗಿ 1.5 ಬಿಲಿಯನ್ ಡಾಲರ್ ಸಾಲಕ್ಕಾಗಿ IMFನೊಂದಿಗೆ ಹೆಚ್ಚುವರಿ ನಿಧಿಗಾಗಿ ಪ್ರಸ್ತಾಪ ಸಲ್ಲಿಸಿದೆ. ಒಂದು ಅಸಾಮಾನ್ಯ ವಿದ್ಯಮಾನದಲ್ಲಿ ಪಾಕ್ ಸೇನಾ ಮುಖ್ಯಸ್ಥ ಜ.ಬಾಜ್ವಾ ಅವರು IMFನಿಂದ ಸಾಲ ಪಡೆಯುವಲ್ಲಿ ಸಹಾಯ ಮಾಡಬೇಕೆಂದು ಅಮೇರಿಕದ ಉಪ ಕಾರ್ಯದರ್ಶಿಯವರಲ್ಲಿ ಕೋರಿದ್ದಾರೆ. ಪ್ರತಿ ಬಾರಿ ಐಎಂಎಫ್ ಪಾಕಿಸ್ತಾನಕ್ಕೆ ನೀಡುವಾಗ ಸಬ್ಸಿಡಿ ಕಡಿತ, ತೆರಿಗೆ ಹೆಚ್ಚಳ, ಸರಕಾರಿ ಖರ್ಚಿನಲ್ಲಿ ಕಡಿತ, ಆರ್ಥಿಕ ಶಿಸ್ತು ತರಬೇಕೆಂದು ನೀಡಿದ ಮಾರ್ಗದರ್ಶಿ ಸೂತ್ರಗಳಿಗೆ ಪಾಕ್ ಒಪ್ಪಿಗೆ ನೀಡಿದರೂ, ಅದನ್ನು ಅನುಷ್ಠಾನ ಮಾಡಿಲ್ಲ. ಆದ್ದರಿಂದ ಈ ಬಾರಿ ಐಎಂಎಫ್ ಸಾಲ ನೀಡುವಲ್ಲಿ ಕಠಿಣ ನಿಲುವನ್ನು ತೋರಿದೆ. ಈ ಬಾರಿ ಸಾಲ ನೀಡಬೇಕಾದರೆ ಮುಂದಿನ ಆದೇಶದವರೆಗೆ ಪಾಕ್ ತನ್ನ ಸರಕಾರಿ ನೌಕರರಿಗೆ ವೇತನ ಸ್ಥಗಿತಗೊಳಿಸಬೇಕೆಂದು ಷರತ್ತು ವಿಧಿಸಿದೆ. ಇದನ್ನು ತಿಳಿದ ಪಾಕ್ ಸರಕಾರಿ ನೌಕರರೂ ವೇತನ ಹೆಚ್ಚಳಕ್ಕೆ ಆಗ್ರಹಿಸಿ ಮುಷ್ಕರ ಆರಂಭಿಸಿದ್ದಾರೆ. ಇದರಿಂದಾಗಿ ಪಾಕ್ ಸರಕಾರಕ್ಕೆ ಅಡಿಕೆ ಕತ್ತರಿಯಲ್ಲಿ ಸಿಲುಕಿದಂತಹ ಪರಿಸ್ಥಿತಿ ಎದುರಾಗಿದೆ.

ಈ ರೀತಿ ಪಾಕಿಸ್ತಾನವು ಆರ್ಥಿಕ ದುಃಸ್ಥಿತಿಯಲ್ಲಿದ್ದರೂ ಅಮೇರಿಕ ಚೀನಾ, ಸೌದಿ ಅರೇಬಿಯಾ ಮೊದಲಾದ ಮಿತ್ರ ದೇಶಗಳು ಪಾಕ್ ಅನ್ನು ರಕ್ಷಿಸುವ ಸಂಭಾವ್ಯತೆ ತೋರುತ್ತಿದೆ. ಐಎಂಎಫ್ ಕೆಲವು ಷರತ್ತುಗಳೊಂದಿಗೆ ದಾಖಲೆ 23ನೇ ಬಾರಿ 7 ಬಿಲಿಯನ್ ಡಾಲರ್ ಸಾಲ ನೀಡುವುದಾಗಿ ಆಶ್ವಾಸನೆ ನೀಡಿದೆ. ಚೀನಾ ಮುಂದೆಯೂ ಸಹಾಯ ಮಾಡುವುದಾಗಿ ಆಶ್ವಾಸನೆ ನೀಡಿದೆ. ಸೌದಿ ಅರೇಬಿಯಾದಿಂದ 8 ಬಿಲಿಯನ್ ಡಾಲರ್ ಸಾಲದ ನಿರೀಕ್ಷೆಯಲ್ಲಿದೆ ಹಾಗೂ ಕಚ್ಚಾತೈಲವನ್ನು ಸಾಲದ ರೂಪದಲ್ಲಿ ಪಡೆಯುವ ಭರವಸೆಯಲ್ಲಿದೆ. ಇದಲ್ಲದೇ ಸೌದಿ ಅರೇಬಿಯಾವು ಪಾಕಿಸ್ತಾನ ಬ್ಯಾಂಕ್‌ಗಳಲ್ಲಿರುವ ತನ್ನ 3 ಬಿಲಿಯನ್ ಡಾಲರ್ ಹೂಡಿಕೆಗಳನ್ನು ಹಿಂದೆ ಪಡೆಯುವುದಿಲ್ಲವೆಂದೇ ಭರವಸೆ ನೀಡಿದೆ. ಈ ರೀತಿ ಮಿತ್ರ ರಾಷ್ಟ್ರಗಳು ನೀಡಿರುವ ಸಹಾಯ ಹಸ್ತದಿಂದ ಪಾಕಿಸ್ತಾನವು ಪ್ರಸ್ತುತ ಹಣಕಾಸು ಬಿಕ್ಕಟ್ಟಿನಿಂದ ಪಾರಾಗಬಹುದು.

ಪಾಕಿಸ್ತಾನವು ಉಳಿಯಬೇಕಾದರೆ ಅದರ ಮಾನಸಿಕತೆಯಲ್ಲಿ ಆಮೂಲಾಗ್ರ ಬದಲಾವಣೆಯಾಗಬೇಕಾಗಿದೆ. ಅದಕ್ಕಾಗಿ ಇಸ್ಲಾಮಿಕ್ ಮೂಲಭೂತ ವಾದವನ್ನು ಮತಾಂಧತೆಯನ್ನು ಕೊನೆಗಾಣಿಸಬೇಕಾಗಿದೆ. ಸರಕಾರದಲ್ಲಿ ಸೇನಾ ಹಸ್ತಕ್ಷೇಪ ತಡೆಗಟ್ಟಬೇಕಾಗಿದೆ. ಭಯೋತ್ಪಾದಕ ಗುಂಪುಗಳನ್ನು ಅದಕ್ಕೆ ಬೆಂಬಲ ನೀಡುವುದನ್ನು ಕೊನೆಗಾಣಿಸಬೇಕಾಗಿದೆ. ಭಾರತ ವಿರೋಧಿ ಭಾವನೆಗಳಿಗೆ ಮುಕ್ತಾಯ ಹಾಡಬೇಕಾಗಿದೆ. ದೇಶದಲ್ಲಿ ಅನಕ್ಷರಸ್ಥರ ಪ್ರಮಾಣ ಶೇ.58ರಷ್ಟಿದ್ದ ಕಾರಣ ಜನರಲ್ಲಿ ಮತಾಂಧತೆ ತುಂಬಿದೆ. ದೇಶದಲ್ಲಿ ಶಾಂತಿ ನೆಲೆಸಲು ಶಿಕ್ಷಣಕ್ಕೆ ಆದ್ಯತೆ ನೀಡಬೇಕಾಗಿದೆ. ಎಲ್ಲಕ್ಕಿಂತ ಪ್ರಮುಖವಾಗಿ ದೇಶದಲ್ಲಿ ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಸರಕಾರಗಳಿಗೆ ಐದು ವರ್ಷಗಳ ಅವಧಿ ಪೂರ್ಣಗೊಳಿಸಲು ಅವಕಾಶ ನೀಡಬೇಕು. ಆದರೆ ಇಸ್ಲಾಮಿಕ್ ಮತಾಂಧತೆಯಿಂದ ಕೂಡಿದ ಈ ದೇಶದಲ್ಲಿ ಸುಧಾರಣೆಯ, ಬದಲಾವಣೆಗಳ ಸಾಧ್ಯತೆ ಕ್ಷೀಣವಾಗಿದೆ. ಪ್ರಸ್ತುತ ಏಷ್ಯಾ ಖಂಡದಲ್ಲಿ ಚೀನಾದಲ್ಲಿ ಆರ್ಥಿಕ ಹಿಂಜರಿತ ಪ್ರಾರಂಭವಾಗಿದೆ. ಶ್ರೀಲಂಕಾ, ಪಾಕಿಸ್ತಾನ, ಅಫ್ಘಾನಿಸ್ಥಾನ, ನೇಪಾಳ ಹಾಗೂ ಬಾಂಗ್ಲಾದೇಶಗಳಲ್ಲಿ ಆರ್ಥಿಕ ಬಿಕ್ಕಟ್ಟು ತೀವ್ರ ಸ್ವರೂಪದಲ್ಲಿದೆ. ಆದರೆ ಭಾರತವು ಆರ್ಥಿಕವಾಗಿ ಸದೃಢವಾಗಿರುವುದರಿಂದ ಭಾರತೀಯರು ಸುರಕ್ಷಿತವಾಗಿದ್ದಾರೆ.

ಡಾ.ಶಿವರಾತ್ರಿ ರಾಜೇಂದ್ರ ಶ್ರೀಗಳ 107ನೇ ಜಯಂತಿ: ಮೃಗಾಲಯಕ್ಕೆ 1 ಲಕ್ಷ ದೇಣಿಗೆ

ಮೈಸೂರು, ಆ.26–ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 107ನೇ ಜಯಂತಿ ಮಹೋತ್ಸವದ ಶುಭ ಸಂದರ್ಭವಾದ ಆಗಸ್ಟ್ 29ರಂದು ಮೃಗಾಲಯದ ಎಲ್ಲಾ ಪ್ರಾಣಿಗಳ ಒಂದು ದಿನದ ಆಹಾರ ನಿರ್ವಹಣೆಯ ವೆಚ್ಚಕ್ಕಾಗಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಶ್ರೀ ಮಠದ ವತಿಯಿಂದ 1,00,000 ರೂ.ಗಳ ಕೊಡುಗೆಯನ್ನು ಶ್ರೀಚಾಮರಾಜೇಂದ್ರ ಮೃಗಾಲಯಕ್ಕೆ ನೀಡಿದ್ದಾರೆ. ಸತತವಾಗಿ 13ನೇ ಬಾರಿಗೆ ಈ ಕೊಡುಗೆಯನ್ನು ನೀಡಿರುವ ಮೃಗಾಲಯದ ಅಧಿಕಾರವರ್ಗ ಭಕ್ತಿಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದೆ. ಶ್ರೀ ಮಠವು ಈ ಮೃಗಾಲಯದ ಸಂರಕ್ಷಣಾ ಕಾರ್ಯದಲ್ಲಿ ನಿರಂತರ ಭಾಗಿಯಾಗುವುದರ ಜೊತೆಗೆ ಇತರ ಸಂಘ ಸಂಸ್ಥೆಗಳಿಗೆ ಮತ್ತು ಪ್ರಾಣಿ ಪ್ರಿಯರುಗಳಿಗೆ ಒಂದು ಮಾದರಿಯಂತಾಗಿ ಈ ಸಂರಕ್ಷಣಾ ಕಾರ್ಯಕ್ರಮದುಲ್ಲಿ ಭಾಗವಹಿಸಲು ಪ್ರೇರೇಪಣೆ ಮಾಡಿದಂತಾಗಿದೆ ಎಂದು ಮೃಗಾಲಂಯದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ.

ಇದು ಅತ್ಯಂತ ಭ್ರಷ್ಟ ಸರ್ಕಾರ

ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಸಿದ್ದರಾಮಯ್ಯ ಕಿಡಿ ನುಡಿ

> **ಶಾಸಕ ಬೋಪಯ್ಯ ಲಂಚ ಪಡೆದು ಸಿಕ್ಕಿಬಿದ್ದಿದ್ದ ಅಧಿಕಾರಿಯನ್ನು ಎರಡೂವರೆ ಕೋಟಿ ಲಂಚ ಪಡೆದು ಮತ್ತೆ ಮಡಿಕೇರಿಗೆ ಹಾಕಿಸಿಕೊಂಡಿದ್ದಾರೆ. ಇದನ್ನು ಗುತ್ತಿಗೆದಾರರೇ ಆರೋಪಿಸಿದ್ದಾರೆ. ಇದನ್ನು ಪ್ರಶ್ನಿಸಿದರೆ ಸಿದ್ದರಾಮಯ್ಯ ಸತ್ಯ ಹರಿಶ್ಚಂದ್ರನ ಎಂದು ಕೇಳುತ್ತಾರೆ. ನಾನು ಹರಿಶ್ಚಂದ್ರ ಎಂದು ಎಲ್ಲೂ ಹೇಳಿಕೊಂಡಿಲ್ಲ.** – ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ

ಮೈಸೂರು, ಆ.31(ಆರ್‌ಕೆಬಿ)– ಚುನಾವಣೆ ವೇಳೆ ತಾನು ಪ್ರಣಾಳಿಕೆಯಲ್ಲಿ ನೀಡಿದ ಭರವಸೆಗಳಲ್ಲಿ ಶೇ.10ನ್ನು ಈಡೇರಿಸದ ಅತ್ಯಂತ ಭ್ರಷ್ಟ ಸರ್ಕಾರ ಇದು. ಇದು ದಿವಾಳಿಯಾಗಿರುವ ಕಾರಣ ಭರವಸೆ ಈಡೇರಿಸುವುದಿರಲಿ, ನಮ್ಮ ನೇತೃತ್ವದ ಸರ್ಕಾರ ಜಾರಿಗೆ ತಂದಿದ್ದ ಅನ್ನ ಭಾಗ್ಯದಂತಹ ಬಡಜನರ ಪರ ಕಾರ್ಯಕ್ರಮಗಳನ್ನೇ ರದ್ದು ಮಾಡುವ ಚಿಂತನೆ ನಡೆಸಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಇಂದಿಲ್ಲಿ ಆಕ್ರೋಶ ವ್ಯಕ್ತಪಡಿಸಿದರು.



ಉಮೇಶ್ ಕತ್ತಿ ಬಡವರಿಗೆ ಉಚಿತ ಅಕ್ಕಿ ನಿಲ್ಲಿಸುತ್ತೇವೆ ಎಂದು ತಮ್ಮ ಮನಸ್ಸಿನಲ್ಲಿರುವುದನ್ನು ಹೇಳಿದ್ದಾರೆ. ಅವರಿಗೆ ಹಣ ಇಲ್ಲದಿರಬಹುದು. ಆದರೆ ಬಡವರ, ಹಸಿವಿನ ವಿರೋಧಿಯಾಗಿರುವುದರಿಂದ ಈ ರೀತಿ ಹೇಳುತ್ತಿದ್ದಾರೆ ಎಂದು ದೂರಿದರು.

ಇದು ಜನಾದೇಶದ ಮೂಲಕ ಬಂದ ಸರ್ಕಾರವಲ್ಲ. ಬದಲಾಗಿ ಅನೈತಿಕ ಆಪರೇಷನ್ ಕಮಲದ ಮೂಲಕ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದಿದೆ. ಹೀಗಾಗಿ ಇವರಿಗೆ ಪ್ರಜಾಪ್ರಭುತ್ವದ ಮೇಲೆ ನಂಬಿಕೆ ಇಲ್ಲ ಎಂದು ದೂರಿದರು. ರಾಜ್ಯದಲ್ಲಿ ಭ್ರಷ್ಟಾಚಾರ ಮುಗಿಲು ಮುಟ್ಟಿದೆ. ಇದನ್ನು ನಾನು ಹೇಳುತ್ತಿಲ್ಲ, ಜನ ಮಾತನಾಡುತ್ತಿದ್ದಾರೆ. ವಿಧಾನಸೌಧದ ಗೋಡೆಗಳೇ ಹೇಳುತ್ತಿವೆ, ಅಧಿಕಾರಿಗಳೂ ಹೇಳುತ್ತಿದ್ದಾರೆ. ಗುತ್ತಿಗೆದಾರರ ಸಂಘ ಎರಡನೇ ಬಾರಿ ಸಾರ್ವಜನಿಕರ ಮುಂದೆ ಬಂದಿದೆ. ಕರ್ನಾಟಕದ ಇತಿಹಾಸದಲ್ಲಿ ಪ್ರಧಾನಿ ಮೋದಿಗೆ ಪತ್ರ ಬರೆದು ಕಮಿಷನ್ ಆರೋಪ ಮಾಡಿರುವುದು ಇದೇ ಮೊದಲು. ಆದರೆ ಮೋದಿ ಏನೂ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು. ಕೆಲ ಕಾಮಗಾರಿಯಲ್ಲಿ ಕೆಲಸ ಮಾಡದೆ ಬಿಲ್ ತೆಗೆದುಕೊಳ್ಳುತ್ತಿದ್ದಾರೆ. ಸಚಿವ ಮುನಿರತ್ನ ಡಿಮ್ಯಾಂಡ್ ಮಾಡಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಕೆಂಪಣ್ಣ ನೇರವಾಗಿ ಆರೋಪ ಮಾಡಿದ್ದಾರೆ. ಇದಕ್ಕೆ ಸಿಎಂ ದಾಖಲಾತಿ ಕೊಡಿ ಎಂದು ಕೇಳುತ್ತಾರೆ. ಸಾಮಾನ್ಯವಾಗಿ ಗುತ್ತಿಗೆದಾರರು ಭಯಕ್ಕೆ ಹೊರಬರಲ್ಲ. ಆದರೆ, ಕಿರುಕುಳ ತಡೆಯಲಾಗದೆ ಹೊರಬಂದಿದ್ದಾರೆ ಎಂದರು. ನ್ಯಾಯಾಂಗ ತನಿಖೆ ಮಾಡಿಸಿದರೆ ನಮ್ಮ ಬಳಿ ಇರುವ ದಾಖಲಾತಿಗಳನ್ನು ಕೊಡುತ್ತೇವೆ. ನಾವು ಸಾಬೀತುಪಡಿಸಲು ವಿಫಲವಾದರೆ ಕೋರ್ಟ್ ನೀಡುವ ಶಿಕ್ಷೆ ಸ್ವೀಕರಿಸಲು ಸಿದ್ಧ ಎಂದು ಕೆಂಪಣ್ಣ ಹೇಳಿದ್ದಾರೆ. ಕಮಿಷನ್ ತೆಗೆದುಕೊಂಡರೆ ದಾಖಲಾತಿ ಇರುತ್ತವೆಯೇ? ನೀವು ಪ್ರಾಮಾಣಿಕರಾದರೆ ನ್ಯಾಯಾಂಗ ತನಿಖೆ ಮಾಡಿಸಿ ಎಂದು ಸವಾಲು ಹಾಕಿದರು. ಇವರು ಅಧಿಕಾರಕ್ಕೆ ಬಂದ ತಕ್ಷಣ ಒಂದು ಲಕ್ಷದವರೆಗಿನ ಸಹಕಾರ ಸಂಘ ಹಾಗೂ ಬ್ಯಾಂಕ್‌ಗಳಲ್ಲಿನ ರೈತರ ಸಾಲ ಮನ್ನಾ ಮಾಡುತ್ತೇವೆ ಎಂದವರು ಮಾಡಿದ್ದಾರೆಯೇ? ರೈತರಿಗೆ ಉತ್ಪಾದನಾ ವೆಚ್ಚದ ಒಂದೂವರೆ ಪಟ್ಟು ಕೊಡುತ್ತೇವೆ. ನೀರಾವರಿ ಯೋಜನೆಗಳಿಗೆ ಒಂದೂವರೆ ಲಕ್ಷ ಕೋಟಿ ಕೊಡುತ್ತೇವೆ ಎಂದರು. ಎಪಿಎಂಸಿ ರದ್ದು ಮಾಡುತ್ತೇವೆ ಎಂದಿದ್ದರು. ಏನು ಮಾಡಿದರು? ಇಂದಿರಾ ಕ್ಯಾಂಟೀನ್ ತೆಗೆಯುತ್ತಿದ್ದೀರಿ. ಈ ಕುರಿತು ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು.


ಸಬ್ ಇನ್ಸ್‌ಪೆಕ್ಟರ್ ನೇಮಕಾತಿಯಲ್ಲಿ ಅಕ್ರಮವೇ ನಡೆದಿಲ್ಲ ಎಂದವರು ಬಳಿಕ ಉನ್ನತಾಧಿಕಾರಿಗಳು ಅಮಾನತುಗೊಂಡರು. ಅನೇಕ ವಿವಿಗಳು, ಕೆಇಬಿಯಲ್ಲೂ ಅಕ್ರಮ ನಡೆದಿದೆ. ಭ್ರಷ್ಟಾಚಾರ ವ್ಯಾಪಕವಾಗಿದ್ದು, ಹೋಟೆಲ್ ತಿಂಡಿ ಮೆನುವಿನಂತೆ ಯಾವ ಹುದ್ದೆಗೆ ಎಷ್ಟು ಲಂಚ ಎಂದು ಫಿಕ್ಸ್ ಮಾಡಿದ್ದಾರೆ. ನನಗೆ ಐದು ವರ್ಷದಲ್ಲಿ ಒಂದು ರೂ ಲಂಚ ನೀಡಿದ್ದೇವೆ ಎಂದು ಯಾರಾದರು ಹೇಳಲಿ ಎಂದರು. ಸ್ವಾತಂತ್ರ್ಯ ನಂತರದಿಂದ 2018ರವರೆಗೆ 2.42 ಲಕ್ಷ ಕೋಟಿ ಸಾಲ ಇತ್ತು. ಈ ವರ್ಷದ ಕೊನೆಗೆ 5.40 ಲಕ್ಷ ಕೋಟಿ ಆಗುತ್ತದೆ. 29 ಸಾವಿರ ಕೋಟಿ ಬಡ್ಡಿ, 14 ಸಾವಿರ ಕೋಟಿ ಅಸಲು ಕಟ್ಟಬೇಕು. ಮೂರು ವರ್ಷದಿಂದ ಆದಾಯ ನಷ್ಟಕ್ಕೆ ತಲುಪಿದ್ದೇವೆ. ಆದಾಯಕ್ಕಿಂತ ಖರ್ಚು ಹೆಚ್ಚಾಗಿದೆ. ನಾನು ಸಿಎಂ ಆಗಿದ್ದಾಗ ಒಂದು ವರ್ಷವೂ ಹೀಗಾಗಿರಲಿಲ್ಲ ಎಂದು ವಿವರಿಸಿದರು.

ಪ್ರತಾಪ್‌ಸಿಂಹ ಯಕಶ್ಚಿತ್ ರಾಜಕಾರಣಿ

ಇದೇ ವೇಳೆ, ಪ್ರತಾಪಸಿಂಹ ಆರೋಪ ಕುರಿತು ಪ್ರತಿಕ್ರಿಯಿಸಿ, ಪ್ರತಾಪಸಿಂಹ ಯಕಶ್ಚಿತ್ ರಾಜಕಾರಣಿ. ಆತನ ಬಗ್ಗೆ ಮಾತನಾಡುವುದಿಲ್ಲ. ಅತನಿಗೆ ಸತ್ಯ ಹೇಳಿ ಗೊತ್ತೇ ಇಲ್ಲ. ಮೈಸೂರಿಗೆ ಆತ ನೀಡಿರುವ ಕೊಡುಗೆಗಳ ಕುರಿತು ನಮ್ಮ ಪಕ್ಷದ ವಕ್ತಾರರು ಚರ್ಚೆಗೆ ಕರೆದರೆ ಬರದೆ ಪಲಾಯನ ಮಾಡುತ್ತಾರೆ. ಮೊದಲು ಲಕ್ಷ್ಮಣ್ ಅವರೊಂದಿಗೆ ಚರ್ಚಿಸಲಿ, ನಂತರ ನನ್ನೊಂದಿಗೆ ಚರ್ಚೆಗೆ ಬರಲಿ ಎಂದು ಪ್ರತಾಪ್‌ಸಿಂಹ ವಿರುದ್ಧ ಕಿಡಿ ಕಾರಿದರು. ನಿಷೇಧಾಜ್ಞೆ ತೆರವುಗೊಳಿಸಿದ ಬಳಿಕ ಮಡಿಕೇರಿಗೆ ಹೋಗುತ್ತೇನೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಮೈಸೂರು ಮೃಗಾಲಯದಲ್ಲಿ ಸಿಂಹದ ಮರಿಗಳ ಜನನ

- ನಿರ್ಭಯ, ರಾಜು ಜೋಡಿಗೆ ಮೂರು ಮರಿ
- ತಾಯಿ, ಮರಿಗಳ ಆರೋಗ್ಯ ಸ್ಥಿರ; ತೀವ್ರ ನಿಗಾ



ಮೈಸೂರು, ಆ.26(ಎಂಟಿವೈ)– ಮೈಸೂರಿನ ಮೃಗಾಲಯದಲ್ಲಿ 7 ವರ್ಷದ ನಂತರ ಸಿಂಹವೊಂದು ಮರಿಗಳಿಗೆ ಜನ್ಮ ನೀಡಿದ್ದು, ಮೃಗಾಲಯದಲ್ಲಿ ಸಂಭ್ರಮದ ವಾತಾವರಣ ನೆಲೆಸಿದೆ.

ಎರಡು ತಿಂಗಳ ಹಿಂದಷ್ಟೇ ಬಿಳಿ ಹುಲಿ ಮೂರು ಮರಿಗಳಿಗೆ ಜನ್ಮ ನೀಡಿತ್ತು. ದೇಶದ ಬೇರೆ ಬೇರೆ ಮೃಗಾಲಯಗಳಿಂದ ಹುಲಿಗಾಗಿ ಬೇಡಿಕೆ ಬಂದಿರುವುದರಿಂದ ಅವುಗಳ ಸಂತಾನ ಪ್ರಕ್ರಿಯೆಗೆ ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ ಸಿಂಹಗಳ ಸಂತತಿ ವೃದ್ಧಿಗೂ ಕ್ರಮ ಕೈಗೊಳ್ಳಲಾಗಿದ್ದು, ಅದರ ಫಲವಾಗಿ ಸಿಂಹಿಣಿಯೊಂದು ಮೂರು ಮರಿಗಳಿಗೆ ಜನ್ಮವಿತ್ತಿದೆ.

ಪ್ರಾಣಿ ವಿನಿಮಯ ಯೋಜನೆಯಡಿ ರಾಯಪುರದ ಮೃಗಾಲಯದಿಂದ ಎರಡು ವರ್ಷದ ಹಿಂದಷ್ಟೇ ತಂದಿದ್ದ ನಿರ್ಭಯ(ನಾಲ್ಕೂವರೆ ವರ್ಷ) ಸಿಂಹಿಣಿ ಹಾಗೂ ರಾಜಾಸ್ಥಾನದ ಝುನಾಘಡ್ ಮೃಗಾಲಯದಿಂದ ತಂದಿದ್ದ 5 ವರ್ಷದ ರಾಜು ಜೋಡಿಗೆ ವಾರದ ಹಿಂದಷ್ಟೇ ಮೂರು ಮರಿ ಜನಿಸಿವೆ. ತಾಯಿ ಹಾಗೂ ಮರಿಗಳು ಆರೋಗ್ಯದಿಂದಿವೆ. ಕೊಠಡಿಯಲ್ಲಿ ಸಿಸಿ ಕ್ಯಾಮರಾ ಅಳವಡಿಸಿ ಸಿಂಹಿಣಿ ಹಾಗೂ ಅದರ ಮರಿಗಳ ಚಲನ–ವಲನಗಳ ಮೇಲೆ ನಿಗಾ ಇಡಲಾಗಿದೆ.

> **ಮೈಸೂರು ಮೃಗಾಲಯದಲ್ಲಿ 7 ವರ್ಷದಿಂದ ಸಿಂಹಿಣಿಗಳು ಮರಿಗಳಿಗೆ ಜನ್ಮ ನೀಡಿರಲಿಲ್ಲ. ಈಗ ನಿರ್ಭಯ ಹಾಗೂ ರಾಜು ಜೋಡಿಗೆ ಮೂರು ಮರಿ ಜನಿಸಿವೆ. ಸದ್ಯಕ್ಕೆ ಮರಿಗಳ ಬಳಿ ಯಾರು ಹೋಗಿಲ್ಲ. ತಾಯಿ ಸಿಂಹಿಣಿ ಸಹಜವಾಗಿ ಘಾಸಿಗೊಂಡಿದೆ. ಸಿಸಿ ಕ್ಯಾಮರಾ ಮೂಲಕ ಚಲನ–ವಲನಗಳನ್ನು ಗಮನಿಸಲಾಗುತ್ತಿದೆ.**
> – ಅಜಿತ್ ಎಂ.ಕುಲಕರ್ಣಿ, ಕಾರ್ಯನಿರ್ವಾಹಕ ನಿರ್ದೇಶಕ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ವಿವಾಹ ಮಹೋತ್ಸವ...




ಮೈಸೂರಿನ ಶ್ರೀ ಮಹಾಲಕ್ಷ್ಮಿ ಸ್ವೀಟ್ಸ್ ಮಾಲೀಕರಾದ ಶಿವಕುಮಾರ್ ಅವರ ಪುತ್ರ ನಿತೀನ್ ಶಿವಕುಮಾರ್ ಹಾಗೂ ನಿಸರ್ಗ ಚಂದ್ರಶೇಖರ್ ಆರತಕ್ಷತೆ ಗುರುವಾರ ಮೈಸೂರಿನ ಸ್ಪೆಕ್ಟ್ರಾ ಕನ್ವೆನ್ಷನ್ ಹಾಲ್‌ನಲ್ಲಿ ನೆರವೇರಿತು. ಈ ವೇಳೆ ಮಾಜಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ, ಹೆಚ್.ಡಿ.ಕುಮಾರಸ್ವಾಮಿ ಅವರು ನೂತನ ವಧುವರರಿಗೆ ಶುಭ ಕೋರಿ, ಆಶೀರ್ವದಿಸಿದರು. ಚಿತ್ರದಲ್ಲಿ (ಎಡದಿಂದ) ಜಿಪಂ ಮಾಜಿ ಅಧ್ಯಕ್ಷ ಕೆ.ಮರೀಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಸ್ವೀಟ್ ಮಹೇಶ್, ಶಿವಕುಮಾರ್ ಮಾಜಿ ಸಚಿವ ಎಚ್.ಸಿ.ಮಹದೇವಪ್ಪ, ಶಾಸಕರಾದ ಅಶ್ವಿನ್‌ಕುಮಾರ್, ಸಾ.ರಾ.ಮಹೇಶ್ ಇತರರನ್ನು ಕಾಣಬಹುದು

ಬಡತನ, ಹಸಿವಿನ ಅನುಭವ ನನಗಿದೆ: ಸಿ.ಎನ್. ಮಂಜೇಗೌಡ



ಮೈಸೂರು.ಆ.26– ಬಡತನ, ಹಸಿವು, ಅವಮಾನ, ಬಹಿಷ್ಕಾರಗಳನ್ನು ಸಹಿಸಿಕೊಂಡು, ಶ್ರಮವಹಿಸಿ ಕೆಲಸ ಮಾಡಿ ಇಂದು ವಿಧಾನಪರಿಷತ್ ಸದಸ್ಯನಾಗಿದ್ದೇನೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ತಿಳಿಸಿದರು.

ಮೈಸೂರು ತಾಲ್ಲೂಕು, ಜಯಪುರ ಬಳಿ ಇರುವ ಸಿ.ಎನ್.ಎಂ. ಪಬ್ಲಿಕ್ ಶಾಲೆಯಲ್ಲಿ ನಡೆದ ಸಮಾರಂಭದಲ್ಲಿ ಶಾಲೆಯ ಆಡಳಿತ ಮಂಡಳಿಯವರಿಂದ ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ಅವರು, ನಾನು ಒಬ್ಬ ಮಾಜಿ ಸೈನಿಕನಾಗಿದ್ದು 11ವರ್ಷಗಳ ಕಾಲ ಈ ದೇಶದ ಸೇವೆ ಮಾಡಿದ್ದೇನೆ. ನಾನು ವಿದ್ಯಾವಂತನಾಗಿದ್ದರಿಂದ ಸೇನೆಗೆ ಸೇರಲು ಸಾಧ್ಯವಾಯಿತು. ನಾವು ಓದುವಾಗ ಬಟ್ಟೆ ಊಟಕ್ಕೆ ಕಷ್ಟವಿತ್ತು. ನಾನು ಸಾರ್ವಜನಿಕ ಹಾಸ್ಟೆಲ್‌ನಲ್ಲಿ ಓದಿದವನು. ಈಗ ನಿಮಗೆ ನಿಮ್ಮ ತಂದೆ–ತಾಯಿ ಎಲ್ಲಾ ಸೌಲಭ್ಯಗಳನ್ನು ಒದಗಿಸಿಕೊಟ್ಟಿದ್ದಾರೆ. ನೀವು ಚೆನ್ನಾಗಿ ಓದಿ, ಶಾಲೆಗೆ ತಂದೆ–ತಾಯಿಗೆ ಕೀರ್ತಿ ತರಬೇಕು ಹಾಗೂ ನೀವು ಸರ್ಕಾರದ ಉನ್ನತ ಹುದ್ದೆಗಳಿಗೆ ಆಯ್ಕೆಯಾಗಿ, ಜನರ ಸೇವೆ ಸಲ್ಲಿಸಿ, ಆರ್ಥಿಕವಾಗಿ ಸಬಲರಾಗಬೇಕು ಎಂದರು.

ಸಮಾರಂಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಭರತ್ ಮಂಜೇಗೌಡ, ಪ್ರಾಂಶುಪಾಲರಾದ ನಾಗೇಶ್, ಖಜಾಂಚಿ ಭಾರ್ಗವಿ ಎಂ.ಗೌಡ, ಮುಖ್ಯ ಶಿಕ್ಷಕಿ ಸತ್ಯಶೀಲಾ, ನಿರ್ದೇಶಕರಾದ ಭವ್ಯರಾಘವೇಂದ್ರ ನಂದರಾಜು, ರಾಘವೇಂದ್ರ ಮಹಾದೇವಸ್ವಾಮಿ ಇನ್ನಿತರರಿದ್ದರು.

ಗುಲ್ಬರ್ಗಾ ಮೈಸ್ಟಿಕ್ಸ್‌ಗೆ 'ಮಹಾರಾಜ ಟ್ರೋಫಿ'

ಬೆಂಗಳೂರು ಬ್ಲಾಸ್ಟರ್ಸ್ ವಿರುದ್ಧ 11 ರನ್ ರೋಚಕ ಜಯ



ಬೆಂಗಳೂರು ಆ.26– ಸಂಘಟಿತ ಹೋರಾಟದ ಫಲವಾಗಿ ಗುಲ್ಬರ್ಗಾ ಮೈಸ್ಟಿಕ್ಸ್, ಬೆಂಗಳೂರು ಬ್ಲಾಸ್ಟರ್ಸ್ ವಿರುದ್ಧ 11 ರನ್‌ಗಳ ಅಮೋಘ ಜಯ ಸಾಧಿಸುವ ಮೂಲಕ 'ಮಹಾರಾಜ ಟ್ರೋಫಿ' ಮುಡಿಗೇರಿಸಿಕೊಂಡಿದೆ.

ಇಲ್ಲಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ 'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ20 ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಜಿದ್ದಾಜಿದ್ದಿನ ಹೋರಾಟ ನಡೆಸಿದ ಉಭಯ ತಂಡದ ಆಟಗಾರರು ಬೌಂಡರಿ ಸಿಕ್ಸರ್‌ಗಳ ಸುರಿಮಳೆಗೈದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡುವ ಅವಕಾಶ ಪಡೆದ ಗುಲ್ಬರ್ಗಾ ಮೈಸ್ಟಿಕ್ಸ್ ಬ್ಯಾಟ್ಸ್‌ಮನ್‌ಗಳು ಆರಂಭದಿಂದಲೇ ಬಿರುಸಿನ ಹೊಡೆತಕ್ಕೆ ಮುಂದಾದರು. ಆರಂಭಿಕ ಆಟಗಾರರಾದ ಜೆಶ್ವತ್ ಆಚಾರ್ಯ 17 ಎಸೆತಗಳಲ್ಲಿ 39 ರನ್(3 ಬೌಂಡರಿ, 3 ಸಿಕ್ಸ್), ರೋಹನ್ ಪಾಟೀಲ್ 21 ಎಸೆತಗಳಲ್ಲಿ 38 ರನ್(6 ಬೌಂಡರಿ, 1 ಸಿಕ್ಸ್), ದೇವದತ್ ಪಡಿಕ್ಕಲ್ 42 ಎಸೆತಗಳಲ್ಲಿ ಅಜೇಯ 56 ರನ್(5 ಬೌಂಡರಿ, 1 ಸಿಕ್ಸ್), ಕೃಷ್ಣನ್ ಶ್ರೀಜಿತ್ 25 ಎಸೆತಗಳಲ್ಲಿ 38 ರನ್(2 ಬೌಂಡರಿ, 2 ಸಿಕ್ಸ್), ನಾಯಕ ಮನಿಶ್ ಪಾಂಡೆ ಕೇವಲ 17 ಎಸೆತಗಳಲ್ಲಿ ಅಜೇಯ 41 ರನ್(2 ಬೌಂಡರಿ, 4 ಸಿಕ್ಸ್) ಸಿಡಿಸಿದರು. ಅಂತಿಮವಾಗಿ ನಿಗದಿತ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 220 ರನ್‌ಗಳ ಬೃಹತ್ ಮೊತ್ತ ಕಲೆಹಾಕಿತು. ಟಿ.ಪ್ರದೀಪ್, ಅನಿರುದ್ಧ್ ಜೋಶಿ ಹಾಗೂ ರಿಷಿ ಬೋಪಣ್ಣ ತಲಾ ಒಂದೊಂದು ವಿಕೆಟ್ ಪಡೆದರು.

ಎಲ್.ಆರ್.ಚೇತನ್ ದಿಟ್ಟ ಹೋರಾಟ: 221 ರನ್‌ಗಳ ಬೃಹತ್ ಮೊತ್ತ ಬೆನ್ನತ್ತಿದ ಬಲಿಷ್ಠ ಬೆಂಗಳೂರು ಬ್ಲಾಸ್ಟರ್ಸ್‌ಗೆ ಆರಂಭದಲ್ಲೇ ಆಘಾತ ಕಾದಿತ್ತು. ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಶತಕ ಸಿಡಿಸಿದ್ದ ನಾಯಕ ಮಯಾಂಕ್ ಅಗರ್ವಾಲ್ 16 ರನ್‌ಗಳಿಸಿ ವಿಕೆಟ್ ಒಪ್ಪಿಸಿ ನಿರಾಶೆ ಮೂಡಿಸಿದರೆ, ಕುಶ ಮರಾಠೆ 1 ರನ್, ಶಿವಕುಮಾರ್ ರಕ್ಷಿತ್ 0, ಅನಿರುದ್ಧ್ ಜೋಶಿ 7, ಜಗದೀಶ್ ಸುಚೀತ್ 5 ಗಳಿಸಿ ಪೆವಿಲಿಯನ್ ಸೇರಿಕೊಂಡರು. ಬಳಿಕ ಕ್ರಾಂತಿ ಕುಮಾರ್ ಜೊತೆಗೂಡಿದ ಎಲ್.ಆರ್. ಚೇತನ್ ದಿಟ್ಟ ಹೋರಾಟ ನಡೆಸಿದರು.

ಎಲ್.ಆರ್.ಚೇತನ್ ಕೇವಲ 40 ಎಸೆತಗಳಲ್ಲಿ 6 ಬೌಂಡರಿ, 8 ಸಿಕ್ಸರ್ ಸಹಿತ 91 ರನ್ ಗಳಿಸಿದ್ದ ವೇಳೆ ಮನೋಜ್ ಬಾಂಡಗೆ ಬೌಲಿಂಗ್‌ನಲ್ಲಿ ಕ್ಲೀನ್ ಬೌಲ್ಡ್ ಆದರು. ಮತ್ತೊಂದೆಡೆ ಅಬ್ಬರದ ಬ್ಯಾಟಿಂಗ್ ಪ್ರದರ್ಶನ ನೀಡಿದ ಕ್ರಾಂತಿ ಕುಮಾರ್ 21 ಎಸೆತಗಳಲ್ಲಿ 2 ಬೌಂಡರಿ, 2 ಸಿಕ್ಸರ್ ಸಹಿತ 47ರನ್ ಸಿಡಿಸಿ, ಕೊನೆಗೆ ಕ್ಯಾಚ್ ನೀಡಿದರು. ಕಡೆಯಲ್ಲಿ ರೋನಿತ್ ಮೋರೆ (ಅಜೇಯ 22) ಗೆಲುವಿಗಾಗಿ ನಡೆಸಿದ ಹೋರಾಟ ವ್ಯರ್ಥವಾಯಿತು. ಅಂತಿಮವಾಗಿ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 209 ರನ್‌ಗಳಿಸಲಷ್ಟೇ ಸಾಧ್ಯವಾಯಿತು. ಬ್ಯಾಟಿಂಗ್ ನಂತೆಯೇ ಬೌಲಿಂಗ್‌ನಲ್ಲಿ ಕಡೆಯ ಹಂತದವರೆಗೂ ಸಂಘಟಿತ ಹೋರಾಟ ನಡೆಸಿದ ಗುಲ್ಬರ್ಗಾ ಮೈಸ್ಟಿಕ್ ಪರ ಮನೋಜ್ ಬಾಂಡಗೆ 3, ರಿತೇಶ್ ಭಟ್ಕಳ್ ಹಾಗೂ ಪ್ರಾವ್ ಭಾಟಿಯಾ ತಲಾ 2 ವಿಕೆಟ್ ಪಡೆದು ಮಿಂಚಿದರು. ಮನಿಶ್ ಪಾಂಡೆ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರೆ, ರೋಹನ್ ಪಾಟೀಲ್ ಸರಣಿ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆಯಲ್ಲಿ ಉಚಿತ ವಾರಾಂತ್ಯ ಹೃದ್ರೋಗ ತಪಾಸಣಾ ಶಿಬಿರ

ಬಿಪಿಎಲ್, ಎಪಿಎಲ್, ಇಎಸ್‌ಐ ಫಲಾನುಭವಿಗಳಿಗೆ ಅತ್ಯಂತ ಅನುಕೂಲಕಾರಿ



ಮೈಸೂರು, ಆ.26(ಎಂಕೆ)– ಮೈಸೂರಿನ ಪ್ರತಿಷ್ಠಿತ ಅಪೋಲೋ ಬಿಜಿಎಸ್ ಆಸ್ಪತ್ರೆಯಲ್ಲಿ 'ಅಪೋಲೋ ಹಾರ್ಟ್ ಕೇರ್ ಫಾರ್ ಆಲ್' ಪರಿಕಲ್ಪನೆಯಡಿ ಉಚಿತ ವಾರಾಂತ್ಯ ಹೃದಯರೋಗ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.

ಶಿಬಿರವನ್ನು ಉದ್ಘಾಟಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್ ಮಾತನಾಡಿ, ಭಾರತೀಯರಲ್ಲಿರುವ ಮಧುಮೇಹ ಹಾಗೂ ರಕ್ತದೊತ್ತಡ ಹೃದಯದ ಸಮಸ್ಯೆಗೆ ಮುಖ್ಯ ಕಾರಣವಾಗಿದೆ. ಅದರಲ್ಲೂ ಯುವ ಜನತೆ ಹೃದಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಹೃದಯ ಸಂಬಂಧಿ ಸಮಸ್ಯೆಗಳಿಂದ ದೂರಾಗಬೇಕಾದರೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ಪಡೆಯುವುದು ಅವಶ್ಯವಾಗಿದೆ ಎಂದರು.

ಪ್ರಭಾರ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿ, ಬಿಪಿಎಲ್, ಎಪಿಎಲ್ ಹಾಗೂ ಇಎಸ್‌ಐ ಫಲಾನುಭವಿಗಳು ಸೇರಿದಂತೆ ಎಲ್ಲಾ ವರ್ಗದ ಜನರು ಉಚಿತ ತಪಾಸಣಾ ಶಿಬಿರದ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರತೀ ಶನಿವಾರ: ಉಚಿತ ಹೃದಯರೋಗ ತಪಾಸಣಾ ಶಿಬಿರವೂ ಪ್ರತೀ ಶನಿವಾರ ಮಧ್ಯಾಹ್ನ 12 ರಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದ್ದು, ಬಿಪಿಎಲ್, ಎಪಿಎಲ್ ಹಾಗೂ ಇಎಸ್‌ಐ ಫಲಾನುಭವಿಗಳು ಬಿಪಿ, ಜಿಆರ್‌ಬಿ, ಇಸಿಜಿ ಹಾಗೂ ಎಕೋ ಸ್ಕ್ರೀನಿಂಗ್ ಸೌಲಭ್ಯಗಳನ್ನು ಕೇವಲ 49 ರೂ.ಗಳಿಗೆ ಪಡೆದುಕೊಳ್ಳಬಹುದಾಗಿದೆ.

ಅಪೋಲೋ ಬಿಜಿಎಸ್ ಆಸ್ಪತ್ರೆಯ ಮುಖ್ಯ ಹೃದ್ರೋಗ ತಜ್ಞ ಡಾ.ಅರುಣ್ ಶ್ರೀನಿವಾಸ್, ಅಪೋಲೋ ಬಿಜಿಎಸ್ ಆಸ್ಪತ್ರೆಗಳ ಉಪಾಧ್ಯಕ್ಷ ಎನ್.ಜಿ.ಭರತೀಶ ರೆಡ್ಡಿ, ಹೃದಯ ತಜ್ಞರಾದ ಡಾ.ಗುರುಪ್ರಸಾದ್, ಡಾ.ಪ್ರಕಾಶ್ ರಾವ್ ಮತ್ತಿತರರು ಈ ವೇಳೆ ಉಪಸ್ಥಿತರಿದ್ದರು.

ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮೈಸೂರು, ಆ.26– ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 2022–23ನೇ ಸಾಲಿಗೆ ಅನುಷ್ಠಾನಗೊಳಿಸುವ ಯೋಜನೆಗಳಲ್ಲಿ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 30.08.2022 ರವರೆಗೆ ವಿಸ್ತರಿಸಲಾಗಿದೆ.

ಒಕ್ಕಲಿಗರ ಸ್ವಯಂ ಉದ್ಯೋಗ ಯೋಜನೆ, ಗಂಗಾ ಕಲ್ಯಾಣ ಯೋಜನೆ, ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ ಸರಕು ಸಾಗಾಣಿಕೆ, ವಾಹನ ಕೊಳ್ಳಲು ಸಹಾಯಧನ ಯೋಜನೆ ಅರ್ಜಿ ಆಹ್ವಾನಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ನಿಗಮದ ವೆಬ್‌ಸೈಟ್ https://kvcdc.karnataka.gov.inನ್ನು ವೀಕ್ಷಿಸಬಹುದಾಗಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ 611 ಕ್ಕೂ ಹೆಚ್ಚು ಕಲಾವಿದರು ಅರ್ಜಿ ಸಲ್ಲಿಕೆ



ಮೈಸೂರು, ಆ.26(ಜಿಎ)– ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ದೇಶದಾದ್ಯಂತ 611ಕ್ಕೂ ಹೆಚ್ಚು ಕಲಾವಿದರು ಅರ್ಜಿ ಸಲ್ಲಿಸಿದ್ದಾರೆ. ದಸರಾ ಮಹೋತ್ಸವದಲ್ಲಿ ನಗರದ ವಿವಿಧ ವೇದಿಕೆಗಳಲ್ಲಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಲು ಕಲಾವಿದರು ಅರ್ಜಿ ಸಲ್ಲಿಸಿದ್ದು, ಅರ್ಜಿಗಳ ಪರಿಶೀಲನೆ ಕಾರ್ಯ ಆರಂಭವಾಗಿದೆ.

ಕರ್ನಾಟಕ, ದೆಹಲಿ, ರಾಜಸ್ಥಾನ್, ಒಡಿಸಾ, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಸೇರಿದಂತೆ ದೇಶದ ಇತರೆ ರಾಜ್ಯಗಳಿಂದಲೂ ಕಲಾವಿದರು ನೃತ್ಯ, ಸಂಗೀತ, ನಾಟಕ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಅವಕಾಶ ಕೋರಿ ಅರ್ಜಿ ಸಲ್ಲಿಸಿದ್ದಾರೆ. ದಸರಾ ನವರಾತ್ರಿಯಲ್ಲಿ ಅರಮನೆ ಮುಂಭಾಗ, ಕಲಾಮಂದಿರ, ಜಗನ್ಮೋಹನ ಅರಮನೆ, ಗಾನಭಾರತಿ, ನಾದಬ್ರಹ್ಮ ಸಂಗೀತ ಸಭಾ, ಪುರಭವನ, ಕಿರುರಂಗ ಮಂದಿರ ಹಾಗೂ ಚಿಕ್ಕಗಡಿಯಾರದ ಮುಂಭಾಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವೇದಿಕೆ ನಿರ್ಮಿಸಿ ಕಲಾವಿದರಿಗೆ ಅವಕಾಶ ಕಲ್ಪಿಸಲಿದೆ.

ಪೌರಾಣಿಕ, ಸಾಮಾಜಿಕ, ಐತಿಹಾಸಿಕ ಹೀಗೆ ವಿವಿಧ ವಿಭಾಗದಿಂದ 96 ಅರ್ಜಿಗಳನ್ನು ನಾಟಕದ ಕಲಾವಿದರು ಸಲ್ಲಿಸಿದ್ದಾರೆ. ಸುಗಮ ಸಂಗೀತ, ಹಿಂದೂಸ್ತಾನಿ, ಕರ್ನಾಟಿಕ್, ಜನಪದ ಸೇರಿದಂತೆ ಸಂಗೀತ ವಿಭಾಗದಿಂದ 409 ಕಲಾವಿದರು ಅರ್ಜಿ ಸಲ್ಲಿಸಿದ್ದಾರೆ. ಭರತ ನಾಟ್ಯ, ಕುಚುಪುಡಿ, ಕಥಕ್, ಓಡಿಸಿ ಸೇರಿದಂತೆ 93 ಇತರ ವಿಭಾಗದ ಕಲಾವಿದರು ಅರ್ಜಿ ಸಲ್ಲಿಸಿದ್ದಾರೆ. ಕಾರ್ಯಕ್ರಮಗಳನ್ನು ನಿರೂಪಣೆ ಮಾಡಲು 6 ಮಂದಿ ಅರ್ಜಿ ಸಲ್ಲಿಸಿದ್ದರೆ, ಕವಿಗೋಷ್ಠಿ, ವಾದ್ಯಗಳ ಮೂಲಕ ಸಂಗೀತ ನುಡಿಸುವವರ ಅರ್ಜಿಗಳು ಬಂದಿದ್ದು, ಅವುಗಳ ಪರಿಶೀಲನೆ ನಡೆಯುತ್ತಿದೆ.

ಜಂಬೂಸವಾರಿ ದಿನದಂದು ಗಜಪಡೆಯ ಜೊತೆ ವಿವಿಧ ಕಲಾತಂಡಗಳು ಅರಮನೆಯಿಂದ ಬನ್ನಿಮಂಟಪದವರೆಗೂ ಮೆರವಣಿಗೆಯಲ್ಲಿ ಸಾಗಲಿವೆ. ಕಂಸಾಳೆ, ವೀರಗಾಸೆ, ಮರಗೋಲು, ಡೊಳ್ಳು ಕುಣಿತ ಇನ್ನಿತರ ಕಲಾ ಪ್ರಕಾರಗಳ ಅರ್ಜಿಗಳನ್ನು ಆಹ್ವಾನಿಸಿದ್ದು, ಸಾಂಸ್ಕೃತಿಕ ಹಾಗೂ ಜಾನಪದ ಕಲಾತಂಡಗಳು ಸೆ.10 ರೊಳಗೆ ಅರ್ಜಿ ಸಲ್ಲಿಸಲು ಅವಕಾಶವಿದೆ.



ಮೈಸೂರು ನಗರದ 8 ಸ್ಥಳಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಅರಮನೆ ಮುಂಭಾಗ ನಿರ್ಮಿಸುವ ವೇದಿಕೆಯು ಮುಖ್ಯ ವೇದಿಕೆಯಾಗಿದೆ. ಅಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿರುವ ಕಲಾವಿದರಿಗೆ ಅವಕಾಶ ಕಲ್ಪಿಸಲಾಗುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಈ ಬಾರಿ ಅರ್ಜಿ ಸಲ್ಲಿಸಿರುವವರಲ್ಲಿ 260 ರಿಂದ 300 ಕಲಾವಿದರಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಅವಕಾಶ ನೀಡುವ ಕುರಿತು ಚಿಂತನೆ ನಡೆಸಲಾಗಿದೆ. ರಾಜ್ಯ ಸರ್ಕಾರ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ನೀಡುವ ಅನುದಾನಕ್ಕೆ ಅನುಗುಣವಾಗಿ ಕಾರ್ಯಕ್ರಮವನ್ನು ರೂಪಿಸಲಾಗುತ್ತದೆ. 2019ರ ದಸರಾ ಮಹೋತ್ಸವದ ಸಂದರ್ಭದಲ್ಲಿ ಅರಮನೆ ಮುಂಭಾಗ ಆರಂಭವಾಗಿದ್ದ 'ಸೂರ್ಯೋದಯದಿಂದ ಸೂರ್ಯಾಸ್ತಮದ ವರೆಗೂ' ಒಂದು ದಿನದ ಕಾರ್ಯಕ್ರಮವನ್ನು ಈ ಬಾರಿಯೂ ಮುಂದುವರೆಸುವ ಆಲೋಚನೆಗಳಿವೆ ಎಂದರು.

ವಿಶ್ವ ದಾಖಲೆ ಬರೆಯಲು ಕೊಡವ ಕ್ಲ್ಯಾನ್ ಸಿದ್ದತೆ


ಇದೇ ಡಿಸೆಂಬರ್ 24ಕ್ಕೆ ವಿರಾಜಪೇಟೆಯಲ್ಲಿ ಕುಟುಂಬಗಳ ಭಾರೀ ಸಮ್ಮಿಲನ

ಮಡಿಕೇರಿ,ಆ.26– 'ಕೊಡವ ಕ್ಲ್ಯಾನ್' ಎಂಬ ಸಂಸ್ಥೆ ಪರಸ್ಪರ ಸೌಹಾರ್ಧ ಸಂಬಂಧ ಹೊಂದಿರುವ ಕೊಡವ ಕುಟುಂಬಗಳ 10 ಸಾವಿರಕ್ಕೂ ಹೆಚ್ಚಿನ ಸದಸ್ಯರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಕಾರ್ಯಕ್ರಮ ರೂಪಿಸಿದೆ. ವಿರಾಜಪೇಟೆಯಲ್ಲಿ 2022ರ ಡಿಸೆಂಬರ್ 24ರಂದು ಈ ಕಾರ್ಯಕ್ರಮ ನಡೆಯಲಿದ್ದು, ಇದನ್ನು ವಿಶ್ವ ದಾಖಲೆಯನ್ನಾಗಿಸುವ ಪ್ರಯತ್ನ ಮಾಡಲಾಗುತ್ತಿದೆ. ಕೊಡವ ಕ್ಲ್ಯಾನ್ ಸಂಸ್ಥೆಯ ಸ್ಥಾಪಕ ಗುಮ್ಮಟ್ಟಿರ ಕಿಶು ಉತ್ತಪ್ಪ ಈ ಪ್ರಯತ್ನಕ್ಕೆ ಕೈ ಹಾಕಿದ್ದು, ಸಿದ್ದತೆಗಳನ್ನು ನಡೆಸಲಾಗುತ್ತಿದೆ.

ದಾಖಲೆ ನಿರ್ಮಿಸಿರುವ ಫ್ರಾನ್ಸ್: ವಿಶ್ವದಲ್ಲೇ ಇಂತಹ ಒಂದು ವಿನೂತನ ಪ್ರಯತ್ನವನ್ನು ಈ ಹಿಂದೆ ಫ್ರಾನ್ಸ್ ದೇಶ ಮಾಡಿದೆ. ಆ ದೇಶದಲ್ಲಿ ಒಂದು ಕುಟುಂಬದ 4514 ಸದಸ್ಯರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ ದಾಖಲೆ ಮಾಡಿತ್ತು. ಈ ಹಿನ್ನೆಲೆಯಲ್ಲಿ ಆ ಕಾರ್ಯಕ್ರಮವನ್ನು ವಿಶ್ವ ದಾಖಲೆ ಎಂದು ಪರಿಗಣಿಸಲಾಗಿದ್ದು, "ಗಿನ್ನಿಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್"ನಲ್ಲಿ ಈ ಕಾರ್ಯಕ್ರಮ ಸ್ಥಾನ ಗಿಟ್ಟಿಸಿಕೊಂಡಿದೆ. ಈ ದಾಖಲೆಯನ್ನು ಹಿಮ್ಮೆಟ್ಟಿಸಲು ಇದೀಗ ಕೊಡವ ಕ್ಲ್ಯಾನ್ ಸಂಸ್ಥೆ ಮುಂದಾಗಿದೆ.

ಆನ್‌ಲೈನ್ ಮ್ಯೂಸಿಯಂ: ಕೊಡವ ಕ್ಲ್ಯಾನ್ ಸಂಸ್ಥೆಯ ಗುಮ್ಮಟ್ಟಿರ ಕಿಶು ಉತ್ತಪ್ಪ ಅವರು www.kodavaclan.com ಸಾಮಾಜಿಕ ಜಾಲತಾಣವನ್ನು ಅಭಿವೃದ್ಧಿಪಡಿಸಿದ್ದು ಅದರಲ್ಲಿ ಆನ್‌ಲೈನ್ ವಂಶವೃಕ್ಷವನ್ನು ದಾಖಲಿಸುವ ಸಾಧನೆ ಮಾಡಿದ್ದಾರೆ. 15–16ನೇ ಶತಮಾನದ ಹಿಂದಿನ ಕೊಡವ ತಲೆಮಾರುಗಳ ಸಂಪೂರ್ಣ ವಿವರಗಳಿದ್ದು, ಎಲ್ಲವನ್ನೂ ವೀಕ್ಷಿಸಬಹುದಾಗಿದೆ. ಈ ವಿವರಗಳನ್ನು ದಾಖಲೀಕರಣ ಮಾಡುವ ಸಲುವಾಗಿ 750 ಕೊಡವ (MPAI) ಕುಟುಂಬಗಳ ಅಧ್ಯಯನ ನಡೆಸಿದ್ದಾರೆ. ಈ ಎಲ್ಲಾ ಮಾಹಿತಿಗಳನ್ನು ಜಾಲತಾಣದ ಹೆರಿಟೇಜ್ ವಿಭಾಗದಲ್ಲಿ ನಮೂದಿಸಲಾಗಿದೆ. ಇದರಲ್ಲಿ 10 ವಿಭಾಗಗಳಿದ್ದು, 2500 ಲೇಖನಗಳಿವೆ. ಕೊಡವ ಸಾಧಕರು, ಐನ್‌ಮನೆ, ಕೊಡವ ಸಂಪ್ರದಾಯ, ಮನೆಗಳು, ಕೊಡವ ಪ್ರಖ್ಯಾತ ವ್ಯಕ್ತಿಗಳು, ಉದ್ಯಮಿಗಳು, ಸಾಧಕರು, ಹಬ್ಬಗಳು ಮತ್ತು ಇಲ್ಲಿನ ಸಸ್ಯ ಸಂಪತ್ತು, ಕೊಡವ ಚರಿತ್ರೆ, ಕೊಡವ ಭಾಷೆ, ಆಹಾರ ಪದ್ಧತಿ, ಕ್ರೀಡೆ ಸೇರಿದಂತೆ ಸಂಪೂರ್ಣ ಮಾಹಿತಿ ಒದಗಿಸಲಾಗಿದೆ. ಈ ಸಂಪೂರ್ಣ ಮಾಹಿತಿಯನ್ನು ಕಲೆ ಹಾಕಿ ಇದನ್ನು ಮ್ಯೂಸಿಯಂ ಮಾದರಿಯಾಗಿ ಪರಿವರ್ತಿಸಲು ಗುಮ್ಮಟ್ಟಿರ ಕಿಶು ಉತ್ತಪ್ಪ ಅವರ 'ಕೊಡವ ಕ್ಲ್ಯಾನ್' ಸಂಸ್ಥೆ 5 ವರ್ಷಗಳಿಂದ ಶ್ರಮವಹಿಸಿದೆ.

ಕೊಡವ ಸಮುದಾಯ ಸಣ್ಣ ಜನಾಂಗವಾಗಿದ್ದರೂ, ವಿಶ್ವದಲ್ಲೇ ತನ್ನದೇ ಆದ ಸ್ಥಾನ ಅಲಂಕರಿಸಿದೆ. ಸೈನ್ಯ, ಸರಕಾರ, ನ್ಯಾಯಾಂಗ, ಕ್ರೀಡೆ, ಮೆಡಿಕಲ್ ಕ್ಷೇತ್ರ ಸೇರಿದಂತೆ ಎಲ್ಲಾ ವಲಯಗಳಲ್ಲೂ ವಿಶ್ವದಾದ್ಯಂತ ಕೊಡವ ಸಮುದಾಯದ ವ್ಯಕ್ತಿಗಳು ಸಾಧನೆಗಳನ್ನು ಮಾಡಿದ್ದಾರೆ. ಕೊಡವ ಕ್ಲ್ಯಾನ್ ಸಂಸ್ಥೆ ಕೊಡವ ಸಮುದಾಯದಲ್ಲಿ ಪರಸ್ಪರ ಬಾಂಧವ್ಯ ಬೆಸೆದಿರುವ 10 ಸಾವಿರಕ್ಕೂ ಅಧಿಕ ಕುಟುಂಬ ಸದಸ್ಯರನ್ನು ಒಂದೇ ವೇದಿಕೆ ಅಡಿಯಲ್ಲಿ ಸೇರಿಸುವ ಮೂಲಕ ಹೊಸ ವಿಶ್ವ ದಾಖಲೆ ಬರೆಯಲು ಸಜ್ಜಾಗಿದೆ.



ಈ ಹಿಂದೆ ಕೊಡವ ವಂಶ ವೃಕ್ಷವನ್ನು ರಚಿಸಲಾಗಿದ್ದು, ಅದು 'ಇಂಡಿಯನ್ ಬುಕ್ ಆಫ್ ರೆಕಾರ್ಡ್ಸ್'ನಲ್ಲಿ ಸ್ಥಾನ ಪಡೆದಿದೆ. ಇದರ ಮುಂದುವರೆದ ಭಾಗವಾಗಿ ಕೊಡವ ಕುಟುಂಬಗಳ ಒಳಗೆ ಬಾಂಧವ್ಯ ಹೊಂದಿರುವ ಎಲ್ಲಾ ಸದಸ್ಯರನ್ನು ಒಂದು ವೇದಿಕೆಯಲ್ಲಿ ಸೇರಿಸುವ ಕಾರ್ಯಕ್ಕೆ ಕೈ ಹಾಕಲಾಗಿದೆ. ಕೊಡವ ಕುಟುಂಬದಲ್ಲಿ ಪರಸ್ಪರ ಸಂಬಂಧ ಹೊಂದಿರುವ 18 ಸಾವಿರ ಮಂದಿ ಸದಸ್ಯರು ವಿಶ್ವದಾದ್ಯಂತ ಇರುವುದು ಕಂಡು ಬಂದಿದೆ. ಹೀಗಾಗಿ ವಿರಾಜಪೇಟೆಯಲ್ಲಿ ಡಿಸೆಂಬರ್ 24ರಂದು ಎಲ್ಲರನ್ನು ಒಂದುಗೂಡಿಸುವ 'ಕುಟುಂಬ ಸದಸ್ಯರುಗಳ ಸಮ್ಮಿಲನ' ಮಾದರಿಯಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ಗಿನ್ನಿಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್, ಏಷ್ಯನ್ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆಗಳು ಆಗಮಿಸಲಿವೆ.

–ಗುಮ್ಮಟ್ಟಿರ ಕಿಶು ಉತ್ತಪ್ಪ, ಕೊಡವ ಕ್ಲ್ಯಾನ್ ಸಂಸ್ಥೆ ಸ್ಥಾಪಕ

ಜಿಲ್ಲಾಡಳಿತ ಭವನದ ತಡೆಗೋಡೆ ಕಾಮಗಾರಿ ಕಳಪೆ

ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಆಗ್ರಹಿಸಿ ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿಗೆ ಪತ್ರ ಬರೆದ ಶಾಸಕ ಅಪ್ಪಚ್ಚು ರಂಜನ್



ಮಡಿಕೇರಿ,ಆ.26– ಜಿಲ್ಲಾಡಳಿತ ಭವನದ ತಡೆಗೋಡೆ ಕಾಮಗಾರಿ ಕಳಪೆಯಾಗಿದ್ದು, ಸೂಕ್ತ ತನಿಖೆ ನಡೆಸಿ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮಡಿಕೇರಿ ಕ್ಷೇತ್ರ ಶಾಸಕ ಅಪ್ಪಚ್ಚು ರಂಜನ್ ಆಗ್ರಹಿಸಿದ್ದಾರೆ.

ತಡೆಗೋಡೆ ಕಾಮಗಾರಿಯ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಈ ಕುರಿತು ಲೋಕೋಪಯೋಗಿ ಇಲಾಖೆಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

ಸಲಹೆ ಪರಿಗಣಿಸಿಲ್ಲ: ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ 7 ಕೋಟಿ ರೂ. ವೆಚ್ಚದಲ್ಲಿ ತಡೆಗೋಡೆ ನಿರ್ಮಿಸಲಾಗಿದೆ. ಕಾಮಗಾರಿ ಹಂತದಲ್ಲಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಕೊಡಗು ಜಿಲ್ಲೆಗೆ ಈ ಕಾಮಗಾರಿ ಹೊಂದಿಕೊಳ್ಳುವುದಿಲ್ಲ. ಹೀಗಾಗಿ ತಡೆಗೋಡೆಯ ತಳಭಾಗದಲ್ಲಿ ದೊಡ್ಡ ಪ್ರಮಾಣದಲ್ಲಿ ಅಡಿಪಾಯ ನಿರ್ಮಿಸಿ ಮೇಲ್ಭಾಗದವರೆಗೆ ಕಾಂಕ್ರೀಟ್ ಗೋಡೆ ನಿರ್ಮಿಸುವಂತೆ ಸಲಹೆ ನೀಡಿದ್ದೆ. ಆ ಸಂದರ್ಭದಲ್ಲಿ ಸದರಿ ಕಾಮಗಾರಿಯನ್ನು ದೆಹಲಿಯಿಂದ ಬಂದ ಇಂಜಿನಿಯರ್ ಅವರ ನಿರ್ದೇಶನದಂತೆ ತಡೆಗೋಡೆ ನಿರ್ಮಿಸುತ್ತಿರುವುದಾಗಿ ಇಲ್ಲಿನ ಇಂಜಿನಿಯರ್ ಮತ್ತು ಗುತ್ತಿಗೆದಾರು ತಿಳಿಸಿದ್ದಲ್ಲದೇ ತಮ್ಮ ಸಲಹೆಯನ್ನು ಪರಿಗಣಿಸಿಲ್ಲ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಗುಣಮಟ್ಟವಿಲ್ಲ: ನಿರ್ಮಿಸಿದ ತಡೆಗೋಡೆ ಇತ್ತೀಚೆಗೆ ಸುರಿದ ಮಳೆಯಿಂದ ಬೀಳುವ ಹಂತಕ್ಕೆ ತಲುಪಿದೆ. ಈ ಸಂಬಂಧ ಸಾರ್ವಜನಿಕರ ಹಾಗೂ ಸಾರ್ವಜನಿಕರ ಆಸ್ತಿಪಾಸ್ತಿಗೆ ತೊಂದರೆಯಾಗದಂತೆ ರಾಷ್ಟ್ರೀಯ ಹೆದ್ದಾರಿಯನ್ನೇ ಬಂದ್ ಮಾಡುವ ಪರಿಸ್ಥಿತಿ ಉಂಟಾಗಿದೆ. ಈ ತಡೆಗೋಡೆಗೆ 7 ಕೋಟಿ ರೂ. ಖರ್ಚು ಮಾಡಿದ್ದರೂ ಸಹ ಕಾಮಗಾರಿ ಗುಣಮಟ್ಟದಿಂದ ಕೂಡಿಲ್ಲ ಎಂಬುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಯಾವುದೇ ಕಾಮಗಾರಿ ನಿರ್ಮಿಸುವ ಮೊದಲು ಅಲ್ಲಿನ ಹವಾಗುಣಕ್ಕೆ ಹೊಂದಿಕೊಂಡುತೆ ನಡೆಸಬೇಕು. ವೈಜ್ಞಾನಿಕವೆಂದು ಇಲ್ಲಿನ ಹವಾಗುಣಕ್ಕೆ ಹೊಂದಿಕೊಂಡಂತೆ ಕಾಮಗಾರಿ ಮಾಡದೇ ಇದ್ದಲ್ಲಿ ಯಾವುದೇ ಕಾಮಗಾರಿಯನ್ನು ಗುಣಮಟ್ಟದಿಂದ ನಿರ್ಮಿಸಲು ಸಾಧ್ಯವಾಗುವುದಿಲ್ಲ ಎಂದು ಶಾಸಕ ರಂಜನ್ ಅಸಮಾಧಾನ ಹೊರಗೆಡವಿದ್ದಾರೆ.

ಕಪ್ಪುಪಟ್ಟಿಗೆ ಸೇರಿಸಿ: ತಾವುಗಳು ಈ ಬಗ್ಗೆ ಖುದ್ದು ಪರಿಶೀಲಿಸಿ ಸಂಬಂಧಿಸಿದ ಕಾಮಗಾರಿಯನ್ನು ಕೈಗೊಂಡ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಬೇಕು. ಅಲ್ಲದೇ, ಸಂಬಂಧಿಸಿದ ಇಂಜಿನಿಯರ್ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಲೋಕೋಪಯೋಗಿ ಇಲಾಖೆಯ ಕಾರ್ಯದರ್ಶಿಗೆ ಶಾಸಕ ಅಪ್ಪಚ್ಚು ರಂಜನ್ ಪತ್ರದ ಮೂಲಕ ಆಗ್ರಹಿಸಿದ್ದಾರೆ.



ಕಾವೇರಿಯಲ್ಲಿ ಉದ್ಯಮಿ ಮೃತದೇಹ ಪತ್ತೆ



ಕುಶಾಲನಗರ, ಆ.26– ತಾಲೂಕಿನ ಕಣಿವೆ ತೂಗು ಸೇತುವೆ ಬಳಿ ಕಾವೇರಿ ನದಿಯಲ್ಲಿ ಗುರುವಾರ ಉದ್ಯಮಿ ಮೃತ ದೇಹ ಪತ್ತೆಯಾಗಿದೆ. ಇತ್ತೀಚೆಗೆ ಕಾಣೆಯಾದ ಕುಶಾಲನಗರದ ಬಸವೇಶ್ವರ ಬಡಾವಣೆ ನಿವಾಸಿ ಮಾರುಕಟ್ಟೆ ರಸ್ತೆಯಲ್ಲಿರುವ ಮೂಕಾಂಬಿಕ ಆಟೋ ಮೊಬೈಲ್ಸ್ ಮಾಲೀಕ ಹೇಮಪ್ರಸಾದ್(40) ಎಂಬವರ ಮೃತ ದೇಹ ಎಂದು ತಿಳಿದು ಬಂದಿದೆ. ಹಣಕಾಸಿನ ವ್ಯವಹಾರದಿಂದ ಬೇಸತ್ತಿದ್ದ ಹೇಮಪ್ರಸಾದ್ ಆ.21 ರಂದು ಮನೆಯಿಂದ ತೆರಳಿದವರು ನಾಪತ್ತೆಯಾಗಿದ್ದರು. ಇದೀಗ ಅವರ ಮೃತದೇಹ ಪತ್ತೆಯಾಗಿದ್ದು ಕೈಕಾಲುಗಳು, ಬಾಯಿಯನ್ನು ಪ್ಲಾಸ್ಟರ್‌ನಿಂದ ಬಿಗಿದಿರುವ ಸ್ಥಿತಿಯಲ್ಲಿ ದೊರೆತಿದೆ. ಮೃತನ ಪತ್ನಿ ಕುಶಾಲನಗರ ಗ್ರಾಮಾಂತರ ಠಾಣೆಯಲ್ಲಿ ಸಂಶಯಾಸ್ಪದ ಸಾವು ಎಂದು ಪ್ರಕರಣ ದಾಖಲಿಸಿದ್ದು ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಮೃತನ ಹುಟ್ಟೂರು ಭಾಗಮಂಡಲದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಮೇಲುಕೋಟೆ ಕಲ್ಯಾಣಿಗಳ ಜೀರ್ಣೋದ್ಧಾರ

ಶಾಸಕ ಸಿ.ಎಸ್.ಪುಟ್ಟರಾಜು ಘೋಷಣೆ

ಮೇಲುಕೋಟೆ, ಆ.26– ಮೇಲುಕೋಟೆಯ ಎಲ್ಲಾ ಪುರಾತನ ಕಲ್ಯಾಣಿಗಳನ್ನು ಆಕರ್ಷಣೀಯವಾಗಿ ವಿಶೇಷ ರೀತಿಯಲ್ಲಿ ಜೀರ್ಣೋದ್ಧಾರ ಮಾಡುವ ಜೊತೆಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಶಾಸಕ ಸಿ.ಎಸ್.ಪುಟ್ಟರಾಜು ತಿಳಿಸಿದರು.

ಮೇಲುಕೋಟೆಯ ಗ್ರಾಮ ಪಂಚಾಯಿತಿ ಕಛೇರಿಯ ಆವರಣದಲ್ಲಿ ಸಂಜೀವಿನಿ ಭವನದ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಸಚಿವನಾಗಿದ್ದ ವೇಳೆ ಮೇಲುಕೋಟೆಯ ಕಲ್ಯಾಣಿಗಳ ಜೀರ್ಣೋದ್ಧಾರ ಕಾಮಗಾರಿಗಳ ಮಾಸ್ಟರ್ ಪ್ಲಾನ್ ಸಿದ್ಧಮಾಡಿ 32 ಕೋಟಿ ರೂ ಮೀಸಲಿರಿಸಿದ್ದೆ. ಇದೀಗ ಮೊದಲ ಕಂತಾಗಿ 16 ಕೋಟಿ ರೂ. ಬಿಡುಗಡೆಯಾಗಿ ಟೆಂಡರ್ ಪ್ರಕ್ರಿಯೆ ಸಹ ಮುಕ್ತಾಯವಾಗಿದೆ. ಶೀಘ್ರವೇ ಕೆಲಸ ಆರಂಭಿಸಲಾಗುತ್ತದೆ ಮೇಲುಕೋಟೆಯ ಸಮಗ್ರ ಅಭಿವೃದ್ಧಿಗೆ ಅಂತಿಮ ಹಂತದ ರೂಪುರೇಷೆ ಸಿದ್ದಪಡಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲೇ ಸಭೆ ನಡೆಯಲಿದೆ ಎಂದರು.



ಕಳೆದ ಬಾರಿ ವೈರಮುಡಿಗೆ ಬಂದ ಸಂದರ್ಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೀಡಿದ ಭರವಸೆ ಶೀಘ್ರವೇ ಸಾಕಾರವಾಗಲಿದೆ. ಮೇಲುಕೋಟೆಯ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ ತಯಾರಿಸಿದ್ದು, ಶೀಘ್ರವೇ ಅನುಮೋದನೆ ಪಡೆಯಲಾಗುತ್ತದೆ. ಮುಂದಿನ ತಿಂಗಳು ಮಲೆಮಹದೇಶ್ವರಬೆಟ್ಟದಲ್ಲಿ ಮುಖ್ಯಮಂತ್ರಿಗಳ ಸಭೆ ನಿಗದಿಯಾಗಲಿದ್ದು, ಇದೇ ವೇಳೆ ಸಭೆನಡೆಸಿ ಮೇಲುಕೋಟೆಯ ಅಭಿವೃದ್ಧಿ ಕಾರ್ಯಗಳಿಗೂ ಅನುಮೋದನೆ ನೀಡುತ್ತೇನೆ ಎಂದು ಮುಖ್ಯಮಂತ್ರಿಗಳು ವಾಗ್ದಾನ ಮಾಡಿದ್ದಾರೆ. ಹೀಗಾಗಿ ಗ್ರಾಪಂ ಜನಪ್ರತಿನಿಧಿಗಳು ಮತ್ತು ಮೇಲುಕೋಟೆಯ ನಾಗರಿಕರು ಅಭಿವೃದ್ಧಿ ಕಾರ್ಯದಲ್ಲಿ ಒಗ್ಗಟ್ಟಾಗಿ ಕೈಜೋಡಿಸಬೇಕು ಎಂದರು. ಮಹಿಳೆಯರಿಗೆ ಆರ್ಥಿಕ ಸದೃಢತೆ ತಂದು ಕೊಡುವ ಸಲುವಾಗಿ ಹಲವು ಕಾರ್ಯಕ್ರಮಗಳು ಅನುಷ್ಠಾನದಲ್ಲಿದ್ದು, ಸ್ವಸಹಾಯಸಂಘದ ಮಹಿಳೆಯರು ಒಂಡೆದೆ ಕುಳಿತು ತಮ್ಮ ಸಮಸ್ಯೆಗಳನ್ನು ಮತ್ತು ತಾವು ಮಾಡಿದ ಸಾಧನೆ ಹಾಗೂ ಕೆಲಸಗಳನ್ನು ಪರಸ್ಪರ ಹಂಚಿಕೊಳ್ಳುವ ಮೂಲಕ ಅಭಿವೃದ್ಧಿ ಹೊಂದಲು 24 ಲಕ್ಷ ರೂ. ವೆಚ್ಚದಲ್ಲಿ ಗ್ರಾಪಂ ಸಂಜೀವಿನಿ ಭವನ ನಿರ್ಮಾಣ ಮಾಡಲಾಗುತ್ತಿದೆ. ಮಹಿಳಾ ಸ್ವಸಹಾಯ ಸಂಘ ಇದರ ಸದುಪಯೋಗ ಪಡೆದುಕೊಳ್ಳಬೇಕು. ಒಕ್ಕಲಿಗರ ಬೀದಿಯಲ್ಲಿ ರಾಮಮಂದಿರ ಮತ್ತು ಗಣಪತಿ ದೇಗುಲದ ನಿರ್ಮಾಣಕ್ಕೆ ಸಂಪೂರ್ಣ ಸಹಕಾರ ನೀಡಿದ್ದು ಮುಂಬರುವ ಅಕ್ಟೋಬರ್‌ನಲ್ಲಿ ಲೋಕಾರ್ಪಣೆಮಾಡಲಾಗುತ್ತಿದೆ ಎಂದರು.

ಈ ವೇಳೆ ಗ್ರಾಪಂ ಅಧ್ಯಕ್ಷ ಸೋಮಶೇಖರ್, ಉಪಾಧ್ಯಕ್ಷ ತಿರುಮಲೆ, ಸದಸ್ಯರಾದ ಜಯರಾಮೇಗೌಡ ಜಿ.ಕೆಕುಮಾರ್, ಮಣಿಮುರುಗನ್, ಪಿಡಿಓ ರಾಜೇಶ್ವರ್, ಸ್ಥಾನಾಚಾರ್ಯ ತಿರುನಾರಾಯಣ ಅಯ್ಯಂಗಾರ್, ಸಂಜೀವಿನಿ ಒಕ್ಕೂಟದ ಸದಸ್ಯರು ಸಿಬ್ಬಂದಿ ಭಾಗವಹಿಸಿದ್ದರು.

ಬೆಳಗೊಳ ಗ್ರಾಪಂಗೆ ಉಪಾಧ್ಯಕ್ಷರ ಆಯ್ಕೆ

ಶ್ರೀರಂಗಪಟ್ಟಣ, ಆ.26– ತಾಲೂಕಿನ ಬೆಳಗೊಳ ಗ್ರಾಪಂ ಉಪಾಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಬಿ.ರವಿಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನಿಕಟಪೂರ್ವ ಉಪಾಧ್ಯಕ್ಷ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಪುಟ್ಟರಾಜು ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಇಂದು ಚುನಾವಣೆ ನಡೆಯಿತು.

26 ಸದಸ್ಯ ಬಲದ ಪಂಚಾಯಿತಿಯಲ್ಲಿ ಹೊಂದಾಣಿಕೆಯಿಂದ ಅಧಿಕಾರ ನಿರ್ವಹಿಸುವ ಸದಸ್ಯರು ಇಂದು ರವಿ ಕುಮಾರ್ ಅವಿರೋಧ ಆಯ್ಕೆಗೆ ಒಮ್ಮತ ಸೂಚಿಸಿದರು.

ತಾಲೂಕು ಪಂಚಾಯ್ತಿಯ ಪ್ರಭಾರ ಕಾರ್ಯನಿರ್ವಾಹಕಾಧಿಕಾರಿ ಡಾ.ಶಿವಲಿಂಗಯ್ಯ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು. ಈ ಸಂದರ್ಭದಲ್ಲಿ ಪಿಡಿಓ ತಿಲಕ್,



ಪಂಚಾಯಿತಿ ಮಾಜಿ ಅಧ್ಯಕ್ಷ ಸುರೇಶ್ ಇತರರು ಉಪಸ್ಥಿತರಿದ್ದರು.

ನೂತನ ಉಪಾಧ್ಯಕ್ಷರನ್ನು ಗ್ರಾಮಸ್ಥರು ಹಾಗೂ ಜೆಡಿಎಸ್ ಬೆಂಬಲಿತ ಸದಸ್ಯರು ಅಭಿನಂದಿಸಿದರು. ಸದರಿ ಪಂಚಾಯತಿಯ ಅಧ್ಯಕ್ಷರು ರಾಜಿನಾಮೆ ನೀಡಿರುವ ಹಿನ್ನೆಲೆಯಲ್ಲಿ ಮುಂದಿನ ಕೆರೆವರೆಗೆ ಬಿ.ರವಿ ಕುಮಾರ್ ಅವರು ಪ್ರಾರ ಅಧ್ಯಕರಾಗಿ ಕಾರ್ಯ ನಿರ್ವಹಿಸಲಿದ್ದಾರೆ.

40 ಪರ್ಸೆಂಟ್ ಕಮಿಷನ್ ಆರೋಪಕ್ಕೆ ಪ್ರತಿಯಾಗಿ

ಅರ್ಕಾವತಿ ಮತ್ತೆ ಪ್ರಸ್ತಾಪಿಸಿದರೆ ಭಯವಿಲ್ಲ

ಮಾಜಿ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ

ಪಾಂಡವಪುರ, ಆ.26– 40 ಪರ್ಸೆಂಟ್ ಕಮಿಷನ್ ಆರೋಪದ ಪ್ರಕರಣವನ್ನು ಸರ್ಕಾರ ನ್ಯಾಯಾಂಗ ತನಿಖೆ ಒಪ್ಪಿಸಿದರೆ ಸಾಕ್ಷಿ ನೀಡಲಾಗುವುದು ಎಂದು ತಿಳಿಸಿದ ಮಾಜಿ ಸಿಎಂ ಸಿದ್ದರಾಮಯ್ಯ ನವರು ತಮ್ಮ ವಿರುದ್ಧ ಅರ್ಕಾವತಿ ಡಿ ನೋಟಿ ಫಿಕೇಷನ್ ಪ್ರಕರಣ ಹೊರ ತೆಗೆದರೆ ಅದಕ್ಕೆಲ್ಲ ತಲೆ ಕೆಡಿಸಿಕೊಳ್ಳುವುದಿಲ್ಲ, ಹೆದರುವುದೂ ಇಲ್ಲ ಎಂದರು.

ದಾವಣಗೆರೆ ಸಿದ್ದರಾಮೋತ್ಸವದ ವೇಳೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೃತಪಟ್ಟ ತಾಲೂಕಿನ ಅರಳಕುಪ್ಪೆ ಗ್ರಾಮದ ಸ್ವಾಮೀಗೌಡರ ನಿವಾಸಕ್ಕೆ ಭೇಟಿ ನೀಡಿ ಸಾಂತ್ವನ ಹೇಳಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಬಳಿ ಯಾವುದೇ ಸಾಕ್ಷಿ, ದಾಖಲೆಗಳು ಇಲ್ಲ. ಅವರು ಸುಳ್ಳು ಹೇಳುತ್ತಿದ್ದಾರೆ ಎಂದರು.

ಗುತ್ತಿಗೆದಾರರು ಸರಕಾರದ ಅಧೀನದಲ್ಲಿ ಕೆಲಸ ಮಾಡಬೇಕಾಗಿರುವುದರಿಂದ ಅವರಿಗೆ ಭಯವಿದೆ. ಸರಕಾರ ನ್ಯಾಯಾಂಗ ತನಿಖೆ ನಡೆಸಿದರೆ ದಾಖಲೆಗಳನ್ನು ನೀಡುವುದಾಗಿ ಹೇಳಿದ್ದಾರೆ. ಕೆಂಪಣ್ಣರಿಗೆ ಕಾನೂನೇ ರಕ್ಷಣೆ ನೀಡಲಿದೆ. ಸರಕಾರ ನ್ಯಾಯಾಂಗ ತನಿಖೆ ಮಾಡಲಿ, ಸಾಕ್ಷಿಗಳನ್ನು ನೀಡಲಾಗುವುದು ಎಂದರಲ್ಲದೆ ಸಚಿವ ಮುನಿರತ್ನ ಮಾನನಷ್ಟ ಪ್ರಕರಣ ದಾಖಲಿಸುವುದಾಗಿ ಹೇಳಿದ್ದಾರೆ. ಹಾಕಲಿ ಕೊನೆಗೆ ಅದು ಮುನಿರತ್ನ ಬುಡಕ್ಕೆ ಬರಲಿದೆ ಎಂದರು.

ಅರ್ಕಾವತಿ ಡಿನೋಟಿಫಿಕೇಷನ್ ಹಗರಣ ಹೊರತೆಗೆಯಲಾಗುವುದು ಎಂದು ಸಿಎಂ ಹೇಳಿಕೆ ನೀಡಿದ್ದಾರೆ. ಬಿಜೆಪಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಮೂರು ವರ್ಷವಾಗಿದೆ. ಇಲ್ಲಿಯ ತನಕ ಏನು ಮಾಡುತ್ತಿದ್ದರು. ಅರ್ಕಾವತಿ ಡಿನೋಟಿಫಿಕೇಷನ್ ಹಗರಣ ಹೊರ ತೆಗೆದರೆ ನನಗೆ ಭಯವಿಲ್ಲ. ಸಿದ್ದರಾಮಯ್ಯನ ಕಂಡರೆ ಅವರಿಗೆ ಭಯವಿದೆ. ಇಂತಹ ಗೊಡ್ಡು ಬೆದರಿಕೆಗೆ ನಾನು ಹೆದರಲ್ಲ ಎಂದರು.



ದಾವಣಗೆರೆಯಲ್ಲಿ ನಡೆದ ಸಮಾವೇಶಕ್ಕೆ ಬಂದಂತಹ ಸಂದರ್ಭದಲ್ಲಿ ಅರಳಕುಪ್ಪೆ ಗ್ರಾಮದ ಸ್ವಾಮೀಗೌಡ ಎಂಬುವರು ಬಸ್‌ನಲ್ಲಿ ಬಂದಿದ್ದರು. ಆದರೆ, ವಾಪಸ್ಸು ಬಸ್‌ನಲ್ಲಿ ಬರದೇ ಅಲ್ಲೇ ತಪ್ಪಿಸಿಕೊಂಡರು. ಬಳಿಕ ಹಿಟ್‌ಅಂಡ್ ರನ್‌ನಲ್ಲಿ ಸಾವನ್ನಪ್ಪಿದ್ದರು. ಸಮಾವೇಶದ ಬಳಿಕ ವಿಷಯ ತಿಳಿಯಿತು. ಇದೀಗ ಬಂದು ಕುಟುಂಬಕ್ಕೆ ಸ್ವಾಂತನ ಹೇಳಿದ್ದೇನೆ. ಮೃತ ಸ್ವಾಮೀಗೌಡರೇ ಕುಟುಂಬಕ್ಕೆ ಆಧಾರವಾಗಿದ್ದರು. ಹಾಗಾಗಿ ಕುಟುಂಬಕ್ಕೆ 2 ಲಕ್ಷ ಆರ್ಥಿಕ ನೆರವು ನೀಡಿದ್ದೇನೆ, ಮುಂದಿನ ದಿನಗಳಲ್ಲಿ ಸ್ವಾಮೀಗೌಡರ ಮಗನಿಗೆ ಒಳ್ಳೆಯ ಭವಿಷ್ಯ ರೂಪಿಸಲಾಗುವುದು ಎಂದರು.

ಗ್ರಾಮಕ್ಕೆ ಆಗಮಿಸಿದ ಸಿದ್ದರಾಮಯ್ಯನವರನ್ನು ಮಹಿಳೆಯರು ಆರತಿ ಬೆಳಗಿ ಸ್ವಾಗತಿಸಿದರು. ಕೆಲವರು ಕಾಲು ತೊಳೆಯಲು ಮುಂದಾದಾಗ ಅದಕ್ಕೆ ಒಪ್ಪದೆ ಮುನ್ನಡೆದರು. ಈ ವೇಳೆ ಅಭಿಮಾನಿಗಳು ಮುಂದಿನ ಸಿಎಂ ಸಿದ್ದರಾಮಯ್ಯ... ಕರ್ನಾಟಕದ ಹುಲಿ ಸಿದ್ದರಾಮಯ್ಯ... ಎಂದು ಘೋಷಣೆ ಮೊಳಗಿಸಿದರು. ನಂತರ ಗಿಡದಾಸನಕೊಪ್ಪಲು ಗ್ರಾಮದ ದೊಡ್ಡದೇವೇಗೌಡರ ಮನೆಗೆ ತೆರಳಿ ಸಾಂತ್ವನ ಹೇಳಿ ಆರ್ಥಿಕ ನೆರವು ನೀಡಿದರು.

ಸಿದ್ದರಾಮಯ್ಯ ಭೇಟಿ ಮಾಡಿದ ದರ್ಶನ್ ಪುಟ್ಟಣ್ಣಯ್ಯ: ಹಾರೋಹಳ್ಳಿಯ ಹುಚ್ಚೇಗೌಡರ ಮನೆಗೆ ಮಾಜಿ ಸಿಎಂ ಸಿದ್ದರಾಮಯ್ಯ ಬಂದ ಸಂದರ್ಭದಲ್ಲಿ ರೈತ ಸಂಘದ ಮುಖಂಡ ದರ್ಶನ್ ಪುಟ್ಟಣ್ಣಯ್ಯ ಅವರು ಭೇಟಿ ಮಾಡಿದರು. ದರ್ಶನ್ ಪುಟ್ಟಣ್ಣಯ್ಯ ಈ ವೇಳೆ ಸಿದ್ದರಾಮಯ್ಯನವರ ಕಾಲು ಮುಟ್ಟಿ ನಮಸ್ಕರಿಸಿದರು. ದರ್ಶನ್ ಪುಟ್ಟಣ್ಣಯ್ಯ ಅವರನ್ನು ಕಂಡ ಸಿದ್ದರಾಮಯ್ಯ ಏನಪ್ಪ ದರ್ಶನ್ ಎಲ್ಲಿದ್ದಿಯಪ್ಪ, ಇಲ್ಲೇ ಇದ್ದೀಯ ಹೇಗೆ ಎಂದು ಪ್ರಶ್ನಿಸಿದರು. ಅದಕ್ಕೆ ದರ್ಶನ್ ಪುಟ್ಟಣ್ಣಯ್ಯ ಇಲ್ಲೆ ಇದ್ದೇನೆ ಸರ್ ಎಂದರು.

ಸಂದರ್ಭದಲ್ಲಿ ಮಾಜಿ ಶಾಸಕರಾದ ನರೇಂದ್ರಸ್ವಾಮಿ, ರಮೇಶ್‌ಬಾಬು ಬಂಡಿಸಿದ್ದೇಗೌಡ, ಬಿ.ಎಸ್.ಶಿವಣ್ಣ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಜಿಪಂ ಮಾಜಿ ಸದಸ್ಯ ಎಚ್.ತ್ಯಾಗರಾಜು, ಎಚ್.ಕೃಷ್ಣೇಗೌಡ, ಕುರುಬರ ಸಂಘದ ಜಿಲ್ಲಾಧ್ಯಕ್ಷ ಸುರೇಶ್, ಡಿ.ಹುಚ್ಚೇಗೌಡ, ಬಿ.ಕೆ.ರೇವಣ್ಣ, ಸಿ.ಆರ್.ರಮೇಶ್, ಬಂಕ್ ಶ್ರೀನಿವಾಸ್, ಸೇರಿದಂತೆ ಹಲವರು ಹಾಜರಿದ್ದರು.

ಬೈಕ್‌ಗಳ ಡಿಕ್ಕಿ: ಓರ್ವ ಸಾವು

ಮದ್ದೂರು, ಆ.26– ಎರಡು ಬೈಕ್‌ಗಳ ನಡುವೆ ಸಂಭವಿಸಿದ ಅಪಘಾತದಲ್ಲಿ ಸವಾರನೊಬ್ಬ ಸ್ಥಳದಲ್ಲಿ ಮೃತಪಟ್ಟು, ಮತ್ತೊಬ್ಬ ತೀವ್ರವಾಗಿ ಗಾಯಗೊಂಡಿರುವ ಘಟನೆ ಶಿವಪುರದ ಕೊಪ್ಪ ರಸ್ತೆಯ ರೈಲ್ವೆ ಸೇತುವೆ ಮೇಲೆ ಗುರುವಾರ ರಾತ್ರಿ ಸಂಭವಿಸಿದೆ.

ತಾಲೂಕಿನ ಚನ್ನಸಂದ್ರ ಗ್ರಾಮದ ದಿಲೀಪ್‌ಕುಮಾರ್ ಅಲಿಯಾಸ್ ನಾಥ (25)ಮೃತ ಬೈಕ್ ಸವಾರ. ಗುರುವಾರ ರಾತ್ರಿ ಈತ ಚಾಲನೆ ಮಾಡುತ್ತಿದ್ದ ಬೈಕ್ ಮತ್ತು ಹೊಸಕೆರೆ ಗ್ರಾಮದ ಕಾರ್ತಿಕ್ ಎಂಬಾತನ ಬೈಕ್ ನಡುವೆ ಅಪಘಾತ ಸಂಭವಿಸಿತ್ತು.

ಈ ಸಂಬಂಧ ಮದ್ದೂರು ಸಂಚಾರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಕೇಂದ್ರದ ಯೋಜನೆ ಸಮರ್ಪಕವಾಗಿ ತಲುಪಿಸಿ ಸಂಸದ ವಿ.ಶ್ರೀನಿವಾಸಪ್ರಸಾದ್ ಸೂಚನೆ

ಚಾಮರಾಜನಗರ, ಆ.26–ಕೇಂದ್ರ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಸೌಲಭ್ಯಗಳನ್ನು ಜನರಿಗೆ ಸಮರ್ಪಕವಾಗಿ ತಲುಪಿಸುವಂತೆ ಅಧಿಕಾರಿಗಳಿಗೆ ಸಂಸದ ವಿ.ಶ್ರೀನಿವಾಸ ಪ್ರಸಾದ್ ಸೂಚಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೃಷಿ ಇಲಾಖೆಯು ರೈತರಿಗೆ ಕಿಸಾನ್ ಸಮ್ಮಾನ್ ಯೋಜನೆ ತಲುಪಿಸುವ ಹೊಣೆಗಾರಿಕೆ ಹೊಂದಿದೆ. ಅರ್ಹ ರೈತರೆಲ್ಲರಿಗೂ ಯೋಜನೆ ತಲುಪಬೇಕು. ಪೌತಿಖಾತೆ ಇನ್ನಿತರ ಸಮಸ್ಯೆಗಳಿಂದ ರೈತರು ಸೌಲಭ್ಯದಿಂದ ವಂಚಿತರಾಗಬಾರದು. ಖಾತೆಯನ್ನು ಸಕಾಲದಲ್ಲಿ ಮಾಡಿಕೊಡಬೇಕು ಎಂದು ತಿಳಿಸಿದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ, ಬಗರ್ ಹುಕುಂ ಸಾಗುವಳಿ, ಅರಣ್ಯ ಹಕ್ಕಿನಡಿ ನೀಡಲಾಗಿರುವ ಪ್ರಕರಣಗಳಲ್ಲಿ ಇನ್ನೂ ಹಲವರಿಗೆ ಖಾತೆ ಮಾಡಿಕೊಡಬೇಕು. ಕಂದಾಯ ನಿರೀಕ್ಷಕರು, ಗ್ರಾಮಲೆಕ್ಕಿಗರು ಜವಾಬ್ದಾರಿಯುತವಾಗಿ ಇಂತಹ ಕೆಲಸ ನಿರ್ವಹಿಸಬೇಕು ಎಂದರು.

ಶಾಸಕ ಎನ್.ಮಹೇಶ್ ಮಾತನಾಡಿ, ಈ ಹಿಂದಿನ ಸಭೆಯಲ್ಲಿಯೇ ಖಾತೆಗೆ ಸಂಬಂಧಿಸಿದಂತೆ ಪ್ರತ್ಯೇಕ ಆಂದೋಲನ ಮಾದರಿ ಕಾರ್ಯ ನಿರ್ವಹಿಸುವಂತೆ ಸೂಚಿಸಲಾಗಿತ್ತು. ಮಹತ್ವದ ಕಿಸಾನ್ ಸಮ್ಮಾನ್ ಪ್ರಯೋಜನದಿಂದ ಯಾರೂ ವಂಚಿತರಾಗಬಾರದು. ಹೀಗಾಗಿ ವಿಶೇಷ ಗಮನ ನೀಡಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಮಾತನಾಡಿ, ಪೌತಿಖಾತೆ ಸಮಸ್ಯೆಯಿಂದ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ತಲುಪಿಲ್ಲ ಎಂಬ ಬಗ್ಗೆ ನಿಖರ ಮಾಹಿತಿಯನ್ನು ಕೃಷಿ ಇಲಾಖೆ ಒದಗಿಸಬೇಕು. ಖಾತೆ ಮಾಡಿಕೊಡುವ ಸಂಬಂಧ ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಆರೋಗ್ಯ ಇಲಾಖೆಯಿಂದ ಆಯುಷ್ಮಾನ್ ಆರೋಗ್ಯ ಕಾರ್ಡ್ ವಿತರಣೆ ಕುರಿತು ಮಾಹಿತಿ ಪಡೆದ ಸಂಸದರು, ಎಲ್ಲರಿಗೂ ಆರೋಗ್ಯ ಸೌಲಭ್ಯ ಒದಗಿಸಬೇಕು. ಕೋವಿಡ್‌ನಿಂದ ಮೃತಪಟ್ಟ ಕುಟುಂಬಗಳಿಗೆ ಪರಿಹಾರ ವಿತರಿಸುವ ಕಾರ್ಯ ಶೀಘ್ರವಾಗಿ ಆಗಬೇಕು ಎಂದು ತಿಳಿಸಿದರಲ್ಲದೆ, ಜಿಲ್ಲೆಯ ಜನರೆಲ್ಲರೂ ಸ್ವಯಂ ಪ್ರೇರಿತರಾಗಿ ಕೋವಿಡ್ ಮುನ್ನೆಚ್ಚರಿಕೆ ಡೋಸ್‌ಗಳನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ವೇಳೆ ಶಾಸಕ ಸಿ.ಎಸ್.ನಿರಂಜನ್ ಕುಮಾರ್, ಗುಂಡ್ಲುಪೇಟೆ ಪಟ್ಟಣದಲ್ಲಿ ಚರಂಡಿ ಸ್ಲ್ಯಾಬ್ ಕುಸಿಯುತ್ತಿದೆ ಬೇಗೂರು ಬಳಿ ಮುಖ್ಯ ರಸ್ತೆ ಹಲವೆಡೆ ಗುಂಡಿ ಬಿದ್ದಿದೆ. ಮಳೆಯಿಂದ ರಸ್ತೆ ಹಾಳಾಗುತ್ತಿದೆ. ರಾಷ್ಟ್ರೀಯ ಹೆದ್ದಾರಿ ಯೋಜನೆ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಂಸದರು, ರಾಷ್ಟ್ರೀಯ ಹೆದ್ದಾರಿ ಯೋಜನೆ ಕಾಮಗಾರಿಗಳು ಸಮರ್ಪಕವಾಗಿ ಜರುಗಬೇಕು. ಅಪೂರ್ಣವಾಗಿರುವ ಕಡೆ ಪೂರ್ಣಗೊಳಿಸಬೇಕು. ಸರಿಯಾದ ನಿರ್ವಹಣೆಯಾಗಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಪಂ ಸಿಇಓ ಕೆಎಂಗಾಯಿತ್ರಿ ಎಡಿಸಿ ಎಸ್.ಕಾತ್ಯಾಯಿನಿದೇವಿ, ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಅಧಿಕಾರಿ ಸಂತೋಷ್ ಕುಮಾರ್, ಚಾಮರಾಜನಗರ ನಗರಸಭೆ ಅಧ್ಯಕ್ಷೆ ಆಶಾ, ಗುಂಡ್ಲುಪೇಟೆ ಪುರಸಭೆ ಅಧ್ಯಕ್ಷ ಗಿರೀಶ್, ಕೊಳ್ಳೇಗಾಲ ನಗರಸಭೆ ಅಧ್ಯಕ್ಷೆ ಆರ್.ಸುಶೀಲ, ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ನಾಮನಿರ್ದೇಶಿತ ಸದಸ್ಯ ಮಲ್ಲೇಶಪ್ಪ ಲೋಕೇಶ್, ನಾಗೇಶ್, ಸರಸ್ವತಿ, ಬೇಗೂರು ಗ್ರಾಪಂ ಅಧ್ಯಕ್ಷೆ ಇಂದಿರಾ, ಅಗತಗೌಡನಹಳ್ಳಿ ಗ್ರಾಪಂ ಅಧ್ಯಕ್ಷೆ ಸೌಭಾಗ್ಯ, ನಂಜದೇವನಪುರ ಗ್ರಾಪಂ ಅಧ್ಯಕ್ಷೆ ಮೇಘಶ್ರೀ, ಕುಂತೂರು ಗ್ರಾಪಂ ಅಧ್ಯಕ್ಷ ಶಿವಣ್ಣ ಇತರರು ಸಭೆಯಲ್ಲಿದ್ದರು.

ಕಾಂಗ್ರೆಸ್ ಸ್ಥಿತಿ ಶೋಚನೀಯ




ಚಾಮರಾಜನಗರ: ನೂರು ವರ್ಷ ಇತಿಹಾಸ ಹೊಂದಿರುವ ಕಾಂಗ್ರೆಸ್ ಇಂದು ಬಹಳ ಶೋಚನೀಯ ಸ್ಥಿತಿಯಲ್ಲಿದೆ ಎಂದು ಸಂಸದ ವಿ.ಶ್ರೀನಿವಾಸ ಪ್ರಸಾದ್ ಲೇವಡಿ ಮಾಡಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರ ಮಟ್ಟದ ಕಾಂಗ್ರೆಸ್ ನಾಯಕ ಗುಲಾಂ ನಬಿ ಆಜಾದ್ ರಾಜೀನಾಮೆ ನೀಡಿದ್ದಾರೆ. ಹಿಮಾಚಲ ಪ್ರದೇಶದ ಆನಂದ ಶರ್ಮಾ ಕೂಡ ರಾಜೀನಾಮೆ ನೀಡಿದ್ದಾರೆ. ಕಾಂಗ್ರೆಸ್‌ನಲ್ಲಿ ಸದ್ಯ ಹಿರಿಯರು ಕಾಣಿಸುತ್ತಿಲ್ಲ. ಸೋನಿಯಾ ಗಾಂಧಿ ಆರೋಗ್ಯ ದೃಷ್ಟಿಯಿಂದ ಎಐಸಿಸಿ ಅಧ್ಯಕ್ಷರಾಗುವುದಿಲ್ಲ ಎಂದು ಹೇಳಿದ್ದಾರೆ. ರಾಹುಲ್‌ಗಾಂಧಿ ಅವರ ಕೈಯಲ್ಲಿ ಆಗದೇ ತಮ್ಮ ಅಸಹಾಯಕತೆ ತೋರಿದ್ದಾರೆ ಎಂದರು.

ರಾಷ್ಟ್ರೀಯ ಮಟ್ಟದಲ್ಲಿ ಕಾಂಗ್ರೆಸ್ ಈಗ ಸಂದಿಗ್ನ ಪರಿಸ್ಥಿತಿಯಲ್ಲಿದೆ. ಕಾಂಗ್ರೆಸ್ ಶಕ್ತಿ ಕುಂದಿದೆ. ಒಂದೆರಡು ರಾಜ್ಯದಲ್ಲಿ ಮಾತ್ರ ಪಕ್ಷ ಸಂಘಟನೆ ಮಾಡುತ್ತಿದ್ದು, ಕಾಂಗ್ರೆಸ್ ರಾಷ್ಟ್ರೀಯ ಪಕ್ಷ ಎಂದು ಗುರುತಿಸಲು ಸಹ ಆಗುತ್ತಿಲ್ಲ ಎಂದು ಟೀಕಿಸಿದರು.

ಸಿದ್ದರಾಮಯ್ಯ ಕ್ಷೇತ್ರ ಹುಡುಕಾಟ: ದಾವಣಗೆರೆಯಲ್ಲಿ ನಡೆದ ಸಿದ್ದರಾಮೋತ್ಸವದಲ್ಲಿ 6 ಲಕ್ಷ ಮಂದಿ ಮೈಸೂರು ಪಾಕ್ ಸವಿದರು. ಇದರಿಂದಲಾದರೂ ಸಿದ್ದರಾಮಯ್ಯ ಅವರಿಗೆ ಧೈರ್ಯ ಬಂದಿದಿಯಾ? ಇನ್ನೂ ಕ್ಷೇತ್ರ ಹುಡುಕಾಟದಲ್ಲಿದ್ದಾರೆ. ಮುಂಬರುವ ವಿಧಾನ ಸಭಾ ಚುನಾವಣೆಯಲ್ಲದರೂ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಿಲ್ಲುವುದಾಗಿ ಹೇಳಲಿ? ಆ ಬಗ್ಗೆ ಅವರು ಮಾತನಾಡುವುದಿಲ್ಲ. ಬೇರೆ ಎಲ್ಲವನ್ನು ಮಾತನಾಡುತ್ತಾರೆ ಎಂದು ಸಿದ್ದರಾಮಯ್ಯ ಅವರಿಗೆ ಕುಟುಕಿದರು.

ಲಿಂಗಮ್ಮಣ್ಣಿ ನಿಧನ



ಚಾಮರಾಜನಗರ, ಆ.26–ನಗರದ ರಾಮಸಮುದ್ರದ ಹಳ್ಳದ ಬೀದಿನಿವಾಸಿ ಲಿಂಗಮ್ಮಣ್ಣಿ(62) ಅವರು ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಸಂಜೆ ರಾಮಸಮುದ್ರದ ಅವರ ತೋಟದಲ್ಲಿ ನೆರವೇರಿತು.

ದೇಶದ ಇಂದಿನ ಸ್ಥಿತಿಗೆ ಸಾವರ್ಕರ್, ಜಿನ್ನಾ ಕಾರಣ

ವಿಧಾನಪರಿಷತ್ ವಿಪಕ್ಷ ನಾಯಕ ಬಿ.ಕೆ.ಹರಿಪ್ರಸಾದ್ ಆರೋಪ

ಗುಂಡ್ಲುಪೇಟೆ, ಆ.26–ಸಾವರ್ಕರ್ ಒಬ್ಬ ನಾಸ್ತಿಕ. ದೇಶದ ಇಂದಿನ ಸ್ಥಿತಿಗೆ ಸಾವರ್ಕರ್ ಹಾಗೂ ಜಿನ್ನಾ ಇಬ್ಬರೂ ಕಾರಣ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಹಾಗೂ ವಿಧಾನಪರಿಷತ್ ವಿಪಕ್ಷ ನಾಯಕ ಬಿ.ಕೆ. ಹರಿಪ್ರಸಾದ್ ಆಪಾದಿಸಿದರು.

ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ಸೆ.7ರಿಂದ ಕಾಂಗ್ರೆಸ್ ಕೈಗೊಂಡಿರುವ ಭಾರತ್ ಜೋಡೋ ಕಾರ್ಯಕ್ರಮದ ಅಂಗವಾಗಿ ಪಟ್ಟಣದ ಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ರೈತರ ಬೆಳೆಗಳಿಗೆ ಬೆಂಬಲ ಬೆಲೆ, ಮಹಿಳೆಯರಿಗೆ ರಕ್ಷಣೆ ನೀಡಲು ಸಾಧ್ಯವಾಗದೇ ತನ್ನ ಸರ್ಕಾರಗಳ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಬಿಜೆಪಿ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಮುಂದಾಗಿದೆ. ಗಣೇಶೋತ್ಸವದಲ್ಲಿ ಸಾವರ್ಕರ್ ಭಾವಚಿತ್ರ ಇರಿಸುವ ಅಭಿಯಾನಯನ್ನು ಬಿಜೆಪಿ ಆರಂಭಿಸಿದೆ. ಆದರೆ ಸಾವರ್ಕರ್ ಒಬ್ಬ ನಾಸ್ತಿಕ ಎಂದರು.



ದೇಶದ ಪರಿಕಲ್ಪನೆಗೆ ಗಾಂಧಿ ಕೊಡುಗೆ ದೊಡ್ಡದಾಗಿದೆ. ಸ್ವಾತಂತ್ರ್ಯನಂತರ ದೇಶ ವಿಭಜನೆಗೆ ಕಾರಣರಾದ ಮಹಮದ್ ಅಲಿ ಜಿನ್ನಾ ಹಾಗೂ ಸಾವರ್ಕರ್ ಇಬ್ಬರೂ ಇಂದಿನ ಪರಿಸ್ಥಿತಿಗೆ ಕಾರಣರಾಗಿದ್ದಾರೆ. ದೇಶದ ಸಮಗ್ರತೆ ಹಾಗೂ ಏಕತೆ ಬಗ್ಗೆ ಮಾತನಾಡಲು ಬಿಜೆಪಿಗೆ ಯಾವುದೇ ನೈತಿಕತೆಯಿಲ್ಲ. ಇಂದು ದೇಶ ಕವಲು ಹಾದಿಯಲ್ಲಿದ್ದು, ಇದನ್ನು ಬೆಸೆಯುವ ಸಲುವಾಗಿ ಹಾಗೂ ಪ್ರಸ್ತುತ ದೇಶದಲ್ಲಿ ಬೆಲೆ ಏರಿಕೆ, ನಿರುದ್ಯೋಗ ಸಮಸ್ಯೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ರಾಹುಲ್ ಗಾಂಧಿ ನೇತೃತ್ವದಲ್ಲಿ ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಭಾರತ್ ಜೋಡೋ ಪಾದಯಾತ್ರೆ ನಡೆಸಲು ನಿರ್ಧರಿಸಲಾಗಿದೆ. ರಾಜ್ಯದಲ್ಲಿ 8 ಜಿಲ್ಲೆಯ ಮೂಲಕ ಪಾದಯಾತ್ರೆ ಸಾಗಲಿದ್ದು, ಸೆ.7ರಂದು ಕನ್ಯಾಕುಮಾರಿಯಿಂದ ಆರಂಭಗೊಳ್ಳಲಿದೆ. ಸೆ.28ರಂದು ರಾಜ್ಯಕ್ಕೆ ಪಾದಯಾತ್ರೆ ಆಗಮಿಸಿದಲಿದ್ದು, 21 ದಿನಗಳ ಕಾಲ 511 ಕಿಮೀ ನಡೆಯಲಿದೆ. ಪ್ರತಿ ದಿನ 20 ಕಿಮೀ ನಡೆದು ಅಲ್ಲೆ ವಾಸ್ತವ್ಯ ಹೂಡಲಾಗುವುದು. ಇದರಲ್ಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಪಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಒಳಗೊಂಡಂತೆ ಸಂಸದರು, ಶಾಸಕರು, ಪಕ್ಷದ ಮುಖಂಡರು ಭಾಗವಹಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್, ಆರ್.ಧ್ರುವನಾರಾಯಣ್, ಕಾಡಾ ಮಾಜಿ ಅಧ್ಯಕ್ಷ ಎಚ್.ಎಸ್.ನಂಜಪ್ಪ, ಮುಖಂಡರಾದ ಹೆಚ್.ಎಂ.ಗಣೇಶ್ ಪ್ರಸಾದ್, ಕೆರೆಹಳ್ಳಿ ನವೀನ್, ಮಹೇಶ್, ಚನ್ನಪ್ಪ, ಗುರು, ಲೋಕೇಶ್ ಸೇರಿದಂತೆ ಹಲವರಿದ್ದರು.

ವೈ.ಕೆ.ಮೋಳೆ ಶಾಲೆಯಲ್ಲಿ ಪ್ರತಿಭಾ ಕಾರಂಜಿ



ಯಳಂದೂರು, ಆ.26– ತಾಲೂಕಿನ ವೈ.ಕೆ.ಮೋಳೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದುಗ್ಗಹಟ್ಟಿ ಕ್ಲಸ್ಟರ್ ಮಟ್ಟದ 2022–23ನೇ ಸಾಲಿನ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕ್ಷೇತ್ರಶಿಕ್ಷಣಾಧಿಕಾರಿ ಕೆ.ಕಾಂತರಾಜು, 2 ವರ್ಷಗಳಿಂದ ಕೋವಿಡ್ ಹಿನ್ನೆಲೆಯಲ್ಲಿ ಮಕ್ಕಳ ಶೈಕ್ಷಣಿಕ, ಸಾಂಸ್ಕೃತಿ ಕಾರ್ಯಗಳಿಗೆ ಸಾಕಷ್ಟು ತೊಂದರೆ ಉಂಟಾಗಿತ್ತು. ಪ್ರಸುತ್ತವಾಗಿ ಪ್ರತಿಭಾ ಕಾರಂಜಿ ಕಾರ್ಯಕ್ರಮ ಆಯೋಜಿಸಲಾಗಿದ್ದು ಮಕ್ಕಳ ಸದುಪಯೋಗ ಪಡಿಸಿಕೊಂಡು ತಮ್ಮ ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆಯನ್ನು ಸದುಪಯೋಗ ಮಾಡಿಕೊಳ್ಳಿ ಎಂದರು. ಈ ಸಂದರ್ಭದಲ್ಲಿ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಪಿ.ಸೋಮಣ್ಣ, ಬಿಆರ್‌ಸಿ ನಾಗೇಂದ್ರ, ನೌಕರರ ಸಂಘದ ಆರ್.ಗೋವಿಂದರಾಜು, ತಾಪಂ ಮಾಜಿ ಸದಸ್ಯ ವೈ.ಕೆ.ಮೋಳೆ ನಾಗರಾಜು, ಗ್ರಾಪಂ ಸದಸ್ಯ ಶಿವರಾಮು, ಸುಜಾತ ಸ್ವಾಮಿ ಸೇರಿದಂತೆ ಇತರರಿದ್ದರು.

ರಾಜ್ಯದಲ್ಲಿ ಮಳೆ ಹಾನಿ: 1102 ಕೋಟಿ ಪರಿಹಾರ ನೀಡುವಂತೆ ಕೇಂದ್ರಕ್ಕೆ ಮನವಿಗೆ ನಿರ್ಧಾರ

ಬೆಂಗಳೂರು, ಆ. 26 (ಕೆಎಂಶಿ)–ರಾಜ್ಯದಲ್ಲಿ ಇತ್ತೀಚೆಗೆ ಮಳೆಯಿಂದಾದ ಹಾನಿ ಹಿನ್ನೆಲೆಯಲ್ಲಿ 1102 ಕೋಟಿ ರೂ ಪರಿಹಾರ ನೀಡುವಂತೆ ಕೇಂದ್ರಕ್ಕೆ ಮನವಿ ಸಲ್ಲಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಕಂದಾಯ ಸಚಿವ ಆರ್.ಅಶೋಕ್ ಈ ವಿಷಯ ತಿಳಿಸಿದರು. ಕಳೆದ ನಾಲ್ಕು ತಿಂಗಳಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಸುರಿದ ಮಳೆಯಿಂದ ಅಪಾರ ಹಾನಿಯಾಗಿದ್ದು, ಈ ಹಿನ್ನೆಲೆಯಲ್ಲಿ ಪರಿಹಾರ ಕೋರುವ ಸಂಬಂಧ ಮನವಿ ಪತ್ರ ಸಿದ್ಧವಾಗಿದೆ ಎಂದರು.

ಮಳೆಯಿಂದ ಹಾನಿಗೊಳಗಾದ ಜಿಲ್ಲೆಗಳಿಂದ ಆಯಾ ಜಿಲ್ಲಾಧಿಕಾರಿಗಳು ವರದಿ ಕಳಿಸಿದ್ದು,ಇದರ ಆಧಾರದ ಮೇಲೆ 1102 ಕೋಟಿ ರೂ. ಪರಿಹಾರ ಕೋರಲು ನಿರ್ಧರಿಸಲಾಗಿದೆ. ಮಳೆಯಿಂದ ರಸ್ತೆ, ಸೇತುವೆ, ಕಟ್ಟಡ ಸೇರಿದಂತೆ ಹಲವು ರೀತಿಯಲ್ಲಿ ನಷ್ಟವಾಗಿದೆ. ಈ ಹಿನ್ನೆಲೆಯಲ್ಲಿ ಇದುವರೆಗೆ ಮಳೆಯಿಂದ ಸಂಭವಿಸಿದ ನಷ್ಟಕ್ಕೆ ಪ್ರತಿಯಾಗಿ ಪರಿಹಾರ ಕೋರಲು ತೀರ್ಮಾನಿಸಲಾಗಿದೆ ಎಂದರು. ರಾಜ್ಯದ ಹಲವು ಜಿಲ್ಲೆಗಳಲ್ಲಿ ಭೂಕಂಪ ಸಂಭವಿಸಿದೆ. ಗುಡ್ಡಗಳು ಕುಸಿದಿವೆ ಎಂದ ಅವರು, ಇಂತಹ ಸಮಸ್ಯೆ ಎಲ್ಲಿ ಪುನರಾವರ್ತನೆ ಆಗಬಹುದು ಎಂಬುದನ್ನು ಗಮನಿಸಲು, ಮುಂಜಾಗ್ರತಾ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಒಂದನೇ ಪುಟದಿಂದ

ಅಧಿಕಾರಕ್ಕೆ ತರುವ ಹೊಣೆ ನನ್ನದು

ಅರ್ಪಿಸಲು ದೆಹಲಿಗೆ ತೆರಳಿದ್ದರು. ಯಡಿಯೂರಪ್ಪ ಮುಖ್ಯಮಂತ್ರಿ ಸ್ಥಾನದಿಂದ ಇಳಿದ ನಂತರ ಬೆಂಗಳೂರಿಗೆ ಬಂದಾಗಲೆಲ್ಲಾ ವರಿಷ್ಠರನ್ನು ಭೇಟಿ ಮಾಡುತ್ತಿದ್ದರೇ ಹೊರತು, ದೆಹಲಿಗೆ ತೆರಳಿ ವರಿಷ್ಠರೊಂದಿಗೆ ಮಾತುಕತೆ ನಡೆಸುವ ಪ್ರಯತ್ನ ಮಾಡಿರಲಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ದಿನದಿಂದ ದಿನಕ್ಕೆ ಬಲಗೊಳ್ಳುತ್ತಿದೆ ಎಂಬ ಹಿನ್ನೆಲೆಯಲ್ಲಿ ಯಡಿಯೂರಪ್ಪ ಅವರನ್ನು ಮತ್ತೆ ಮುನ್ನೆಲೆಗೆ ತರಲು ವರಿಷ್ಠರು ಅವರಿಗೆ ಸಂಸದೀಯ ಮಂಡಳಿ ಸದಸ್ಯತ್ವ ನೀಡಿದ್ದು, ಪುತ್ರನಿಗೂ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸ್ಥಾನ ನೀಡುವ ಸಾಧ್ಯತೆ ಇದೆ. ಆರ್‌ಎಸ್‌ಎಸ್ ಮುಖಂಡರ ಆಹ್ವಾನದ ಮೇರೆಗೆ ದೆಹಲಿಗೆ ತೆರಳಿದ ಯಡಿಯೂರಪ್ಪ, ಆರ್‌ಎಸ್‌ಎಸ್‌ನ ಪ್ರಮುಖ ಸಹ ಸಂಚಾಲಕ ದತ್ತಾತ್ರೇಯ ಹೊಸಬಾಳೆ ಜತೆಗೆ ಚುನಾವಣೆಗೆ ಸಂಬಂಧಿಸಿದಂತೆ ಸುದೀರ್ಘ ಚರ್ಚೆ ನಡೆಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರ ಅವಧಿ ಆ.28ಕ್ಕೆ ಪೂರ್ಣಗೊಳ್ಳಲಿದ್ದು, ಅವರಿಂದ ತೆರವಾಗುವ ಸ್ಥಾನಕ್ಕೆ ಹೊಸಬರ ನೇಮಕಾತಿ ಸಂಬಂಧ ಈ ನಾಯಕರು ಚರ್ಚೆ ಮಾಡಿದ್ದಾರೆ. ಈ ಸ್ಥಾನಕ್ಕೆ ಮೂವರ ಹೆಸರು ಮುನ್ನೆಲೆಗೆ ಬಂದಿದ್ದು, ಆರ್‌ಎಸ್‌ಎಸ್ ಮುಖಂಡರು, ಬಿಜೆಪಿ ಮುಖಂಡರೊಂದಿಗೆ ಸಮಾಲೋಚನೆ ನಡೆಸಿದ ನಂತರ ಅಂತಿಮಗೊಳ್ಳಲಿದೆ ಎನ್ನಲಾಗಿದೆ.

ವರಿಷ್ಠರನ್ನು ಭೇಟಿಯಾದ ಸಂದರ್ಭದಲ್ಲಿ ಯಡಿಯೂರಪ್ಪ, ಕರ್ನಾಟಕದಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವ ಹೊಣೆಗಾರಿಕೆ ನನ್ನದು ಎಂದಿದ್ದಾರೆ. ಆದರೆ, ನಾನು ನೀಡುವ ಕೆಲವು ಸಲಹೆಗಳನ್ನು ಅನುಷ್ಠಾನಗೊಳಿಸುವಂತೆ ಸಲಹೆ ಮಾಡಿದ್ದಾರೆ ಎನ್ನಲಾಗಿದೆ. ಗಣೇಶ ಹಬ್ಬ ಮುಗಿದ ತಕ್ಷಣವೇ ರಾಜ್ಯಾದ್ಯಂತ ತಾವು, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ ಪ್ರತ್ಯೇಕವಾಗಿ ಪ್ರವಾಸ ಕೈಗೊಂಡು ಕಾರ್ಯಕರ್ತರನ್ನು ಸಂಘಟಿಸುವುದಲ್ಲದೆ, ಪ್ರತಿಪಕ್ಷ ಕಾಂಗ್ರೆಸ್‌ನ ಆರೋಪಗಳಿಗೆ ಸಾರ್ವಜನಿಕವಾಗಿ ಉತ್ತರ ನೀಡುತ್ತೇವೆ. ಬಿಜೆಪಿ ಸರ್ಕಾರಕ್ಕೆ ಮೂರು ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ರಾಜ್ಯದ ಏಳು ಕಡೆ ಜನೋತ್ಸವ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಿದ್ದು, ಪ್ರತಿ ಕಾರ್ಯಕ್ರಮದಲ್ಲಿ ವರಿಷ್ಠರಲ್ಲೊಬ್ಬರು ಭಾಗವಹಿಸುವಂತೆ ನಡ್ಡಾ ಅವರಿಗೆ ಮನವಿ ಮಾಡಿದ್ದಾರೆ. ಸಂಸದೀಯ ಮಂಡಳಿ ಸದಸ್ಯರನ್ನಾಗಿ ನೇಮಕ ಮಾಡಿದ ನಂತರ ಯಡಿಯೂರಪ್ಪ ಅವರಲ್ಲಿ ಮತ್ತೆ ರಾಜಕೀಯ ಹುರುಪು ಮೂಡಿದ್ದು, ಸ್ವಯಂಪ್ರೇರಿತವಾಗಿ ಪಕ್ಷವನ್ನು ಸಂಘಟಿಸಿ ನಾಯಕರನ್ನು ಬೀದಿಗಿಳಿಸಿ ಪಕ್ಷಕ್ಕೆ ಚೈತನ್ಯ ತುಂಬುವ ಉತ್ಸಾಹದಲ್ಲಿದ್ದಾರೆ.

ಆಜಾದ್ ಕಾಂಗ್ರೆಸ್‌ಗೆ ಗುಡ್‌ಬೈ

ಅಪ್ರಬುದ್ಧತೆಯೇ ಕಾರಣ ಎಂದಿರುವ ಆಜಾದ್, ಮಾಧ್ಯಮಗಳ ಮುಂದೆಯೇ ಸರ್ಕಾರಿ ಸುಗ್ರೀವಾಜ್ಞೆಯನ್ನು ಹರಿದು ಹಾಕಿದ್ದು, ಅವರ ಅಪ್ರಬುದ್ಧತೆಯ ಅತ್ಯಂತ ಜ್ವಲಂತ ಉದಾಹರಣೆಯಾಗಿದೆ. ಈ ಒಂದು ವರ್ತನೆಯೇ 2014ರಲ್ಲಿ ಯುಪಿಎ ಸೋಲಿಗೆ ಕಾರಣವಾಯಿತು ಎಂದು ತಿಳಿಸಿರುವ ಅವರು, 2014 ರಿಂದ 2022ರ ನಡುವೆ ನಡೆದ 49 ವಿಧಾನಸಭೆ ಚುನಾವಣೆಗಳಲ್ಲಿ ಕಾಂಗ್ರೆಸ್ 39ರಲ್ಲಿ ಪರಾಭವ ಗೊಂಡಿದೆ ಎಂಬುದನ್ನು ಉಲ್ಲೇಖಿಸಿದ್ದಾರೆ. 2019ರ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯ ಸೋಲಿನ ಬಳಿಕ ರಾಹುಲ್ ಗಾಂಧಿ ಪಕ್ಷದ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿದ ನಂತರ ಹಂಗಾಮಿ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿರುವ ನೀವು, ಕೇವಲ ನಾಮ ಮಾತ್ರಕ್ಕೆ ಅಧ್ಯಕ್ಷರಾಗಿದ್ದೀರಿ ಎಂದು ಒತ್ತಿ ಹೇಳಿರುವ ಆಜಾದ್, ಪಕ್ಷದ ಎಲ್ಲಾ ನಿರ್ಧಾರಗಳನ್ನು ರಾಹುಲ್ ಗಾಂಧಿ ಅಥವಾ ಅವರ ಭದ್ರತಾ ಸಿಬ್ಬಂದಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಎಐಸಿಸಿಯಲ್ಲಿ ವ್ಯವಸ್ಥಿತ ಬದಲಾವಣೆಗಳನ್ನು ಬಯಸಿದ ಜಿ–23 ಗುಂಪಿನ ಸದಸ್ಯರಾಗಿದ್ದ ಗುಲಾಂ ನಬಿ ಆಜಾದ್ ಅವರು ಆಗಸ್ಟ್ 16ರಂದು ಜಮ್ಮು ಮತ್ತು ಕಾಶ್ಮೀರ ಪ್ರಚಾರ ಸಮಿತಿ ಅಧ್ಯಕ್ಷ ಸ್ಥಾನವನ್ನು ತ್ಯಜಿಸಿದ್ದರು. ಜಿ–23 ಗುಂಪು ಪಕ್ಷದ ನಾಯಕತ್ವವನ್ನು ಟೀಕಿಸುತ್ತಿದೆ ಮತ್ತು ಸಂಘಟನೆಯ ಬದಲಾವಣೆಯನ್ನು ಒತ್ತಾಯಿಸುತ್ತಿದೆ ಎಂಬ ಕಾರಣಕ್ಕಾಗಿ ಈ ಗುಂಪಿನ ವಿರುದ್ಧ ಪಕ್ಷದ ಕೆಲವರು ಕೆಂಡಾಮಂಡಲವಾಗಿದ್ದರು ಎಂದು ಹೇಳಲಾಗಿದೆ. ರಾಜ್ಯಸಭೆಯಿಂದ ನಿವೃತ್ತರಾದ ನಂತರ ಗುಲಾಂ ನಬಿ ಆಜಾದ್ ಅವರನ್ನು ಮತ್ತೆ ರಾಜ್ಯಸಭೆಗೆ ಕಳುಹಿಸದೇ ಇರುವುದನ್ನು ಜಿ–23 ಗುಂಪಿನ ಕೆಲ ನಾಯಕರು ತೀವ್ರವಾಗಿ ಖಂಡಿಸಿದ್ದಾರೆ.

ಆಜಾದ್ ಅವರು ಜಮ್ಮು–ಕಾಶ್ಮೀರದ ಮುಖ್ಯಮಂತ್ರಿಯಾಗಿ, ಯುಪಿಎ ಸರ್ಕಾರದ ಅವಧಿಯಲ್ಲಿ ಕೇಂದ್ರ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಎಐಸಿಸಿ ನಾಯಕಿ ಸೋನಿಯಾ ಗಾಂಧಿ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದರು. ಇತ್ತೀಚೆಗಷ್ಟೆ ಹಿರಿಯ ಕಾಂಗ್ರೆಸ್ ನಾಯಕರಾದ ಕಪಿಲ್ ಸಿಬಲ್, ಅಶ್ವಿನಿ ಕುಮಾರ್ ಅವರುಗಳು ಪಕ್ಷ ತೊರೆದಿದ್ದು, ಹಿಮಾಚಲ ಪ್ರದೇಶದ ಹಿರಿಯ ನಾಯಕ ಆನಂದ್ ಶರ್ಮಾ ಅವರು ಪಕ್ಷದ ಪ್ರಮುಖ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಇದೀಗ ಹಿರಿಯ ನಾಯಕ ಆಜಾದ್ ರಾಜೀನಾಮೆ ನೀಡಿರುವುದು ಕಾಂಗ್ರೆಸ್‌ನಲ್ಲಿ ಆಘಾತವನ್ನುಂಟು ಮಾಡಿದೆ.

ನ್ಯಾಯಾಧೀಶರಿಂದ ತನಿಖೆ ಮಾಡಿಸಲಿ



ಸಿದ್ದರಾಮಯ್ಯ ಪತ್ರಿಕಾ ಸಂವಾದದಲ್ಲಿ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಕಾರ್ಯದರ್ಶಿ ಸುಬ್ರಹ್ಮಣ್ಯ ಉಪಸ್ಥಿತರಿದ್ದರು.

ಸತ್ಯ ಹೊರಬರಬೇಕು. ಜಿಲ್ಲೆ, ಕ್ಷೇತ್ರಗಳಲ್ಲಿ ಸಣ್ಣಪುಟ್ಟ ಕೆಲಸಗಳಿಗೂ ಎಲ್ಲ ಸಚಿವರು ನಾಚಿಕೆಯಿಲ್ಲದೆ ಕಮಿಷನ್ ಕೇಳುತ್ತಿರುವ ಕಾರಣ ನಾನು ಇದನ್ನು 50 ಪರ್ಸೆಂಟ್ ಕಮಿಷನ್ ಸರ್ಕಾರ ಎಂದು ಕರೆಯುವುದಾಗಿ ಹೇಳಿದ ಅವರು, ದೊಡ್ಡ ಅಥವಾ ಸಣ್ಣ ಯಾವುದೇ ಕೆಲಸವನ್ನು ಕಮಿಷನ್ ಆಧಾರದ ಮೇಲೆ ತೆಗೆದುಕೊಳ್ಳಲಾಗುತ್ತದೆ. ಶೇ.40ರಷ್ಟು ಹಣ ಸಚಿವರಿಗೆ, ಶೇ.20ರಷ್ಟು ಗುತ್ತಿಗೆದಾರರ ಲಾಭ, ಶೇ.15ರಷ್ಟು ಜಿಎಸ್‌ಟಿ ಮತ್ತು ಉಳಿದ ಶೇ.25ರಷ್ಟು ಅನುದಾನದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತದೆ. ಇದರಿಂದ ಯಾವ ಗುಣಮಟ್ಟವನ್ನು ನಿರೀಕ್ಷಿಸಲು ಸಾಧ್ಯ ಎಂದು ಪ್ರಶ್ನಿಸಿದರು. ಗುತ್ತಿಗೆದಾರರ ಸಂಘ ಭ್ರಷ್ಟಾಚಾರದ ದಾಖಲೆಗಳನ್ನು ನೀಡಬೇಕು ಎಂದು ಸರ್ಕಾರ ಹೇಳುತ್ತಿದೆ. ವ್ಯವಹಾರಗಳ ದಾಖಲೆ ಇಡಲು ಮಂತ್ರಿಗಳು ದಡ್ಡರೇ? ಸ್ವತಂತ್ರ ತನಿಖೆಯಿಂದ ಮಾತ್ರ ಸತ್ಯಾಂಶ ಹೊರಬರಲಿದೆ. ಕೊಡಗು ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ರವಿ ಚಂಗಪ್ಪ ಕೂಡ ವಿರಾಜಪೇಟೆ ಶಾಸಕ ಕೆ.ಜಿ. ಬೋಪಯ್ಯ ಅವರು ಲಂಚ ಪಡೆದಿದ್ದಾರೆ. ಅಮಾನತುಗೊಂಡಿರುವ ಏಡಿಜಿಪಿ ಅಮೃತ್ ಪೌಲ್ ಅಧಿಕಾರಿ ಶ್ರೀನಿವಾಸ್ ಅವರನ್ನು ಮತ್ತೆ ಅದೇ ಹುದ್ದೆಗೆ ಮರು ನೇಮಕಗೊಳಿಸಲು ಎರಡೂವರೆ ಕೋಟಿ ರೂ. ಪಡೆದಿದ್ದಾರೆಂದು ಗಂಭೀರ ಆರೋಪ ಮಾಡಿದ್ದಾರೆ. ಇದಕ್ಕೆ ಸರ್ಕಾರದ ಉತ್ತರವೇನು ಎಂದು ಪ್ರಶ್ನಿಸಿದರು. ಇದಕ್ಕಿಂತ ಭ್ರಷ್ಟ ಸರ್ಕಾರ ಮತ್ತೊಂದಿಲ್ಲ ಎಂದು ಗುತ್ತಿಗೆದಾರರು ದೂರಿದ್ದಾರೆ. ಸತ್ಯಾಂಶ ಪತ್ತೆ ಹಚ್ಚಲು ನ್ಯಾಯಾಂಗ ತನಿಖೆಯನ್ನು ನಿರಾಕರಿಸುವ ಮೂಲಕ ಸರ್ಕಾರವು ಭ್ರಷ್ಟಾಚಾರದ ವ್ಯಾಪಕತೆಯನ್ನು ಪರೋಕ್ಷವಾಗಿ ಒಪ್ಪಿಕೊಳ್ಳುತ್ತಿದೆ. ಗುತ್ತಿಗೆದಾರರು ಸಾಕ್ಷ್ಯ ದಾಖಲೆಗಳನ್ನು ಒದಗಿಸಲು ಸಿದ್ಧರಿದ್ದಾರೆ. ಅವರು ತಮ್ಮ ಆರೋಪ ಸುಳ್ಳು ಎಂದು ಸಾಬೀತಾದರೆ ಕಾನೂನು ಪ್ರಕಾರ ಶಿಕ್ಷೆ ಎದುರಿಸಲು ಸಿದ್ಧರಾಗಿರುವುದಾಗಿ ಹೇಳುತ್ತಿದ್ದಾರೆ. ಅಂದ ಮೇಲೆ ಸರ್ಕಾರ ತನಿಖೆ ನಡೆಸಲು ಹಿಂದೇಟು ಹಾಕುತ್ತಿರುವುದಾದರೂ ಏಕೆ? ಇದರಲ್ಲೇ ಅವರ ಭ್ರಷ್ಟತೆ ಎದ್ದು ಕಾಣುತ್ತದೆ ಎಂದರು. ಬಿಜೆಪಿ ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಆರೋಪಗಳು ಬಂದಾಗಲೆಲ್ಲಾ ಸಿದ್ದರಾಮಯ್ಯ ಅವಧಿಯಲ್ಲೂ ಭ್ರಷ್ಟಾಚಾರ ನಡೆದಿದೆ ಎಂದು ಸಿದ್ದರಾಮಯ್ಯರತ್ತ ಬೆಟ್ಟು ಮಾಡುತ್ತಾರೆ. ಸರ್ಕಾರದ ವಿರುದ್ಧ ಭ್ರಷ್ಟಾಚಾರ, ಕೆಟ್ಟ ಆಡಳಿತ ಕುರಿತ ಆರೋಪ ಬಂದಾಗಲೆಲ್ಲಾ ಬಿಜೆಪಿಯವರು ಮೊಟ್ಟೆ ಎಸೆಯುವುದು, ಮಾಂಸ ತಿನ್ನುವುದು ಮತ್ತು ಇತರ ಧಾರ್ಮಿಕ ಮತ್ತು ಭಾವನಾತ್ಮಕ ವಿಷಯಗಳಂತಹ ಸೂಕ್ಷ್ಮ ವಿಷಯಗಳತ್ತ ಹೊರಳುತ್ತಾರೆ. ಮುಖ್ಯಮಂತ್ರಿಗಳು, ಸಚಿವರು ಸೇರಿದಂತೆ ಪಕ್ಷದ ನಾಯಕರು ಕೋಮು ಭಾವನೆ ಕೆರಳಿಸುವಂತಹ ಹೇಳಿಕೆಗಳನ್ನು ನೀಡಿ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ತಮ್ಮ ಅವಧಿಯಲ್ಲಿ ಸಿಬಿಐಗೆ ಐದು ಪ್ರಕರಣ ಒಪ್ಪಿಸಿದ್ದೆ: ಸಂವಾದದ ವೇಳೆ ಸಿದ್ದರಾಮಯ್ಯ ಅವರು ತಮ್ಮ ಸರ್ಕಾರವಿದ್ದಾಗ, ತಾವು ಸಿಎಂ ಆಗಿ ಕೈಗೊಂಡ ಜನಪರ ಕಾರ್ಯಕ್ರಮಗಳ ಬಗ್ಗೆ ವಿವರಿಸಿದರು. ಭ್ರಷ್ಟಾಚಾರದ ಸುಳಿವು ಸಿಕ್ಕಿದ್ದರಿಂದ ಐದು ಪ್ರಕರಣಗಳನ್ನು ಸಿಬಿಐಗೆ ವಹಿಸಿದ್ದೇನೆ. ಬಿಜೆಪಿ ಸರ್ಕಾರವೂ ಅದೇ ರೀತಿ ಮಾಡುವ ಧೈರ್ಯ ತೋರಲಿ ಎಂದು ಸಿದ್ದರಾಮಯ್ಯ ಸವಾಲು ಹಾಕಿದರು.

ಆರೋಪಗಳ ತನಿಖೆಗೆ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸಬೇಕೆಂಬ ಬೇಡಿಕೆಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಒಪ್ಪಿಕೊಳ್ಳದಿದ್ದರೆ ಜನತಾ ನ್ಯಾಯಾಲಯದ ಮೊರೆ ಹೋಗುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದರು.

ನ್ಯಾಯಾಂಗ ತನಿಖೆಯನ್ನು ನಿರಾಕರಿಸುವ ಮೂಲಕ, ಸರ್ಕಾರವು ಭ್ರಷ್ಟಾಚಾರವನ್ನು ಒಪ್ಪಿಕೊಳ್ಳುತ್ತಿದೆ. ಭ್ರಷ್ಟಾಚಾರದಲ್ಲಿ ಭಾಗಿಯಾಗಿಲ್ಲದಿದ್ದರೆ, ನೀವು ತನಿಖೆಗೆ ಏಕೆ ಹೆದರುತ್ತೀರಿ? ಸಾಕ್ಷಿ ಇಲ್ಲ ಎಂದು ಹೇಳಿ ನುಣುಚಿಕೊಳ್ಳುವ ಪ್ರಯತ್ನ ಏಕೆ? ಎಂದು ಪ್ರಶ್ನಿಸಿದ ಅವರು, ಗುತ್ತಿಗೆದಾರರು ತಮ್ಮ ಬಳಿ ಹಲವು ದಾಖಲೆಗಳಿವೆ ಎಂದು ಹೇಳುತ್ತಿದ್ದಾರೆ. ಹಾಗಾಗಿ ನ್ಯಾಯಾಂಗ ತನಿಖೆಗೆ ಸಮಿತಿ ರಚಿಸಿದರೆ ಸಾಕ್ಷ್ಯಗಳನ್ನು ಒದಗಿಸಲು ಸಿದ್ಧ ಎಂದು ಗುತ್ತಿಗೆದಾರರೇ ಹೇಳುತ್ತಿದ್ದಾರೆ. ಅಂದ ಮೇಲೆ ಇವರಿಗೆ ಹೆದರಿಕೆ ಏಕೆ ಎಂದು ಪ್ರಶ್ನಿಸಿದರು. ಸಂವಾದದ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ನಗರ ಉಪಾಧ್ಯಕ್ಷ ಅನುರಾಗ್ ಬಸವರಾಜ್, ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ನಗರ ಕಾರ್ಯದರ್ಶಿ ರಂಗಸ್ವಾಮಿ ಉಪಸ್ಥಿತರಿದ್ದರು.

ಶಿಕ್ಷಣ ಇಲಾಖೆಯಲ್ಲೂ 50% ಲಂಚ: ಸಚಿವ ನಾಗೇಶ್ ವಜಾಗೊಳಿಸಲು ಪ್ರಧಾನಿ ಮೋದಿಗೆ ರುಪ್ಸಾ ಮನವಿ

ಬೆಂಗಳೂರು: ಶಿಕ್ಷಣ ಇಲಾಖೆಯಲ್ಲಿ ಭ್ರಷ್ಟಾಚಾರ ಹೆಚ್ಚಾಗುತ್ತಿದ್ದು, ಲಂಚದ ವ್ಯಾಪ್ತಿ ಶೇ.40–50 ರಷ್ಟು ಹೆಚ್ಚಾಗಿದೆ. ಡಿಡಿಪಿಐಗಳು ನೇರವಾಗಿ ಲಂಚ ಕೇಳುತ್ತಿದ್ದಾರೆ. ಇದರ ಆಡಿಯೋ ರೆಕಾರ್ಡ್ ಸಹ ಇದೆ ಡಿಡಿಪಿಐಗೆ 20 %, ಬಿಇಒಗೆ 25% ಅಂತ ಕಮಿಷನ್ ತಗೋತಾರೆ.



ನಾಗೇಶ್ ತಾಳಿಕಟ್ಟೆ

ಇಲಾಖೆಯ ಬಹುತೇಕ ಕೆಲಸಗಳಿಗೆ ಆನ್‌ಲೈನ್ ವ್ಯವಸ್ಥೆ ಇಲ್ಲ. ಆನ್‌ಲೈನ್ ವ್ಯವಸ್ಥೆ ತನ್ನಿ ಅಂದ್ರೂ ಅಧಿಕಾರಿಗಳು ಸುಮ್ಮನಿದ್ದಾರೆ. ಆನ್‌ಲೈನ್ ವ್ಯವಸ್ಥೆ ಇಲ್ಲದೆ ಅಧಿಕಾರಿಗಳು ಲಂಚ ಬಾಕರಾಗುತ್ತಿದ್ದಾರೆ ಎಂದು ಖಾಸಗಿ ಶಾಲೆಗಳ ಒಕ್ಕೂಟದ (ರುಪ್ಸಾ) ರಾಜ್ಯಾಧ್ಯಕ್ಷ ಲೋಕೇಶ್ ತಾಳಿಕಟ್ಟೆ ದೂರಿದ್ದಾರೆ. ಶಾಸಕರ ಭವನದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿಗೆ ಪತ್ರ: ಈ ಕುರಿತಾಗಿ ರುಪ್ಸಾ ಸಂಘಟನೆ 8 ಅಂಶಗಳನ್ನು ಉಲ್ಲೇಖ ಮಾಡಿ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದು, ಆರ್.ಆರ್ ನೀಡಲು ಲಕ್ಷಾಂತರ ರೂ. ಲಂಚ ಪಡೆಯುತ್ತಿರುವ ಆರೋಪ ಮಾಡಿದ್ದು, ಪ್ರತೀ 10 ವರ್ಷಕ್ಕೊಮ್ಮ ಮಾನ್ಯತೆ ನವೀಕರಣ ಎಂದು ಹೈಕೋರ್ಟ್ ಹೇಳಿದೆ. ಆದರೆ ಪ್ರತಿ ವರ್ಷವೂ ಆರ್.ಆರ್. ಪಡೆಯಬೇಕೆಂದು ಶಿಕ್ಷಣ ಇಲಾಖೆ ಹೇಳುತ್ತಿದೆ. 2020 ರಿಂದ ಕಳೆದ 2 ವರ್ಷದಿಂದ ಲಂಚ ಪಡೆಯುವ ಅಧಿಕಾರಿಗಳ ಸಂಖ್ಯೆ ಹೆಚ್ಚಾಗಿದೆ ಎಂದು ದೂರಿದರು.



ನಾಗೇಶ್

ಶಿಕ್ಷಣ ಸಚಿವ ಬಿ.ಸಿ. ನಾಗೇಶ್ ವಿರುದ್ಧ ಆರೋಪಗಳೇನು: ಶಾಲೆ ಮಾನ್ಯತೆ ನವೀಕರಣ ಮಾಡಲು ಲಕ್ಷಾಂತರ ರೂಪಾಯಿ ಲಂಚ ನೀಡಬೇಕು. ಲಂಚಕ್ಕಾಗಿಯೇ ಹೊಸ ಮಾರ್ಗಗಳ ಅನ್ವೇಷಣೆ ಮಾಡಲಾಗಿದೆ. RTE ಶುಲ್ಕ ಮರುಪಾವತಿ ಮಾಡಲು 30% ರಿಂದ 50% ವರೆಗೂ ಲಂಚ ಕೊಡಬೇಕು. ಅನ್ಯ ಪಠ್ಯಕ್ರಮ ಅನುಸರಿಸಲು NOC ಪಡೆಯಲು 15 ಲಕ್ಷದವರೆಗೂ ಲಂಚ ಪಡೆಯಲಾಗುತ್ತಿದೆ. ದಾಖಲೆಗಳ ನೆಪದಲ್ಲಿ ತಿಂಗಳಿಗೊಮ್ಮ ಮಾಮೂಲಿ ವಸೂಲಿ ಮಾಡಲಾಗುತ್ತಿದೆ. ವರ್ಷಕ್ಕೊಮ್ಮೆ ಅಧಿಕಾರಿಗಳ ವರ್ಗಾವಣೆ ಮಾಡಬೇಕು ಅಂದರೆ ಲಂಚ ಕೊಡಬೇಕು. ಸರ್ಕಾರಿ ಶಾಲೆಗಳನ್ನು ಶಿಕ್ಷಣ ಸಚಿವರು ಮರೆತಿದ್ದಾರೆ. ಮಕ್ಕಳಿಗೆ ಶೂ ಸಾಕ್ಸ್ ನೀಡಿಲ್ಲ, ಸೈಕಲ್ ನೀಡಿಲ್ಲ ಇದ್ಯಾವುದಕ್ಕೂ ಸಚಿವರು ತಲೆ ಕೆಡಿಸಿಕೊಂಡಿಲ್ಲ. ಧಾರ್ಮಿಕ ಸೂಕ್ಷ್ಮ ವಿಚಾರಗಳಲ್ಲಿ ವಿದ್ಯಾರ್ಥಿಗಳ ಮನಸ್ಸು ಕಲುಷಿತಗೊಳಿಸಿದ್ದಾರೆ ಎಂದು ರುಪ್ಸಾ ನೇರವಾಗಿ ಶಿಕ್ಷಣ ಸಚಿವ ನಾಗೇಶ್ ಮೇಲೆ ಆರೋಪ ಮಾಡಿದ್ದಾರೆ. ಈ ಎಲ್ಲಾ ಆರೋಪಗಳ ಜತೆಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲೂಕಿನ ಬಿಇಓ ಖಾಸಗಿ ಶಾಲೆ ಆಡಳಿತ ಮಂಡಳಿ ಬಳಿ ಲಂಚ ಕೇಳಿದ್ದಾರೆ ಎನ್ನಲಾದ ಆಡಿಯೋ ಇದೀಗ ವೈರಲ್ ಆಗಿದ್ದು, ಶಿಕ್ಷಣ ಇಲಾಖೆಯನ್ನು ಇನ್ನಷ್ಟು ಮುಜುಗರಕ್ಕೀಡು ಮಾಡಿದೆ.

ಶಿಕ್ಷಣ ಸಚಿವ ನಾಗೇಶ್ ವಜಾಗೊಳಿಸುವಂತೆ ಪ್ರಧಾನಿಗೆ ಮನವಿ: ಶಿಕ್ಷಣ ಇಲಾಖೆಯಲ್ಲಿ ಪ್ರತಿಯೊಂದು ಕೆಲಸಕ್ಕೂ ಇಂತಿಷ್ಟು ಲಂಚ ಫಿಕ್ಸ್ ಆಗಿದೆ. ಲಂಚ ಇಲ್ಲದೆ ಶಿಕ್ಷಣ ಅಧಿಕಾರಿಗಳು ಯಾವುದೇ ಕೆಲಸ ಮಾಡಲ್ಲ. ಶಿಕ್ಷಣ ಸಚಿವರ ಗಮನಕ್ಕೆ ತಂದರೂ ಯಾವುದೇ ಪ್ರಯೋಜನ ಆಗಿಲ್ಲ. ಅಧಿಕಾರಿಗಳ ವಿರುದ್ಧ ಯಾವುದೇ ಕ್ರಮ ಆಗಿಲ್ಲ. ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಈ ವಿಚಾರದಲ್ಲಿ ವಿಫಲರಾಗಿದ್ದಾರೆ. ಕೂಡಲೇ ಸಂಪುಟದಿಂದ ಶಿಕ್ಷಣ ಸಚಿವರನ್ನು ಕೈಬಿಡುವಂತೆ ಆಗ್ರಹಿಸಲಾಗಿದೆ.

ಮೂರನೇ ಬಾರಿ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆಯುತ್ತಿದ್ದೇವೆ. ಶೋಕಿ ಮಾಡೋರನ್ನು ಶಿಕ್ಷಣ ಸಚಿವರನ್ನಾಗಿ ಮಾಡಿದ್ದಾರೆ. ವಜಾಗೊಳಿಸದಿದ್ದರೆ ಕಾನೂನಾತ್ಮಕ ಹೋರಾಟ ಮಾಡುತ್ತೇವೆ ಎಂದು ರುಪ್ಸಾ ಸಂಘಟನೆ ರಾಜ್ಯಾಧ್ಯಕ್ಷ ಲೋಕೇಶ್ ತಾಳಿಕಟ್ಟೆ ಎಚ್ಚರಿಕೆ ನೀಡಿದರು.

ಸೆಪ್ಟೆಂಬರ್‌ನಲ್ಲಿ ರೈತ ಶಕ್ತಿ ಯೋಜನೆ ಜಾರಿ

ರೈತರಿಗೆ ಪ್ರತಿ ಎಕರೆಗೆ 250ರೂ. ಡೀಸೆಲ್ ಸಹಾಯ ಧನ

ಬೆಂಗಳೂರು, ಆ. 26(ಕೆಎಂಶಿ)–ಕೃಷಿ ಚಟುವಟಿಕೆಯಲ್ಲಿ ಯಂತ್ರೋಪಕರಣಗಳನ್ನು ಪ್ರೋತ್ಸಾಹಿಸಿ ಇಂಧನ ವೆಚ್ಚದ ಹೊರೆ ಕಡಿಮೆ ಮಾಡುವ ರೈತ ಶಕ್ತಿ ಯೋಜನೆ ಸೆಪ್ಟೆಂಬರ್‌ನಿಂದ ಜಾರಿಗೊಳ್ಳಲಿದೆ. ಕೃಷಿ ಸಚಿವ ಬಿ.ಸಿ. ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದ್ದು, ಈ ಯೋಜನೆಯಿಂದ ರೈತರಿಗೆ ಪ್ರತಿ ಎಕರೆಗೆ 250 ರೂ.ನಂತೆ ಗರಿಷ್ಠ ಐದು ಎಕರೆವರೆಗೂ ಡೀಸೆಲ್ ಸಹಾಯಧನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪ್ರಸಕ್ತ ಸಾಲಿನ ಮುಂಗಡ ಪತ್ರದಲ್ಲಿ ರೈತ ಶಕ್ತಿ ಯೋಜನೆ ಪ್ರಸ್ತಾಪ ಮಾಡಿದ್ದರು. ಇದೀಗ ಇಲಾಖೆ ಅದನ್ನು ಅನುಷ್ಠಾನಗೊಳಿಸಿ, ರೈತರ ನೆರವಿಗೆ ಸರ್ಕಾರ ಮುಂದಾಗಿದೆ. ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರ ಆದೇಶ ಹೊರಡಿಸಿದ್ದು, ರೈತರಿಗೆ ಕೃಷಿ ಇಲಾಖೆಯ ಎಲ್ಲಾ ಯೋಜನೆಗಳನ್ನು ಪ್ರೂಟ್ಸ್ ಪೋರ್ಟಲ್ ಮೂಲಕ ನೋಂದಣಿ ಗುರುತಿನ ಸಂಖ್ಯೆ ಬಳಸಿ, ಕಿಸಾನ್ ತಂತ್ರಾಂಶದ ಮೂಲಕವೇ ಅನುಷ್ಠಾನ ಮಾಡಲಾಗುತ್ತಿದೆ.



ಅದೇ ರೀತಿಯಲ್ಲಿ ಈ ಪೋರ್ಟಲ್‌ನಲ್ಲಿ ನೋಂದಣಿಗೊಂಡ ಎಲ್ಲಾ ರೈತರಿಗೆ ಶಕ್ತಿ ಯೋಜನೆಯನ್ನು ಕಿಸಾನ್ ತಂತ್ರಾಂಶ ಬಳಸಿಕೊಂಡು, ನೇರ ಹಣ ವರ್ಗಾವಣೆ ಮೂಲಕವೇ ಯೋಜನೆ ಅನುಷ್ಠಾನ ಮಾಡಲಾಗುವುದು.

ಕ್ರಾಫರ್ಡ್ ಹಾಲ್, ಮಾನಸಗಂಗೋತ್ರಿ, ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ನೆಲೆಗೊಳ್ಳಲಿದೆ ದಸರಾ ಸಸ್ಯಕಾಶಿ

ಕಣ್ಮನ ಸೆಳೆಯುವ ನಾನಾ ರೀತಿಯ ಫಲ–ಪುಷ್ಪ ರಾಶಿ ಆಯೋಜನೆಗೆ ಸಿದ್ಧತೆ



ಕೊರೊನಾ ಹಾವಳಿಯಿಂದಾಗಿ 2 ವರ್ಷ ಮೈಸೂರು ವಿವಿಯಿಂದ ಫಲಪುಷ್ಪ ಪ್ರದರ್ಶನ ಆಯೋಜಿಸಲು ಸಾಧ್ಯವಾಗಿರಲಿಲ್ಲ. ಈ ವರ್ಷ ಅದ್ದೂರಿಯಾಗಿ ಫಲಪುಷ್ಪ ಪ್ರದರ್ಶನ ನಡೆಯಲಿದ್ದು, ಮೈಸೂರಿಗರು ಹಲವು ಹೂಗಳನ್ನು ವೀಕ್ಷಣೆ ಮಾಡಬಹುದಾಗಿದೆ.

– ಎಸ್.ಕೆ.ಮುಜಾವರ್, ಮೈಸೂರು ವಿವಿ ತೋಟಗಾರಿಕೆ ವಿಭಾಗದ ಸಹಾಯಕ ನಿರ್ದೇಶಕ

ಮೈಸೂರು, ಆ.26(ಎಂಕೆ)–ನಾಡಹಬ್ಬ ದಸರಾ ಮಹೋತ್ಸವದ ಅಂಗವಾಗಿ ಮೈಸೂರು ವಿವಿ ಕಾರ್ಯಸೌಧ (ಕ್ರಾಫರ್ಡ್ ಹಾಲ್), ಮಾನಸ ಗಂಗೋತ್ರಿ ಹಾಗೂ ವಾಯು ವಿಹಾರಿಗಳ ನೆಚ್ಚಿನ ಕುಕ್ಕರಹಳ್ಳಿ ಕೆರೆಯ ಆವರಣದಲ್ಲಿ ವಿವಿಧ ಬಗೆಯ 10 ಸಾವಿರ ಹೂ ಹಾಘೂ ಹಣ್ಣು–ತರಕಾರಿ ಗಿಡಗಳು ನೋಡುಗರ ಕಣ್ಮನ ಸೆಳೆಯಲು ಸಿದ್ಧವಾಗುತ್ತಿವೆ.

ಎರಡು ವರ್ಷದ ಬಳಿಕ ಮೈಸೂರು ವಿವಿ ತೋಟಗಾರಿಕೆ ವಿಭಾಗದ ವತಿಯಿಂದ 'ಫಲಪುಷ್ಪ ಪ್ರದರ್ಶನ' ನಡೆಸಲು ಸಿದ್ಧತೆ ನಡೆಸಲಾಗಿದೆ. ಹಚ್ಚ ಹಸಿರಿನ ಮಾನಸ ಗಂಗೋತ್ರಿಯ ಎಲ್ಲಾ ಅಧ್ಯಯನ ವಿಭಾಗಗಳ ಎದುರು, ಕ್ರಾಫರ್ಡ್ ಹಾಲ್ ಮುಂಭಾಗ, ಕುಕ್ಕರಹಳ್ಳಿ ಕೆರೆಯಲ್ಲಿರುವ ಕುವೆಂಪು ವನ ಹಾಗೂ ಮುಖ್ಯ ದ್ವಾರದಲ್ಲಿ ಬಣ್ಣ ಬಣ್ಣದ ಹೂ ಗಳು ಕಂಗೊಳಿಸಲಿವೆ. ಕುಕ್ಕರಹಳ್ಳಿ ಕೆರೆಯ ಕುವೆಂಪು ವನ ಹಾಗೂ ಮುಖ್ಯ ದ್ವಾರದಲ್ಲಿ 6 ಸಾವಿರ, ಮಾನಸ ಗಂಗೋತ್ರಿ ಹಾಗೂ ಕ್ರಾಫರ್ಡ್ ಹಾಲ್ ಎದುರು 4 ಸಾವಿರ ಹೂ ಗಿಡಗಳನ್ನು ಅಲಂಕರಿಸಲಾಗುವುದು. ಹೂ ಗಿಡಗಳ ಜೊತೆಗೆ ಹಣ್ಣು–ತರಕಾರಿ ಗಿಡಗಳನ್ನು ಪ್ರದರ್ಶಕ್ಕಿಡಲಾಗುವುದು. ಅಲ್ಲದೆ ವಿಶೇಷ ಹಾಗೂ ಅಪರೂಪದ ಹೂಗಳ ಬಗ್ಗೆ ಮಾಹಿತಿಯನ್ನು ನೀಡುವ ಮೂಲಕ ಅರಿವು ಮೂಡಿಸಲಾಗುವುದು ಎಂದು ಮೈಸೂರು ವಿವಿ ತೋಟಗಾರಿಕೆ ವಿಭಾಗದ ಸಹಾಯಕ ನಿರ್ದೇಶಕ ಎಸ್.ಕೆ.ಮುಜಾವರ್ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

20–30 ಬಗೆಯ ಹೂ ಗಿಡಗಳು: ಫ್ರೆಂಚ್ ಮೇರಿ ಗೋಲ್ಡ್, ಡಯಾಂತರ್ಸ್, ವರ್ಬಿನ, ಬಿಗೋನಿಯಾ, ದಾಲಿಯಾ, ಫೈರ್ ಬುಸ್, ಆರ್ನಮೆಂಟಲ್ ಕೇಲಾ, ಜೀನಿಯಾ, ವಿಂಕಾ, ಸಾಲ್ವಿಯಾ, ಮಾರಿಗೋಲ್ಡ್, ಸ್ವೀಟ್ ವಿಲಿಯಮ್, ಸೆಲೋಶಿಯಾ ಸೇರಿದಂತೆ 25–30ಕ್ಕೂ ಹೆಚ್ಚು ತಳಿಯ ಗಿಡಗಳನ್ನು ಬೆಳೆಸಲಾಗುತ್ತಿದೆ. ಕೆಲ ಹೈಬ್ರಿಡ್ ಗಿಡಗಳನ್ನು ಪೂನಾ ದಿಂದ ತರಿಸಲಾಗಿದೆ. ಬಹುತೇಕ ಹೂ ಗಿಡಗಳನ್ನು ನಾವುಗಳೇ ಬೆಳೆಯುತ್ತಿದ್ದೇವೆ ಎಂದು ತಿಳಿಸಿದರು.

ದಸರಾ ಉದ್ಘಾಟನೆ ದಿನದಂದೇ ಚಾಲನೆ: ಪ್ರತಿ ವರ್ಷದಂತೆ ನಾಡಹಬ್ಬ ದಸರಾ ಉದ್ಘಾಟನೆಯ ದಿನದಂದೇ ಮೈಸೂರು ವಿವಿಯ ಫಲಪುಷ್ಪ ಪ್ರದರ್ಶನಕ್ಕೂ ಚಾಲನೆ ನೀಡಲಾಗುವುದು. ವಿವಿ ಕುಲಪತಿಗಳು ಉದ್ಘಾಟಿಸಲಿದ್ದು, ವಿಜಯದಶಮಿ ದಿನದವರೆಗೂ ಪ್ರದರ್ಶನವಿರಲಿದೆ. ಪ್ರವಾಸಿಗರು, ವಾಯುವಿಹಾರಿಗಳು ಸೇರಿದಂತೆ ಎಲ್ಲರಿಗೂ ಮುಕ್ತ ಅವಕಾಶವಿದ್ದು, ಯಾವುದೇ ಪ್ರವೇಶ ಶುಲ್ಕವಿರುವುದಿಲ್ಲ ಎಂದರು.

38 ವಿಭಾಗಗಳೂ ಭಾಗಿ: ದಸರಾ ಅಂಗವಾಗಿ ತೋಟಗಾರಿಕೆ ಇಲಾಖೆ ಆಯೋಜಿಸುವ ಫಲಪುಷ್ಪ ಪ್ರದರ್ಶನ ಸ್ಪರ್ಧೆಯಲ್ಲಿ ಮೈಸೂರು ವಿವಿಯ 38 ವಿಭಾಗಗಳು ಭಾಗವಹಿಸಲಿದೆ. ಎಲ್ಲಾ ವಿಭಾಗಗಳಿಗೂ ಹೂ ಗಿಡಗಳನ್ನು ಪೂರೈಸಲಾಗುವುದು. ಈ ನಿಟ್ಟಿನಲ್ಲಿ ಈಗಾಗಲೇ ಕುಕ್ಕರಹಳ್ಳಿ ಕೆರೆ ಸುತ್ತಲು ಹಾಗೂ ಕುವೆಂಪು ವನದ ಬಳಿ ಸ್ವಚ್ಛತಾ ಕಾರ್ಯ ಆರಂಭಿಸಿದ್ದೇವೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದಲ್ಲಿ ನಿಮ್ಮ ಕೊಡುಗೆ ಏನು?

ಬಿಜೆಪಿಗೆ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ತಿರುಗೇಟು



ಮೈಸೂರು, ಆ.26(ಆರ್‌ಕೆಬಿ)– ದೇಶಕ್ಕೆ ಕಾಂಗ್ರೆಸ್ ಕೊಡುಗೆ ಏನು ಎಂಬ ಬಿಜೆಪಿಯವರ ಪ್ರಶ್ನೆಗೆ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ತಿರುಗೇಟು ನೀಡಿದ್ದು, ಮೊದಲು ಬಿಜೆಪಿಯವರು ಸ್ವಾತಂತ್ರ್ಯ ಹೋರಾಟದಲ್ಲಿ ತಮ್ಮ ಕೊಡುಗೆ ಏನು ಎಂಬ ಬಗ್ಗೆ ಮನನ ಮಾಡಿಕೊಳ್ಳಬೇಕು. ಸ್ವಾತಂತ್ರ್ಯ ತಂದುಕೊಟ್ಟವರನ್ನು ಪ್ರಶ್ನಿಸುವ ಬಿಜೆಪಿಯವರು ಸ್ವಾತಂತ್ರ್ಯಕ್ಕೆ ಯಾವುದೇ ಕೊಡುಗೆ ನೀಡಿಲ್ಲ. ಕಾಂಗ್ರೆಸ್‌ನ ಕೊಡುಗೆ ಬಗ್ಗೆ ಪ್ರಶ್ನಿಸುವ ನೈತಿಕತೆ ಅವರಿಗಿಲ್ಲ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಮೈಸೂರು ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಶಾಪವಾಗಿದ್ದ ಅಸ್ಪೃಶ್ಯತೆ ನಿವಾರಣೆ ಮಾಡಲು ಮಹಾತ್ಮ ಗಾಂಧಿ ಮತ್ತು ಕಾಂಗ್ರೆಸ್ ಶ್ರಮಿಸಿದೆ. ಆದರೆ ಬಿಜೆಪಿಯವರು ಬರೀ ಸುಳ್ಳನ್ನೇ ಅಸ್ತ್ರವಾಗಿಸಿಕೊಂಡು ಅನಗತ್ಯವಾಗಿ ಕಾಂಗ್ರೆಸ್ ಹಾಗೂ ಕಾಂಗ್ರೆಸ್ ನಾಯಕರ ಬಗ್ಗೆ ಟೀಕಾ ಪ್ರಹಾರದಲ್ಲಿ ತೊಡಗಿದ್ದಾರೆ. ಸುಳ್ಳು ಸುಳ್ಳು ಅಪಪ್ರಚಾರ ಮಾಡುತ್ತಾ, ಜಾತಿ, ಧರ್ಮಗಳ ನಡುವೆ ಕೋಮು ಭಾವನೆ ಕೆರಳಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು, ಸಿದ್ದರಾಮಯ್ಯ ಅವರು ಎಲ್ಲಾ ವರ್ಗದ ಜನರಿಗಾಗಿ ಹಲವಾರು ಜನಪರ ಯೋಜನೆ, ಕಾರ್ಯಕ್ರಮಗಳನ್ನು ನೀಡಿದ್ದಾರೆ. ಬಡವರ್ಗದವರಿಗಾಗಿ ಮನೆಗಳನ್ನು ನಿರ್ಮಿಸಿಕೊಟ್ಟಿದ್ದಾರೆ. ಆದರೆ ಬಿಜೆಪಿಯವರು ಬಡವರಿಗಾಗಿ ಏನು ಮಾಡಿದ್ದಾರೆ ಎಂದು ಪ್ರಶ್ನಿಸಿದ ಅವರು, ಬಿಜೆಪಿಯವರಿಗೆ ಬಡಜನರ ಬಗ್ಗೆ ಕಾಳಜಿ ಇಲ್ಲವೆಂಬುದು ಇದರಿಂದಲೇ ಗೊತ್ತಾಗುತ್ತದೆ ಎಂದರು.

ಬಿಜೆಪಿ ಸರ್ಕಾರದ ಸಾಧನೆ ಮತ್ತು ಕಾಂಗ್ರೆಸ್ ಸರ್ಕಾರದ ಸಾಧನೆಗಳ ಬಗ್ಗೆ ಬನ್ನಿ ಕುಳಿತು ಚರ್ಚಿಸೋಣ ಎಂದರು.

ಸಂಸದ ಪ್ರತಾಪಸಿಂಹ ವಿರುದ್ಧ ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರನಾಥ್ ಹೇಳಿಕೆಗೆ

ಬಿಜೆಪಿ ಯುವ ಮೋರ್ಚಾ ಖಂಡನೆ



ಮೈಸೂರು, ಆ.26(ಆರ್‌ಕೆಬಿ)– ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಹಾಗೂ ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪ ಅಮರನಾಥ್ ಅವರು ಸಂಸದ ಪ್ರತಾಪಸಿಂಹ ಅವರ ತೇಜೋವಧೆ ಮಾಡುವಂತೆ ಹೇಳಿಕೆ ನೀಡಿದ್ದಾರೆಂದು ಬಿಜೆಪಿ ಯುವ ಮೋರ್ಚಾ ಖಂಡಿಸಿದೆ.

ಮೈಸೂರು ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ಯುವ ಮೋರ್ಚಾ ಮೈಸೂರು ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಪ್ರತಾಪ್‌ಸಿಂಹ ಕಾಂಗ್ರೆಸ್ ಪಕ್ಷದ ವೈಚಾರಿಕತೆ–ಆಚಾರ ವಿಚಾರಗಳ ಬಗ್ಗೆ ಮಾತನಾಡುತ್ತಿರುವುದಕ್ಕೆ ಪ್ರತಿಕ್ರಿಯೆ ನೀಡುವುದೇ ಆದರೆ ಆ ವಿಚಾರವಾಗಿ ಮಾತನಾಡಬೇಕೇ ಹೊರತು ವೈಯಕ್ತಿಕ ತೇಜೋವಧೆ ಮಾಡುವ ಹೇಳಿಕೆ ನೀಡಬಾರದು ಎಂದು ಎಚ್ಚರಿಸಿದರು.

ಸಂಸದ ಪ್ರತಾಪ್‌ಸಿಂಹ ಅವರು ಯಾವುದೇ ಹೇಳಿಕೆ ನೀಡಿದರೂ ಪಕ್ಷಕ್ಕೆ ಸಂಬಂಧಿಸಿದ ಹೇಳಿಕೆಯೇ ಹೊರತು ವೈಯಕ್ತಿಕ ಹೇಳಿಕೆಗಳಲ್ಲ. ಯಾವುದೇ ವ್ಯಕ್ತಿಯ ಬಗ್ಗೆ ವೈಯಕ್ತಿಕ ಹೇಳಿಕೆಯನ್ನು ನೀಡಿಲ್ಲ. ಇದನ್ನು ಸರಿಯಾಗಿ ಅರಿಯದ ಕಾಂಗ್ರೆಸ್‌ನವರು ಬಿಜೆಪಿ ಹಾಗೂ ಸಂಸದರ ವಿರುದ್ಧ ಅವಹೇಳನಕರವಾಗಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡುತ್ತಿರುವುದನ್ನು ಬಿಜೆಪಿ ಸಹಿಸುವುದಿಲ್ಲ. ಪುಷ್ಪಾ ಅಮರನಾಥ್ ಸಾಧನೆಯನ್ನು ಹೇಳಿಕೊಳ್ಳಲಿ. ಅದು ಬಿಟ್ಟು ನಿಮ್ಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಬಾಯಿಗೆ ಬಂದಂತೆ ಮಾತನಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಬಿಜೆಪಿ ಜನಸಾಮಾನ್ಯರಿಗಾಗಿ ಇರುವ ಪಕ್ಷ. ಇಲ್ಲಿ ವ್ಯಕ್ತಿ ಪೂಜೆ ಇಲ್ಲ. 2023ರಲ್ಲಿ ಅಷ್ಟೇ ಅಲ್ಲ, 2028ರಲ್ಲೂ ಬಿಜೆಪಿಯೇ ಅಧಿಕಾರಕ್ಕೆ ಬರುತ್ತದೆ. ಬಿಜೆಪಿ ಜನಪರ ಕೆಲಸ ಮಾಡಿದೆ. ಹೀಗಾಗಿ ಜನ ಮುಂದೆಯೂ ಬಿಜೆಪಿಯನ್ನು ಆಶೀರ್ವದಿಸಲಿದ್ದಾರೆ ಎಂದರು.

ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ವಿ.ಸೋಮಸುಂದರ್ ಮಾತನಾಡಿ, ಬಿಜೆಪಿ, ಸಿದ್ದರಾಮಯ್ಯರ ವೈಚಾರಿಕ ಭ್ರಷ್ಟತೆಯನ್ನು ಖಂಡಿಸುತ್ತಿದೆಯೇ ಹೊರತು ವೈಯಕ್ತಿಕ ತೇಜೋವಧೆ ಮಾಡುತ್ತಿಲ್ಲ ಎಂಬುದನ್ನು ಪುಷ್ಪಾ ಅಮರನಾಥ್ ಅರಿತುಕೊಳ್ಳಬೇಕು. ಸಮಾಜವಾದಿಯಾಗಿ ಸಿದ್ದರಾಮಯ್ಯನವರು ಕೋಟ್ಯಾಂತರ ರೂ. ಖರ್ಚು ಮಾಡಿ ಸಿದ್ದರಾಮೋತ್ಸವ ಆಚರಿಸಿಕೊಂಡಿದ್ದು ಸಮಾಜವಾದಿ ಲಕ್ಷಣವೇ? ಎಂದು ಪ್ರಶ್ನಿಸಿದರು.

ಪ್ರತಾಪ್ ಸಿಂಹ ವಿರುದ್ಧ ಡಾ|| ಪುಷ್ಪಾ ಅಮರನಾಥ್ ಟೀಕೆಗೆ ಬಿಜೆಪಿ ಮಹಿಳಾ ಮೋರ್ಚಾ ತೀವ್ರ ಆಕ್ಷೇಪ

ವೈಯಕ್ತಿಕ ವಿಚಾರ ಬಿಟ್ಟು ಅಭಿವೃದ್ಧಿ ವಿಚಾರ ಪ್ರಸ್ತಾಪಿಸಲು ಆಗ್ರಹ



ಮೈಸೂರು,ಆ.26(ಎಂಟಿವೈ)– ತಮ್ಮ ಪಕ್ಷದ ನಾಯಕರನ್ನು ಓಲೈಸಿಕೊಳ್ಳಲು ಮಹಿಳಾ ಕಾಂಗ್ರೆಸ್ ರಾಜ್ಯಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಕೀಳು ಮಟ್ಟದ ರಾಜಕೀಯ ಮಾಡುತ್ತಿದ್ದಾರೆ ಎಂದು ಬಿಜೆಪಿ ಮಹಿಳಾ ಮೋರ್ಚಾ ನಗರಾಧ್ಯಕ್ಷೆ ಹೇಮಾ ನಂದೀಶ್ ಆರೋಪಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಪಕ್ಷದ ಇತರ ಮುಖಂಡರ ಓಲೈಕೆಗೆ ಪುಷ್ಪಾ ಹರಸಾಹಸ ಮಾಡುತ್ತಿದ್ದಾರೆ. ಸಂಸದ ಪ್ರತಾಪ ಸಿಂಹ ಅವರನ್ನು ಏಕವಚನದಲ್ಲಿ ಟೀಕಿಸಿದ್ದಾರೆ. ಮುಂಬರುವ ವಿಧಾನಸಭೆ ಚುನಾವಣೆಗೆ ಹುಣಸೂರು ಕ್ಷೇತ್ರದ ಮೇಲೆ ಪುಷ್ಪಾ ಅಮರನಾಥ್ ಕಣ್ಣಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕರ ಗಮನ ಸೆಳೆಯಲು ಬಿಜೆಪಿ ನಾಯಕರ ಮೇಲೆ ಅನಗತ್ಯ ಟೀಕೆ ಮಾಡುತ್ತಿದ್ದಾರೆ ಎಂದು ದೂರಿದರು.

ಪ್ರತಾಪ್ ಸಿಂಹ ಪಬ್ ಸಂಸ್ಕೃತಿಯಲ್ಲಿ ಮುಳುಗಿದ್ದಾರೆ ಎಂದು ಪುಷ್ಪಾ ಅಮರನಾಥ್ ಟೀಕಿಸಿರುವುದು ಖಂಡನೀಯ. ಬಿಜೆಪಿಗೆ ಪಬ್ ಸಂಸ್ಕೃತಿ ಬಗ್ಗೆ ತಿಳಿದಿಲ್ಲ. ಪಬ್ ಸಂಸ್ಕೃತಿ ಬಗ್ಗೆ ಹೇಳುವುದಾದರೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಕುರಿತು ನಾವು ಮಾತನಾಡಬೇಕಾಗುತ್ತದೆ. ಬೆಂಗಳೂರಿನಲ್ಲಿರುವ 'ಶುಗರ್ ಫ್ಯಾಕ್ಟರಿ' ಪಬ್ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ದಿ. ರಾಕೇಶ್ ಸಿದ್ದರಾಮಯ್ಯ ಅವರಿಗೆ ಸೇರಿದೆ. ಪಬ್ ಸಂಸ್ಕೃತಿ ಕುರಿತು ಮಾತನಾಡುವ ಪುಷ್ಪಾ ಅಮರ್‌ನಾಥ್ ಇದಕ್ಕೆ ಏನು ಹೇಳುತ್ತಾರೆ? ವೈಯಕ್ತಿಕ ವಿಚಾರ ಮುಂದಿಟ್ಟುಕೊಂಡು ಪ್ರತಾಪ್ ಸಿಂಹ ಅವರನ್ನು ಏಕವಚನದಲ್ಲಿ ಟೀಕೆ ಮಾಡುವುದು ಸರಿಯಲ್ಲ. ಕೂಡಲೇ ಪುಷ್ಪಾ ಅಮರನಾಥ್ ಕ್ಷಮೆಯಾಚಿಸದೆ ಇದ್ದರೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪುಷ್ಪಾ ಅಮರನಾಥ್ ಅಭಿವೃದ್ಧಿ ಕುರಿತು ಮಾತನಾಡದೆ ಕೇವಲ ಟೀಕೆ ಮಾಡುವುದರಲ್ಲಿಯೇ ಕಾಲಾಹರಣ ಮಾಡುತ್ತಿದ್ದಾರೆ. ಅವರು ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾಗಿದ್ದ ಸಂದರ್ಭ ಜಿಲ್ಲೆಯ ಅಭಿವೃದ್ಧಿಗೆ ನೀಡಿದ ಕೊಡುಗೆ ಏನು ಎಂಬುದನ್ನು ಬಹಿರಂಗಪಡಿಸಲಿ ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಗರ ಮಹಿಳಾ ಮೋರ್ಚಾ ಪದಾಧಿಕಾರಿಗಳಾದ ಸರಸ್ವತಿ, ಆಶಾ, ಪದ್ಮಶ್ರೀ, ಪ್ರಮೋದಿನಿ, ಧನಲಕ್ಷ್ಮಿ ಇದ್ದರು.

ಚಿಲ್ಲರೆ ಬೀಡಿ, ಸಿಗರೇಟ್ ವ್ಯಾಪಾರಕ್ಕೂ ಲೈಸೆನ್ಸ್ ಕಡ್ಡಾಯ ಖಂಡಿಸಿ ವ್ಯಾಪಾರಿಗಳ ಪ್ರತಿಭಟನೆ

ಮೈಸೂರು,ಆ.26(ಎಂಟಿವೈ)– ಚಿಲ್ಲರೆ ಬೀಡಿ, ಸಿಗರೇಟ್ ವ್ಯಾಪಾರಕ್ಕೂ ಲೈಸೆನ್ಸ್ ಕಡ್ಡಾಯಗೊಳಿಸಲು ಮುಂದಾಗಿರುವ ಸರ್ಕಾರದ ಕ್ರಮ ಖಂಡಿಸಿ, ಮೈಸೂರಲ್ಲಿ ಕರ್ನಾಟಕ ರಾಜ್ಯ ಸಣ್ಣ ಬೀಡಿ–ಸಿಗರೇಟು ಮಾರಾಟಗಾರರ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗದಿಂದ ಮೆರವಣಿಗೆ ಆರಂಭಿಸಿ, ದೊಡ್ಡಗಡಿಯಾರ, ಮಹಾತ್ಮಗಾಂಧಿ ವೃತ್ತ, ಚಿಕ್ಕಗಡಿ ಯಾರ ವೃತ್ತ ದೇವರಾಜ ಅರಸ್ ರಸ್ತೆಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿ, ಅಲ್ಲಿ ಧರಣಿ ನಡೆಸಿದರು.



ಕರ್ನಾಟಕ ರಾಜ್ಯ ಸಣ್ಣ ಬೀಡಿ–ಸಿಗರೇಟು ಮಾರಾಟಗಾರರ ಸಂಘದ ಅಡಿಯಲ್ಲಿ 50,000ಕ್ಕೂ ಹೆಚ್ಚು ಚಿಲ್ಲರೆ ವ್ಯಾಪಾರಿಗಳು ಜೀವನ ಕಂಡುಕೊಂಡಿದ್ದಾರೆ. ಆದರೆ ಸರ್ಕಾರ ಚಿಲ್ಲರೆ ಮಾರಾಟಕ್ಕೂ ಲೈಸೆನ್ಸ್ ಕಡ್ಡಾಯಗೊಳಿಸಲು ಮುಂದಾಗಿರುವುದು ಖಂಡನೀಯ. ಕೋವಿಡ್, ಲಾಕ್‌ಡೌನ್ ಮತ್ತಿತರೆ ನಿರ್ಬಂಧಗಳಿಂದ ಕಳೆದ ಎರಡು ವರ್ಷದಿಂದ ಸಾಕಷ್ಟು ಆರ್ಥಿಕ ಹಿನ್ನಡೆ ಅನುಭವಿಸಿದ ಲಕ್ಷಾಂತರ ಮಂದಿ ಸಣ್ಣ ವ್ಯಾಪಾರಿಗಳು ಮತ್ತು ಅವರ ಕುಟುಂಬ ಸದಸ್ಯರಿಗೆ ಇದು ವಿನಾಶಕಾರಿಯಾಗಿದೆ. ತಂಬಾಕು ಕಾನೂನುಗಳನ್ನು ಅನುಷ್ಠಾನಕ್ಕೆ ತರುವ ಅಧಿಕಾರಿಗಳಿಂದ ಶೋಷಣೆ ಹೆಚ್ಚಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಾಹಿರಾತು ಮತ್ತು ವ್ಯಾಪಾರ ಹಾಗೂ ವಾಣಿಜ್ಯ, ಉತ್ಪಾದನೆ, ಪೂರೈಕೆ ಮತ್ತು ವಿತರಣೆಯ ನಿಷೇಧ ಕಾಯ್ದೆ ಅನ್ವಯ ನಮ್ಮ ಸದಸ್ಯರು ಈಗಾಗಲೇ ಅಧಿಕಾರಿಗಳಿಂದ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ. ವ್ಯಾಪಾರಸ್ಥರ ಅನಕ್ಷರತೆ ಹಾಗೂ ಅಜ್ಞಾನದ ಲಾಭ ಪಡೆದು ಶೋಷಿಸಲಾಗುತ್ತಿದೆ. ಮಾರಾಟಗಾರರು ಲೈಸೆನ್ಸ್ ಪಡೆಯಬೇಕು. ಪ್ರತಿವರ್ಷ ಲೈಸೆನ್ಸ್ ನವೀಕರಣ ಮಾಡಿಕೊಳ್ಳಬೇಕು. ಚಿಲ್ಲರೆ ವ್ಯಾಪಾರಿಗಳು ಲೈಸೆನ್ಸ್ ಪ್ರದರ್ಶಿಸುವುದು, ಸಲಹಾ ಪುಸ್ತಕ ಇರಿಸುವುದು ಸೇರಿದಂತೆ ವಿವಿಧ ಜವಾಬ್ದಾರಿಗನ್ನು ನೀಡಲಾಗುತ್ತಿದೆ. ಇವುಗಳ ನಿರ್ವಹಣೆಯಲ್ಲಿ ಹಿನ್ನಡೆಯಾದರೆ ಹೆಚ್ಚಿನ ದಂಡಿಸುವ ಎಚ್ಚರಿಕೆ ನೀಡಲಾಗುತ್ತಿದೆ ಎಂದು ದೂರಿದರು.

ಹೀಗಾಗಿ ನಗರಾಭಿವೃದ್ಧಿ ಇಲಾಖೆ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಲೈಸೆನ್ಸ್ ಪಡೆಯುವ ಕರ್ನಾಟಕ ಮುನಿಸಿಪಾಲಿಟಿಗಳ ಮಾದರಿ ಬೈಲಾ ಅನುಷ್ಠಾನ ಮಾಡಬಾರದು. ಬದಲಿಗೆ ಕೊರೊನಾ ವೈರಸ್ ಸಾಂಕ್ರಾಮಿಕದಿಂದ ಉಂಟಾದ ಆದಾಯ ನಷ್ಟದಿಂದ ಹೊರಬರಲು ನೆರವಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಸಿದ್ದರಾಜು, ಕಾರ್ಯದರ್ಶಿ ಗುರುಸ್ವಾಮಿ, ನೂರುಲ್ಲಾ, ಕೀರ್ತಿ, ಶಬ್ಬೀರ್, ಸೌಕತ್, ಮೋಹನ್, ರಾಜೇಂದ್ರ ನಾರಾಯಣಶೆಟ್ಟಿ ಪ್ರದೀಪ್, ಪ್ರಕಾಶ್, ಗುರುದೇವ್, ರಾಜಾರಾಂ, ರಾಮದೇವ್ ಸೇರಿದಂತೆ ನೂರಾರು ಮಂದಿ ಪಾಲ್ಗೊಂಡಿದ್ದರು.

ಒಂದನೇ ಪುಟದಿಂದ

ಅಧಿಕಾರಕ್ಕೆ ತರುವ ಹೊಣೆ ನನ್ನದು

ಅರ್ಪಿಸಲು ದೆಹಲಿಗೆ ತೆರಳಿದ್ದರು. ಯಡಿಯೂರಪ್ಪ ಮುಖ್ಯಮಂತ್ರಿ ಸ್ಥಾನದಿಂದ ಇಳಿದ ನಂತರ ಬೆಂಗಳೂರಿಗೆ ಬಂದಾಗಲಷ್ಟೇ ವರಿಷ್ಠರನ್ನು ಭೇಟಿ ಮಾಡುತ್ತಿದ್ದರೇ ಹೊರತು, ದೆಹಲಿಗೆ ತೆರಳಿ ವರಿಷ್ಠರೊಂದಿಗೆ ಮಾತುಕತೆ ನಡೆಸುವ ಪ್ರಯತ್ನ ಮಾಡಿರಲಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ದಿನದಿಂದ ದಿನಕ್ಕೆ ಬಲಗೊಳ್ಳುತ್ತಿದೆ ಎಂಬ ಹಿನ್ನೆಲೆಯಲ್ಲಿ ಯಡಿಯೂರಪ್ಪ ಅವರನ್ನು ಮತ್ತೆ ಮುನ್ನೆಲೆಗೆ ತರಲು ವರಿಷ್ಠರು ಅವರಿಗೆ ಸಂಸದೀಯ ಮಂಡಳಿ ಸದಸ್ಯತ್ವ ನೀಡಿದ್ದು, ಪುತ್ರನಿಗೂ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸ್ಥಾನ ನೀಡುವ ಸಾಧ್ಯತೆ ಇದೆ. ಆರ್‌ಎಸ್‌ಎಸ್ ಮುಖಂಡರ ಆಹ್ವಾನದ ಮೇರೆಗೆ ದೆಹಲಿಗೆ ತೆರಳಿದ ಯಡಿಯೂರಪ್ಪ, ಆರ್‌ಎಸ್‌ಎಸ್‌ನ ಪ್ರಮುಖ ಸಹ ಸಂಚಾಲಕ ದತ್ತಾತ್ರೇಯ ಹೊಸಬಾಳೆ ಜತೆಗೆ ಚುನಾವಣೆಗೆ ಸಂಬಂಧಿಸಿದಂತೆ ಸುದೀರ್ಘ ಚರ್ಚೆ ನಡೆಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರ ಅವಧಿ ಆ.28ಕ್ಕೆ ಪೂರ್ಣಗೊಳ್ಳಲಿದ್ದು, ಅವರಿಂದ ತೆರವಾಗುವ ಸ್ಥಾನಕ್ಕೆ ಹೊಸಬರ ನೇಮಕಾತಿ ಸಂಬಂಧ ಈ ನಾಯಕರು ಚರ್ಚೆ ಮಾಡಿದ್ದಾರೆ. ಈ ಸ್ಥಾನಕ್ಕೆ ಮೂವರ ಹೆಸರು ಮುನ್ನೆಲೆಗೆ ಬಂದಿದ್ದು, ಆರ್‌ಎಸ್‌ಎಸ್ ಮುಖಂಡರು, ಬಿಜೆಪಿ ಮುಖಂಡರೊಂದಿಗೆ ಸಮಾಲೋಚನೆ ನಡೆಸಿದ ನಂತರ ಅಂತಿಮಗೊಳ್ಳಲಿದೆ ಎನ್ನಲಾಗಿದೆ.

ವರಿಷ್ಠರನ್ನು ಭೇಟಿಯಾದ ಸಂದರ್ಭದಲ್ಲಿ ಯಡಿಯೂರಪ್ಪ, ಕರ್ನಾಟಕದಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವ ಹೊಣೆಗಾರಿಕೆ ನನ್ನದು ಎಂದಿದ್ದಾರೆ. ಆದರೆ, ನಾನು ನೀಡುವ ಕೆಲವು ಸಲಹೆಗಳನ್ನು ಅನುಷ್ಠಾನಗೊಳಿಸುವಂತೆ ಸಲಹೆ ಮಾಡಿದ್ದಾರೆ ಎನ್ನಲಾಗಿದೆ. ಗಣೇಶ ಹಬ್ಬ ಮುಗಿದ ತಕ್ಷಣವೇ ರಾಜ್ಯಾದ್ಯಂತ ತಾವು, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ ಪ್ರತ್ಯೇಕವಾಗಿ ಪ್ರವಾಸ ಕೈಗೊಂಡು ಕಾರ್ಯಕರ್ತರನ್ನು ಸಂಘಟಿಸುವುದಲ್ಲದೆ, ಪ್ರತಿಪಕ್ಷ ಕಾಂಗ್ರೆಸ್‌ನ ಆರೋಪಗಳಿಗೆ ಸಾರ್ವಜನಿಕವಾಗಿ ಉತ್ತರ ನೀಡುತ್ತೇವೆ. ಬಿಜೆಪಿ ಸರ್ಕಾರಕ್ಕೆ ಮೂರು ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ರಾಜ್ಯದ ಏಳು ಕಡೆ ಜನೋತ್ಸವ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಿದ್ದು, ಪ್ರತಿ ಕಾರ್ಯಕ್ರಮದಲ್ಲಿ ವರಿಷ್ಠರೊಬ್ಬರು ಭಾಗವಹಿಸುವಂತೆ ನಡ್ಡಾ ಅವರಿಗೆ ಮನವಿ ಮಾಡಿದ್ದಾರೆ. ಸಂಸದೀಯ ಮಂಡಳಿ ಸದಸ್ಯರನ್ನಾಗಿ ನೇಮಕ ಮಾಡಿದ ನಂತರ ಯಡಿಯೂರಪ್ಪ ಅವರಲ್ಲಿ ಮತ್ತೆ ರಾಜಕೀಯದ ಹುರುಪು ಮೂಡಿದ್ದು, ಸ್ವಯಂಪ್ರೇರಿತವಾಗಿ ಪಕ್ಷವನ್ನು ಸಂಘಟಿಸಿ ನಾಯಕರನ್ನು ಬಿಡಿಗಿಳಿಸಿ ಪಕ್ಷಕ್ಕೆ ಚೈತನ್ಯ ತುಂಬುವ ಉತ್ಸಾಹದಲ್ಲಿದ್ದಾರೆ.

ಆಜಾದ್ ಕಾಂಗ್ರೆಸ್‌ಗೆ ಗುಡ್‌ಬೈ

ಅಪ್ರಬುದ್ಧತೆಯೇ ಕಾರಣ ಎಂದಿರುವ ಆಜಾದ್, ಮಾಧ್ಯಮಗಳ ಮುಂದೆಯೇ ಸರ್ಕಾರಿ ಸುಗ್ರೀವಾಜ್ಞೆಯನ್ನು ಹರಿದು ಹಾಕಿದ್ದು, ಅವರ ಅಪ್ರಬುದ್ಧತೆಯ ಅತ್ಯಂತ ಜ್ವಲಂತ ಉದಾಹರಣೆಯಾಗಿದೆ. ಈ ಒಂದು ವರ್ತನೆಯೇ 2014ರಲ್ಲಿ ಯುಪಿಎ ಸೋಲಿಗೆ ಕಾರಣವಾಯಿತು ಎಂದು ತಿಳಿಸಿರುವ ಅವರು, 2014 ರಿಂದ 2022ರ ನಡುವೆ ನಡೆದ 49 ವಿಧಾನಸಭೆ ಚುನಾವಣೆಗಳಲ್ಲಿ ಕಾಂಗ್ರೆಸ್ 39ರಲ್ಲಿ ಪರಾಭವ ಗೊಂಡಿದೆ ಎಂಬುದನ್ನು ಉಲ್ಲೇಖಿಸಿದ್ದಾರೆ. 2019ರ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯ ಸೋಲಿನ ಬಳಿಕ ರಾಹುಲ್ ಗಾಂಧಿ ಪಕ್ಷದ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿದ ನಂತರ ಹಂಗಾಮಿ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿರುವ ನೀವು, ಕೇವಲ ನಾಮ ಮಾತ್ರಕ್ಕೆ ಅಧ್ಯಕ್ಷರಾಗಿದ್ದೀರಿ ಎಂದು ಒತ್ತಿ ಹೇಳಿರುವ ಆಜಾದ್, ಪಕ್ಷದ ಎಲ್ಲಾ ನಿರ್ಧಾರಗಳನ್ನು ರಾಹುಲ್ ಗಾಂಧಿ ಅಥವಾ ಅವರ ಭದ್ರತಾ ಸಿಬ್ಬಂದಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಎಐಸಿಸಿಯಲ್ಲಿ ವ್ಯವಸ್ಥಿತ ಬದಲಾವಣೆಗಳನ್ನು ಬಯಸಿದ ಜಿ-23 ಗುಂಪಿನ ಸದಸ್ಯರಾಗಿದ್ದ ಗುಲಾಂ ನಬಿ ಆಜಾದ್ ಅವರು ಆಗಸ್ಟ್ 16ರಂದು ಜಮ್ಮು ಮತ್ತು ಕಾಶ್ಮೀರ ಪ್ರಚಾರ ಸಮಿತಿ ಅಧ್ಯಕ್ಷ ಸ್ಥಾನವನ್ನು ತ್ಯಜಿಸಿದ್ದರು. ಜಿ-23 ಗುಂಪು ಪಕ್ಷದ ನಾಯಕತ್ವವನ್ನು ಟೀಕಿಸುತ್ತಿದೆ ಮತ್ತು ಸಂಘಟನೆಯ ಬದಲಾವಣೆಯನ್ನು ಒತ್ತಾಯಿಸುತ್ತಿದೆ ಎಂಬ ಕಾರಣಕ್ಕಾಗಿ ಈ ಗುಂಪಿನ ವಿರುದ್ಧ ಪಕ್ಷದ ಕೆಲವರು ಕೆಂಡಾಮಂಡಲವಾಗಿದ್ದರು ಎಂದು ಹೇಳಲಾಗಿದೆ. ರಾಜ್ಯಸಭೆಯಿಂದ ನಿವೃತ್ತರಾದ ನಂತರ ಗುಲಾಂ ನಬಿ ಆಜಾದ್ ಅವರನ್ನು ಮತ್ತೆ ರಾಜ್ಯಸಭೆಗೆ ಕಳುಹಿಸದೇ ಇರುವುದನ್ನು ಜಿ-23 ಗುಂಪಿನ ಕೆಲ ನಾಯಕರು ತೀವ್ರವಾಗಿ ಖಂಡಿಸಿದ್ದಾರೆ.

ಆಜಾದ್ ಅವರು ಜಮ್ಮು-ಕಾಶ್ಮೀರದ ಮುಖ್ಯಮಂತ್ರಿಯಾಗಿ, ಯುಪಿಎ ಸರ್ಕಾರದ ಅವಧಿಯಲ್ಲಿ ಕೇಂದ್ರ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಎಐಸಿಸಿ ನಾಯಕಿ ಸೋನಿಯಾ ಗಾಂಧಿ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದರು. ಇತ್ತೀಚೆಗಷ್ಟೇ ಹಿರಿಯ ಕಾಂಗ್ರೆಸ್ ನಾಯಕರಾದ ಕಪಿಲ್ ಸಿಬಲ್, ಅಶ್ವಿನಿ ಕುಮಾರ್ ಅವರುಗಳು ಪಕ್ಷ ತೊರೆದಿದ್ದು, ಹಿಮಾಚಲ ಪ್ರದೇಶದ ಹಿರಿಯ ನಾಯಕ ಆನಂದ್ ಶರ್ಮಾ ಅವರು ಪಕ್ಷದ ಪ್ರಮುಖ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಇದೀಗ ಹಿರಿಯ ನಾಯಕ ರಾಜೀನಾಮೆ ನೀಡಿರುವುದು ಕಾಂಗ್ರೆಸ್‌ನಲ್ಲಿ ಆಘಾತವನ್ನುಂಟು ಮಾಡಿದೆ.

ನ್ಯಾಯಾಧೀಶರಿಂದ ತನಿಖೆ ಮಾಡಿಸಲಿ



ಸಿದ್ದರಾಮಯ್ಯ ಪತ್ರಿಕಾ ಸಂವಾದದಲ್ಲಿ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಕಾರ್ಯದರ್ಶಿ ಸುಬ್ರಹ್ಮಣ್ಯ ಉಪಸ್ಥಿತರಿದ್ದಾರೆ.

ಸತ್ಯ ಹೊರಬರಬೇಕು. ಜಿಲ್ಲೆ, ಕ್ಷೇತ್ರಗಳಲ್ಲಿ ಸಣ್ಣಪುಟ್ಟ ಕೆಲಸಗಳಿಗೂ ಎಲ್ಲ ಸಚಿವರು ನಾಚಿಕೆಯಿಲ್ಲದೆ ಕಮಿಷನ್ ಕೇಳುತ್ತಿರುವ ಕಾರಣ ನಾನು ಇದನ್ನು 50 ಪರ್ಸೆಂಟ್ ಕಮಿಷನ್ ಸರ್ಕಾರ ಎಂದು ಕರೆಯುವುದಾಗಿ ಹೇಳಿದ ಅವರು, ದೊಡ್ಡ ಅಥವಾ ಸಣ್ಣ ಯಾವುದೇ ಕೆಲಸವನ್ನು ಕಮಿಷನ್ ಆಧಾರದ ಮೇಲೆ ತೆಗೆದುಕೊಳ್ಳಲಾಗುತ್ತದೆ. ಶೇ.40ರಷ್ಟು ಹಣ ಸಚಿವರಿಗೆ, ಶೇ.20ರಷ್ಟು ಗುತ್ತಿಗೆದಾರರ ಲಾಭ, ಶೇ.15ರಷ್ಟು ಜಿಎಸ್‌ಟಿ ಮತ್ತು ಉಳಿದ ಶೇ.25ರಷ್ಟು ಅನುದಾನ ದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತದೆ. ಇದರಿಂದ ಯಾವ ಗುಣಮಟ್ಟವನ್ನು ನಿರೀಕ್ಷಿಸಲು ಸಾಧ್ಯ ಎಂದು ಪ್ರಶ್ನಿಸಿದರು. ಗುತ್ತಿಗೆದಾರರ ಸಂಘ ಭ್ರಷ್ಟಾಚಾರದ ದಾಖಲೆಗಳನ್ನು ನೀಡಬೇಕು ಎಂದು ಸರ್ಕಾರ ಹೇಳುತ್ತಿದೆ. ವ್ಯವಹಾರಗಳ ದಾಖಲೆ ಇಡಲು ಮಂತ್ರಿಗಳು ದಡ್ಡರೇ? ಸ್ವತಂತ್ರ ತನಿಖೆಯಿಂದ ಮಾತ್ರ ಸತ್ಯಾಂಶ ಹೊರಬರಲಿದೆ. ಕೊಡಗು ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ರವಿ ಚಂಗಪ್ಪ ಕೂಡ ವಿರಾಜಪೇಟೆ ಶಾಸಕ ಕೆ.ಜಿ. ಬೋಪಯ್ಯ ಅವರು ಲಂಚ ಪಡೆದಿದ್ದಾರೆ. ಅಮಾನತುಗೊಂಡಿರುವ ಹಿರಿಯ ಪಿಡಬ್ಲ್ಯುಡಿ ಅಧಿಕಾರಿ ಶ್ರೀಕಂಠಯ್ಯ ಅವರನ್ನು ಮತ್ತೆ ಅದೇ ಹುದ್ದೆಗೆ ಮರು ನೇಮಕಗೊಳಿಸಲು ಎರಡೂವರೆ ಕೋಟಿ ರೂ. ಪಡೆದಿದ್ದಾರೆಂದು ಗಂಭೀರ ಆರೋಪ ಮಾಡಿದ್ದಾರೆ. ಇದಕ್ಕೆ ಸರ್ಕಾರದ ಉತ್ತರವೇನು ಎಂದು ಪ್ರಶ್ನಿಸಿದರು. ಇದಕ್ಕಿಂತ ಭ್ರಷ್ಟ ಸರ್ಕಾರ ಮತ್ತೊಂದಿಲ್ಲ ಎಂದು ಗುತ್ತಿಗೆದಾರರು ದೂರಿದ್ದಾರೆ. ಸತ್ಯಾಂಶ ಪತ್ತೆ ಹಚ್ಚುವ ನ್ಯಾಯಾಂಗ ತನಿಖೆಯನ್ನು ನಿರಾಕರಿಸುವ ಮೂಲಕ ಸರ್ಕಾರವು ಭ್ರಷ್ಟಾಚಾರದ ವ್ಯಾಪಕತೆಯನ್ನು ಪರೋಕ್ಷವಾಗಿ ಒಪ್ಪಿಕೊಳ್ಳುತ್ತಿದೆ. ಗುತ್ತಿಗೆದಾರರು ಸಾಕ್ಷ್ಯ, ದಾಖಲೆಗಳನ್ನು ಒದಗಿಸಲು ಸಿದ್ಧರಿದ್ದಾರೆ. ಅವರು ತಮ್ಮ ಆರೋಪ ಸುಳ್ಳು ಎಂದು ಸಾಬೀತಾದರೆ ಕಾನೂನು ಪ್ರಕಾರ ಶಿಕ್ಷೆ ಎದುರಿಸಲು ಸಿದ್ಧರಾಗಿರುವುದಾಗಿ ಹೇಳುತ್ತಿದ್ದಾರೆ. ಅಂದ ಮೇಲೆ ಸರ್ಕಾರ ತನಿಖೆ ನಡೆಸಲು ಹಿಂದೇಟು ಹಾಕುತ್ತಿರುವುದಾದರೂ ಏಕೆ? ಇದರಲ್ಲೇ ಅವರ ಭ್ರಷ್ಟತೆ ಎಷ್ಟಿದೆ ಎಂಬುದರ ಅರಿವಾಗುತ್ತದೆ ಎಂದು ಸಿದ್ದರಾಮಯ್ಯ ಆರೋಪಿಸಿದರು. ಸರ್ಕಾರದ ವಿರುದ್ಧ ಭ್ರಷ್ಟಾಚಾರ ಕೆಟ್ಟ ಆಡಳಿತ ಕುರಿತ ಆರೋಪ ಬಂದಾಗಲೆಲ್ಲಾ ಬಿಜೆಪಿಯವರು ಮೊಟ್ಟೆ ಎಸೆಯುವುದು, ಮಾಂಸ ತಿನ್ನುವುದು ಮತ್ತು ಇತರೆ ಧಾರ್ಮಿಕ ಮತ್ತು ಭಾವನಾತ್ಮಕ ವಿಷಯಗಳಂತಹ ಸೂಕ್ಷ್ಮ ವಿಷಯಗಳತ್ತ ಹೊರಳುತ್ತಾರೆ. ಮುಖ್ಯಮಂತ್ರಿಗಳು, ಸಚಿವರು ಸೇರಿದಂತೆ ಪಕ್ಷದ ನಾಯಕರು ಕೋಮು ಭಾವನೆ ಕೆರಳಿಸುವಂತಹ ಹೇಳಿಕೆಗಳನ್ನು ನೀಡಿ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ತಮ್ಮ ಅವಧಿಯಲ್ಲಿ ಸಿಬಿಐಗೆ ಐದು ಪ್ರಕರಣ ಒಪ್ಪಿಸಿದ್ದೆ: ಸಂವಾದದ ವೇಳೆ ಸಿದ್ದರಾಮಯ್ಯ ಅವರು ತಮ್ಮ ಸರ್ಕಾರವಿದ್ದಾಗ, ತಾವು ಸಿಎಂ ಆಗಿ ಕೈಗೊಂಡ ಜನಪರ ಕಾರ್ಯಕ್ರಮಗಳ ಬಗ್ಗೆ ವಿವರಿಸಿದರು. ಭ್ರಷ್ಟಾಚಾರದ ಸುಳಿವು ಸಿಕ್ಕಿದ್ದರಿಂದ ಐದು ಪ್ರಕರಣಗಳನ್ನು ಸಿಬಿಐಗೆ ವಹಿಸಿದ್ದೇನೆ. ಬಿಜೆಪಿ ಸರ್ಕಾರವೂ ಅದೇ ರೀತಿ ಮಾಡುವ ಧೈರ್ಯ ತೋರಲಿ ಎಂದು ಸಿದ್ದರಾಮಯ್ಯ ಸವಾಲು ಹಾಕಿದರು.

ಆರೋಪಗಳ ತನಿಖೆಗೆ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸಬೇಕೆಂಬ ಬೇಡಿಕೆಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಒಪ್ಪಿಕೊಳ್ಳದಿದ್ದರೆ ಜನತಾ ನ್ಯಾಯಾಲಯದ ಮೊರೆ ಹೋಗುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದರು.

ನ್ಯಾಯಾಂಗ ತನಿಖೆಯನ್ನು ನಿರಾಕರಿಸುವ ಮೂಲಕ, ಸರ್ಕಾರವು ಭ್ರಷ್ಟಾಚಾರವನ್ನು ಒಪ್ಪಿಕೊಳ್ಳುತ್ತಿದೆ. ಭ್ರಷ್ಟಾಚಾರದಲ್ಲಿ ಭಾಗಿಯಾಗಿಲ್ಲದಿದ್ದರೆ, ನೀವು ತನಿಖೆಗೆ ಏಕೆ ಹೆದರುತ್ತೀರಿ? ಸಾಕ್ಷಿ ಇಲ್ಲ ಎಂದು ಹೇಳಿ ನುಣುಚಿಕೊಳ್ಳುವ ಪ್ರಯತ್ನ ಏಕೆ? ಎಂದು ಪ್ರಶ್ನಿಸಿದ ಅವರು, ಗುತ್ತಿಗೆದಾರರು ತಮ್ಮ ಬಳಿ ಹಲವು ದಾಖಲೆಗಳಿವೆ ಎಂದು ಹೇಳುತ್ತಿದ್ದಾರೆ. ಹಾಗಾಗಿ ನ್ಯಾಯಾಂಗ ತನಿಖೆಗೆ ಸಮಿತಿ ರಚಿಸಿದರೆ ಸಾಕ್ಷ್ಯಗಳನ್ನು ಒದಗಿಸಲು ಸಿದ್ಧ ಎಂದು ಗುತ್ತಿಗೆದಾರರೇ ಹೇಳುತ್ತಿದ್ದಾರೆ. ಅಂದ ಮೇಲೆ ಇವರಿಗೆ ಹೆದರಿಕೆ ಏಕೆ ಎಂದು ಪ್ರಶ್ನಿಸಿದರು. ಸಂವಾದದ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ನಗರ ಉಪಾಧ್ಯಕ್ಷ ಅನುರಾಗ್ ಬಸವರಾಜ್, ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ನಗರ ಕಾರ್ಯದರ್ಶಿ ರಂಗಸ್ವಾಮಿ ಉಪಸ್ಥಿತರಿದ್ದರು.

ಶಿಕ್ಷಣ ಇಲಾಖೆಯಲ್ಲೂ 50% ಲಂಚ: ಸಚಿವ ನಾಗೇಶ್ ವಜಾಗೊಳಿಸಲು ಪ್ರಧಾನಿ ಮೋದಿಗೆ ರುಪ್ಸಾ ಮನವಿ

ಬೆಂಗಳೂರು: ಶಿಕ್ಷಣ ಇಲಾಖೆಯಲ್ಲಿ ಭ್ರಷ್ಟಾಚಾರ ಹೆಚ್ಚಾಗುತ್ತಿದ್ದು, ಲಂಚದ ವ್ಯಾಪ್ತಿ ಶೇ.40-50 ರಷ್ಟು ಹೆಚ್ಚಾಗಿದೆ. ಡಿಡಿಪಿಐಗಳು ನೇರವಾಗಿ ಲಂಚ ಕೇಳುತ್ತಿದ್ದಾರೆ. ಇದರ ಆಡಿಯೋ ರೆಕಾರ್ಡ್ ಸಹ ಇದೆ ಡಿಡಿಪಿಐಗೆ 20 %, ಬಿಇಒಗೆ 25% ಅಂತ ಕಮಿಷನ್ ತಗೋತಾರೆ.



ನಾಗೇಶ್ ತಾಳಿಕಟ್ಟೆ

ಇಲಾಖೆಯ ಬಹುತೇಕ ಕೆಲಸಗಳಿಗೆ ಆನ್‌ಲೈನ್ ವ್ಯವಸ್ಥೆ ಇಲ್ಲ. ಆನ್‌ಲೈನ್ ವ್ಯವಸ್ಥೆ ತನ್ನಿ ಅಂದ್ರೂ ಅಧಿಕಾರಿಗಳು ಸುಮ್ಮನಿದ್ದಾರೆ. ಆನ್‌ಲೈನ್ ವ್ಯವಸ್ಥೆ ಇಲ್ಲದೆ ಅಧಿಕಾರಿಗಳು ಲಂಚ ಬಾಕರಾಗುತ್ತಿದ್ದಾರೆ ಎಂದು ಖಾಸಗಿ ಶಾಲೆಗಳ ಒಕ್ಕೂಟದ (ರುಪ್ಸಾ) ರಾಜ್ಯಾಧ್ಯಕ್ಷ ಲೋಕೇಶ್ ತಾಳಿಕಟ್ಟೆ ದೂರಿದ್ದಾರೆ. ಶಾಸಕರ ಭವನದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿಗೆ ಪತ್ರ: ಈ ಕುರಿತಾಗಿ ರುಪ್ಸಾ ಸಂಘಟನೆ 8 ಅಂಶಗಳನ್ನು ಉಲ್ಲೇಖ ಮಾಡಿ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದು, ಆರ್.ಆರ್ ನೀಡಲು ಲಕ್ಷಾಂತರ ರೂ. ಲಂಚ ಪಡೆಯುತ್ತಿರುವ ಆರೋಪ ಮಾಡಿದ್ದು, ಪ್ರತೀ 10 ವರ್ಷಕ್ಕೊಮ್ಮೆ ಮಾನ್ಯತೆ ನವೀಕರಣ ಎಂದು ಹೈಕೋರ್ಟ್ ಹೇಳಿದೆ. ಆದರೆ ಪ್ರತಿ ವರ್ಷವೂ ಆರ್.ಆರ್. ಪಡೆಯಬೇಕೆಂದು ಶಿಕ್ಷಣ ಇಲಾಖೆ ಹೇಳುತ್ತಿದೆ. 2020 ರಿಂದ ಕಳೆದ 2 ವರ್ಷದಿಂದ ಲಂಚ ಪಡೆಯುವ ಅಧಿಕಾರಿಗಳ ಸಂಖ್ಯೆ ಹೆಚ್ಚಾಗಿದೆ ಎಂದು ದೂರಿದರು.



ನಾಗೇಶ್

ಶಿಕ್ಷಣ ಸಚಿವ ಬಿ.ಸಿ. ನಾಗೇಶ್ ವಿರುದ್ಧ ಆರೋಪಗಳೇನು: ಶಾಲೆ ಮಾನ್ಯತೆ ನವೀಕರಣ ಮಾಡಲು ಲಕ್ಷಾಂತರ ರೂಪಾಯಿ ಲಂಚ ನೀಡಬೇಕು. ಲಂಚಕ್ಕಾಗಿಯೇ ಹೊಸ ಮಾರ್ಗಗಳ ಅನ್ವೇಷಣೆ ಮಾಡಲಾಗಿದೆ. RTE ಶುಲ್ಕ ಮರುಪಾವತಿ ಮಾಡಲು 30% ರಿಂದ 50% ವರೆಗೂ ಲಂಚ ಕೊಡಬೇಕು. ಅನ್ಯ ಪಠ್ಯಕ್ರಮ ಅನುಸರಿಸಲು NOC ಪಡೆಯಲು 15 ಲಕ್ಷದವರೆಗೂ ಲಂಚ ಪಡೆಯಲಾಗುತ್ತಿದೆ. ದಾಖಲೆಗಳ ನೆಪದಲ್ಲಿ ತಿಂಗಳಿಗೊಮ್ಮೆ ಮಾಮೂಲಿ ವಸೂಲಿ ಮಾಡಲಾಗುತ್ತಿದೆ. ವರ್ಷಕ್ಕೊಮ್ಮೆ ಅಧಿಕಾರಿಗಳ ವರ್ಗಾವಣೆ ಮಾಡಬೇಕು ಅಂದರೆ ಲಂಚ ಕೊಡಬೇಕು. ಸರ್ಕಾರಿ ಶಾಲೆಗಳನ್ನು ಶಿಕ್ಷಣ ಸಚಿವರು ಮರೆತಿದ್ದಾರೆ. ಮಕ್ಕಳಿಗೆ ಶೂ ಸಾಕ್ಸ್ ನೀಡಿಲ್ಲ, ಸೈಕಲ್ ನೀಡಿಲ್ಲ ಇದ್ಯಾವುದಕ್ಕೂ ಸಚಿವರು ತಲೆ ಕೆಡಿಸಿಕೊಂಡಿಲ್ಲ. ಧಾರ್ಮಿಕ ಸೂಕ್ಷ್ಮ ವಿಚಾರಗಳಲ್ಲಿ ವಿದ್ಯಾರ್ಥಿಗಳ ಮನಸ್ಸು ಕಲುಷಿತಗೊಳಿಸಿದ್ದಾರೆ ಎಂದು ರುಪ್ಸಾ ನೇರವಾಗಿ ಶಿಕ್ಷಣ ಸಚಿವ ನಾಗೇಶ್ ಮೇಲೆ ಆರೋಪ ಮಾಡಿದ್ದಾರೆ. ಈ ಎಲ್ಲಾ ಆರೋಪಗಳ ಜತೆಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲೂಕಿನ ಬಿಇಓ ಖಾಸಗಿ ಶಾಲೆ ಆಡಳಿತ ಮಂಡಳಿ ಬಳಿ ಲಂಚ ಕೇಳಿದ್ದಾರೆ ಎನ್ನಲಾದ ಆಡಿಯೋ ಇದೀಗ ವೈರಲ್ ಆಗಿದ್ದು, ಶಿಕ್ಷಣ ಇಲಾಖೆಯನ್ನು ಇನ್ನಷ್ಟು ಮುಜುಗರಕ್ಕೀಡು ಮಾಡಿದೆ.

ಶಿಕ್ಷಣ ಸಚಿವ ನಾಗೇಶ್ ವಜಾಗೊಳಿಸುವಂತೆ ಪ್ರಧಾನಿಗೆ ಮನವಿ: ಶಿಕ್ಷಣ ಇಲಾಖೆಯಲ್ಲಿ ಪ್ರತಿಯೊಂದು ಕೆಲಸಕ್ಕೂ ಇಂತಿಷ್ಟು ಲಂಚ ಫಿಕ್ಸ್ ಆಗಿದೆ. ಲಂಚ ಇಲ್ಲದೆ ಶಿಕ್ಷಣ ಅಧಿಕಾರಿಗಳು ಯಾವುದೇ ಕೆಲಸ ಮಾಡಲ್ಲ. ಶಿಕ್ಷಣ ಸಚಿವರ ಗಮನಕ್ಕೆ ತಂದರೂ ಯಾವುದೇ ಪ್ರಯೋಜನ ಆಗಿಲ್ಲ. ಅಧಿಕಾರಿಗಳ ವಿರುದ್ಧ ಯಾವುದೇ ಕ್ರಮ ಆಗಿಲ್ಲ. ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಈ ವಿಚಾರದಲ್ಲಿ ವಿಫಲರಾಗಿದ್ದಾರೆ. ಕೂಡಲೇ ಸಂಪುಟದಿಂದ ಶಿಕ್ಷಣ ಸಚಿವರನ್ನು ಕೈಬಿಡುವಂತೆ ಆಗ್ರಹಿಸಲಾಗಿದೆ.

ಮೂರನೇ ಬಾರಿ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆಯುತ್ತಿದ್ದೇವೆ. ಶೋಕಿ ಮಾಡೋರನ್ನು ಶಿಕ್ಷಣ ಸಚಿವರನ್ನಾಗಿ ಮಾಡಿದ್ದಾರೆ. ವಜಾಗೊಳಿಸದಿದ್ದರೆ ಕಾನೂನಾತ್ಮಕ ಹೋರಾಟ ಮಾಡುತ್ತೇವೆ ಎಂದು ರುಪ್ಸಾ ಸಂಘಟನೆ ರಾಜ್ಯಾಧ್ಯಕ್ಷ ಲೋಕೇಶ್ ತಾಳಿಕಟ್ಟೆ ಎಚ್ಚರಿಕೆ ನೀಡಿದರು.

ಸೆಪ್ಟೆಂಬರ್‌ನಲ್ಲಿ ರೈತ ಶಕ್ತಿ ಯೋಜನೆ ಜಾರಿ ರೈತರಿಗೆ ಪ್ರತಿ ಎಕರೆಗೆ 250ರೂ. ಡೀಸೆಲ್ ಸಹಾಯ ಧನ

ಬೆಂಗಳೂರು, ಆ. 26(ಕೆಎಂಶಿ)- ಕೃಷಿ ಚಟುವಟಿಕೆಯಲ್ಲಿ ಯಂತ್ರೋಪಕರಣಗಳನ್ನು ಪ್ರೋತ್ಸಾಹಿಸಿ ಇಂಧನ ವೆಚ್ಚದ ಹೊರೆ ಕಡಿಮೆ ಮಾಡುವ ರೈತ ಶಕ್ತಿ ಯೋಜನೆ ಸೆಪ್ಟೆಂಬರ್‌ನಿಂದ ಜಾರಿಗೊಳ್ಳಲಿದೆ. ಕೃಷಿ ಸಚಿವ ಬಿ.ಸಿ. ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿದ್ದು, ಈ ಯೋಜನೆಯಿಂದ ರೈತರಿಗೆ ಪ್ರತಿ ಎಕರೆಗೆ 250 ರೂ.ನಂತೆ ಗರಿಷ್ಠ ಐದು ಎಕರೆವರೆಗೂ ಡೀಸೆಲ್ ಸಹಾಯಧನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪ್ರಸಕ್ತ ಸಾಲಿನ ಮುಂಗಡ ಪತ್ರದಲ್ಲಿ ರೈತ ಶಕ್ತಿ ಯೋಜನೆ ಪ್ರಸ್ತಾಪ ಮಾಡಿದ್ದರು. ಇದೀಗ ಇಲಾಖೆ ಅದನ್ನು ಅನುಷ್ಠಾನಗೊಳಿಸಿ, ರೈತರ ನೆರವಿಗೆ ಸರ್ಕಾರ ಮುಂದಾಗಿದೆ. ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರ ಆದೇಶ ಹೊರಡಿಸಿದ್ದು, ರೈತರಿಗೆ ಕೃಷಿ ಇಲಾಖೆಯ ಎಲ್ಲಾ ಯೋಜನೆಗಳನ್ನು ಫ್ರೂಟ್ಸ್ ಪೋರ್ಟಲ್ ಮೂಲಕ ನೋಂದಣಿ ಗುರುತಿನ ಸಂಖ್ಯೆ ಬಳಸಿ, ಕಿಸಾನ್ ತಂತ್ರಾಂಶದ ಮೂಲಕವೇ ಅನುಷ್ಠಾನ ಮಾಡಲಾಗುತ್ತಿದೆ.



ಅದೇ ರೀತಿಯಲ್ಲಿ ಈ ಪೋರ್ಟಲ್‌ನಲ್ಲಿ ನೋಂದಣಿಗೊಂಡ ಎಲ್ಲಾ ರೈತರಿಗೆ ಶಕ್ತಿ ಯೋಜನೆಯನ್ನು ಕಿಸಾನ್ ತಂತ್ರಾಂಶ ಬಳಸಿಕೊಂಡು, ನೇರ ಹಣ ವರ್ಗಾವಣೆ ಮೂಲಕವೇ ಯೋಜನೆ ಅನುಷ್ಠಾನ ಮಾಡಲಾಗುವುದು.

ಕ್ರಾಫರ್ಡ್ ಹಾಲ್, ಮಾನಸಗಂಗೋತ್ರಿ, ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ನೆಲೆಗೊಳ್ಳಲಿದೆ ದಸರಾ ಸಸ್ಯಕಾಶಿ

ಕಣ್ಮನ ಸೆಳೆಯುವ ನಾನಾ ರೀತಿಯ ಫಲ-ಪುಷ್ಪ ರಾಶಿ ಆಯೋಜನೆಗೆ ಸಿದ್ಧತೆ



ಕೊರೊನಾ ಹಾವಳಿಯಿಂದಾಗಿ 2 ವರ್ಷ ಮೈಸೂರು ವಿವಿಯಿಂದ ಫಲಪುಷ್ಪ ಪ್ರದರ್ಶನ ಆಯೋಜಿಸಲು ಸಾಧ್ಯವಾಗಿರಲಿಲ್ಲ. ಈ ವರ್ಷ ಅದ್ದೂರಿಯಾಗಿ ಫಲಪುಷ್ಪ ಪ್ರದರ್ಶನ ನಡೆಯಲಿದ್ದು, ಮೈಸೂರಿಗರು ಹಲವು ಹೂಗಳನ್ನು ವೀಕ್ಷಣೆ ಮಾಡಬಹುದಾಗಿದೆ.

– ಎಸ್.ಕೆ.ಮುಜಾವರ್, ಮೈಸೂರು ವಿವಿ ತೋಟಗಾರಿಕೆ ವಿಭಾಗದ ಸಹಾಯಕ ನಿರ್ದೇಶಕ

ಮೈಸೂರು, ಆ.26(ಎಂಕೆ)-ನಾಡಹಬ್ಬ ದಸರಾ ಮಹೋತ್ಸವದ ಅಂಗವಾಗಿ ಮೈಸೂರು ವಿವಿ ಕಾರ್ಯಸೌಧ (ಕ್ರಾಫರ್ಡ್ ಹಾಲ್), ಮಾನಸ ಗಂಗೋತ್ರಿ ಹಾಗೂ ವಾಯು ವಿಹಾರಿಗಳ ನೆಚ್ಚಿನ ಕುಕ್ಕರಹಳ್ಳಿ ಕೆರೆಯ ಆವರಣದಲ್ಲಿ ವಿವಿಧ ಬಗೆಯ 10 ಸಾವಿರ ಹೂ ಹಾಗೂ ಹಣ್ಣು-ತರಕಾರಿ ಗಿಡಗಳು ನೋಡುಗರ ಕಣ್ಮನ ಸೆಳೆಯಲು ಸಿದ್ಧವಾಗುತ್ತಿವೆ.

ಎರಡು ವರ್ಷದ ಬಳಿಕ ಮೈಸೂರು ವಿವಿ ತೋಟಗಾರಿಕೆ ವಿಭಾಗದ ವತಿಯಿಂದ 'ಫಲಪುಷ್ಪ ಪ್ರದರ್ಶನ' ನಡೆಸಲು ಸಿದ್ಧತೆ ನಡೆಸಲಾಗಿದೆ. ಹಚ್ಚ ಹಸಿರಿನ ಮಾನಸ ಗಂಗೋತ್ರಿಯ ಎಲ್ಲಾ ಅಧ್ಯಯನ ವಿಭಾಗಗಳ ಎದುರು, ಕ್ರಾಫರ್ಡ್ ಹಾಲ್ ಮುಂಭಾಗ, ಕುಕ್ಕರಹಳ್ಳಿ ಕೆರೆಯಲ್ಲಿರುವ ಕುವೆಂಪು ವನ ಹಾಗೂ ಮುಖ್ಯ ದ್ವಾರದಲ್ಲಿ ಬಣ್ಣ ಬಣ್ಣದ ಹೂ ಗಳು ಕಂಗೊಳಿಸಲಿವೆ. ಕುಕ್ಕರಹಳ್ಳಿ ಕೆರೆಯ ಕುವೆಂಪು ವನ ಹಾಗೂ ಮುಖ್ಯ ದ್ವಾರದಲ್ಲಿ 6 ಸಾವಿರ, ಮಾನಸ ಗಂಗೋತ್ರಿ ಹಾಗೂ ಕ್ರಾಫರ್ಡ್ ಹಾಲ್ ಎದುರು 4 ಸಾವಿರ ಹೂ ಗಿಡಗಳನ್ನು ಅಲಂಕರಿಸಲಾಗುವುದು. ಹೂ ಗಿಡಗಳ ಜೊತೆಗೆ ಹಣ್ಣು-ತರಕಾರಿ ಗಿಡಗಳನ್ನು ಪ್ರದರ್ಶಕ್ಕಿಡಲಾಗುವುದು. ಅಲ್ಲದೆ ವಿಶೇಷ ಹಾಗೂ ಅಪರೂಪದ ಹೂಗಳ ಬಗ್ಗೆ ಮಾಹಿತಿಯನ್ನು ನೀಡುವ ಮೂಲಕ ಅರಿವು ಮೂಡಿಸಲಾಗುವುದು ಎಂದು ಮೈಸೂರು ವಿವಿ ತೋಟಗಾರಿಕೆ ವಿಭಾಗದ ಸಹಾಯಕ ನಿರ್ದೇಶಕ ಎಸ್.ಕೆ.ಮುಜಾವರ್ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

20-30 ಬಗೆಯ ಹೂ ಗಿಡಗಳು: ಫ್ರೆಂಚ್ ಮೇರಿ ಗೋಲ್ಡ್, ಡಯಾಂತರ್ಸ್, ಮರ್ಜನ, ಬಿಗೋನಿಯಾ, ದಾಲಿಯಾ, ಫೈರ್ ಬುಷ್, ಆರ್ನಮೆಂಟಲ್ ಕೇಲಾ, ಜೀನಿಯಾ, ವಿಂಕಾ, ಸಾಲ್ವಿಯಾ, ಮಾರಿಗೋಲ್ಡ್, ಸ್ವೀಟ್ ವಿಲಿಯಮ್, ಸೆಲೋಶಿಯಾ ಸೇರಿದಂತೆ 25-30ಕ್ಕೂ ಹೆಚ್ಚು ತಳಿಯ ಗಿಡಗಳನ್ನು ಬೆಳೆಸಲಾಗುತ್ತಿದೆ. ಕೆಲ ಹೈಬ್ರಿಡ್ ಗಿಡಗಳನ್ನು ಪೂನಾ ದಿಂದ ತರಿಸಲಾಗಿದೆ. ಬಹುತೇಕ ಹೂ ಗಿಡಗಳನ್ನು ನಾವುಗಳೇ ಬೆಳೆಯುತ್ತಿದ್ದೇವೆ ಎಂದು ತಿಳಿಸಿದರು.

ದಸರಾ ಉದ್ಘಾಟನೆ ದಿನದಂದೇ ಚಾಲನೆ: ಪ್ರತಿ ವರ್ಷದಂತೆ ನಾಡಹಬ್ಬ ದಸರಾ ಉದ್ಘಾಟನೆಯ ದಿನದಂದೇ ಮೈಸೂರು ವಿವಿಯ ಫಲಪುಷ್ಪ ಪ್ರದರ್ಶನಕ್ಕೂ ಚಾಲನೆ ನೀಡಲಾಗುವುದು. ವಿವಿ ಕುಲಪತಿಗಳು ಉದ್ಘಾಟಿಸಲಿದ್ದು, ವಿಜಯದಶಮಿ ದಿನದವರೆಗೂ ಪ್ರದರ್ಶನವಿರಲಿದೆ. ಪ್ರವಾಸಿಗರು, ವಾಯುವಿಹಾರಿಗಳು ಸೇರಿದಂತೆ ಎಲ್ಲರಿಗೂ ಮುಕ್ತ ಅವಕಾಶವಿದ್ದು, ಯಾವುದೇ ಪ್ರವೇಶ ಶುಲ್ಕವಿರುವುದಿಲ್ಲ ಎಂದರು.

38 ವಿಭಾಗಗಳೂ ಭಾಗಿ: ದಸರಾ ಅಂಗವಾಗಿ ತೋಟಗಾರಿಕೆ ಇಲಾಖೆ ಆಯೋಜಿಸುವ ಫಲಪುಷ್ಪ ಪ್ರದರ್ಶನ ಸ್ಪರ್ಧೆಯಲ್ಲಿ ಮೈಸೂರು ವಿವಿಯ 38 ವಿಭಾಗಗಳು ಭಾಗವಹಿಸಲಿದೆ. ಎಲ್ಲಾ ವಿಭಾಗಗಳಿಗೂ ಹೂ ಗಿಡಗಳನ್ನು ಪೂರೈಸಲಾಗುವುದು. ಈ ನಿಟ್ಟಿನಲ್ಲಿ ಈಗಾಗಲೇ ಕುಕ್ಕರಹಳ್ಳಿ ಕೆರೆ ಸುತ್ತಲು ಹಾಗೂ ಕುವೆಂಪು ವನದ ಬಳಿ ಸ್ವಚ್ಛತಾ ಕಾರ್ಯ ಆರಂಭಿಸಿದ್ದೇವೆ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದಲ್ಲಿ ನಿಮ್ಮ ಕೊಡುಗೆ ಏನು?

ಬಿಜೆಪಿಗೆ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ತಿರುಗೇಟು



ಮೈಸೂರು, ಆ.26(ಆರ್‌ಕೆಬಿ)- ದೇಶಕ್ಕೆ ಕಾಂಗ್ರೆಸ್ ಕೊಡುಗೆ ಏನು ಎಂಬ ಬಿಜೆಪಿಯವರ ಪ್ರಶ್ನೆಗೆ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ತಿರುಗೇಟು ನೀಡಿದ್ದು, ಮೊದಲು ಬಿಜೆಪಿಯವರು ಸ್ವಾತಂತ್ರ್ಯ ಹೋರಾಟದಲ್ಲಿ ತಮ್ಮ ಕೊಡುಗೆ ಏನು ಎಂಬ ಬಗ್ಗೆ ಮನನ ಮಾಡಿಕೊಳ್ಳಬೇಕು. ಸ್ವಾತಂತ್ರ್ಯ ತಂದುಕೊಟ್ಟವರನ್ನು ಪ್ರಶ್ನಿಸುವ ಬಿಜೆಪಿಯವರು ಸ್ವಾತಂತ್ರ್ಯಕ್ಕೆ ಯಾವುದೇ ಕೊಡುಗೆ ನೀಡಿಲ್ಲ. ಕಾಂಗ್ರೆಸ್‌ನ ಕೊಡುಗೆ ಬಗ್ಗೆ ಪ್ರಶ್ನಿಸುವ ನೈತಿಕತೆ ಅವರಿಗಿಲ್ಲ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಮೈಸೂರು ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಶಾಪವಾಗಿದ್ದ ಅಸ್ಪೃಶ್ಯತೆ ನಿವಾರಣೆ ಮಾಡಲು ಮಹಾತ್ಮ ಗಾಂಧಿ ಮತ್ತು ಕಾಂಗ್ರೆಸ್ ಶ್ರಮಿಸಿದೆ. ಆದರೆ ಬಿಜೆಪಿಯವರು ಬರೀ ಸುಳ್ಳನ್ನೇ ಅಸ್ತ್ರವಾಗಿಸಿಕೊಂಡು ಅನಗತ್ಯವಾಗಿ ಕಾಂಗ್ರೆಸ್ ಹಾಗೂ ಕಾಂಗ್ರೆಸ್ ನಾಯಕರ ಬಗ್ಗೆ ಟೀಕಾ ಪ್ರಹಾರದಲ್ಲಿ ತೊಡಗಿದ್ದಾರೆ. ಸುಳ್ಳು ಸುಳ್ಳು ಅಪಪ್ರಚಾರ ಮಾಡುತ್ತಾ, ಜಾತಿ, ಧರ್ಮಗಳ ನಡುವೆ ಕೋಮು ಭಾವನೆ ಕೆರಳಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು, ಸಿದ್ದರಾಮಯ್ಯ ಅವರು ಎಲ್ಲಾ ವರ್ಗದ ಜನರಿಗಾಗಿ ಹಲವಾರು ಜನಪರ ಯೋಜನೆ, ಕಾರ್ಯಕ್ರಮಗಳನ್ನು ನೀಡಿದ್ದಾರೆ. ಬಡವರ್ಗದವರಿಗಾಗಿ ಮನೆಗಳನ್ನು ನಿರ್ಮಿಸಿಕೊಟ್ಟಿದ್ದಾರೆ. ಆದರೆ ಬಿಜೆಪಿಯವರು ಬಡವರಿಗಾಗಿ ಏನು ಮಾಡಿದ್ದಾರೆ ಎಂದು ಪ್ರಶ್ನಿಸಿದ ಅವರು, ಬಿಜೆಪಿಯವರಿಗೆ ಬಡಜನರ ಬಗ್ಗೆ ಕಾಳಜಿ ಇಲ್ಲವೆಂಬುದು ಇದರಿಂದಲೇ ಗೊತ್ತಾಗುತ್ತದೆ ಎಂದರು.

ಬಿಜೆಪಿ ಸರ್ಕಾರದ ಸಾಧನೆ ಮತ್ತು ಕಾಂಗ್ರೆಸ್ ಸರ್ಕಾರದ ಸಾಧನೆಗಳ ಬಗ್ಗೆ ಬನ್ನಿ ಕುಳಿತು ಚರ್ಚಿಸೋಣ ಎಂದರು.

ಸಂಸದ ಪ್ರತಾಪಸಿಂಹ ವಿರುದ್ಧ ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರನಾಥ್ ಹೇಳಿಕೆಗೆ ಬಿಜೆಪಿ ಯುವ ಮೋರ್ಚಾ ಖಂಡನೆ



ಮೈಸೂರು, ಆ.26(ಆರ್‌ಕೆಬಿ)- ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಹಾಗೂ ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪ ಅಮರನಾಥ್ ಅವರು ಸಂಸದ ಪ್ರತಾಪಸಿಂಹ ಅವರ ತೇಜೋವಧೆ ಮಾಡುವಂತೆ ಹೇಳಿಕೆ ನೀಡಿದ್ದಾರೆಂದು ಬಿಜೆಪಿ ಯುವ ಮೋರ್ಚಾ ಖಂಡಿಸಿದೆ.

ಮೈಸೂರು ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ಯುವ ಮೋರ್ಚಾ ಮೈಸೂರು ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಪ್ರತಾಪ್‌ಸಿಂಹ ಕಾಂಗ್ರೆಸ್ ಪಕ್ಷದ ವೈಚಾರಿಕತೆ-ಆಚಾರ ವಿಚಾರಗಳ ಬಗ್ಗೆ ಮಾತನಾಡುತ್ತಿರುವುದಕ್ಕೆ ಪ್ರತಿಕ್ರಿಯೆ ನೀಡುವುದೇ ಆದರೆ ಆ ವಿಚಾರವಾಗಿ ಮಾತನಾಡಬೇಕೇ ಹೊರತು ವೈಯಕ್ತಿಕ ತೇಜೋವಧೆ ಮಾಡುವ ಹೇಳಿಕೆ ನೀಡಬಾರದು ಎಂದು ಎಚ್ಚರಿಸಿದರು.

ಸಂಸದ ಪ್ರತಾಪ್‌ಸಿಂಹ ಅವರು ಯಾವುದೇ ಹೇಳಿಕೆ ನೀಡಿದರೂ ಪಕ್ಷಕ್ಕೆ ಸಂಬಂಧಿಸಿದ ಹೇಳಿಕೆಯೇ ಹೊರತು ವೈಯಕ್ತಿಕ ಹೇಳಿಕೆಗಳಲ್ಲ. ಯಾವುದೇ ವ್ಯಕ್ತಿಯ ಬಗ್ಗೆ ವೈಯಕ್ತಿಕ ಹೇಳಿಕೆಯನ್ನು ನೀಡಿಲ್ಲ. ಇದನ್ನು ಸರಿಯಾಗಿ ಅರಿಯದ ಕಾಂಗ್ರೆಸ್‌ನವರು ಬಿಜೆಪಿ ಹಾಗೂ ಸಂಸದರ ವಿರುದ್ಧ ಅವಹೇಳನಕರವಾಗಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡುತ್ತಿರುವುದನ್ನು ಬಿಜೆಪಿ ಸಹಿಸುವುದಿಲ್ಲ. ಪುಷ್ಪಾ ಅಮರನಾಥ್ ಸಾಧನೆಯನ್ನು ಹೇಳಿಕೊಳ್ಳಲಿ. ಅದು ಬಿಟ್ಟು ನಿಮ್ಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಬಾಯಿಗೆ ಬಂದಂತೆ ಮಾತನಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಬಿಜೆಪಿ ಜನಸಾಮಾನ್ಯರಿಗಾಗಿ ಇರುವ ಪಕ್ಷ. ಇಲ್ಲಿ ವ್ಯಕ್ತಿ ಪೂಜೆ ಇಲ್ಲ. 2023ರಲ್ಲಿ ಅಷ್ಟೇ ಅಲ್ಲ, 2028ರಲ್ಲೂ ಬಿಜೆಪಿಯೇ ಅಧಿಕಾರಕ್ಕೆ ಬರುತ್ತದೆ. ಬಿಜೆಪಿ ಜನಪರ ಕೆಲಸ ಮಾಡಿದೆ. ಹೀಗಾಗಿ ಜನ ಮುಂದೆಯೂ ಬಿಜೆಪಿಯನ್ನು ಆಶೀರ್ವದಿಸಲಿದ್ದಾರೆ ಎಂದರು.

ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ವಿ.ಸೋಮಸುಂದರ್ ಮಾತನಾಡಿ, ಬಿಜೆಪಿ, ಸಿದ್ದರಾಮಯ್ಯರ ವೈಚಾರಿಕ ಭ್ರಷ್ಟತೆಯನ್ನು ಖಂಡಿಸುತ್ತಿದೆಯೇ ಹೊರತು ವೈಯಕ್ತಿಕ ತೇಜೋವಧೆ ಮಾಡುತ್ತಿಲ್ಲ ಎಂಬುದನ್ನು ಪುಷ್ಪಾ ಅಮರನಾಥ್ ಅರಿತುಕೊಳ್ಳಬೇಕು. ಸಮಾಜವಾದಿಯಾಗಿ ಸಿದ್ದರಾಮಯ್ಯನವರು ಕೋಟ್ಯಾಂತರ ರೂ. ಖರ್ಚು ಮಾಡಿ ಸಿದ್ದರಾಮೋತ್ಸವ ಆಚರಿಸಿಕೊಂಡಿದ್ದು ಸಮಾಜವಾದಿ ಲಕ್ಷಣವೇ? ಎಂದು ಪ್ರಶ್ನಿಸಿದರು.

ಪ್ರತಾಪ್ ಸಿಂಹ ವಿರುದ್ಧ ಡಾ॥ ಪುಷ್ಪಾ ಅಮರನಾಥ್ ಟೀಕೆಗೆ ಬಿಜೆಪಿ ಮಹಿಳಾ ಮೋರ್ಚಾ ತೀವ್ರ ಆಕ್ಷೇಪ

ವೈಯಕ್ತಿಕ ವಿಚಾರ ಬಿಟ್ಟು ಅಭಿವೃದ್ಧಿ ವಿಚಾರ ಪ್ರಸ್ತಾಪಿಸಲು ಆಗ್ರಹ



ಮೈಸೂರು,ಆ.26(ಎಂಟಿವೈ)- ತಮ್ಮ ಪಕ್ಷದ ನಾಯಕರನ್ನು ಓಲೈಸಿಕೊಳ್ಳಲು ಮಹಿಳಾ ಕಾಂಗ್ರೆಸ್ ರಾಜ್ಯಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಕೀಳು ಮಟ್ಟದ ರಾಜಕೀಯ ಮಾಡುತ್ತಿದ್ದಾರೆ ಎಂದು ಬಿಜೆಪಿ ಮಹಿಳಾ ಮೋರ್ಚಾ ನಗರಾಧ್ಯಕ್ಷೆ ಹೇಮಾ ನಂದೀಶ್ ಆರೋಪಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಪಕ್ಷದ ಇತರ ಮುಖಂಡರ ಓಲೈಕೆಗೆ ಪುಷ್ಪಾ ಹರಸಾಹಸ ಮಾಡುತ್ತಿದ್ದಾರೆ. ಸಂಸದ ಪ್ರತಾಪ ಸಿಂಹ ಅವರನ್ನು ಏಕವಚನದಲ್ಲಿ ಟೀಕಿಸಿದ್ದಾರೆ. ಮುಂಬರುವ ವಿಧಾನಸಭೆ ಚುನಾವಣೆಗೆ ಹುಣಸೂರು ಕ್ಷೇತ್ರದ ಮೇಲೆ ಪುಷ್ಪಾ ಅಮರನಾಥ್ ಕಣ್ಣಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕರ ಗಮನ ಸೆಳೆಯಲು ಬಿಜೆಪಿ ನಾಯಕರ ಮೇಲೆ ಅನಗತ್ಯ ಟೀಕೆ ಮಾಡುತ್ತಿದ್ದಾರೆ ಎಂದು ದೂರಿದರು.

ಪ್ರತಾಪ್ ಸಿಂಹ ಪಬ್ ಸಂಸ್ಕೃತಿಯಲ್ಲಿ ಮುಳುಗಿದ್ದಾರೆ ಎಂದು ಪುಷ್ಪಾ ಅಮರನಾಥ್ ಟೀಕಿಸಿರುವುದು ಖಂಡನೀಯ. ಬಿಜೆಪಿಗೆ ಪಬ್ ಸಂಸ್ಕೃತಿ ಬಗ್ಗೆ ತಿಳಿದಿಲ್ಲ. ಪಬ್ ಸಂಸ್ಕೃತಿ ಬಗ್ಗೆ ಹೇಳುವುದಾದರೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಕುರಿತು ನಾವು ಮಾತನಾಡಬೇಕಾಗುತ್ತದೆ. ಬೆಂಗಳೂರಿನಲ್ಲಿರುವ 'ಶುಗರ್ ಫ್ಯಾಕ್ಟರಿ' ಪಬ್ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ದಿ. ರಾಕೇಶ್ ಸಿದ್ದರಾಮಯ್ಯ ಅವರಿಗೆ ಸೇರಿದೆ. ಪಬ್ ಸಂಸ್ಕೃತಿ ಕುರಿತು ಮಾತನಾಡುವ ಪುಷ್ಪಾ ಅಮರ್‌ನಾಥ್ ಇದಕ್ಕೆ ಏನು ಹೇಳುತ್ತಾರೆ? ವೈಯಕ್ತಿಕ ವಿಚಾರ ಮುಂದಿಟ್ಟುಕೊಂಡು ಪ್ರತಾಪ್ ಸಿಂಹ ಅವರನ್ನು ಏಕವಚನದಲ್ಲಿ ಟೀಕೆ ಮಾಡುವುದು ಸರಿಯಲ್ಲ. ಕೂಡಲೇ ಪುಷ್ಪಾ ಅಮರನಾಥ್ ಕ್ಷಮೆಯಾಚಿಸದೆ ಇದ್ದರೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪುಷ್ಪಾ ಅಮರನಾಥ್ ಅಭಿವೃದ್ಧಿ ಕುರಿತು ಮಾತನಾಡದೆ ಕೇವಲ ಟೀಕೆ ಮಾಡುವುದರಲ್ಲಿಯೇ ಕಾಲಾಹರಣ ಮಾಡುತ್ತಿದ್ದಾರೆ. ಅವರು ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾಗಿದ್ದ ಸಂದರ್ಭ ಜಿಲ್ಲೆಯ ಅಭಿವೃದ್ಧಿಗೆ ನೀಡಿದ ಕೊಡುಗೆ ಏನು ಎಂಬುದನ್ನು ಬಹಿರಂಗಪಡಿಸಲಿ ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಗರ ಮಹಿಳಾ ಮೋರ್ಚಾ ಪದಾಧಿಕಾರಿಗಳಾದ ಸರಸ್ವತಿ, ಆಶಾ, ಪದ್ಮಶ್ರೀ, ಪ್ರಮೋದಿನಿ, ಧನಲಕ್ಷ್ಮಿ ಇದ್ದರು.

ಚಿಲ್ಲರೆ ಬೀಡಿ, ಸಿಗರೇಟ್ ವ್ಯಾಪಾರಕ್ಕೂ ಲೈಸೆನ್ಸ್ ಕಡ್ಡಾಯ ಖಂಡಿಸಿ ವ್ಯಾಪಾರಿಗಳ ಪ್ರತಿಭಟನೆ

ಮೈಸೂರು,ಆ.26(ಎಂಟಿವೈ)- ಚಿಲ್ಲರೆ ಬೀಡಿ, ಸಿಗರೇಟ್ ವ್ಯಾಪಾರಕ್ಕೂ ಲೈಸೆನ್ಸ್ ಕಡ್ಡಾಯಗೊಳಿಸಲು ಮುಂದಾಗಿರುವ ಸರ್ಕಾರದ ಕ್ರಮ ಖಂಡಿಸಿ, ಮೈಸೂರಲ್ಲಿ ಕರ್ನಾಟಕ ರಾಜ್ಯ ಸಣ್ಣ ಬೀಡಿ-ಸಿಗರೇಟು ಮಾರಾಟಗಾರರ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗದಿಂದ ಮೆರವಣಿಗೆ ಆರಂಭಿಸಿ, ದೊಡ್ಡಗಡಿಯಾರ, ಮಹಾತ್ಮಗಾಂಧಿ ವೃತ್ತ, ಚಿಕ್ಕಗಡಿ ಯಾರ ವೃತ್ತ ದೇವರಾಜ ಅರಸ್ ರಸ್ತೆಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿ, ಅಲ್ಲಿ ಧರಣಿ ನಡೆಸಿದರು.

ಕರ್ನಾಟಕ ರಾಜ್ಯ ಸಣ್ಣ ಬೀಡಿ-ಸಿಗರೇಟು ಮಾರಾಟಗಾರರ ಸಂಘದ ಅಡಿಯಲ್ಲಿ 50,000ಕ್ಕೂ ಹೆಚ್ಚು ಚಿಲ್ಲರೆ ವ್ಯಾಪಾರಿಗಳು ಜೀವನ ಕಂಡುಕೊಂಡಿದ್ದಾರೆ. ಆದರೆ ಸರ್ಕಾರ ಚಿಲ್ಲರೆ ಮಾರಾಟಕ್ಕೂ ಲೈಸೆನ್ಸ್ ಕಡ್ಡಾಯಗೊಳಿಸಲು ಮುಂದಾಗಿರುವುದು ಖಂಡನೀಯ. ಕೋವಿಡ್, ಲಾಕ್‌ಡೌನ್ ಮತ್ತಿತರೆ ನಿರ್ಬಂಧಗಳಿಂದ ಕಳೆದ ಎರಡು ವರ್ಷದಿಂದ ಸಾಕಷ್ಟು ಆರ್ಥಿಕ ಹಿನ್ನಡೆ ಅನುಭವಿಸಿದ ಲಕ್ಷಾಂತರ ಮಂದಿ



ಸಣ್ಣ ವ್ಯಾಪಾರಿಗಳು ಮತ್ತು ಅವರ ಕುಟುಂಬ ಸದಸ್ಯರಿಗೆ ಇದು ವಿನಾಶಕಾರಿಯಾಗಿದೆ. ತಂಬಾಕು ಕಾನೂನುಗಳನ್ನು ಅನುಷ್ಠಾನಕ್ಕೆ ತರುವ ಅಧಿಕಾರಿಗಳಿಂದ ಶೋಷಣೆ ಹೆಚ್ಚಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಾಹಿರಾತು ಮತ್ತು ವ್ಯಾಪಾರ ಹಾಗೂ ವಾಣಿಜ್ಯ, ಉತ್ಪಾದನೆ, ಪೂರೈಕೆ ಮತ್ತು ವಿತರಣೆಯ ನಿಷೇಧ ಕಾಯ್ದೆ ಅನ್ವಯ ನಮ್ಮ ಸದಸ್ಯರು ಈಗಾಗಲೇ ಅಧಿಕಾರಿಗಳಿಂದ ಕಿರುಕುಳ ಎದುರಿಸುತ್ತಿದ್ದಾರೆ. ವ್ಯಾಪಾರಸ್ಥರ ಅನಕ್ಷರತೆ ಹಾಗೂ ಅಜ್ಞಾನದ ಲಾಭ ಪಡೆದು ಶೋಷಿಸಲಾಗುತ್ತಿದೆ. ಮಾರಾಟಗಾರರು ಲೈಸೆನ್ಸ್ ಪಡೆಯಬೇಕು. ಪ್ರತಿವರ್ಷ ಲೈಸೆನ್ಸ್ ನವೀಕರಣ ಮಾಡಿಕೊಳ್ಳಬೇಕು. ಚಿಲ್ಲರೆ ವ್ಯಾಪಾರಿಗಳು ಲೈಸೆನ್ಸ್ ಪ್ರದರ್ಶಿಸುವುದು, ಸಲಹಾ ಪುಸ್ತಕ ಇರಿಸುವುದು ಸೇರಿದಂತೆ ವಿವಿಧ ಜವಾಬ್ದಾರಿಗನ್ನು ನೀಡಲಾಗುತ್ತಿದೆ. ಇವುಗಳ ನಿರ್ವಹಣೆಯಲ್ಲಿ ಹಿನ್ನಡೆಯಾದರೆ ಹೆಚ್ಚಿನ ದಂಡಿಸುವ ಎಚ್ಚರಿಕೆ ನೀಡಲಾಗುತ್ತಿದೆ ಎಂದು ದೂರಿದರು.

ಹೀಗಾಗಿ ನಗರಾಭಿವೃದ್ಧಿ ಇಲಾಖೆ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಲೈಸೆನ್ಸ್ ಪಡೆಯುವ ಕರ್ನಾಟಕ ಮುನಿಸಿಪಾಲಿಟಿಗಳ ಮಾದರಿ ಬೈಲಾ ಅನುಷ್ಠಾನ ಮಾಡಬಾರದು. ಬದಲಿಗೆ ಕೊರೊನಾ ವೈರಸ್ ಸಾಂಕ್ರಾಮಿಕದಿಂದ ಉಂಟಾದ ಆದಾಯ ನಷ್ಟದಿಂದ ಹೊರಬರಲು ನೆರವಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಸಿದ್ದರಾಜು, ಕಾರ್ಯದರ್ಶಿ ಗುರುಸ್ವಾಮಿ, ನೂರುಲ್ಲಾ, ಕೀರ್ತಿ, ಶಬ್ಬೀರ್, ಸೌಕತ್, ಮೋಹನ್, ರಾಜೇಂದ್ರ ನಾರಾಯಣಶೆಟ್ಟಿ ಪ್ರದೀಪ್, ಪ್ರಕಾಶ್, ಗುರುದೇವ್, ರಾಜಾರಾಂ, ರಾಮದೇವ್ ಸೇರಿದಂತೆ ನೂರಾರು ಮಂದಿ ಪಾಲ್ಗೊಂಡಿದ್ದರು.

ಹುಣಸೂರಲ್ಲಿ ಕೆಂಪೇಗೌಡರ ಜಯಂತಿ ಅದ್ಧೂರಿ ಆಚರಣೆ

ಮೈಸೂರಲ್ಲಿ ಕೆಂಪೇಗೌಡ ಜಯಂತಿ ಆಚರಣೆಗೆ ಜಿಟಿಡಿ ಕಾರಣ

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಬಣ್ಣನೆ



ಹುಣಸೂರು, ಆ.26– ಬೆಂಗಳೂರಿಗೆ ಮಾತ್ರ ಸೀಮಿತವಾಗಿದ್ದ ಕೆಂಪೇಗೌಡರ ಜಯಂತಿಯನ್ನು ಮೈಸೂರಿಗೂ ವಿಸ್ತರಿಸಿದ ಕೀರ್ತಿ ಶಾಸಕ ಜಿ.ಟಿ.ದೇವೇಗೌಡರಿಗೆ ಸಲ್ಲುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಬಣ್ಣಿಸಿದರು.

ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ಶುಕ್ರವಾರ ನಡೆದ ನಾಡಪ್ರಭು ಕೆಂಪೇಗೌಡರ 513ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೆಂಪೇಗೌಡರ ಜಯಂತಿ ಬೆಂಗಳೂರಿಗೆ ಮಾತ್ರ ಸೀಮಿತವಾಗಿತ್ತು. 2013ರಲ್ಲಿ ಜಿ.ಟಿ.ದೇವೇಗೌಡರು ಮೊದಲ ಬಾರಿಗೆ ಕೆಂಪೇಗೌಡರ ಜಯಂತಿ ಜ್ಯೋತಿಯನ್ನು ಮೈಸೂರಿಗೆ ತಂದರು ಎಂದರು. ಬೆಂಗಳೂರಿನಲ್ಲಿ 64 ವಿವಿಧ ಪೇಟೆಗಳು ಹಾಗೂ ಕೆರೆಕಟ್ಟೆಗಳನ್ನು ಅಭಿವೃದ್ಧಿಪಡಿಸಿ ವಿಶ್ವದಲ್ಲೇ ಮಾದರಿ ನಗರವನ್ನಾಗಿ ನಿರ್ಮಿಸಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ ಎಂದರು.

ಕೆಂಪೇಗೌಡರು ಸಮಾಜದ ಎಲ್ಲಾ ವರ್ಗದ ಜನತೆಗೆ ಉತ್ತಮ ಸೇವೆ ನೀಡುವ ಮೂಲಕ ದಕ್ಷ ಆಡಳಿತಗಾರರಾಗಿ 400 ವರ್ಷಗಳ ಹಿಂದೆಯೇ ಜಾತಿ ವ್ಯವಸ್ಥೆಗೆ ಒತ್ತು ನೀಡದೆ, ಜಾತ್ಯಾತೀತ ವ್ಯಕ್ತಿಯಾಗಿ ಹೊರಹೊಮ್ಮಿದ್ದಾರೆ. ಆ ಸಾಲಿನಲ್ಲಿ ಸಮಾಜದ ಕೆಂಗಲ್ ಹನುಮಂತಯ್ಯ, ಎಸ್.ಎಂ.ಕೃಷ್ಣ, ಹೆಚ್.ಡಿ.ದೇವೇಗೌಡ, ಕಡಿದಾಳ್ ಮಂಜಣ್ಣ, ಡಿ.ವಿ.ಸದಾನಂದಗೌಡ ಹೀಗೆ ಇನ್ನೂ ಹಲವು ಒಕ್ಕಲಿಗ ನಾಯಕರು ಬೇರೆ ಸಮಾಜದವರಿಗೆ ಗೌರವ ನೀಡಿ, ಒಗ್ಗೂಡಿ ಬದುಕು ನಡೆಸಿ ಸರ್ವ ಜನಾಂಗ ಅಭಿವೃದ್ಧಿ ಪಡಿಸುವಲ್ಲಿ ಮುಂದಾಗಿದ್ದಾರೆ ಎಂದರು.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಮಾತನಾಡಿ, ಕೆಂಪೇಗೌಡರು ಒಂದು ಜಾತಿಗೆ ಸೀಮಿತವಾಗದೇ ಸರ್ವ ಧರ್ಮಗಳಿಗೂ ನೆಲೆ ದೊರಕಿಸಿಕೊಡುವ ಮೂಲಕ ಜನಪರ ಕೆಲಸ ಮಾಡಿ ಬೆಂಗಳೂರನ್ನು ವಿಶ್ವಮಟ್ಟಕ್ಕೆ ಪರಿಚಯಿಸಿದರು. ಆ ದೃಷ್ಟಿಯಿಂದ ನಾಡಪ್ರಭುಗಳ ಜಯಂತಿಯನ್ನು ಒಕ್ಕಲಿಗ ಸಮಾಜ ಮಾತ್ರವಲ್ಲದೆ, ಸರ್ವ ಜನಾಂಗದವರು ಆಚರಿಸಬೇಕು ಎಂದರು.

ಶಾಸಕ ಜಿ.ಟಿ.ದೇವೇಗೌಡ, ಮಾತನಾಡಿ, ಕೆಂಪೇಗೌಡರು ದೂರದೃಷ್ಟಿಯ ಅಭಿವೃದ್ಧಿ ಹರಿಕಾರರಾಗಿ, ಸರ್ವರಿಗೂ ಸಮಪಾಲು ನೀಡಿ ನಿಸ್ವಾರ್ಥ ಬದುಕಿಗೂ ಆಸರೆಯಾಗಿ ನಿಂತರು. ಹಾಗೇ ರೈತಾಪಿ ವರ್ಗಕ್ಕೆ ಅನುಕೂಲವಾಗಲೆಂದು ನೂರಾರು ಕೆರೆಗಳನ್ನು ನಿರ್ಮಿಸಿದರು. ಸಾವಿರಾರು ಗಿಡಗಳನ್ನು ನೆಟ್ಟಿ ಪೋಷಿಸಿದರು. ನೂರಾರು ದೇವಸ್ಥಾನಗಳು, ಸುಮಾರು 64 ಪೇಟೆಗಳನ್ನು ನಿರ್ಮಾಣ ಮಾಡುವ ಮುಖೇನಾ ನಾಡಪ್ರಭುಗಳಾಗಿ ರೂಪುಗೊಂಡು ನಮ್ಮೆಲ್ಲರ ಮನದಲ್ಲಿ ಉಳಿದಿದ್ದಾರೆ ಎಂದರು.

ಎಂಎಲ್‌ಸಿ ಎ.ಹೆಚ್. ವಿಶ್ವನಾಥ್ ಮಾತನಾಡಿ, ಕೆಂಪೇಗೌಡರ ಅದಮ್ಯ ಸಾಧನೆಯನ್ನು ಯಾರೂ ಮಾಡಲೂ ಸಾಧ್ಯವಿಲ್ಲ. ಆ ದಾರಿಯಲ್ಲಿ ಕೆಂಗಲ್ ಹನುಮಂತಯ್ಯ, ಸಾಹುಕಾರ್ ಚನ್ನಯ್ಯ, ಕಡಿದಾಳ್ ಮಂಜಪ್ಪ, ಎಸ್.ಎಂ.ಕೃಷ್ಣ, ಹೆಚ್.ಡಿ.ದೇವೇಗೌಡರು ಕರ್ನಾಟಕದ ಹೆಮ್ಮೆಯ ಮಗನಾಗಿ ಪ್ರಧಾನಮಂತ್ರಿಯಾಗುವುದು ಕಡಿಮೆ ಸಾಧನೆಯಲ್ಲ. ಅದೇ ರೀತಿ ಕೆ.ಎಚ್. ರಾಮಯ್ಯ ಕುಟುಂಬ ಕೂಡ ರಾಜ್ಯದಲ್ಲಿ ಮೊದಲ ಬಾರಿಗೆ ದಲಿತ ಮಕ್ಕಳಿಗೆ ಹಾಸ್ಟೆಲ್ ತೆರೆಯುವ ಮೂಲಕ ಹಿಂದುಳಿದ ವರ್ಗಕ್ಕೆ ಆದ್ಯತೆ ನೀಡಿದರು. ತುಳಸಿದಾಸಪ್ಪ ಮಹಾತ್ಮ ಗಾಂಧಿಯೊಂದಿಗೆ ಸ್ನೇಹ ಸಂಪರ್ಕ ಹೊಂದಿದ್ದರು ಎಂದರು.

ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿ, ನಾಡು ಕಂಡ ಅಪ್ರತಿಮ ನಾಯಕ ಕೆಂಪೇಗೌಡರಂತೆ ನಾಡಿಗೋಸ್ಕರ ಬಲಿದಾನ ಮಾಡಿದ ಅವರ ಸೊಸೆ ಲಕ್ಷ್ಮಿದೇವಿ ಹೆಬ್ಬಾಗಿಲಿಗೆ ತಮ್ಮ ದೇಹವನ್ನು ಅರ್ಪಿಸುವ ಮೂಲಕ ಮಾವ ಕೆಂಪೇಗೌಡರಿಗೆ ನೆರವಾಗಿದ್ದು ನಾಡಿನ ಜನತೆ ಎಂದೂ ಮರೆಯಬಾರದು ಎಂದರು.

ಡಾ.ಶ್ರೀನಿರ್ಮಲಾನಂದನಾಥಸ್ವಾಮಿ ಮಾತನಾಡಿ, ಇಂದು ಅಮೆರಿಕಾ ನಮ್ಮ ಬೆಂಗಳೂರನ್ನು ಮಾದರಿಯಾಗಿ ಅನುಕರಿಸುತ್ತಿದೆ ಎಂದರೆ ಅದಕ್ಕೆ ಕೆಂಪೇಗೌಡರೇ ಕಾರಣ. ಅದೇ ರೀತಿ ಕುಮಾರಸ್ವಾಮಿ ಅವರು ಕಣ್ಣೀರು ಸುರಿಸಿದ ಮಾತ್ರಕ್ಕೆ ಅವರನ್ನು ಟೀಕಿಸಬೇಡಿ. ಅವರದು ತಾಯಿ ಹೃದಯ ಎಂದ ಅವರು, ಜಿಟಿಡಿ, ಹೆಚ್‌ಡಿಕೆ ಒಂದೇ ವೇದಿಕೆಯಲ್ಲಿ ಕಂಡು ಬಂದಿದ್ದು, ಸಮಾಜದ ಅಭಿವೃದ್ಧಿಗೆ ಪೂರಕವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮಿ ಹಾಗೂ ಮೈಸೂರು ಶಾಖಾ ಮಠದ ಸೋಮೇಶ್ವರನಾಥಸ್ವಾಮಿ ಆಶೀರ್ವಚನ ನೀಡಿದರು. ಇದೇ ಸಂದರ್ಭ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.90%ರಷ್ಟು ಅಂಕ ಪಡೆದ ಸಮುದಾಯದ 100ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕರಾದ ಸಾ.ರಾ. ಮಹೇಶ್, ಕೆ.ಮಹದೇವ್, ವೆಂಕಟರಮಣಪ್ಪ, ಸಿ.ಎನ್.ಮಂಜೇಗೌಡ, ಡಾ.ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ರಮೇಶ್‌ಗೌಡ, ಹೆಚ್.ವಿಶ್ವನಾಥ್, ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷರೂ ಆದ ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷ ಜಿ.ಡಿ ಹರೀಶ್‌ಗೌಡ, ಮೈಮುಲ್ ಅಧ್ಯಕ್ಷ ಪ್ರಸನ್ನ, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ತಾಲೂಕು ಜೆಡಿಎಸ್ ಅಧ್ಯಕ್ಷ ದೇವರಹಳ್ಳಿ ಸೋಮಶೇಖರ್, ಜಿಪಂ ಮಾಜಿ ಸದಸ್ಯ ಸಿ.ಟಿ.ರಾಜಣ್ಣ, ಒಕ್ಕಲಿಗರ ಸಂಘದ ಅಧ್ಯಕ್ಷ ಗಣೇಶ್‌ಗೌಡ, ನಿರ್ದೇಶಕರಾದ ಮಂಜುನಾಥ್, ಮರಿಗೌಡ, ಮುಖಂಡರಾದ ಪ್ರಸನ್ನ, ದೇವರಾಜ್ ಒಡೆಯರ್, ಕೆ.ಎಸ್.ಕುಮಾರ್, ಬಸವರಾಜು, ಸೂರ್ಯ ಕುಮಾರ್, ಮಾಜಿ ಮೇಯರ್ ರವಿ, ಮುಖಂಡರಾದ ಅಸ್ವಾಳ್ ಕೆಂಪೇಗೌಡ, ವಿಜಯಮ್ಮ, ನಾಗಣ್ಣ, ಯೋಗಾನಂದ, ಸತೀಶ್ ಪಾಪಣ್ಣ, ನಗರಸಭೆ ಅಧ್ಯಕ್ಷೆ ಗೀತಾ ನಿಂಗರಾಜು, ಸದಸ್ಯ ಶ್ರೀನಾಥ್, ಚಂದ್ರಶೇಖರ್, ವೆಂಕಟೇಶ್ ಇದ್ದರು.

ಗಣ್ಯರಿಗೆ ಅದ್ಧೂರಿ ಸ್ವಾಗತ: ಕಾರ್ಯಕ್ರಮಕ್ಕೂ ಮುನ್ನಾ ಪಟ್ಟಣಕ್ಕೆ ಆಗಮಿಸಿದ ಗಣ್ಯರನ್ನು ತೆರೆದ ವಾಹನದಲ್ಲಿ ಅದ್ಧೂರಿಯಾಗಿ ಮೆರವಣಿಗೆ ಮಾಡಲಾಯಿತು. ಜೆಸಿಬಿ ಮಾಲೀಕರ ಸಂಘದ ಅಧ್ಯಕ್ಷ ನಿಲವಾಗಿಲು ಶ್ರೀನಿವಾಸ್ ನೇತೃತ್ವದಲ್ಲಿ ಆಯೋಜಿಸಿದ್ದ ಮೆರವಣಿಗೆ ನಗರದ ದೇವರಾಜ ಅರಸು ಪ್ರತಿಮೆ ಮುಂಭಾಗದಿಂದ ಆರಂಭಗೊಂಡು ಕಲ್ಪತರು ಸರ್ಕಲ್ ವೃತ್ತದ ಮೂಲಕ ಮುನೇಶ್ವರ ಕಾವಲ್ ಮೈದಾನಕ್ಕೆ ತಲುಪಿತು. ಈ ವೇಳೆ ದಾರಿ ಮಧ್ಯೆ ನಿಂತಿದ್ದ 10ಕ್ಕೂ ಹೆಚ್ಚು ಜೆಸಿಬಿ ಮೂಲಕ ಗಣ್ಯರಿಗೆ ಪುಷ್ಪಾರ್ಚನೆ ಮಾಡಲಾಯಿತು. ಮೆರವಣಿಗೆಗೆ ಕೀಲು ಕುದುರೆ, ಚೆಂಡೆ ವಾದ್ಯ, ಡೊಳ್ಳು ಕುಣಿತ, ಯಕ್ಷಗಾನ, ಹುಲಿ ಕುಣಿತ, ವೀರಗಾಸೆ, ಗಾರುಡಿ ಗೊಂಬೆಗಳು ಸೇರಿದಂತೆ ಅನೇಕ ಜಾನಪದ ಕಲಾ ಸಂಘಗಳು ಸಾಥ್ ನೀಡಿದವು. ಇದೇ ವೇಳೆ ಬೆಳ್ಳಿ ರಥದಲ್ಲಿ ಕೆಂಪೇಗೌಡರ ಭಾವಚಿತ್ರವನ್ನು ಮೆರವಣಿಗೆ ಮಾಡಲಾಯಿತು.

ನಿಮ್ಮ ಆಶೀರ್ವಾದ ನನಗೆ ಅವಶ್ಯಕ: ಡಿಕೆಶಿ



ಹುಣಸೂರು: ಆಗಾಗ ಒಕ್ಕಲಿಗ ಸಮುದಾಯದ ಕಾರ್ಯಕ್ರಮಗಳಲ್ಲಿ ಮುಖ್ಯಮಂತ್ರಿ ಯಾಗುವ ಅಭಿಲಾಷೆ ವ್ಯಕ್ತಪಡಿಸುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು, ನಗರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲೂ ಮುಂದಿನ ಮುಖ್ಯಮಂತ್ರಿಯಾಗಲು ತಮ್ಮ ಆಶೀರ್ವಾದ ಬೇಕು ಎಂದು ಜನರಿಗೆ ಪರೋಕ್ಷವಾಗಿ ಮನವಿ ಮಾಡಿಕೊಂಡರು.

ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಡಿ.ಕೆ.ಶಿವಕುಮಾರ್, ನನಗೆ ಹುಣಸೂರಿನ ಮಹಾಜನತೆ ಬಗ್ಗೆ ವಿಶ್ವಾಸ ಇದೆ. ಪವಿತ್ರವಾದ ಸಮಾರಂಭದಲ್ಲಿ ನಿಮ್ಮನ್ನು ಭೇಟಿ ಮಾಡಿದ್ದು ದೊಡ್ಡ ಭಾಗ್ಯ. ನಿಮ್ಮ ಜತೆ ನಾನಿದ್ದೇನೆ ಎಂದು ಹೇಳುವುದು ಒಂದು ಭಾಗ್ಯ. ನಿಮ್ಮ ಆಶೀರ್ವಾದದ ಅವಶ್ಯಕತೆ ನನಗಿದೆ. ನಾನು ಕಷ್ಟ ಕಾಲದಲ್ಲಿದ್ದಾಗ, ಜೈಲಿನಲ್ಲಿದ್ದಾಗ ಮೈಸೂರಿನ ಜನತೆ ನನ್ನ ಪರವಾಗಿ ನಿಂತದ್ದನ್ನು ಮರೆಯಲು ಸಾಧ್ಯವಿಲ್ಲ. ಅದೇ ರೀತಿ, ಕಾಂಗ್ರೆಸ್ ಪಕ್ಷ ನನಗೆ ದೊಡ್ಡ ಜವಾಬ್ದಾರಿಯನ್ನು ವಹಿಸಿದೆ. ನನ್ನ ಅಭಿಲಾಷೆ ಈಡೇರಿಸಲು ನೀವು ನನ್ನ ಜತೆ ನಿಲ್ಲಬೇಕು. ನಿಮ್ಮ ಸೇವೆ ಮಾಡುತ್ತೇನೆ, ಎಲ್ಲಾ ಧರ್ಮ ಜಾತಿಯನ್ನು ಒಟ್ಟಿಗೆ ಕರೆದುಕೊಂಡು ಹೋಗುತ್ತೇನೆ. ನಿಮ್ಮ ಆಶೀರ್ವಾದ ನನಗೆ ಬೇಕಾಗಿದೆ ಎಂದು ಮಾತಿನುದ್ದಕ್ಕೂ ಒಕ್ಕಲಿಗರ ಆಶೀರ್ವಾದ ಬೇಡಿದರು.

ಹುಣಸೂರು ಜನತೆ ನನ್ನ, ಕುಮಾರಣ್ಣನ ಮತ್ತೆ ಒಂದುಗೂಡಿಸಿದ್ದಾರೆ: ಜಿಟಿಡಿ

ಹುಣಸೂರು, ಆ.26– ಮೂರು ವರ್ಷದಿಂದ ನಾನು, ಕುಮಾರಸ್ವಾಮಿ ಅವರ ಜೊತೆ ಮಾತಾಡಿರಲಿಲ್ಲ. ಹುಣಸೂರು ಜನತೆ ನಮ್ಮಿಬ್ಬರನ್ನು ಒಂದು ಮಾಡಿದ್ದಾರೆ ಎಂದು ಹೇಳುವ ಮೂಲಕ ಶಾಸಕ ಜಿ.ಟಿ.ದೇವೇಗೌಡರು ಜೆಡಿಎಸ್‌ನಲ್ಲೇ ಉಳಿಯುವ ಬಗ್ಗೆ ಪರೋಕ್ಷವಾಗಿ ಸೂಚನೆ ಕೊಟ್ಟಿದ್ದಾರೆ.

ಹುಣಸೂರಿನಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಜಿ.ಟಿ.ದೇವೇಗೌಡ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡು ಅಚ್ಚರಿ ಮೂಡಿಸಿದರು. ಅಲ್ಲದೇ ಹೆಚ್‌ಡಿಕೆ, ಜಿಟಿಡಿ ಹಾಗೂ ಸಾ.ರಾ.ಮಹೇಶ್ ಮೂವರು ಪರಸ್ಪರ ಕೈ ಹಿಡಿದು ದೀಪ ಬೆಳಗುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಜಿ.ಟಿ.ದೇವೇಗೌಡರ ನಂತರ ಅವರ ಪುತ್ರ ಜಿ.ಡಿ.ಹರೀಶ್ ಗೌಡ ಜೊತೆ ಹೆಚ್‌ಡಿಕೆ ಆತ್ಮೀಯವಾಗಿ ಮಾತುಕತೆ ನಡೆಸಿ, ಗಮನ ಸೆಳೆದರು.

ಈ ವೇಳೆ ಸಮಾರಂಭದಲ್ಲಿ ಮಾತನಾಡಿದ ಜಿಟಿಡಿ, ನೀವು ಗಟ್ಟಿಯಾಗಿ ಜೊತೆಯಾಗಿ ಇರಿ. ಜಯಶಾಲಿಯಾಗಿ ಬನ್ನಿ ಎಂದು ನಮಗೆ ಸ್ವಾಮೀಜಿ ಹೇಳಿದ್ದಾರೆ. ನನ್ನ ಮಗನಿಗೆ ಟಿಕೆಟ್ ಕೊಡಿ ಅಂತಾ ನಾನು ಎಂದೂ ಕುಮಾರಣ್ಣನ ಕೇಳಿಲ್ಲ ಎಂದು ತಿಳಿಸಿದರು. ಜನತಾ ಪರಿವಾರ ಜಯಪ್ರಕಾಶ್ ನಾರಾಯಣ್ ಅವರು ಕಟ್ಟಿದ ಆಸ್ತಿ. ರಾಜ್ಯದಲ್ಲಿ ಹೆಚ್.ಡಿ.ದೇವೇಗೌಡರು ಶ್ರಮದಿಂದ ಕಟ್ಟಿರುವ ಪಕ್ಷವನ್ನು ಬೆಳೆಸುವ ಜವಾಬ್ದಾರಿ ಕುಮಾರಸ್ವಾಮಿ ಅವರ ಮೇಲಿದೆ. ಜನರು ಮತ್ತು ಸ್ವಾಮೀಜಿಗಳ ಆಶೀರ್ವಾದ ನಿಮ್ಮ ಮೇಲಿದೆ ಎಂದು ಹೆಚ್‌ಡಿಕೆ ಅವರನ್ನು ಹಾರೈಸಿದರು. ಪಕ್ಷದ ಆಂತರಿಕ ವಿಚಾರವಾಗಿ ಸಾ.ರಾ.ಮಹೇಶ್ ಹಾಗೂ ಕುಮಾರಸ್ವಾಮಿ ಅವರೊಂದಿಗೆ ಜಿ.ಟಿ.ದೇವೇಗೌಡ ಅವರು ಮುನಿಸಿಕೊಂಡಿದ್ದರು. ಪಕ್ಷದ ಯಾವುದೇ ಕಾರ್ಯಕ್ರಮದಲ್ಲೂ ಭಾಗವಹಿಸುತ್ತಿರಲಿಲ್ಲ. ಅನೇಕ ಬಾರಿ ಹೆಚ್‌ಡಿಕೆ ಭಾಗವಹಿಸುತ್ತಿದ್ದ ಕಾರ್ಯಕ್ರಮಗಳಿಗೆ ಗೈರಾಗಿದ್ದರು. ತಾನು ಈಗ ಜೆಡಿಎಸ್ ಶಾಸಕನಾಗಿದ್ದು, ಮುಂದಿನ ರಾಜಕೀಯ ನಿರ್ಧಾರದ ಬಗ್ಗೆ ಕ್ಷೇತ್ರದ ಜನರ ಅಭಿಪ್ರಾಯ ಪಡೆದು ತಿಳಿಸುತ್ತೇನೆ ಎಂದು ಪದೇ ಪದೇ ಹೇಳುವ ಮೂಲಕ ಜೆಡಿಎಸ್ ತೊರೆಯುವ ಸೂಚನೆ ನೀಡುತ್ತಲೇ ಬಂದಿದ್ದರು. ಮತ್ತೊಂದೆಡೆ ವಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಬಿಜೆಪಿ ಮುಖಂಡರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದರು. ಸಿದ್ದರಾಮಯ್ಯ ನನ್ನನ್ನು ಕಾಂಗ್ರೆಸ್‌ಗೆ ಕರೆದಿಲ್ಲ, ಆದರೆ ಬಿಜೆಪಿಗೆ ಹೋಗಬೇಡ ಎಂದು ಹೇಳಿದ್ದಾರೆ ಅನ್ನುವ ಮೂಲಕ ತಮ್ಮ ರಾಜಕೀಯ ವೈರಿಯಾಗಿದ್ದ ಸಿದ್ದರಾಮಯ್ಯ ಜೊತೆ ರಾಜೀ ಆಗಿರುವುದನ್ನು ಪರೋಕ್ಷವಾಗಿ ತಿಳಿಸಿದರು.



3 ವರ್ಷದ ನಂತರ ಜಿಟಿಡಿ, ಕುಮಾರಸ್ವಾಮಿ ಸಮಾಗಮ

ಹುಣಸೂರು, ಆ.26– ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಶುಕ್ರವಾರ ಹುಣಸೂರಿನಲ್ಲಿ ನಡೆದ ಕೆಂಪೇಗೌಡ ಜಯಂತಿ ಯಲ್ಲಿ ಶಾಸಕ ಜಿ.ಟಿ.ದೇವೇಗೌಡ ಹಾಗೂ ಅವರ ಪುತ್ರ ಹರೀಶ್‌ಗೌಡರನ್ನು ಹಾಡಿ ಹೊಗಳಿದರು. ಅಲ್ಲದೇ ಜತೆಯಾಗಿ ಕುಳಿತು ಕಷ್ಟ ಸುಖ ಹಂಚಿಕೊಂಡರು.

ಸಮಾರಂಭದಲ್ಲಿ ಮಾತನಾಡಿದ ಮಾಜಿ ಸಿಎಂ ಹೆಚ್.ಡಿ.ಕುಮಾರ ಸ್ವಾಮಿ, ಜಿ.ಡಿ.ಹರೀಶ್‌ಗೌಡರು ಸದಾ ಹುರುಪಿನಿಂದ ಕೆಲಸ ಮಾಡುವ ಯುವ ನಾಯಕ. ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿರುವ ಅವರಿಗೆ ಭವಿಷ್ಯದಲ್ಲಿ ಉತ್ತಮ ಅವಕಾಶ ಇದೆ ಎಂದರು. ಜಿ.ಟಿ.ದೇವೇಗೌಡರು 3 ವರ್ಷಗಳಿಂದ ನನ್ನ ಜತೆ ಮಾತನಾಡಿರಲಿಲ್ಲ. ಮೈತ್ರಿ ಸರ್ಕಾರದ ನಂತರ ವೇದಿಕೆಯಲ್ಲಿ ನಾವು ಜತೆಯಾಗಿ ಕಾಣಿಸಿಕೊಂಡಿರಲಿಲ್ಲ. ಬಹುವರ್ಷದ ಬಳಿಕ ಪ್ರಥಮವಾಗಿ ನಾನು, ಜಿ.ಟಿ.ದೇವೇ ಗೌಡರು ಒಟ್ಟಿಗೆ ವೇದಿಕೆ ಹಂಚಿಕೊಂಡಿದ್ದೇವೆ. ಕೆಲವರು ನನ್ನ ಮತ್ತು ಜಿ.ಟಿ. ದೇವೇಗೌಡರ ನಡುವೆ ಬಿರುಕಿದೆ ಎಂದೆಲ್ಲ ಹೇಳುತ್ತಿದ್ದರು. ಆದರೆ, ನಮ್ಮ ಸಂಬಂಧ ಚೆನ್ನಾಗಿಯೇ ಇದೆ. ಹುಣಸೂರು ಜಿ.ಟಿ. ದೇವೇಗೌಡರ ಕರ್ಮಭೂಮಿ. ಈ ಕಾರ್ಯಕ್ರಮದ ಮೂಲಕ ಅವರು ನನಗೆ ಸಲಹೆ ನೀಡಿದ್ದಾರೆ. ನಾನು ಅವರ ಸಲಹೆಯನ್ನು ಸ್ವೀಕರಿಸಿದ್ದೇನೆ. ಮುಂದಿನ ರಾಜಕಾರಣದ ಬಗ್ಗೆ ತಾಯಿ ಚಾಮುಂಡೇ ಶ್ವರಿಯೇ ಅವರ ಮೂಲಕ ಹೇಳಿ ಕಳುಹಿಸಿದ್ದಾಳೆ. ಮಾಜಿ ಶಾಸಕರಾಗಿದ್ದ ಚಿಕ್ಕಮಾದು ಅವರು ಹುಣಸೂರಿನಿಂದ ಸ್ಪರ್ಧೆ ಮಾಡಲು ಆಸೆ ಹೊಂದಿದ್ದರು. ಆದರೆ ಹೆಚ್.ಡಿ.ಕೋಟೆಯಲ್ಲಿ ಚಿಕ್ಕಮಾದು ಶಾಸಕರಾಗಲು ಜಿ.ಟಿ.ದೇವೇಗೌಡರೇ ಕಾರಣ. ಚಿಕ್ಕಮಾದು ಅವರಿಗೆ ರಾಜಕೀಯ ವಾಗಿ ಜಿ.ಟಿ.ದೇವೇಗೌಡರು ಹೊಸ ಶಕ್ತಿ ನೀಡಿದರು.

ದೊಡ್ಡ ದೇವೇಗೌಡರು (ಹೆಚ್.ಡಿ.ದೇವೇಗೌಡ) ಮತ್ತು ಜಿ.ಟಿ.ದೇವೇಗೌಡರು ಇಬ್ಬರೂ ಎಲ್ಲರನ್ನೂ ಒಂದೇ ರೀತಿ ನೋಡುವ ಗುಣವನ್ನು ಹೊಂದಿದ್ದಾರೆ ಎಂದ ಅವರು, ವೈಯಕ್ತಿಕವಾಗಿ ನನಗೆ ಮತ್ತು ಹೆಚ್.ವಿಶ್ವನಾಥ್ ಅವರಿಗೆ ಯಾವುದೇ ವೈಮನಸ್ಸುಗಳಿಲ್ಲ. ವಿಶ್ವನಾಥ್ ಅವರಿಗೂ ಹುಣಸೂರಿನ ಜತೆ ಶಕ್ತಿಯನ್ನು ಕೊಟ್ಟಿದ್ದಾರೆ. ಮುಂದಿನ ದಸರಾ ಮಹೋತ್ಸವದ ಉದ್ಘಾಟನೆಗೆ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರನ್ನು ಆಹ್ವಾನಿಸುವ ವಿಚಾರವನ್ನು ಗಮನಿಸಿ ದ್ದೇನೆ. ಸೂಕ್ತ ನಿರ್ಧಾರವನ್ನು ನಾನು ಸ್ವಾಗತಿಸುತ್ತೇನೆ ಎಂದರು.

ಸೆ.20, ಜೆಡಿಎಸ್ ಮುಖಂಡ ಕೃಷ್ಣನಾಯಕರಿಗೆ ಅಭಿನಂದನೆ

ಹೆಚ್.ಡಿ.ಕೋಟೆ, ಆ.26– ತಾಲೂಕು ಜೆಡಿಎಸ್ ವತಿಯಿಂದ ಪಟ್ಟಣದಲ್ಲಿ ಸೆ.20 ರಂದು ಮುಖಂಡ ಕೆ.ಎಂ.ಕೃಷ್ಣನಾಯಕ ಅವರನ್ನು ಅಭಿನಂದಿಸಲಾಗುವುದು ಎಂದು ತಾಲೂಕು ಜೆಡಿಎಸ್ ಮಾಜಿ ಅಧ್ಯಕ್ಷ ಸಿ.ವಿ. ನಾಗರಾಜ್ ತಿಳಿಸಿದರು.



ಕೃಷ್ಣನಾಯಕ

ಪಟ್ಟಣದ ಗುರುಭವನದಲ್ಲಿ ನಡೆದ ಜೆಡಿಎಸ್ ಮುಖಂಡ ಕೆ.ಎಂ.ಕೃಷ್ಣ ನಾಯಕ ಅವರ ಅಭಿನಂದನಾ ಸಮಾರಂಭದ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕೃಷ್ಣನಾಯಕ ಅವರು ಕಳೆದ 8 ವರ್ಷಗಳಿಂದ ಕೋಟೆ–ಸರಗೂರು ತಾಲೂಕುಗಳಲ್ಲಿ ಅನೇಕ ಸಮಾಜಮುಖಿ ಕಾರ್ಯ ಮಾಡಿಕೊಂಡು ಬರುತ್ತಿದ್ದಾರೆ. ಕೊರೊನಾ ವೇಳೆ ಜನತೆಗೆ 25 ಸಾವಿರ ಆಹಾರ ಕಿಟ್, ಪಟ್ಟಣದ ಆಸ್ಪತ್ರೆಗೆ ಆಕ್ಸಿಜನ್ ಘಟಕ, 2 ಆಂಬುಲೆನ್ಸ್ ಮತ್ತು 10 ಸಾವಿರ ಔಷಧ ಕಿಟ್‌ಗಳನ್ನು ಉಚಿತವಾಗಿ ನೀಡುವ ಮೂಲಕ ಬಡ ಜನತೆಗೆ ನೆರವಾಗಿದ್ದಾರೆ ಎಂದರು.

ವಿದ್ಯಾರ್ಥಿಗಳು, ರೈತರು, ಕೂಲಿ ಕಾರ್ಮಿಕರು, ಬಡವರ ಅನುಕೂಲಕ್ಕಾಗಿ ಪಟ್ಟಣದಲ್ಲಿ ಅಪ್ಪಾಜಿ ಕ್ಯಾಂಟೀನ್ ತೆರೆದಿದ್ದಾರೆ. 75ನೇಸ್ವಾತಂತ್ರ್ಯೋತ್ಸವದ ಅಂಗವಾಗಿ 400 ಶಾಲೆ, ಅಂಗನವಾಡಿ, ಸರ್ಕಾರಿ ಕಚೇರಿಗಳಿಗೆ ಸಿಹಿ ವಿತರಿಸಿದ್ದಾರೆ ಎಂದ ಅವರು, ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ಕೆ.ಎಂ. ಕೃಷ್ಣನಾಯಕ ಅವರು ತಾಲೂಕಿನಲ್ಲಿ ಜೆಡಿಎಸ್ ಬಲವರ್ಧನೆಗೆ ಶ್ರಮಿಸುತ್ತಿದ್ದಾರೆ ಎಂದರು.

ಅಂದು ಬೆಳಗ್ಗೆ ಚಿಕ್ಕದೇವಮ್ಮನಬೆಟ್ಟದಲ್ಲಿ ತಾಯಿಗೆ ಹಾಗೂ ಹ್ಯಾಂಡ್‌ಪೋಸ್ಟ್‌ನಲ್ಲಿರುವ ಗಣಪತಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ಬಳಿಕ ಸರಗೂರಿನಿಂದ ಕೋಟೆವರೆಗೆ ಕೃಷ್ಣನಾಯಕ ಅವರನ್ನು ಮೆರವಣಿಗೆ ಮಾಡಲಾಗುವುದು. ಬಳಿಕ ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಅಭಿನಂದಿಸಲಾಗುವುದು ಎಂದರು.

ಸಭೆಯಲ್ಲಿ ತಾಪಂ ಮಾಜಿ ಸದಸ್ಯ ಶಂಭೇಗೌಡ, ರಾಜಣ್ಣ, ಕಾಡಾ ಮಾಜಿ ಸದಸ್ಯ ಯತೀಶ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಸವರಾಜು, ಮುಖಂಡರಾದ ಓ.ಕೆ.ಮಹೇಂದ್ರ ಕೃಷ್ಣೇಗೌಡ, ಮಲ್ಲೇಗೌಡ, ರೆಹಮಾನ್, ರಘು ಚಾ.ಶಿವಕುಮಾರ್, ಕಾಳಪ್ಪಾಜಿ, ರಾಮೇಗೌಡ, ವೈಕುಂಠ ನಾಯಕ, ಶಿವಯ್ಯ, ವಕೀಲರಾದ ಪ್ರಶಾಂತ, ಪ್ರಸನ್ನ, ರಮೇಶ್, ಬಾಲರಾಜು, ಸಿರಿ, ಕೃಷ್ಣ, ಮುದ್ದರಾಮು, ಮಾಯಪ್ಪ ಸೋಮು, ಜಿತೇಂದ್ರ ಮಾದೇವ, ಜವರೇಗೌಡ, ಶೆಟ್ಟಿ, ಬಸವಣ್ಣ, ಶಿವಮಲ್ಲಪ್ಪ, ಭಾಸ್ಕರ, ಗೋವಿಂದೇಗೌಡ, ಶಿವರಾಮೇಗೌಡ, ಮಾರುತಿ, ಸೇರಿದಂತೆ ಇತರರಿದ್ದರು.

ತಗಡೂರು ಯುವ ಕಾಂಗ್ರೆಸ್ ಕಮಿಟಿ ರದ್ದು

ಮೈಸೂರು, ಆ.26– ವರುಣಾ ಕ್ಷೇತ್ರದ ತಗಡೂರು ಬ್ಲಾಕ್ ಯುವ ಕಾಂಗ್ರೆಸ್ ಸಮಿತಿಗೆ ಮೊಹಿನ್‌ಖಾನ್ ಎಂಬುವರು ನೂತನವಾಗಿ ಪದಾಧಿಕಾರಿಗಳನ್ನು ನೇಮಕ ಮಾಡಿ ಆದೇಶ ಪತ್ರ ನೀಡಿರುವುದು ಅಸಿಂಧುವಾಗಿದ್ದು, ನೂತನ ಕಮಿಟಿಯನ್ನು ರದ್ದುಪಡಿಸಲಾಗಿದೆ ಎಂದು ಮೈಸೂರು ಜಿಲ್ಲಾ ಗ್ರಾಮಾಂತರ ಯುವ ಕಾಂಗ್ರೆಸ್ ಅಧ್ಯಕ್ಷ ಡೋನಾಲ್ಡ್ ಎಫ್ ನಿರ್ಮಾಣಿಕ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಯುವ ಕಾಂಗ್ರೆಸ್‌ನ ರಾಷ್ಟ್ರೀಯ ಹಾಗೂ ರಾಜ್ಯಾ ಧ್ಯಕ್ಷರ ಅನುಮತಿ ಪಡೆಯದೆ ಜಿಲ್ಲಾಧ್ಯಕ್ಷರಾಗಿರುವ ತನ್ನ ಗಮನಕ್ಕೂ ತಾರದೇ ನೇಮಕಾತಿ ಮಾಡಿ ಆದೇಶ ಪತ್ರ ನೀಡಿರುವುದು ಅಸಿಂಧುವಾಗಿದ್ದು, ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮೊಹಮ್ಮದ್ ನಲಪಾಡ್ ಮತ್ತು ರಾಜ್ಯ ಉಸ್ತುವಾರಿಗಳ ಆದೇಶದ ಮೇರೆಗೆ ಈ ನೇಮಕಾತಿಯನ್ನು ರದ್ದು ಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಹಾಡ್ಯದಲ್ಲಿ ಕಂದಾಯ, ಪಿಂಚಣಿ ಅದಾಲತ್



ಮಲ್ಕುಂಡಿ, ಆ.26– ಅಧಿಕಾರಿಗಳೇ ಜನರ ಬಳಿ ಹೋಗಿ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಹಸೀಲ್ದಾರ್ ಶಿವಮೂರ್ತಿ ತಿಳಿಸಿದರು.

ಇಲ್ಲಿಗೆ ಸಮೀಪದ ಹಾಡ್ಯ ಗ್ರಾಮದಲ್ಲಿ ಆಯೋಜಿಸಿದ್ದ ಕಂದಾಯ, ಪಿಂಚಣಿ ಅದಾಲತ್ ಹಾಗೂ 'ಜಿಲ್ಲಾಧಿಕಾರಿ ನಡೆ ಹಳ್ಳಿ ಕಡೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರು ತಮ್ಮ ಸಮಸ್ಯೆ ಪರಿಹರಿಸಿಕೊಳ್ಳಲು ತಾಲೂಕು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಲು ಈ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗಿದೆ. ಸ್ಥಳದಲ್ಲೇ ಪೌತಿ ಖಾತೆ, ವೃದ್ಧಾಪ್ಯ ವೇತನ, ಪಿಂಚಣಿ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲಾಗುವುದು. ಸಾರ್ವಜನಿಕರು ಇಂತಹ ಕಾರ್ಯಕ್ರಮಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ತಾಪಂ ಇಓ ಶ್ರೀನಿವಾಸ್ ಮಾತ ನಾಡಿದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಮಹದೇವಮ್ಮ, ಉಪಾಧ್ಯಕ್ಷ ಹರೀಶ್ ಕುಮಾರ್, ಹಲ್ಲರೆ ಗ್ರಾಪಂ ಅಧ್ಯಕ್ಷ ಮಹದೇವಸ್ವಾಮಿ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಂಕರ್, ಗ್ರಾಪಂ ಸದಸ್ಯರಾದ ಕೃಷ್ಣ, ಮಹದೇವಸ್ವಾಮಿ, ಉಪತಹಸೀಲ್ದಾರ್ ಶಿವಕುಮಾರ್, ರಾಜಸ್ವ ನಿರೀಕ್ಷಕ ಹರೀಶ್, ಮುಖಂಡರಾದ ಶಿವರುದ್ರ, ಅಬ್ದುಲ್ ರಜಾಕ್ ಸೇರಿದಂತೆ ರೈತರಿದ್ದರು.

ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ, ಅಭಿವೃದ್ಧಿ ಕಾರ್ಯ ನೆನೆಗುದಿಗೆ

ಕೆಡಿಪಿ ಸಭೆ ಕರೆಯಲು ಆಗ್ರಹ



ತಿ.ನರಸೀಪುರ, ಆ.26– ತಾಲೂಕಿನ ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ಹೆಚ್ಚಾಗಿದ್ದು, ಸಾರ್ವಜನಿಕ ಕೆಲಸಗಳು ಸರಿಯಾಗಿ ಆಗುತ್ತಿಲ್ಲ. ತಾಲೂಕಿನ ಅಭಿವೃದ್ಧಿ ಕಾಮಗಾರಿಗಳು ನೆನೆಗುದಿಗೆ ಬಿದ್ದಿದ್ದು, ಕೂಡಲೇ ಶಾಸಕದ್ವಯರು ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ ಕರೆಯಬೇಕು ಎಂದು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಮಿತಿ ನಾಮ ನಿರ್ದೇಶಕ ಸದಸ್ಯ ಎಂ.ಮಿಥುನ್ ಆಗ್ರಹಿಸಿದರು.

ಶಾಸಕರಾದ ಡಾ.ಯತೀಂದ್ರ ಹಾಗೂ ಎಂ.ಅಶ್ವಿನ್ ಕುಮಾರ್ ಅವರು ಕಳೆದ 4 ವರ್ಷಗಳಿಂದ ಸರಿಯಾಗಿ ಕೆಡಿಪಿ ಸಭೆ ನಡೆಸದ ಪರಿಣಾಮ ಆಡಳಿತ ಯಂತ್ರ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ. ತಾಲೂಕಿನಲ್ಲಿ ಅನುಷ್ಠಾನಗೊಳ್ಳುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆಯೂ ಯಾರಿಗೂ ಸರಿಯಾದ ಮಾಹಿತಿ ಇಲ್ಲ. ಪುರಸಭೆಯಲ್ಲಂತೂ ಕೆಎಂಎಫ್ 24 ಫಾರಂ ಖಾತೆಯಲ್ಲಿ ಗೋಲ್‌ಮಾಲ್ ನಡೆಯುತ್ತಿದೆ. ಭ್ರಷ್ಟಾಚಾರ ಹೆಚ್ಚಾಗಿದ್ದರೂ, ಶಾಸಕರು ಗಮನ ಹರಿಸುತ್ತಿಲ್ಲ ಎಂದು ಆರೋಪಿಸಿದರು.

ಕೆಡಿಪಿಗೆ ಸರ್ಕಾರದ ನಾಮ ನಿರ್ದೇಶಿತ ಸದಸ್ಯರಾಗಿ ಆಯ್ಕೆಯಾಗಿ ಹಲವು ತಿಂಗಳಾಗಿದ್ದರೂ, ಈ ಭಾಗದ ಶಾಸಕರು ಒಂದೇ ಒಂದು ಸಭೆ ಕರೆದಿಲ್ಲ. ಶಾಸಕರು ಪ್ರತಿನಿತ್ಯ ಓಡಾಡುವ ಲಿಂಕ್ ರಸ್ತೆ ಹಾಗೂ ತಾಲೂಕು ಕಚೇರಿ ಮುಂಭಾಗದ ರಸ್ತೆ ಹದಗೆಟ್ಟಿರುವುದು ಗಮನಕ್ಕೆ ಬಂದಿಲ್ಲವೇ ಎಂಬುದು ನಮ್ಮನ್ನೇ ಕಾಡುತ್ತಿದೆ. ಅನುಷ್ಠಾನ ಹಂತದಲ್ಲಿರುವ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಯಾವುದೇ ಮಾಹಿತಿ ನೀಡುತ್ತಿಲ್ಲ. ಈ ಹಿನ್ನೆಲೆಯಲ್ಲಿ ಶಾಸಕದ್ವಯರು ಪ್ರಗತಿ ಪರಿಶೀಲನಾ ಸಭೆ ಕರೆಯಬೇಕು. ವಿಳಂಬ ಧೋರಣೆ ಮುಂದುವರೆಸಿದರೆ ಅವರ ವಿರುದ್ಧ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ. ಅಲ್ಲದೆ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿಯೂ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮತ್ತೋರ್ವ ಸದಸ್ಯ ಡಿ.ಎಲ್.ಮಹದೇವಪ್ಪ ಮಾತನಾಡಿ, ಶಾಸಕರು ಸರ್ಕಾರದ ನಾಮ ನಿರ್ದೇಶಿತ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಎರಡೂ ಕ್ಷೇತ್ರಗಳಲ್ಲಿ ಆಗಿರುವ ಹಾಗೂ ಆಗಬೇಕಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ತಿಳಿಸುತ್ತಿಲ್ಲ. ಆಡಳಿತಕ್ಕೆ ಚುರುಕು ಮುಟ್ಟಿಸಿ, ಅಭಿವೃದ್ಧಿ ಕಾರ್ಯಕ್ರಮಗಳ ವಿಚಾರ ವಿನಿಮಯವಾಗಲು ಪ್ರಗತಿ ಪರಿಶೀಲನಾ ಸಭೆ ಸೂಕ್ತ ವೇದಿಕೆಯಾಗಿದ್ದರಿಂದ ಇಬ್ಬರು ಶಾಸಕರು ಕೂಡಲೇ ಸಭೆ ಕರೆಯಬೇಕೆಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡ ಕೆ.ಗಣೇಶ್ ಉಪಸ್ಥಿತರಿದ್ದರು.

ರಸ್ತೆ, ಚರಂಡಿ ಕಾಮಗಾರಿಗೆ ಚಾಲನೆ




ಹಂಪಾಪುರ, ಆ.26– ಹೆಚ್.ಡಿ.ಕೋಟೆ ತಾಲೂಕಿನ ಕಂಚಮಳ್ಳಿ, ಮಲಾರದ ಹುಂಡಿ, ಕಾರೇಹುಂಡಿ–ಹಿರೇನಂದಿ ಗ್ರಾಮಗಳಲ್ಲಿ ಡಾಂಬರ್ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗೆ ಶಾಸಕ ಅನಿಲ್ ಚಿಕ್ಕಮಾದು ಗುದ್ದಲಿಪೂಜೆ ನೆರವೇರಿಸಿದರು.

ಕಂಚಮಳ್ಳಿ ಗ್ರಾಪಂಗೆ ಸೇರುವ ಚಿಕ್ಕನಂದಿ ಗ್ರಾಮದಲ್ಲಿ 5 ಲಕ್ಷ ರೂ. ವೆಚ್ಚದ ಅಂಬೇಡ್ಕರ್ ಭವನ ಹಾಗೂ 18 ಲಕ್ಷ ರೂ. ವೆಚ್ಚದ ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಶಾಸಕರು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಕಂಚಮಳ್ಳಿ ಗ್ರಾಪಂ ಅಧ್ಯಕ್ಷೆ ರಮ್ಯ, ಪಿಡಿಓ ಶಿವಣ್ಣ ಹಾಗೂ ಸದಸ್ಯರಿದ್ದರು. ಎಸ್‌ಡಿಪಿ ಯೋಜನೆಯಡಿ ಮಲಾರದ ಹುಂಡಿಯಲ್ಲಿ 15 ಲಕ್ಷ ರೂ. ವೆಚ್ಚದ ಚರಂಡಿ ಕಾಮಗಾರಿ ಹಾಗೂ 70 ಲಕ್ಷರೂ. ವೆಚ್ಚದ ಮೈಸೂರು–ಮಾನಂದವಾಡಿ ರಸ್ತೆಗೆ ಹೊಂದಿಕೊಂಡಿರುವ ಕಾರೇಹುಂಡಿ–ಹಿರೇನಂದಿ ಗ್ರಾಮದ ಡಾಂಬರ್ ರಸ್ತೆ ಕಾಮಗಾರಿಗೆ ಶಾಸಕರು ಚಾಲನೆ ನೀಡಿದರು.

ಈ ವೇಳೆ ತಾಪಂ ಅಧ್ಯಕ್ಷ ಶ್ರೀನಿವಾಸ, ಮುಖಂಡ ಪುಟ್ಟರಾಜು, ಮಲಾರದಹುಂಡಿ ಗ್ರಾಪಂ ಅಧ್ಯಕ್ಷೆ ಪ್ರೇಮ, ಶಂಕರೇಗೌಡ, ಮುರಳಿಗೌಡ, ಉಪಾಧ್ಯಕ್ಷ ರಂಗಸ್ವಾಮಿ, ಸದಸ್ಯರಾದ ಕುಮಾರ್, ರಾಮಾಚಾರಿ, ನಂಜುಂಡಸ್ವಾಮಿ, ಶೇಖರ್, ಸಹಾಯಕ ಕಾರ್ಯಪಾಲಕ ಅಭಿಯಂತರ ಜಯ ದೀಪ್ ಹಾಗೂ ಸಹಾಯಕ ಜಗದೀಶ್, ಗುತ್ತಿಗೆದಾರ ಹರೀಶ್ ಹಾಗೂ ಪರ್ವತೇ ಗೌಡ ಇಂಜಿನಿಯರ್ ಮೋಹನಶ್ರೀ ಇತರರಿದ್ದರು.

ಜವರೇಗೌಡ ನಿಧನ



ಚುಂಚನಕಟ್ಟೆ, ಆ.26– ಸಾಲಿಗ್ರಾಮ ತಾಲೂಕಿನ ಹಳಿಯೂರು ಬಡಾವಣೆ ಹರಗಲ ಬೀದಿ ನಿವಾಸಿ ಜವರೇಗೌಡ (80) ಶುಕ್ರವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಧ್ಯಾಹ್ನ ಮೃತರ ಜಮೀನಿನಲ್ಲಿ ನಡೆಯಿತು.

ಸುಬ್ಬಣ್ಣ



ಮಲ್ಕುಂಡಿ, ಆ.26– ಇಲ್ಲಿಗೆ ಸಮೀಪದ ಮಾದನಹಳ್ಳಿ ಗ್ರಾಮದ ನಿವಾಸಿ ಸುಬ್ಬಣ್ಣ(83) ಗುರುವಾರ ರಾತ್ರಿ ನಿಧನರಾದರು. ಮೃತರು ಪತ್ನಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಸ್ವಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.





ತುಳುಶಿವಳ್ಳಿ ಮಾಧ್ವಬ್ರಾಹ್ಮಣ ಸೌಹಾರ್ದ ಸಹಕಾರ ಸಂಘ ನಿ.

ನಂ. 35, 1ನೇ ಅಡ್ಡ ರಸ್ತೆ, 2ನೇ ಹಂತ, ಗಂಗೋತ್ರಿ ಬಡಾವಣೆ, ಮೈಸೂರು–09
ಮೊ: 7892408950

ಮಾನ್ಯ ಸದಸ್ಯರೇ,

ತುಳುಶಿವಳ್ಳಿ ಮಾಧ್ವಬ್ರಾಹ್ಮಣ ಸೌಹಾರ್ದ ಸಹಕಾರ ಸಂಘ ನಿ. ಇದರ 3ನೇ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ದಿನಾಂಕ 11–09–2022 ಭಾನುವಾರ ಬೆಳಿಗ್ಗೆ 11–00 ಗಂಟೆಗೆ ಸರಿಯಾಗಿ ಶ್ರೀಕೃಷ್ಣಧಾಮದ ವಾಯುಪ್ರಭ ಸಭಾಂಗಣ, ಸಾಹುಕಾರ್ ಚನ್ನಯ್ಯ ರಸ್ತೆ, ಮೈಸೂರಿನಲ್ಲಿ ಕರೆಯಲಾಗಿದೆ. ತಾವುಗಳು ಸಕಾಲಕ್ಕೆ ಆಗಮಿಸಿ, ಸಭಾ ಕಲಾಪಗಳಲ್ಲಿ ಭಾಗವಹಿಸಬೇಕಾಗಿ ವಿನಂತಿಸಿಕೊಳ್ಳಲಾಗಿದೆ.

ದಿನಾಂಕ 27–08–2022. ಸಹಿ/– ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಆಡಳಿತ ಮಂಡಳಿ ಅಪ್ಪಣೆ ಮೇರೆಗೆ



